24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 129 | ನವದೆಹಲಿ | ಬೆಲೆ ₹ 10 | ನವಂಬರ್ 4, 2026, ಬುಧವಾರ

ಒಳಪುಟಗಳಲ್ಲಿ

ಅಭಿವೃದ್ಧಿಗೆ ಗುಜರಾತ್ ಮಾಡೆಲ್, ಸ್ಟಿಂಗ್‌ಗೆ ಕರ್ನಾಟಕ ಮಾಡೆಲ್: ರಾಜಣ್ಣ ವ್ಯಂಗ್ಯ- ಪು.2

ಪುಣೆಯಲ್ಲಿ ಮೆಟ್ರೋ ರೈಲು ಸಂಚಾರಕ್ಕೆ ಪ್ರಧಾನಿ ಚಾಲನೆ- ಪು.3

ಕರ್ನಾಟಕದ ಬರಪೀಡಿತ ರೈತರ ಸಂಕಷ್ಟಕ್ಕೆ ಸ್ಪಂದಿಸಿ: ಪ್ರಧಾನಿಗೆ ಡಿಸಿಎಂ ಪರಮೇಶ್ವರ್ ಪತ್ರ-ಪು.3

ಬರಮುಕ್ತ ಹಿರಿಯೂರು ನಿರ್ಮಾಣವೇ ಸರ್ಕಾರದ ಗುರಿ: ಸಿಎಂ ಡಿಕೆಶಿ

ಹಿರಿಯೂರು, ನ.3: ಮಾಜಿ ಸಚಿವ ದಿವಂಗತ ಸುಧಾಕರ್ ಅವರ ಕನಸುಗಳನ್ನು ನನಸು ಮಾಡುವ ಸಂಕಲ್ಪದೊಂದಿಗೆ ಹಿರಿಯೂರು ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ಕ್ಷೇತ್ರದ ಕೆರೆಗಳನ್ನು ತುಂಬಿಸುವ ಮೂಲಕ ನೀರಾವರಿ, ಅಂತರ್ಜಲ ಹೆಚ್ಚಳಕ್ಕೆ ಆದ್ಯತೆ ನೀಡಲಾಗುವುದು. ರೈತರ ಬದುಕಿಗೆ ಕಾಂಗ್ರೆಸ್ ಸರ್ಕಾರ ನೆರವಾಗಲಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಚಿತ್ರದುರ್ಗ ಜಿಲ್ಲೆ ಹಿರಿಯೂರಿನ ದಿಂಡವಾರದಲ್ಲಿ ಜವನಗೊಂಡನಹಳ್ಳಿ ಹೋಬಳಿಯ 16 ಕೆರೆಗಳು ಹಾಗೂ ಗಾಯತ್ರಿ ಜಲಾಶಯಕ್ಕೆ ನೀರು ತುಂಬಿಸುವ ಕಾಮಗಾರಿಗೆ ಮಂಗಳವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಹಿರಿಯೂರಿಗೆ ಅಂಟಿಕೊಂಡಿರುವ ಬರದ ತಾಲೂಕು ಎಂಬ ಹಣೆಪಟ್ಟಿಯನ್ನು ದೂರಮಾಡುವುದು ತಮ್ಮ ಗುರಿಯಾಗಿದೆ. ದಿವಂಗತ ಸುಧಾಕರ್ ಅವರು ಕ್ಷೇತ್ರದ ಜನರಿಗೆ ನೀಡಿದ್ದ ಮಾತನ್ನು ಉಳಿಸಿಕೊಳ್ಳಲು ಮತ್ತು ಅವರ ಆತ್ಮಕ್ಕೆ ಶಾಂತಿ ದೊರಕಿಸಲು, ಅವರು ಕನಸು ಕಂಡ ಯೋಜನೆಗಳಿಗೆ ಅನುದಾನ ಮಂಜೂರು ಮಾಡಿದ್ದೇನೆ. ಅವರಿಲ್ಲದಿರುವುದು ನನಗೆ ನೋವು ತಂದಿದೆ. ಅವರ ಚಿಂತನೆಗಳು ಮತ್ತು ಜನಸೇವೆಯ ಆಶಯಗಳು ಜೀವಂತವಾಗಿರಬೇಕು ಎಂದು ಹೇಳಿದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೇಂದ್ರ ಬಜೆಟ್‌ನಲ್ಲಿ ಘೋಷಣೆಯಾಗಿದ್ದ 5,400 ಕೋಟಿ ಅನುದಾನ ಇನ್ನೂ ಬಿಡುಗಡೆಯಾಗಿಲ್ಲ. ಪ್ರಧಾನಮಂತ್ರಿ ಹಾಗೂ ಕೇಂದ್ರ ಹಣಕಾಸು ಸಚಿವರನ್ನು ಭೇಟಿಯಾಗಿ ಅನುದಾನ ಬಿಡುಗಡೆಗೆ ಹಲವು ಬಾರಿ ಒತ್ತಾಯಿಸಿದ್ದರೂ ಸ್ಪಂದನೆ ದೊರೆತಿಲ್ಲ. ಬಿಜೆಪಿ ನಾಯಕರು ರೈತರ ಪರವಾಗಿ ಧ್ವನಿ ಎತ್ತಿಲ್ಲ" ಎಂದು ಟೀಕಿಸಿದರು.

16 ಕೆರೆಗಳಿಗೆ ನೀರು, ಅಂತರ್ಜಲ ವೃದ್ಧಿಗೆ ಕ್ರಮ

ಸಣ್ಣ ನೀರಾವರಿ ಇಲಾಖೆಯ ಮೂಲಕ ಹಿರಿಯೂರು ಭಾಗದ 16 ಕೆರೆಗಳನ್ನು ತುಂಬಿಸುವ ಯೋಜನೆಗೆ ಚಾಲನೆ ನೀಡಲಾಗಿದೆ. ಈ ಯೋಜನೆಗೆ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಲಾಗಿದ್ದು, ಕಾಮಗಾರಿಯ ಗುತ್ತಿಗೆ ಪ್ರಕ್ರಿಯೆಯೂ ಆರಂಭವಾಗಿದೆ. ಕೆರೆಗಳಿಗೆ ನೀರು ಹರಿಸುವುದರಿಂದ ಸುತ್ತಮುತ್ತಲಿನ ಕೃಷಿಭೂಮಿಯಲ್ಲಿ ಅಂತರ್ಜಲ ಮಟ್ಟ ಹೆಚ್ಚಲಿದೆ. ರೈತ ಉಳಿದರೆ ಹಳ್ಳಿ, ಹಳ್ಳಿ ಉಳಿದರೆ ರಾಜ್ಯ, ರಾಜ್ಯ ಉಳಿದರೆ ದೇಶ. ರೈತನಿಗೆ ಸಂಬಳ, ಪಿಂಚಣಿ, ಪ್ರಮೋಷನ್ ಅಥವಾ ನಿವೃತ್ತಿ ಸೌಲಭ್ಯಗಳಿಲ್ಲ. ಆದ್ದರಿಂದ ಅನ್ನದಾತನಿಗೆ ಜೀವದಾನ ನೀಡುವುದು ನಮ್ಮ ಕರ್ತವ್ಯ. ರೈತನೇ ದೇಶದ ದೊಡ್ಡ ಆಸ್ತಿ ಎಂದು ಹೇಳಿದರು.

ಕ್ಷೇತ್ರದ ಅಭಿವೃದ್ಧಿಗೆ ವಿವಿಧ ಇಲಾಖೆಗಳಿಂದ 2,200 ಕೋಟಿ ಮೊತ್ತದ ಕಾಮಗಾರಿಗಳಿಗೆ ಆದೇಶ



ಹಿರಿಯೂರಿನ ದಿಂಡವಾರದಲ್ಲಿ ಜವನಗೊಂಡನಹಳ್ಳಿ ಹೋಬಳಿಯ 16 ಕೆರೆಗಳು ಹಾಗೂ ಗಾಯತ್ರಿ ಜಲಾಶಯಕ್ಕೆ ನೀರು ತುಂಬಿಸುವ ಕಾಮಗಾರಿಗೆ ಸಿಎಂ ಡಿ ಕೆ ಶಿವಕುಮಾರ್ ಅವರು ಮಂಗಳವಾರ ಭೂಮಿಪೂಜೆ ನೆರವೇರಿಸಿದರು. ಸಚಿವರಾದ ಟಿ ರಘುಮೂರ್ತಿ, ಬಸವಂತಪ್ಪ, ಈಶ್ವರ ಖಂಡ್ರೆ, ಕೆ.ಎಚ್. ಮುನಿಯಪ್ಪ, ಯತೀಂದ್ರ ಸಿದ್ದರಾಮಯ್ಯ, ಜಮೀರ್ ಅಹಮದ್ ಖಾನ್, ಡಾ. ಅಜಯ್ ಧರ್ಮಸಿಂಗ್, ಎಚ್.ಸಿ. ಬಾಲಕೃಷ್ಣ, ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ ಬಿ ಜಯಚಂದ್ರ, ಶಾಸಕರಾದ ಬಿ ಜಿ ಗೋವಿಂದಪ್ಪ, ವೀರೇಂದ್ರ ಪಪ್ಪಿ, ವಿಧಾನಪರಿಷತ್ ಸದಸ್ಯ ಡಿ.ಟಿ. ಶ್ರೀನಿವಾಸ್, ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್, ಕಾಂಗ್ರೆಸ್ ಮುಖಂಡ ಸುಹಾಸ್ ಸುಧಾಕರ್ ಮತ್ತಿತರರು ಇದ್ದರು.

ಗ್ರಾಮೀಣ ಅಭಿವೃದ್ಧಿ ಮತ್ತು ಸಾಮಾಜಿಕ ಕಲ್ಯಾಣಕ್ಕೆ ಆದ್ಯತೆ


ಹಿರಿಯೂರು ಕ್ಷೇತ್ರದ ಪಂಚಾಯಿತಿಗಳ ಅಭಿವೃದ್ಧಿ, ಗ್ರಾಮೀಣ ರಸ್ತೆಗಳು, ಕುಡಿಯುವ ನೀರು ಹಾಗೂ ಹೊಲಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗಳಿಗೆ ಪ್ರತ್ಯೇಕ ಆದೇಶ ಹೊರಡಿಸಲಾಗುವುದು. ಸಮಾಜ ಕಲ್ಯಾಣ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗಳ ಮೂಲಕ ನೂರಾರು ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿ, ಸಾವಿರಾರು ಫಲಾನುಭವಿಗಳಿಗೆ ನೆರವು ನೀಡುವ ಕಾರ್ಯಕ್ರಮ ರೂಪಿಸಲಾಗಿದೆ. ಸಚಿವರು ಮತ್ತು ಶಾಸಕರು ಸುಧಾಕರ್ ಅವರ ಅಭಿವೃದ್ಧಿ ಕನಸುಗಳಿಗೆ ಶಕ್ತಿ ತುಂಬಲು ಒಟ್ಟಾಗಿ ಕೆಲಸ ಮಾಡುತ್ತಿದ್ದಾರೆ" ಎಂದು ಸಿಎಂ ತಿಳಿಸಿದರು.

ಧರ್ಮಪುರದಲ್ಲಿ ಕೆಎಸ್‌ಆರ್‌ಟಿಸಿ ಬಸ್‌ನಿಲ್ದಾಣ ಕಾಮಗಾರಿಗೆ ಶಂಕುಸ್ಥಾಪನೆ

ಹಿರಿಯೂರು, ನ.3: ನಾನು ಹಾಗೂ ನಮ್ಮ ಸಚಿವರು ಹಿರಿಯೂರು ಕ್ಷೇತ್ರಕ್ಕೆ ಬರಿಗೈನಲ್ಲಿ ಬಂದಿಲ್ಲ. ಕ್ಷೇತ್ರಕ್ಕೆ ಅಭಿವೃದ್ಧಿಯ ಲಕ್ಷ್ಯಿಯನ್ನು ಕರೆತಂದಿದ್ದೇವೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಚಿತ್ರದುರ್ಗ ಜಿಲ್ಲೆ ಹಿರಿಯೂರಿನ ಧರ್ಮಪುರದಲ್ಲಿ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಕಾಮಗಾರಿಗೆ ಮಂಗಳವಾರ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿ, ಈ ಬಸ್ ನಿಲ್ದಾಣಕ್ಕೆ 3.5 ಕೋಟಿ ರೂ. ವೆಚ್ಚದ ಕಾಮಗಾರಿಗೆ ಶಂಕುಸ್ಥಾಪನೆ ಮಾಡಿದ್ದೇವೆ. ನಿಮ್ಮ ತಾಲ್ಲೂಕಿನ ನೀರಾವರಿ ಯೋಜನೆ ಬಗ್ಗೆ ಇಟ್ಟ ಬೇಡಿಕೆಗೆ ನಾವು ಮಂಜೂರಾತಿ ನೀಡಿ, ಟೆಂಡರ್ ಕರೆದು, ಈಗಾಗಲೇ ಪರಿಕ್ಷಾರ್ಥ ನೀರು ಹರಿಸಲಾಗಿದೆ ಎಂದು ಹೇಳಿದರು.

ಕೇಂದ್ರ ಬಜೆಟ್‌ನಲ್ಲಿ ಭದ್ರಾ ಯೋಜನೆಗೆ ಘೋಷಿಸಿದ ಅನುದಾನ ಕೊಟ್ಟಿಲ್ಲ

ನಮ್ಮ ಬೆಂಬಲದಿಂದ ಕುಮಾರಸ್ವಾಮಿ ಅವರ ಕಾಲದಲ್ಲಿ ಸ್ವಲ್ಪ ಪ್ರಮಾಣದಲ್ಲಿ ರೈತರ ಸಾಲ ಮನ್ನಾ ಮಾಡಲಾಗಿತ್ತು. ಬೊಮ್ಮಾಯಿ ಅವರು ಸಿಎಂ ಆಗಿದ್ದಾಗ ಪ್ರಧಾನಿ ಮೋದಿ ಹಾಗೂ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಜೆಟ್‌ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ 5400 ಕೋಟಿ ಅನುದಾನ ಘೋಷಿಸಿದ್ದರು. ಇವತ್ತಿನವರೆಗೂ ಒಂದು ಬಿಡಿಗಾಸು ಕೊಟ್ಟಿಲ್ಲ. ಆದರೂ ಯಾವ ನೈತಿಕತೆ ಇಟ್ಟುಕೊಂಡು ಬಂದು ನಿಮ್ಮ ಬಳಿ ಮತ ಕೇಳುತ್ತಾರೆ ಎಂದು ಡಿ.ಕೆ. ಶಿವಕುಮಾರ್ ಕಿಡಿಕಾರಿದರು.



ಹಿರಿಯೂರಿನ ಧರ್ಮಪುರದಲ್ಲಿ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಕಾಮಗಾರಿಗೆ ಸಿಎಂ ಡಿ.ಕೆ. ಶಿವಕುಮಾರ್ ಮಂಗಳವಾರ ಶಂಕುಸ್ಥಾಪನೆ ನೆರವೇರಿಸಿದರು. ಸಚಿವರಾದ ಟಿ ರಘುಮೂರ್ತಿ, ಈಶ್ವರ ಖಂಡ್ರೆ, ಕೆ.ಎಚ್. ಮುನಿಯಪ್ಪ, ಡಾ. ಅಜಯ್ ಧರ್ಮಸಿಂಗ್‌ಮತ್ತಿತರರು ಇದ್ದರು.

ಅಭ್ಯರ್ಥಿ ಯಾರಾಗಬೇಕೆಂದು ಸರ್ವೇ ಮಾಡಿಸಿರುವೆ

ನಾನು ಈಗ ಕಾಂಗ್ರೆಸ್ ಪಕ್ಷದ ಅಧ್ಯಕ್ಷನಲ್ಲ. ಆದರೂ ಉಪ ಚುನಾವಣೆಯಲ್ಲಿ ಯಾರನ್ನು ಕಣಕ್ಕೆ ಇಳಿಸಬೇಕು ಎಂದು ನಾಲ್ಕು ಸರ್ವೇ ಮಾಡಿಸಿದ್ದೇನೆ. ನಿಮ್ಮ ಅಭ್ಯರ್ಥಿಯಾಗಿ ನಾನೇ ಇದ್ದೇನೆ. ಈ ಡಿ.ಕೆ. ಶಿವಕುಮಾರ್ ನಿಮ್ಮ ಅಭ್ಯರ್ಥಿ. ಧರ್ಮಪುರದ ಜನ ಧರ್ಮವನ್ನು ಕಾಪಾಡುವವರು, ಧರ್ಮದಿಂದ ಮತ ಹಾಕಿ, ನಿಮ್ಮ ಸೇವೆ ಮಾಡುವ ಪಕ್ಷವನ್ನು ಗೆಲ್ಲಿಸಬೇಕು ಎಂದು ಡಿ.ಕೆ. ಶಿವಕುಮಾರ್‌ತಿಳಿಸಿದರು.

ಪ್ರಧಾನಿ ಮೋದಿ ನಿವಾಸದ ಸಮೀಪ ಮತ್ತೊಂದು ಮಸೀದಿ ತೆರವಿಗೆ ಕೇಂದ್ರ ನಿರ್ಧಾರ

ನವದೆಹಲಿ, ನ.3: ಪ್ರಧಾನ ನರೇಂದ್ರ ಮೋದಿ ಅವರ ನಿವಾಸದ ಸಮೀಪವಿರುವ ಶತಮಾನದಷ್ಟು ಹಳೆಯದಾದ 'ರೇಸ್ ಕೋರ್ಸ್ ಮಸೀದಿ'ಯನ್ನು ತೆರವುಗೊಳಿಸುವಂತೆ ಕೇಂದ್ರ ಸರ್ಕಾರ ಈಗಾಗಲೇ ಅಧಿಕಾರಿಗಳು ನೋಟಿಸ್ ನೀಡಿದೆ. ಇದರ ಬೆನ್ನಲ್ಲೇ ಮತ್ತೊಂದು ಮಸೀದಿ ತೆರವಿಗೆ ಮುಂದಾಗಿರುವ, ಕೇಂದ್ರ ಸರ್ಕಾರ, ಸರ್ಕಾರಿ ಕಟ್ಟಡದಲ್ಲಿ ಜಾತ್ಯತೀತ ಸ್ವರೂಪಕ್ಕೆ ಈ ಮಸೀದಿ ಹೊಂದಿಕೆಯಾಗುವುದಿಲ್ಲ ಎಂದು ದೆಹಲಿ ಹೈಕೋರ್ಟ್‌ಗೆ ತಿಳಿಸಿದೆ. ಕೃಷಿ ಭವನದಲ್ಲಿರುವ ಶತಮಾನದಷ್ಟು ಹಳೆಯದಾದ ಮಸೀದಿಯನ್ನು ತೆರವುಗೊಳಿಸಬೇಕೆಂದು ಕೇಂದ್ರ ಸರ್ಕಾರವು ದೆಹಲಿ ಹೈಕೋರ್ಟ್‌ಗೆ ತಿಳಿಸಿದೆ. ಸರ್ಕಾರಿ ಕಚೇರಿ ಸಂಕೀರ್ಣದ ಆವರಣದಲ್ಲಿ ಶಾಶ್ವತ ಧಾರ್ಮಿಕ ರಚನೆಯನ್ನು ಸ್ಥಾಪಿಸುವುದು ಅನುಮತಿಗೆ ವಿರುದ್ಧವಾದುದು ಮತ್ತು ಸರ್ಕಾರಿ ಕಟ್ಟಡದಲ್ಲಿ "ಜಾತ್ಯತೀತ" ಸ್ವರೂಪಕ್ಕೆ ಹೊಂದಿಕೆಯಾಗುವುದಿಲ್ಲ ಎಂದು ಕೇಂದ್ರ ಸರ್ಕಾರ ಹೇಳಿದೆ.

ವಿದೇಶಿ ನಂಟು: ಮುಕ್ತ ಚರ್ಚೆಗೆ ಬರುವಂತೆ ಪ್ರಧಾನಿಗೆ ರಾಹುಲ್ ಗಾಂಧಿ ಸವಾಲು



ನವದೆಹಲಿ, ನ.3: ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮುಕ್ತ ಹಾಗೂ ಮುಖಾಮುಖಿ ಚರ್ಚೆಗೆ ಬರುವಂತೆ ಮತ್ತೊಮ್ಮೆ ಸವಾಲು ಹಾಕಿದ್ದಾರೆ.

ಈ ಸವಾಲನ್ನು ನೀಡಿ 24 ಗಂಟೆಗಳು ಕಳೆದಿವೆ ಎಂದಿರುವ ಅವರು, ವಿದೇಶಿ ನಂಟುಗಳು, ರಾಷ್ಟ್ರೀಯ ಹಿತಾಸಕ್ತಿ ಮತ್ತು ಸರ್ಕಾರದ ಪ್ರಮುಖ ನಿರ್ಧಾರಗಳಿಗೆ ಸಂಬಂಧಿಸಿದ ಪ್ರಶ್ನೆಗಳಿಗೆ ಉತ್ತರಿಸುವಂತೆ ಪ್ರಧಾನಿಯನ್ನು ಒತ್ತಾಯಿಸಿದ್ದಾರೆ. ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ರಾಹುಲ್, ಚರ್ಚೆ ನಡೆಯುವ ಸ್ಥಳವನ್ನು ಪ್ರಧಾನಿಯೇ ಆಯ್ಕೆ ಮಾಡಬಹುದು ಮತ್ತು ಚರ್ಚೆಯನ್ನು ನಡೆಸಿಕೊಡಲು ಯಾರನ್ನಾದರೂ ನೇಮಿಸಿಕೊಳ್ಳಬಹುದು. ಈ ಚರ್ಚೆಗೆ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರನ್ನು ತೀರ್ಪುಗಾರರನ್ನಾಗಿ ನೇಮಿಸಿಕೊಳ್ಳಬಹುದು ಎಂದೂ ಸಲಹೆ ನೀಡಿದ್ದಾರೆ. ಹಾಗೂ ಚರ್ಚೆಯಿಂದ ಹಿಂದೆ ಸರಿಯದಂತೆ ಆಗ್ರಹಿಸಿದ್ದಾರೆ.

ಅಮೆರಿಕದೊಂದಿಗಿನ ಒಪ್ಪಂದದ ಬಗ್ಗೆ ಪ್ರಶ್ನೆಗಳನ್ನು ಎತ್ತಿದ ಗಾಂಧಿ: ಚರ್ಚೆಯಾಗಬೇಕಾದ ವಿಷಯಗಳನ್ನು ಪಟ್ಟಿ ಮಾಡಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕರು, ಹಣಕಾಸು ವ್ಯವಸ್ಥೆ, ಅಮೆರಿಕದೊಂದಿಗಿನ ಒಪ್ಪಂದಕ್ಕೆ ಸಂಬಂಧಿಸಿದ ಸನ್ನಿವೇಶಗಳು ಮತ್ತು ಆ ಒಪ್ಪಂದವನ್ನು ಎಷ್ಟು ತ್ವರಿತವಾಗಿ ಅಂತಿಮಗೊಳಿಸಲಾಯಿತು ಎಂಬ ಬಗ್ಗೆ ಪ್ರಶ್ನೆಗಳನ್ನು ಎತ್ತಿದ್ದಾರೆ. ಸಚಿವ ಸಂಪುಟಕ್ಕೆ ಮಾಹಿತಿ ನೀಡದೆಯೇ ಈ ಒಪ್ಪಂದವನ್ನು ಏಕೆ ಅಂತಿಮಗೊಳಿಸಲಾಯಿತು ಎಂದು ಅವರು ಪ್ರಶ್ನಿಸಿದ್ದಾರೆ. ಅಲ್ಲದೆ, ಅದಾನಿ ಪ್ರಕರಣ ಮತ್ತು ಜೆಫ್ರಿ ಎಪ್‌ಸ್ಟೀನ್ ವಿವಾದದ ಕುರಿತಾಗಿಯೂ ಅವರು ಪ್ರಶ್ನೆಗಳನ್ನು ಮುಂದಿಟ್ಟಿದ್ದಾರೆ.

ಪ್ರತಿಭಟನೆ ನಡೆಸುವ ಸ್ಥಳವನ್ನು ಅನಿರ್ದಿಷ್ಟಾವಧಿಗೆ ಆಕ್ರಮಿಸುವಂತಿಲ್ಲ: ಸುಪ್ರೀಂ ಕೋರ್ಟ್

ನವದೆಹಲಿ, ನ.3: ಪ್ರತಿಭಟನೆ ನಡೆಸಲು ನಿಗದಿಪಡಿಸಿರುವ ಸಾರ್ವಜನಿಕ ಸ್ಥಳವನ್ನು ಯಾವುದೇ ಸಂಘಟನೆ ಅನಿರ್ದಿಷ್ಟಾವಧಿಗೆ ಆಕ್ರಮಿಸಿಕೊಳ್ಳುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ.

ರೈತರು, ಕಾರ್ಮಿಕರು, ಪತ್ರಕರ್ತರು ಸೇರಿ ಇತರ ಸಂಘಟನೆಗಳಿಗೂ ಪ್ರತಿಭಟನೆ ನಡೆಸುವ ಹಕ್ಕಿದೆ. ಹೀಗಾಗಿ ಪ್ರತಿಭಟನೆಗೆ ನಿಗದಿತ ಸ್ಥಳ ಮತ್ತು ನಿರ್ದಿಷ್ಟ ಅವಧಿಯನ್ನು ನಿಗದಿಪಡಿಸಬೇಕು ಎಂದು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅಭಿಪ್ರಾಯಪಟ್ಟಿದ್ದಾರೆ.



ಪ್ರತಿಭಟನೆಗೆ ಎಲ್ಲರಿಗೂ ಹಕ್ಕಿದೆ, ನಿಗದಿತ ಅವಧಿ ಅಗತ್ಯ: ಸಿಜೆಐ ಸೂರ್ಯಕಾಂತ್

ದೆಹಲಿಯ ರಾಮಲೀಲಾ ಮೈದಾನದಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಪ್ರತಿಭಟನೆಯಿಂದ ವ್ಯಾಪಾರ ವಹಿವಾಟಿಗೆ ತೊಂದರೆಯಾಗುತ್ತಿದೆ ಎಂದು ಆರೋಪಿಸಿ ವ್ಯಾಪಾರಿಗಳ ಸಂಘಟನೆಗಳು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ವೇಳೆ ನ್ಯಾಯಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್ಮಾಲ್ಯ ಬಾಗ್ಚಿ ಮತ್ತು ವಿ. ಮೊಹನಾ ಅವರನ್ನೊಳಗೊಂಡ ಪೀಠವು ಹಲವು ಅರ್ಜಿಗಳ ವಿಚಾರಣೆ ನಡೆಸಿತು.

ಪ್ರತಿಭಟನಾ ಸಂಘಟನೆಗಳನ್ನೂ ಅರ್ಜಿಯಲ್ಲಿ ಸೇರಿಸಲು ಸೂಚನೆ: ವ್ಯಾಪಾರಿಗಳ ಅರ್ಜಿಯನ್ನು ಪರಿಶೀಲಿಸಿದ ನ್ಯಾಯಪೀಠ, ಸಿಇಸಿ ವಿರುದ್ಧ ಪ್ರತಿಭಟನೆ ನಡೆಸುತ್ತಿರುವ ಸಂಘಟನೆಗಳನ್ನೂ ಪ್ರಕರಣದಲ್ಲಿ ಪ್ರತಿವಾದಿಗಳನ್ನಾಗಿ ಸೇರಿಸುವಂತೆ ವ್ಯಾಪಾರಿಗಳ ಸಂಘಟನೆಗಳಿಗೆ ಸೂಚಿಸಿತು. ಪ್ರತಿಭಟನಾ ಸಂಘಟನೆಗಳ ವಾದವನ್ನು ಆಲಿಸದೆ ಈ ವಿಚಾರದಲ್ಲಿ ನಿರ್ಧಾರ ಕೈಗೊಳ್ಳಲು ಸಾಧ್ಯವಿಲ್ಲ ಎಂದು ನ್ಯಾಯಪೀಠ ತಿಳಿಸಿತು. ಹಬ್ಬದ ಸಂದರ್ಭದಲ್ಲಿ ಪ್ರತಿಭಟನೆಗಳನ್ನು ಸ್ಥಗಿತಗೊಳಿಸುವಂತೆ ವ್ಯಾಪಾರಿಗಳ ಸಂಘಟನೆಗಳು ಸಲ್ಲಿಸಿರುವ ಮನವಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಮತ್ತು ಇತರ ಸಂಬಂಧಪಟ್ಟ ಕಕ್ಷಿದಾರರಿಗೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಇದೇ ವೇಳೆ, ದೆಹಲಿಯ ಪ್ರತಿಭಟನೆಗಳಿಗೆ ಸಂಬಂಧಿಸಿದಂತೆ ಸಾಮೂಹಿಕ ಬಂಧನ, ಪೊಲೀಸರ ದೌರ್ಜನ್ಯ, ಮೆಟ್ರೋ ನಿಲ್ದಾಣಗಳ ಬಂದ್ ಹಾಗೂ ಇಂಟರ್ನೆಟ್ ಸೇವೆ ಸ್ಥಗಿತಗೊಳಿಸಿದ ಆರೋಪಗಳಿಗೆ ಸಂಬಂಧಿಸಿದ ಅರ್ಜಿಗಳನ್ನೂ ನ್ಯಾಯಪೀಠ ವಿಚಾರಣೆ ನಡೆಸಿತು.

ಹಬ್ಬದ ಸಂದರ್ಭದಲ್ಲಿ ವ್ಯಾಪಾರಕ್ಕೆ ಹೊಡೆತ


ವ್ಯಾಪಾರಿಗಳ ಪರ ವಾದ ಮಂಡಿಸಿದ ಹಿರಿಯ ವಕೀಲ ಮುಕುಲ್ ರೋಹಟಗಿ, ಪ್ರತಿಭಟನೆಗಳಿಂದ ದೆಹಲಿಯ ಪ್ರಮುಖ ವಾಣಿಜ್ಯ ಪ್ರದೇಶಗಳಲ್ಲಿ ವ್ಯಾಪಾರ ವಹಿವಾಟು ಕುಸಿದಿದೆ ಎಂದು ನ್ಯಾಯಪೀಠದ ಗಮನಕ್ಕೆ ತಂದರು. ಪ್ರತಿಭಟನಾ ಸ್ಥಳದ ಸುತ್ತಮುತ್ತ ಸುಮಾರು 50 ಲಕ್ಷ ಜನರು ವಾಸಿಸುತ್ತಿದ್ದಾರೆ. ಪ್ರತಿಭಟನೆ ಹಿನ್ನೆಲೆಯಲ್ಲಿ ಅಂಗಡಿಗಳು ಮುಚ್ಚಿದ್ದು, ಕನ್ನಾಟ್ ಪ್ಲೇಸ್‌ನಲ್ಲೂ ವ್ಯಾಪಾರ ಚಟುವಟಿಕೆಗಳು ಸ್ಥಗಿತಗೊಂಡಿವೆ ಎಂದು ಅವರು ವಾದಿಸಿದರು. ವಿಶೇಷವಾಗಿ ಹಬ್ಬದ ಸಂದರ್ಭದಲ್ಲಿ ವ್ಯಾಪಾರ ಕುಸಿದರೆ ವ್ಯಾಪಾರಿಗಳು ಮತ್ತು ಅವರನ್ನೇ ಅವಲಂಬಿಸಿರುವ ಕಾರ್ಮಿಕರಿಗೆ ಭಾರಿ ನಷ್ಟವಾಗಲಿದೆ. ಹೀಗಾಗಿ ಮುಂದಿನ ಎರಡು ತಿಂಗಳ ಅವಧಿಯಲ್ಲಿ ಪ್ರತಿಭಟನೆ ಮತ್ತು ಧರಣಿಗಳಿಗೆ ಅವಕಾಶ ನೀಡಬಾರದು ಎಂದು ಮನವಿ ಮಾಡಿದರು.

2029ರ ವೇಳೆಗೆ 50,000 ಕೋಟಿ ರೂ. ರಕ್ಷಣಾ ತಯಾರಿಕೆ ರಫ್ತು ಗುರಿ

3 ಲಕ್ಷ ಕೋಟಿ ರೂಪಾಯಿ ಮೌಲ್ಯದ ತಯಾರಿಕೆ ಗುರಿ

ಸಂಸದೀಯ ಸಲಹಾ ಮಂಡಳಿ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿಕೆ

ನವದೆಹಲಿ, ನ.3: 2029ರ ವೇಳೆಗೆ ಭಾರತವು 3 ಲಕ್ಷ ಕೋಟಿ ರೂ. ಮೌಲ್ಯದ ರಕ್ಷಣಾ ತಯಾರಿಕೆ ಮತ್ತು 50,000 ಕೋಟಿ ರೂ. ಮೌಲ್ಯದ ರಫ್ತನ್ನು ಸಾಧಿಸುವ ಗುರಿಯನ್ನು ಹೊಂದಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.



ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ಮಂಗಳವಾರ ನಡೆದ ಸಶಸ್ತ್ರ ಪಡೆಗಳ ಆಧುನೀಕರಣ ಕುರಿತ ಸಂಸದೀಯ ಸಲಹಾ ಸಮಿತಿಯ ಸಭೆಯಲ್ಲಿ ಮಾತನಾಡಿದ ಅವರು, ಪ್ರಸ್ತುತ ಮತ್ತು ಭವಿಷ್ಯದ ಭದ್ರತಾ ಸವಾಲುಗಳನ್ನು ಎದುರಿಸಲು ಸಮರ್ಥವಾದ, ತಾಂತ್ರಿಕವಾಗಿ ಸಬಲಗೊಂಡ ಸೇನೆಯನ್ನು ನಿರ್ಮಿಸಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು.

2014–15ರಲ್ಲಿ 46,429 ಕೋಟಿ ರೂ.ಗಳಷ್ಟಿದ್ದ ರಕ್ಷಣಾ ತಯಾರಿಕೆ 2025–26ರ ವೇಳೆಗೆ ದಾಖಲೆಯ 1.78 ಲಕ್ಷ ಕೋಟಿ ರೂ.ಗೆ ಏರಿಕೆಯಾಗಿದೆ. ರಕ್ಷಣಾ ರಫ್ತುಗಳು 2014ರಲ್ಲಿ 2,000 ಕೋಟಿ ರೂ.ಗಿಂತ ಕಡಿಮೆ ಇದ್ದದ್ದು, ಪ್ರಸ್ತುತ ಸುಮಾರು 40,000 ಕೋಟಿ ರೂಗೆ ಏರಿಕೆಯಾಗಿವೆ ಎಂದರು.

2026–27ನೇ ಸಾಲಿಗೆ 7.85 ಲಕ್ಷ ಕೋಟಿ ರೂ.ಗಳ ದಾಖಲೆಯ ರಕ್ಷಣಾ ಬಜೆಟ್ ಅನ್ನು ಮಂಡಿಸಿರುವುದನ್ನು ಉಲ್ಲೇಖಿಸಿದ ರಾಜನಾಥ್‌ಸಿಂಗ್, ಇದರಲ್ಲಿ ಆಧುನೀಕರಣ ಮತ್ತು ಬಂಡವಾಳ ಸಂಗ್ರಹಣೆಗಾಗಿ 2.19 ಲಕ್ಷ ಕೋಟಿ ರೂ. ಬಂಡವಾಳ ವೆಚ್ಚವನ್ನು ಮೀಸಲಿಡಲಾಗಿದೆ ಎಂದು ತಿಳಿಸಿದರು. ಸಾಂಪ್ರದಾಯಿಕ, ಉಪ–ಸಾಂಪ್ರದಾಯಿಕ ಮತ್ತು ಬಹು–ವಲಯದ ಭದ್ರತಾ ಸವಾಲುಗಳಿಗೆ ಪ್ರತಿಕ್ರಿಯಿಸಲು ಸಮರ್ಥವಾದ ಸೇನೆಯನ್ನು ನಿರ್ಮಿಸಲು, ಒಂದು ವ್ಯವಸ್ಥಿತ ಹಾಗೂ ಹಂತ ಹಂತದ ವಿಧಾನವನ್ನು ಅನುಸರಿಸುವ ಅಗತ್ಯವನ್ನು ಸಭೆಯಲ್ಲಿ ಒತ್ತಿಹೇಳಲಾಯಿತು.

ಈ ಸಭೆಯಲ್ಲಿ ರಕ್ಷಣಾ ರಾಜ್ಯ ಸಚಿವ ಸಂಜಯ್ ಸೇಠ್, ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್, ರಕ್ಷಣಾ ಉತ್ಪಾದನಾ ಕಾರ್ಯದರ್ಶಿ ಸಂಜೀವ್ ಕುಮಾರ್, ಮಾಜಿ ಸೈನಿಕರ ಕಲ್ಯಾಣ ಕಾರ್ಯದರ್ಶಿ ಸುಕೃತಿ ಲಿಖಿ, ರಕ್ಷಣಾ ಹಣಕಾಸು ಕಾರ್ಯದರ್ಶಿ ವಿಶ್ವಜಿತ್ ಸಹಾಯ್ ಹಾಗೂ ಹಿರಿಯ ನಾಗರಿಕ ಮತ್ತು ಮಿಲಿಟರಿ ಅಧಿಕಾರಿಗಳು ಭಾಗವಹಿಸಿದ್ದರು.

ಸೌರಶಕ್ತಿಯಿಂದ 30 ಲಕ್ಷ ರೈತರ ಸಬಲೀಕರಣ: ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

ವಿದೇಶಗಳಲ್ಲೂ ನಮ್ಮ ಪಿಎಂ ಕುಸುಮ್ ಅಳವಡಿಕೆಗೆ ಒತ್ತು

ಸತತ 3ನೇ ಬಾರಿ ಅಂತರಾಷ್ಟ್ರೀಯ ಸೌರ ಒಕ್ಕೂಟ ಅಧ್ಯಕ್ಷ ಸ್ಥಾನಕ್ಕೆ ಭಾರತ ಆಯ್ಕೆ

ನವದೆಹಲಿ, ನ.3: ಸತತ ಮೂರನೇ ಬಾರಿ ಅಂತರಾಷ್ಟ್ರೀಯ ಸೌರ ಒಕ್ಕೂಟದ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗಿರುವ ಭಾರತ, ಜಾಗತಿಕ ಮಟ್ಟದಲ್ಲಿ ಸೌರಶಕ್ತಿ ಸಹಕಾರವನ್ನು ಬಲಪಡಿಸುವ ಹಾಗೂ ನವೀಕರಿಸಬಹುದಾದ ಇಂಧನ ವಲಯದ ಪ್ರಯೋಜನಗಳನ್ನು ಎಲ್ಲ ರಾಷ್ಟ್ರಗಳಿಗೂ ತಲುಪಿಸುವ ನಿಟ್ಟಿನಲ್ಲಿ ಭಾರತ ಬದ್ಧವಾಗಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ನವದೆಹಲಿಯಲ್ಲಿ ನಡೆಯುತ್ತಿರುವ "ಭಾರತ್ ನವೀಕರಿಸಬಹುದಾದ ಇಂಧನ ಶೃಂಗಸಭೆ ಮತ್ತು ಎಕ್ಸ್‌ಪೋ–2026" ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ 'ಒಂದು ಸೂರ್ಯ, ಒಂದು ಜಗತ್ತು, ಒಂದು ಗ್ರಿಡ್' ಪರಿಕಲ್ಪನೆಯಡಿ ಜಾಗತಿಕ ಸೌರ ಸಹಕಾರಕ್ಕೆ ಭಾರತ ಪ್ರಾಶಸ್ತ್ಯ ನೀಡುತ್ತಿದೆ ಎಂದರು.



2015ರಲ್ಲಿ ಭಾರತ ಮತ್ತು ಫ್ರಾನ್ಸ್ ಜಂಟಿಯಾಗಿ ಅಂತರಾಷ್ಟ್ರೀಯ ಸೌರ ಒಕ್ಕೂಟವನ್ನು ಸ್ಥಾಪಿಸಿದ್ದವು. ಪ್ರಸ್ತುತ 130ಕ್ಕೂ ಹೆಚ್ಚು ಸದಸ್ಯ ರಾಷ್ಟ್ರಗಳನ್ನು ಒಳಗೊಂಡಿರುವ ಈ ಒಕ್ಕೂಟವು ವಿಶೇಷವಾಗಿ ಜಾಗತಿಕ ದಕ್ಷಿಣ ರಾಷ್ಟ್ರಗಳ ನಡುವೆ ಸೌರಶಕ್ತಿ ಸಹಕಾರಕ್ಕೆ ಪ್ರಮುಖ ವೇದಿಕೆಯಾಗಿ ಬೆಳೆದಿದೆ ಎಂದು ಹೇಳಿದರು.

ಸೌರಶಕ್ತಿ ಮೂಲಕ 30 ಲಕ್ಷ ರೈತರನ್ನು ಸಬಲೀಕರಣಗೊಳಿಸುವುದು ಮತ್ತು ಕೃಷಿ ಕ್ಷೇತ್ರದಲ್ಲಿ ಅಗ್ರಿ–ಪಿವಿ ವ್ಯವಸ್ಥೆಯನ್ನು ವಿಸ್ತರಿಸುವುದು ಒಕ್ಕೂಟದ ಪ್ರಮುಖ ಗುರಿಯಾಗಿದೆ. ಭಾರತದ ಪಿಎಂ–ಕುಸುಮ್ ಯೋಜನೆಯು ಸೌರಶಕ್ತಿ ಆಧಾರಿತ ಕೃಷಿಯಿಂದ ನೀರಾವರಿ ವೆಚ್ಚ ಕಡಿಮೆ ಮಾಡುವುದರ ಜತೆಗೆ ರೈತರಿಗೆ ಹೆಚ್ಚುವರಿ ಆದಾಯ ಗಳಿಸುವ ಅವಕಾಶ ಕಲ್ಪಿಸಿದೆ. ಇದೇ ಮಾದರಿಯನ್ನು ಆಫ್ರಿಕಾ ಸೇರಿದಂತೆ ಸದಸ್ಯ ರಾಷ್ಟ್ರಗಳಲ್ಲಿಯೂ ಅಳವಡಿಸಲು ಪ್ರಯತ್ನಿಸಲಾಗುತ್ತಿದೆ. ವಿದೇಶಗಳಲ್ಲಿ ಸೌರ ತಂತ್ರಜ್ಞಾನದ ಬಳಕೆಯನ್ನು ಹೆಚ್ಚಿಸಲು 17 ಸೌರ ತಂತ್ರಜ್ಞಾನ ಅನ್ವಯಿಕ ಸಂಪನ್ಮೂಲ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಜತೆಗೆ ಶೈನ್ ಜಾಗತಿಕ ಸಾಮರ್ಥ್ಯ ಕೇಂದ್ರ ಮತ್ತು ಕೃತಕ ಬುದ್ಧಿಮತ್ತೆ ಆಧಾರಿತ ಐಎಸ್‌ಎ ಅಕಾಡೆಮಿಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಕೌಶಲ ಅಭಿವೃದ್ಧಿ, ತಾಂತ್ರಿಕ ಸಾಮರ್ಥ್ಯ ವೃದ್ಧಿ ಮತ್ತು ಹೊಸ ತಂತ್ರಜ್ಞಾನ ಬಳಕೆಗೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ಕಾರ್ಯದರ್ಶಿ ಸಂತೋಷ್ ಕುಮಾರ್ ಸಾರಂಗಿ, ಐಎಸ್‌ಎ ಮಹಾನಿರ್ದೇಶಕ ಆಶಿಷ್

ಐಎಸ್‌ಎ ಸದಸ್ಯ ರಾಷ್ಟ್ರಗಳಿಗೆ ಅಭಿನಂದನೆ

ಕೃತಕ ಬುದ್ಧಿಮತ್ತೆ ಬೆಳವಣಿಗೆಯೊಂದಿಗೆ ಭವಿಷ್ಯದಲ್ಲಿ ಕೈಗೆಟುಕುವ ದರದ, ವಿಶ್ವಾಸಾರ್ಹ ಹಾಗೂ ಸ್ವಚ್ಛ ವಿದ್ಯುತ್ ಪೂರೈಕೆಯ ಅಗತ್ಯ ಮತ್ತಷ್ಟು ಹೆಚ್ಚಲಿದೆ. ಸೌರಶಕ್ತಿಯ ಭವಿಷ್ಯವನ್ನು ರೂಪಿಸಲು ಎಲ್ಲ ರಾಷ್ಟ್ರಗಳ ಸಹಭಾಗಿತ್ವ, ನಿರಂತರ ಹೂಡಿಕೆ ಮತ್ತು ಸಾಮೂಹಿಕ ಪ್ರಯತ್ನ ಅಗತ್ಯ ಎಂದು ಅಭಿಪ್ರಾಯಪಟ್ಟರು. ಸತತ ಮೂರನೇ ಬಾರಿಗೆ ಭಾರತಕ್ಕೆ ಅಧ್ಯಕ್ಷ ಸ್ಥಾನ ನೀಡಿದ ಎಲ್ಲ ಸದಸ್ಯ ರಾಷ್ಟ್ರಗಳಿಗೆ ಕೃತಜ್ಞತೆ ಸಲ್ಲಿಸಿದ ಸಚಿವ ಪ್ರಲ್ಹಾದ ಜೋಶಿ, ಐಎಸ್‌ಎ ಸಹ–ಅಧ್ಯಕ್ಷ ಸ್ಥಾನಕ್ಕೆ ಮರು ಆಯ್ಕೆಯಾದ ಫ್ರಾನ್ಸ್‌ಗೂ ಅಭಿನಂದನೆ ಸಲ್ಲಿಸಿದರು.

ಆಫ್ರಿಕಾ ಸೋಲಾರ್ ಸೌಲಭ್ಯಕ್ಕೆ 225 ಕೋಟಿ

ಆಫ್ರಿಕಾ ರಾಷ್ಟ್ರಗಳಲ್ಲಿ ಸೌರಶಕ್ತಿ ಯೋಜನೆಗಳಿಗೆ ಉತ್ತೇಜನ ನೀಡಲು 200 ದಶಲಕ್ಷ ಡಾಲರ್ ಮೊತ್ತದ 'ಆಫ್ರಿಕಾ ಸೋಲಾರ್ ಫೆಸಿಲಿಟಿ' ಸ್ಥಾಪಿಸಲಾಗುತ್ತಿದೆ. ಇದಕ್ಕೆ ಭಾರತ ಸುಮಾರು 225 ಕೋಟಿ (25 ದಶಲಕ್ಷ ಡಾಲರ್) ಕೊಡುಗೆ ನೀಡಲು ಬದ್ಧವಾಗಿದೆ ಎಂದು ಜೋಶಿ ಘೋಷಿಸಿದರು.

ನೈಜೀರಿಯಕ್ಕೆ 300 ಮಿ. ಡಾಲರ್ ನಿಧಿ: ನೈಜೀರಿಯಾದಲ್ಲಿ 300 ದಶಲಕ್ಷ ಡಾಲರ್ ಮೊತ್ತದ ವಿಕೇಂದ್ರೀಕೃತ ನವೀಕರಿಸಬಹುದಾದ ಇಂಧನ ನಿಧಿಯನ್ನೂ ರೂಪಿಸಲಾಗುತ್ತಿದೆ ಎಂದರು. ಫಿಜಿ, ಮಡಗಾಸ್ಕರ್, ಕೊಮೊರೊಸ್ ಮತ್ತು ಸೆಶೆಲ್ಸ್ ರಾಷ್ಟ್ರಗಳಲ್ಲಿ ಸೌರಶಕ್ತಿ ಬಳಕೆ ಮೂಲಕ ಆಸ್ಪತ್ರೆ, ಶಾಲೆಗಳಿಗೆ ವಿದ್ಯುತ್ ಪೂರೈಕೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಕೃಷಿ ಉತ್ಪನ್ನಗಳ ಶೀತಲ ಸಂಗ್ರಹಣೆಗೆ ನೆರವು ನೀಡಲಾಗುತ್ತಿದೆ. ಸಣ್ಣ ದ್ವೀಪ ರಾಷ್ಟ್ರಗಳಲ್ಲಿಯೂ ಸೌರಶಕ್ತಿ ಮತ್ತು ಇಂಧನ ಸಂಗ್ರಹಣಾ ಯೋಜನೆಗಳನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ನಿತ್ಯ ಪಂಚಾಂಗ 4.11.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಮೂಡಬಿದರೆ ಉತ್ಸವ,
ಸಂತ ತುಕಾರಾಮ ಪುಣ್ಯದಿನ,
ಕಿಡದಾಳೆ ಜಾತ್ರೆ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30

ಎತ್ತಿನಹೊಳೆ ಪಂಪ್‌ಹೌಸ್‌ನಲ್ಲಿ ಅಗ್ನಿ ಅವಘಡ

ಹಾಸನ,ನ.3: ಸಕಲೇಶಪುರ ತಾಲೂಕಿನ ಮೊಗನಹಳ್ಳಿ ಗ್ರಾಮದಲ್ಲಿರುವ ಮಹತ್ವಾಕಾಂಕ್ಷೆಯ ಎತ್ತಿನಹೊಳೆ ಯೋಜನೆಯ ಪಂಪ್‌ಹೌಸ್‌ನಲ್ಲಿ ಭೀಕರ ಅಗ್ನಿ ಅವಘಡ ಸಂಭವಿಸಿದೆ. ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಇಡೀ ಪಂಪ್‌ಹೌಸ್ ಬೆಂಕಿಗಾಹುತಿಯಾಗಿದ್ದು, ಸ್ಥಳದಲ್ಲಿದ್ದ ಮೂವರು ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.ಪಂಪ್‌ಹೌಸ್‌ನಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಸಂಭವಿಸಿ ಬೆಂಕಿ ಕಾಣಿಸಿಕೊಂಡಿದೆ. ನೋಡನೋಡುತ್ತಿದ್ದಂತೆಯೇ ಬೆಂಕಿಯ ಕೆನ್ನಾಲಿಗೆ ಇಡೀ ಕಟ್ಟಡಕ್ಕೆ ವ್ಯಾಪಿಸಿದೆ. ಬೆಂಕಿಯ ತೀವ್ರತೆಗೆ ಪಂಪ್‌ಹೌಸ್‌ನಲ್ಲಿದ್ದ ಬೆಲೆಬಾಳುವ ಯಂತ್ರೋಪಕರಣಗಳು ಸಂಪೂರ್ಣವಾಗಿ ಕರಕಲಾಗಿವೆ.

ಅಭಿವೃದ್ಧಿಗೆ ಗುಜರಾತ್ ಮಾಡೆಲ್, ಸ್ಟಿಂಗ್‌ಗೆ ಕರ್ನಾಟಕ ಮಾಡೆಲ್: ರಾಜಣ್ಣ ವ್ಯಂಗ್ಯ

ಬೆಂಗಳೂರು, ನ.3: ರಾಜ್ಯ ರಾಜಕಾರಣದಲ್ಲಿ ಅಲ್ಲೋಲಕಲ್ಲೋಲ ಸೃಷ್ಟಿಸಿರುವ ಸ್ಟಿಂಗ್ ಆಪರೇಷನ್ ಪ್ರಕರಣ ಹಾಗೂ ನಡೆಯುತ್ತಿರುವ ಬೆಳವಣಿಗೆಗಳ ಬಗ್ಗೆ ಮಾತನಾಡಿರುವ ಮಾಜಿ ಸಚಿವ, ಶಾಸಕ ಕೆ.ಎನ್.ರಾಜಣ್ಣ, ತಮ್ಮದೇ ಶೈಲಿಯಲ್ಲಿ ಅಭಿವೃದ್ಧಿಗೆ ಗುಜರಾತ್ ಮಾಡೆಲ್ ಅಂತ ಪ್ರಧಾನಿ ಮೋದಿ ಹೇಳುತ್ತಾರೆ. ಅದೇ ರೀತಿ ಮುಂದೆ ದೇಶಾದ್ಯಂತ ಸ್ಟಿಂಗ್ ಆಪರೇಷನ್ ವಿಚಾರದಲ್ಲಿ ಕರ್ನಾಟಕ ಮಾಡೆಲ್ ಅಂತ ಅಪಕೀರ್ತಿಗೆ ಕಾರಣವಾಗುತ್ತದೆ ಎಂದಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ರಾಜಣ್ಣ, ಸ್ಟಿಂಗ್ ಆಪರೇಷನ್ ಪ್ರಕರಣದಿಂದ ಕರ್ನಾಟಕದ ಗೌರವಕ್ಕೆ ಧಕ್ಕೆಯಾಗಲಿದ್ದು, ಕನ್ನಡಿಗರು ತಲೆತಗ್ಗಿಸುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.ಸಿದ್ದರಾಮಯ್ಯ ಅವರು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿ ಬಂದಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ರಾಜಣ್ಣ, ಸ್ಟಿಂಗ್ ಆಪರೇಷನ್‌ನಿಂದ ಪಕ್ಷದ ಮೇಲಾಗುತ್ತಿರುವ ಪರಿಣಾಮಗಳು, ವೈಯಕ್ತಿಕ ವರ್ಚಸ್ಸಿನ ಮೇಲೆ ಉಂಟಾಗುತ್ತಿರುವ



ದುಷ್ಪರಿಣಾಮಗಳ ಬಗ್ಗೆ ಸಿದ್ದರಾಮಯ್ಯ ಅವರು ರಾಹುಲ್ ಗಾಂಧಿ ಅವರೊಂದಿಗೆ ವಿವರವಾಗಿ ಚರ್ಚಿಸಿದ್ದಾರೆ ಎಂಬ ಮಾಹಿತಿ ಇದೆ ಎಂದು ತಿಳಿಸಿದರು.

ಸ್ಟಿಂಗ್ ಆಪರೇಷನ್ ಪ್ರಕರಣದ ತನಿಖೆ ಉನ್ನತ ಮಟ್ಟದಲ್ಲಾಗಲಿ ಅಥವಾ ಕೆಳಮಟ್ಟದಲ್ಲಾಗಲಿ, ಸೂಕ್ತ ತನಿಖೆ ನಡೆದು ಸತ್ಯ ಹೊರಬರಬೇಕು. ಈ ಪ್ರಕರಣದಲ್ಲಿ ನಿರಪರಾಧಿಗಳನ್ನು ಸಿಲುಕಿಸುವ ಪ್ರಯತ್ನ ನಡೆದಿದ್ದರೆ ಅವರಿಗೆ ನ್ಯಾಯ ಸಿಗಬೇಕು. ಇಂತಹ ಕೃತ್ಯಗಳಿಗೆ ಕಾರಣರಾದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಇದು ರಾಜ್ಯಕ್ಕೆ ದೊಡ್ಡ ಕಳಂಕ. ಇಂತಹ ಘಟನೆಗಳು ಮತ್ತೆ ನಡೆಯದಂತೆ ಸೂಕ್ತ ತನಿಖೆ ನಡೆಸುವುದು ಅಗತ್ಯ ಎಂದು ಹೇಳಿದರು.

ಪಕ್ಷ ತೊರೆಯುವಂತೆ ಸಚಿವ ಬಾಲಕೃಷ್ಣ ಸವಾಲು

ಸ್ಟಿಂಗ್ ಆಪರೇಷನ್ ವಿಚಾರವಾಗಿ ಕರ್ನಾಟಕ ಮಾಡೆಲ್ ಆಗಲಿದೆ. ಪಕ್ಷದ ಮೇಲೆ ಈ ಪ್ರಕರಣ ಪರಿಣಾಮ ಬೀರಲಿದೆ. ವಿಧಾನ ಪರಿಷತ್ ಚುನಾವಣೆ ಸೋಲಿಗೂ ಇದೇ ಕಾರಣ ಎಂದು ಅಸಮಾಧಾನ ವ್ಯಕ್ತಪಡಿಸಿದ್ದ ಕಾಂಗ್ರೆಸ್ ಶಾಸಕ ಕೆ.ಎನ್. ರಾಜಣ್ಣ ಹೇಳಿಕೆಗೆ ಸಚಿವ ಎಚ್.ಸಿ.ಬಾಲಕೃಷ್ಣ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಚಿತ್ರದುರ್ಗದಲ್ಲಿ ಮಾತನಾಡಿದ ಸಚಿವರು, ಪಕ್ಷದಲ್ಲೇ ಇದ್ದು ಅನ್ನ ತಿಂದು ದ್ರೋಹ ಬಗೆಯುವುದಾದರೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ, ಪಕ್ಷ ಬಿಟ್ಟು ಹೊರಗೆ ಹೋಗಲಿ ಎಂದು ನೇರ ಸವಾಲೆಸೆದಿದ್ದಾರೆ. ಸಿದ್ದರಾಮಯ್ಯ ಅವರ ಸ್ಟಿಂಗ್ ವಿಚಾರ ಮಾತನಾಡುವ ಮುನ್ನ, ರಾಜಣ್ಣ ಅವರ ಪುತ್ರ ರಾಜೇಂದ್ರ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ನಿಷ್ಠೆಯಿಂದ ಕೆಲಸ ಮಾಡಿದ್ದಾರಾ ಎಂದು ಮೊದಲು ಕೇಳಿ ಎಂದು ತಿರುಗೇಟು ನೀಡಿದರು. ಇತ್ತ ಚುನಾವಣೆ ಮುಗಿಯುವು ದರೊಳಗೆ ಅತ್ತ ಜೆಡಿಎಸ್ ನಾಯಕ ಎಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿಯಾಗಿದ್ದಾರೆ. ತಾವು ಕಾಂಗ್ರೆಸ್ ಪರವಾಗಿ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇವೆ ಎಂದು ಅವರು ಎದೆ ಮುಟ್ಟಿಕೊಂಡು ಹೇಳಲಿ ನೋಡೋಣ ಎಂದರು.

ಜವಾಬ್ದಾರಿ ಹೊತ್ತು ರಾಜೀನಾಮೆ ನೀಡಬೇಕು

ವಿಧಾನಪರಿಷತ್ ಚುನಾವಣೆಯಲ್ಲಿ ಹೀನಾಯ ಸೋಲು ಕಂಡ ಕಾರಣಕ್ಕಾಗಿ ಕಾಂಗ್ರೆಸ್ ಪಕ್ಷದ 26 ವಿಧಾನಸಭಾ ಕ್ಷೇತ್ರದ ಶಾಸಕರು ರಾಜೀನಾಮೆ ನೀಡಬೇಕು. ಸ್ಟಿಂಗ್ ಆಪರೇಷನ್ ವಿಚಾರವೂ ಎಂಎಲ್‌ಸಿ ಚುನಾವಣೆ ಮೇಲೆ ಪರಿಣಾಮ ಬೀರಿದೆ ಎಂದು ಮಾಜಿ ಸಚಿವ ಕೆ.ಎನ್ ರಾಜಣ್ಣ ಹೇಳಿದ್ದಾರೆ. ವಿಧಾನಪರಿಷತ್ ಚುನಾವಣೆಯಲ್ಲಿ ಸೋಲಿನ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ನಾವೆಲ್ಲರೂ ರಾಜೀನಾಮೆಯನ್ನು ಕೊಡಬೇಕು. ನನ್ನನ್ನು ಸೇರಿದಂತೆ ಸೋಲಿನ ಜವಾಬ್ದಾರಿ ಹೊತ್ತು ಶಾಸಕರು ರಾಜೀನಾಮೆ ನೀಡಬೇಕು. ನಾವು ಚುನಾವಣೆಯಲ್ಲಿ ಗೆಲ್ಲುವುದಕ್ಕೆ ಸಾಧ್ಯವಾಗಿಲ್ಲ ಎಂದರೆ 26 ಶಾಸಕರೂ ಜವಾಬ್ದಾರಿ ಹೊತ್ತು ರಾಜೀನಾಮೆ ಕೊಡಬೇಕು ಎಂದರು. ಸ್ಟಿಂಗ್ ಆಪರೇಷನ್ ವಿಚಾರ ಎಂಎಲ್‌ಸಿ ಚುನಾವಣೆ ಮೇಲೆ ಪರಿಣಾಮ ಬೀರಿದೆ. ಎಂಎಲ್‌ಸಿ ಚುನಾವಣೆಯಲ್ಲಿ ವಿದ್ಯಾವಂತರು ಮತ ಹಾಕೋದು. ವಿದ್ಯಾವಂತರು ವೋಟ್ ಹಾಕುವಾಗ ಪ್ರತಿಯೊಂದು ವಿಚಾರವನ್ನು ಅವರು ತುಲನೆ ಮಾಡುತ್ತಾರೆ . ತಮ್ಮ ಅಸಮಾಧಾನವನ್ನು ಈ ರೀತಿ ವ್ಯಕ್ತಪಡಿಸಿರುವ ಸಾಧ್ಯತೆ ಇದೆ ಎಂದು ವ್ಯಾಖ್ಯಾನಿಸಿದರು.

ಸಿದ್ದರಾಮಯ್ಯ ನಾಯಕತ್ವದ ಬಗ್ಗೆ ಜನರಲ್ಲಿ ಗೊಂದಲವಿದೆ


2028ರ ಚುನಾವಣೆಗೆ ಸಿದ್ದರಾಮಯ್ಯ ಅವರು ನಾಯಕತ್ವದ ಸ್ಪಷ್ಟನೆ ಕೊಡಬೇಕು ಅನ್ನೋ ವಿಚಾರವಾಗಿ ಮಾತನಾಡಿದ ರಾಜಣ್ಣ, ಈ ಬಗ್ಗೆ ಜನರಲ್ಲಿ ಗೊಂದಲ ಇದೆ. ಮುಂದಿನ ಬಾರಿ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಅವರು ಹೇಳಿದ್ದರು. ಅದಾದ ಮೇಲೆ ಚುನಾವಣಾ ಪ್ರಚಾರಕ್ಕೆ ಹೋಗೋದಿಲ್ಲ ಅಂತ ಹೇಳಿದ್ದಾರೆ.

ಇವೆಲ್ಲವೂ ಕೂಡ ಪಕ್ಷದ ಮೇಲೆ ಹೆಚ್ಚು ದುಷ್ಪರಿಣಾಮ ಆಗುತ್ತೆ ಅನ್ನೋದರಲ್ಲಿ ಸಂಶಯ ಇಲ್ಲ ಎಂದರು. ಸಿದ್ದರಾಮಯ್ಯ ಹಾಗೂ ರಾಹುಲ್ ಗಾಂಧಿ ಅವರ ಭೇಟಿ ವಿಚಾರದ ಬಗ್ಗೆ ನಾನು ಕೂಡ ಮಾಧ್ಯಮದಲ್ಲಿ ನೋಡಿದ್ದೇನೆ ಅಷ್ಟೇ. ಸಿದ್ದರಾಮಯ್ಯನವರ ಜೊತೆಗೆ ಅವರು ದೆಹಲಿಗೆ ಹೋಗುವ ಮೊದಲು ಮಾತನಾಡಿದ್ದೆ. ಹೋಗಿ ಬಂದ ಬಳಿಕ ಮಾತಾಡಿಲ್ಲ ಎಂದರು.

ಅರಾಜಕತೆ ಸೃಷ್ಟಿಸಲು ಕಾಂಗ್ರೆಸ್ ಪ್ರಚೋದನೆ: ವಿಜಯೇಂದ್ರ ಆರೋಪ

ಕೋಲಾರ, ನ.3: ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ಕಾಂಗ್ರೆಸ್ 'ರಾಜಕೀಯಗೊಳಿಸುತ್ತಿದೆ' ಮತ್ತು ಅರಾಜಕತೆಗೆ ಪ್ರಚೋದನೆ ನೀಡಲು ಯುವಜನರನ್ನು ದಾರಿತಪ್ಪಿಸುತ್ತಿದೆ ಎಂದು ಆರೋಪಿಸಿ ಬಿಜೆಪಿ ಮಂಗಳವಾರ ಕೋಲಾರದಲ್ಲಿ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಘೋಷಣೆಯೊಂದಿಗೆ ಪಾದಯಾತ್ರೆ ನಡೆಸಿತು.

ಡೂಮ್ ಲೈಟ್ ಸರ್ಕಲ್‌ನಿಂದ ಆರಂಭವಾದ ಪಾದಯಾತ್ರೆಯಲ್ಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ, ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ಹಲವು ನಾಯಕರು ಪಾಲ್ಗೊಂಡಿದ್ದರು.



ಸಭೆಯನ್ನು ಉದ್ದೇಶಿಸಿ ಮಾತನಾಡಿದ ಬಿ.ವೈ. ವಿಜಯೇಂದ್ರ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಜನಪ್ರಿಯತೆಯನ್ನು ಸಹಿಸಿಕೊಳ್ಳಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಸಾಧ್ಯವಾಗುತ್ತಿಲ್ಲ ಮತ್ತು ಅವರು ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿದ್ದಾರೆ. ಪ್ರಜಾಸತ್ತಾತ್ಮಕ ಜನಾದೇಶ ಪಡೆದ ಸರ್ಕಾರವನ್ನು ಕಿತ್ತೊಗೆಯಲು ವಿರೋಧ ಪಕ್ಷಗಳು ಯತ್ನಿಸುತ್ತಿವೆ. ದೇಶಾದ್ಯಂತ ಅರಾಜಕತೆಯ ವಾತಾವರಣವನ್ನು ಸೃಷ್ಟಿಸಲು ರಾಹುಲ್ ಗಾಂಧಿ ಯತ್ನಿಸುತ್ತಿದ್ದಾರೆ. ಕಾಂಗ್ರೆಸ್‌ಗೆ ಎಸ್‌ಐಆರ್ ಪ್ರಕ್ರಿಯೆ, ಇವಿಎಂಗಳ ಮೇಲೂ ನಂಬಿಕೆಯಿಲ್ಲ. ಕೊನೆಗೆ ಸುಪ್ರೀಂ ಕೋರ್ಟ್ ಮೇಲೂ ಅವರಿಗೆ ನಂಬಿಕೆಯಿಲ್ಲ. ಈ ಪಕ್ಷವು ಸಾಂವಿಧಾನಿಕ ಸಂಸ್ಥೆಗಳ ಬಗ್ಗೆಯೇ ಅನುಮಾನ ವ್ಯಕ್ತಪಡಿಸುತ್ತಿದೆ ಎಂದು ಆರೋಪಿಸಿದರು.

ಸ್ಟಿಂಗ್ ಆಪರೇಷನ್: ಎಚ್.ಡಿ.ಕುಮಾರಸ್ವಾಮಿ ಸಿಲುಕಿಸಲು ಯತ್ನ

ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ಗುರಿಯಾಗಿಸಿಕೊಂಡಿದೆ ಎಂದು ಆರೋಪಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಆರೋಪಿತ 'ಸ್ಟಿಂಗ್ ಆಪರೇಷನ್' ಕುರಿತು ನಿಷ್ಪಕ್ಷಪಾತ ತನಿಖೆಗೆ ಆದೇಶಿಸುವ ಬದಲು, ಕಾಂಗ್ರೆಸ್ ಸರ್ಕಾರ ಉದ್ದೇಶಪೂರ್ವಕವಾಗಿಯೇ ಎಚ್.ಡಿ. ಕುಮಾರಸ್ವಾಮಿ ಅವರನ್ನು ಗುರಿಯಾಗಿಸುತ್ತಿದೆ. ಇದು ರಾಜಕೀಯ ಪ್ರೇರಿತವಾಗಿದೆ ಎಂದು ಹೇಳಿದ್ದಾರೆ. ಬ್ಲ್ಯಾಕ್‌ಮೇಲ್ ಮಾಡಲು ಮತ್ತು ರಾಜಕೀಯ ಲಾಭ ಪಡೆಯಲು 'ಸ್ಟಿಂಗ್ ಆಪರೇಷನ್'ಗಳನ್ನು ಹಾಗೂ 'ಸಿಡಿ ಫ್ಯಾಕ್ಟರಿ'ಗಳನ್ನು ಬಳಸಿಕೊಂಡ ಇತಿಹಾಸ ಕಾಂಗ್ರೆಸ್ ಸರ್ಕಾರಕ್ಕಿದೆ. ಸ್ವತಃ ಕಾಂಗ್ರೆಸ್ ಶಾಸಕರೇ ಇದರ ಹಿಂದಿರುವ ರೂವಾರಿ ಯಾರು ಎಂದು ಪ್ರಶ್ನಿಸುತ್ತಿದ್ದಾರೆ. ತಮ್ಮ ಸಿಡಿಗಳು ಬಿಡುಗಡೆಯಾಗಬಹುದೆಂಬ ಭಯದಲ್ಲಿ ಸಚಿವರು ದಿನ ಕಳೆಯುತ್ತಿದ್ದಾರೆ ಎಂದು ಆರೋಪಿಸಿದರು.

ಎಸ್‌ಐಆರ್ ವಿರೋಧಿಸಿ ಇಂಡಿಯಾ ಕೂಟದಿಂದ ನಾಳೆ ಬೃಹತ್ ಪ್ರತಿಭಟನೆ: ಬಿ.ಕೆ.ಹರಿಪ್ರಸಾದ್

ಬೆಂಗಳೂರು, ನ.3: ಎಸ್‌ಐಆರ್ ಪ್ರಕ್ರಿಯೆ ಹಾಗೂ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ವಿರುದ್ಧ ನ.5ರಂದು ಬೆಂಗಳೂರು ನಗರದ ಫ್ರೀಡಂ ಪಾರ್ಕ್‌ನಲ್ಲಿ ಇಂಡಿಯಾ ಒಕ್ಕೂಟದ ವತಿಯಿಂದ ಬೃಹತ್ ಸಭೆ ಏರ್ಪಡಿಸಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ತಿಳಿಸಿದ್ದಾರೆ.



ಕೆಪಿಸಿಸಿ ಕಚೇರಿಯಲ್ಲಿ ನಡೆದ ಇಂಡಿಯಾ ಒಕ್ಕೂಟದ ಮೈತ್ರಿ ಪಕ್ಷಗಳ ನಾಯಕರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಹಾಗೂ ಜ್ಞಾನೇಶ್ ಕುಮಾರ್ ಅವರ ವಿರುದ್ಧ ನ.1ರಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ ಇಂಡಿಯಾ ಒಕ್ಕೂಟ ವತಿಯಿಂದ ನಡೆದ ಪ್ರತಿಭಟನೆಯ ಮುಂದುವರಿದ ಭಾಗವಾಗಿ ಈ ಬೃಹತ್ ಸಭೆ ಹಮ್ಮಿಕೊಳ್ಳಲಾಗಿದೆ ಎಂದರು. ದೇಶದಾದ್ಯಂತ ತಾಲ್ಲೂಕು ಹಾಗೂ ಬ್ಲಾಕ್ ಮಟ್ಟದಲ್ಲಿ ಪ್ರತಿಭಟನೆ ನಡೆಸಬೇಕು ಎಂದು ಇಂಡಿಯಾ ಒಕ್ಕೂಟದ ನಾಯಕರು ದೆಹಲಿಯಲ್ಲಿ ತೀರ್ಮಾನಿಸಿದ್ದಾರೆ. ಕರ್ನಾಟಕದಲ್ಲಿ ಮೊದಲು ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸಿ, ನಂತರ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಪ್ರತಿಭಟನೆ ನಡೆಸಲು ಮೈತ್ರಿಕೂಟದ ನಾಯಕರು ತೀರ್ಮಾನಿಸಿದ್ದಾರೆ. ಸಾಂವಿಧಾನಿಕ ಸಂಸ್ಥೆಗಳ ದುರ್ಬಳಕೆ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬುಡಮೇಲು ಮಾಡಲು ಬಿಜೆಪಿ ಹಾಗೂ ಆರೆಸ್ಸೆಸ್ ಪ್ರಯತ್ನಿಸುತ್ತಿವೆ. ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡುವವರೆಗೂ ಈ ಹೋರಾಟ ಮುಂದುವರಿಯಲಿದೆ ಎಂದು ಹೇಳಿದರು. ಮಾಧ್ಯಮಗೋಷ್ಠಿಯಲ್ಲಿ ಸಿಪಿಎಂ ಪಕ್ಷದ ಕಾರ್ಯದರ್ಶಿ ಕೆ. ಪ್ರಕಾಶ್ ಸಿಪಿಐನ ಸಾಥಿ ಸುಂದರೇಶ್, ಸಿಪಿಎಂನ ಮಹಾಂತೇಶ್, ಫಾರ್ವರ್ಡ್ ಬ್ಲಾಕ್‌ನ ಶಿವಶಂಕರ್, ಅಲಿ, ಸಿಪಿಐಎಂಎಲ್ ಪಕ್ಷದ ಕ್ಲಿಫ್ಟನ್ ಡಿ ರೊಜಾರಿಯೋ ಹಾಗೂ ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು ಉಪಸ್ಥಿತರಿದ್ದರು.

ಅಳಿಕೆ ಸತ್ಯಸಾಯಿ ಶಿಕ್ಷಣ ಸಂಸ್ಥೆಗಳಿಂದ ಧರ್ಮಾಧಿಕಾರಿ ಡಾ.ಹೆಗ್ಗಡೆಗೆ ಗೌರವಾರ್ಪಣೆ



ಮುಂಬೈ,ನ.3: ಅಳಿಕೆ ಸತ್ಯಸಾಯಿ ಶಿಕ್ಷಣಸಂಸ್ಥೆಗಳ ಕಾರ್ಯದರ್ಶಿ, ಚಂದ್ರಶೇಖರ್ ಭಟ್ ನೇತೃತ್ವದಲ್ಲಿ ಶಿಕ್ಷಕರು ಮತ್ತು 36ವಿದ್ಯಾರ್ಥಿಗಳು ಮಂಗಳವಾರ ಧರ್ಮಸ್ಥಳಕ್ಕೆ ಬಂದು ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆಯವರನ್ನು ಭೇಟಿಯಾಗಿ ಗೌರವಾರ್ಪಣೆ ಮಾಡಿದರು.

ಅಳಿಕೆ ಸಂಸ್ಥೆಗಳ ಕಾರ್ಯದರ್ಶಿ, ಚಂದ್ರಶೇಖರ್ ಭಟ್ ಪ್ರಾಸ್ತಾವಿಕವಾಗಿ ಮಾತನಾಡಿ ಅಳಿಕೆಗೂ, ಧರ್ಮಸ್ಥಳಕ್ಕೂ ಅವಿನಾಭಾವ ಸಂಬಂಧವಿದ್ದು ಅಳಿಕೆಯ ಸಂಸ್ಥೆಗಳ ಪ್ರಗತಿಗೆ ಹೆಗ್ಗಡೆಯವರ ಕೊಡುಗೆಯನ್ನು ಶ್ಲಾಘಿಸಿ ಅಭಿನಂದಿಸಿದರು. ಅಳಿಕೆಯಲ್ಲಿ ಶಿಕ್ಷಣ ಸಂಸ್ಥೆಗಳ ಸ್ಥಾಪಕ ಮಡಿಯಾಲ ನಾರಾಯಣ ಭಟ್ ಅವರ ಸೇವೆಯನ್ನು ಸ್ಮರಿಸಿದ ಅವರು ಇದೇ ನವೆಂಬರ್ 29ರಂದು ಭಾನುವಾರ ಮಡಿಯಾಲರ ಜನ್ಮಶತಮಾನೋತ್ಸವ ಸಮಾರಂಭ ಆಯೋಜಿಸಲಾಗಿದ್ದು ಅದಕ್ಕೆ ಹೆಗ್ಗಡೆಯವರನ್ನು ಆದರದಿಂದ ಆಹ್ವಾನಿಸಿದರು.

ಡಿ. ಹರ್ಷೇಂದ್ರ ಕುಮಾರ್ ಉಪಸ್ಥಿತರಿದ್ದರು,.

ಪೂಜ್ಯ ಹೆಗ್ಗಡೆಯವರು ಅಳಿಕೆಯಲ್ಲಿರುವ ಶಿಕ್ಷಣ ಸಂಸ್ಥೆಗಳ ಸೇವೆ, ಸಾಧನೆಯನ್ನು ಶ್ಲಾಘಿಸಿ ಅಭಿನಂದಿಸಿದರು. ಮುಂದೆಯೂ ಎಲ್ಲಾ ಸಂಸ್ಥೆಗಳು ಉತ್ತರೋತ್ತರ ಪ್ರಗತಿಯನ್ನು ಸಾಧಿಸಲೆಂದು ಅವರು ಶುಭ ಹಾರೈಸಿದರು

ಮೈಸೂರಿನಲ್ಲಿ ಸಾರಿಗೆ ಬಸ್-ಬೈಕ್ ಡಿಕ್ಕಿ: ಮಗಳು ಸ್ಥಳದಲ್ಲೇ ಸಾವು, ತಂದೆ ಗಂಭೀರ

ಮೈಸೂರು: ಸ್ಕೂಟರ್?ಗೆ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದ ಪರಿಣಾಮ ವಿದ್ಯಾರ್ಥಿನಿಯೋರ್ವಳು ಸ್ಥಳದಲ್ಲಿಯೇ ದಾರುಣವಾಗಿ ಮೃತಪಟ್ಟು, ಆಕೆಯ ತಂದೆ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಗರದ ದೊಡ್ಡ ಗಡಿಯಾರ ವೃತದ ಬಳಿ ಅಶೋಕ ರಸ್ತೆಯಲ್ಲಿ ನಡೆದಿದೆ. ಎನ್.ಆರ್. ಮೊಹಲ್ಲಾದ ನಿವಾಸಿ, ಸದ್ವಿದ್ಯಾ ಕಾಲೇಜಿನ ಪಿಯುಸಿ ವಿದ್ಯಾರ್ಥಿನಿ ವೈಷ್ಣವಿ(17) ಮೃತ ದುರ್ದೈವಿ. ಈಕೆ ತನ್ನ ತಂದೆ ವೆಂಕಟೇಶ್ ಅವರೊಂದಿಗೆ ಬೆಳಿಗ್ಗೆ 7.30ರ ಸುಮಾರಿನಲ್ಲಿ ಕಾಲೇಜಿಗೆ ತೆರಳುವಾಗ ಅಪಘಾತ ಸಂಭವಿಸಿದೆ.

ಅಪಘಾತದಲ್ಲಿ ವೈಷ್ಣವಿ ಸ್ಥಳದಲ್ಲಿಯೇ ಮೃತಪಟ್ಟರೆ ವೆಂಕಟೇಶ್ ಅವರು ಗಂಭೀರವಾಗಿವಾಗಿ ಗಾಯಗೊಂಡಿದ್ದು, ಖಾಸಗಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ವೈಷ್ಣವಿ ಅವರು ತಂದೆಯೊಂದಿಗೆ ತೆರಳುವಾಗ ಅಶೋಕ ರಸ್ತೆಯಲ್ಲಿನ ದೊಡ್ಡ ಗಡಿಯಾರ ಬಳಿ ಪ್ರಿ ವೆಡ್ಡಿಂಗ್ ಶೂಟ್ ನಡೆಯುತ್ತಿರುವುದನ್ನು ಗಮನಿಸುತ್ತಾ, ಸ್ಕೂಟರ್?ನ ವೇಗವನ್ನು ತಗ್ಗಿಸಿದ್ದಾರೆ. ಈ ವೇಳೆ ಹಿಂದೆಯಿಂದ ವೇಗವಾಗಿ ಬಂದ್ ಬಸ್ ಸ್ಕೂಟರ್?ಗೆ ಡಿಕ್ಕಿ ಹೊಡೆದು, ವಿದ್ಯಾರ್ಥಿನಿ ತಲೆಯ ಮೇಲೆ ಹರಿದಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಇತ್ತೀಚೆಗೆ ನಗರ ಪ್ರದೇಶಗಳಲ್ಲಿ ಹೊರಗಿನಿಂದ ಬಂದ ಛಾಯಾಗ್ರಹಕರು ಹಳೇ ಜಿಲ್ಲಾಧಿಕಾರಿ ಆಫೀಸ್, ಅರಮನೆ, ಮೈಸೂರು ವಿವಿ, ಕುಕ್ಕರಹಳ್ಳಿ ಕೆರೆ ಮುಂತಾದ ಕಡೆ ಪ್ರಿ ವೆಡ್ಡಿಂಗ್ ಶೂಟ್ ಮಾಡುತ್ತಿದ್ದು, ಅದನ್ನು ಫೋಟೋ ತೆಗೆಯುವ ಹಾಗೂ ಜೋಡಿಗಳನ್ನು ನೋಡುವ ಆತುರದಲ್ಲಿ ಅಪಘಾತಗಳಾಗಿ ಸಾವು ನೋವುಗಳು ಸಂಭವಿಸುತ್ತಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

ಈಗಾಗಲೇ ಮೈಸೂರು ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅರಮನೆ, ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಛಾಯಾಗ್ರಹಣ ನಿಷೇಧ ಹೇರಿದ್ದರೂ, ನಗರದ ಪ್ರಮುಖ ರಸ್ತೆಗಳಲ್ಲಿ ರಾಜರೋಷವಾಗಿ ಪ್ರಿ ವೆಡ್ಡಿಂಗ್ ಶೂಟ್ ನಡೆಯುತ್ತಿವೆ. ಇದು ಸಂಪೂರ್ಣವಾಗಿ ನಿಷೇಧವಾಗಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ರಾಜ್ಯಾಧ್ಯಕ್ಷರ ಬದಲಾವಣೆ ಬಗ್ಗೆ ಮುಂದಿನ ದಿನಗಳಲ್ಲಿ ತೀರ್ಮಾನ: ಹರೀಶ್ ದ್ವಿವೇದಿ

ಬೆಂಗಳೂರು, ನ.3: ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ವಿಚಾರವಾಗಿ ಮುಂದಿನ ದಿನಗಳಲ್ಲಿ ಪಕ್ಷ ತೀರ್ಮಾನ ಮಾಡಲಿದೆ. ವಿಜಯೇಂದ್ರ ಯುವಕರಿದ್ದಾರೆ, ಈಗ ಅವರ ಜೊತೆಯಲ್ಲಿ ಪಕ್ಷ ಸಂಘಟನೆ ನಡೆಯುತ್ತಿದೆ ಎಂದು ರಾಜ್ಯ ಬಿಜೆಪಿ ಉಸ್ತುವಾರಿ ಹರೀಶ್ ದ್ವಿವೇದಿ ಹೇಳಿದರು.



ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಇದು ಪಕ್ಷದ ಆಂತರಿಕ ವಿಚಾರ. ರಾಜ್ಯ ಬಿಜೆಪಿ ಉಸ್ತುವಾರಿಯಾಗಿ ನಿಯುಕ್ತಿಗೊಂಡಿದ್ದೇನೆ. ಅಧ್ಯಕ್ಷರ ಜೊತೆ ಪದಾಧಿಕಾರಿಗಳ ಸಭೆ ಮಾಡಿದ್ದೇವೆ. ಸಂಘಟನೆ ಬಗ್ಗೆ ಚರ್ಚಿಸಿದ್ದೇವೆ. ಪಕ್ಷದ ಹಿರಿಯ ನಾಯಕ, ಮಾಜಿ ಸಿಎಂ ಯಡಿಯೂರಪ್ಪ ಅವರ ನೇತೃತ್ವದಲ್ಲಿ ಬಿಜೆಪಿ ಒಳ್ಳೆಯ ಕೆಲಸ ಮಾಡುತ್ತಿದೆ. ಯಡಿಯೂರಪ್ಪ ಅವರನ್ನು ಭೇಟಿಯಾಗಿದ್ದೇನೆ. ಯಡಿಯೂರಪ್ಪರ ಮಾರ್ಗದರ್ಶನ ಸಿಕ್ಕಿದೆ ಎಂದು ತಿಳಿಸಿದರು.

ಕಾಂಗ್ರೆಸ್ ದುರಾಡಳಿತದಿಂದ ರಾಜ್ಯಕ್ಕೆ ಮುಕ್ತಿ ಸಿಗಬೇಕಿದೆ. ಕಳೆದ ಮೂರ್ನಾಲ್ಕು ವರ್ಷದಿಂದಲೂ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಜನಸಾಮಾನ್ಯರ ಬದುಕನ್ನು ಸರ್ಕಾರ ನೋಡುತ್ತಿಲ್ಲ. ಕರ್ನಾಟಕದಲ್ಲಿ ಸರ್ಕಾರ ಕೇವಲ ಲೂಟಿಯಲ್ಲಿ ತೊಡಗಿದೆ.

ಕಾಂಗ್ರೆಸ್‌ಗೆ ಗಾಂಧಿ ಪರಿವಾರವೇ ಸಂವಿಧಾನ, ಸುಪ್ರೀಂ

ಎಸ್‌ಐಆರ್ ಜಟಾಪಟಿ ವಿಚಾರವಾಗಿ ಪ್ರತಿಕ್ರಿಯಿಸಿ, "ಎಸ್‌ಐಆರ್ ಮೋದಿ ಕಾಲದಲ್ಲಿ ಮಾತ್ರ ಆಗಿಲ್ಲ, ನೆಹರೂ, ಇಂದಿರಾ ಗಾಂಧಿ ಕಾಲದಿಂದಲೂ ನಡೆದಿದೆ. ಮೃತಪಟ್ಟವರು, ಡಬಲ್ ಐಡಿ ಎಲ್ಲವನ್ನೂ ಸರಿ ಮಾಡಲು ಎಸ್‌ಐಆರ್ ಮಾಡಲಾಗುತ್ತಿದೆ. ಕಾಂಗ್ರೆಸ್ ಸೋತಾಗ ತಮ್ಮ ತಪ್ಪಿನ ಕಾರಣ ಹುಡುಕಬೇಕು. ಆದರೆ ಕಾಂಗ್ರೆಸ್ ಯಾವಾಗಲೂ ಬಿಜೆಪಿ, ಎಲೆಕ್ಷನ್, ಇವಿಎಂ, ಸುಪ್ರಿಂ ಕೋರ್ಟ್ ಎಲ್ಲದರ ವಿರುದ್ಧ ಮಾತನಾಡುತ್ತದೆ. ದೇಶದ ಸಾಂವಿಧಾನಿಕ ಸಂಸ್ಥೆಗಳನ್ನು ಕಾಂಗ್ರೆಸ್ ಯಾವತ್ತೂ ಗೌರವಿಸಲ್ಲ. ಕಾಂಗ್ರೆಸ್‌ಗೆ ಗಾಂಧಿ ಪರಿವಾರವೇ ಸಂವಿಧಾನ, ಸುಪ್ರಿಂ ಕೋರ್ಟ್ ಎಲ್ಲವೂ ಆಗಿದೆ. ದೇಶದ ಜನ ಕಾಂಗ್ರೆಸ್ ತಿರಸ್ಕರಿಸಿದ್ದಾರೆ" ಎಂದು ವಾಗ್ದಾಳಿ ನಡೆಸಿದರು.

ಈಗ ದೊಡ್ಡ ಪ್ರಮಾಣದಲ್ಲಿ ಹಾಲಿನ ದರ ಏರಿಸಿದೆ. ಬಡವರ ಹಿತದ ಬಗ್ಗೆ ಕಾಳಜಿ ಇಲ್ಲ. ಕೇವಲ ತಮ್ಮ ನಾಯಕರ ಹಿತ, ಗಾಂಧಿ ಪರಿವಾರದ ಬಗ್ಗೆ ಅವರಿಗೆ ಚಿಂತೆ. ನಾವು ಜನಪರ ವಿಚಾರ ಇಟ್ಕೊಂಡು ಜನರ ಮುಂದೆ ಹೋಗುತ್ತೇವೆ. 2028ರಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವ ಉದ್ದೇಶ ಇಟ್ಟುಕೊಂಡು ಕೆಲಸ ಮಾಡುತ್ತೇವೆ" ಎಂದರು.

ಮಾನವನ ಬಯಕೆ, ಅವಶ್ಯಕತೆ ಒಂದೇ ಆಗಿರಬೇಕು: ಡಾ.ಜಯರಾಜನಾಯ್ಕ್

ದೆಹಲಿ ಕನ್ನಡ ಶಾಲೆಯಲ್ಲಿ 'ಕನ್ನಡ ಮಕ್ಕಳ ಕೂಟ' ಕಾರ್ಯಕ್ರಮ

ನವದೆಹಲಿ, ನ.3: ದೆಹಲಿ ಕನ್ನಡ ಹಿರಿಯ ಮಾಧ್ಯಮಿಕ ಶಾಲೆಯಲ್ಲಿ ಅ.31ರಿಂದ ಎರಡು ದಿನ ಕನ್ನಡ ಮಕ್ಕಳ ಕೂಟ ವಿಶಿಷ್ಟ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಭಾರತದ ಮಹಾಲೇಖ ಪರಿಶೋಧಕರ ಕಚೇರಿಯ ಅಧೀನದಲ್ಲಿರುವ ಸರಕಾರಿ ಲೆಕ್ಕಪತ್ರ ಮಾನದಂಡಗಳ ಸಲಹಾ ಮಂಡಳಿ ಪ್ರಧಾನ ನಿರ್ದೇಶಕ ಡಾ. ಜಯರಾಜ ನಾಯ್ಕ್ ಮಾತನಾಡಿ, ಮಾನವನ ಅವಶ್ಯಕತೆ ಮತ್ತು ಬಯಕೆಗಳು ಒಂದೇ ಆಗಿರಬೇಕೆಂದು. ಮಕ್ಕಳಿಗೆ ಜೀವನದಲ್ಲಿ ಸರಳತೆಯನ್ನು ವಿವರಿಸುತ್ತಾ, ತ್ಯಾಗ, ವಿದ್ಯೆ, ತಪಸ್ಸು ಇತ್ಯಾದಿ ಮಹೋನ್ನತ ಗುಣಗಳು ಹಣಕ್ಕಿಂತಲೂ ಮಿಗಿಲಾದವು ಎಂದವರು ನುಡಿದರು. ಕರ್ನಾಟಕದಿಂದ ದೂರದ ದೆಹಲಿಗೆ ಬಂದು ನೆಲೆಸಿದ ಕನ್ನಡಿಗರಾದ ನಾವು ನಮ್ಮ ಮಕ್ಕಳಿಗೆ ಕರ್ನಾಟಕದ ಸಂಸ್ಕೃತಿಯನ್ನು ವರ್ಗಾಯಿಸಲು ಇಂತಹ ಕಾರ್ಯಕ್ರಮಗಳು ಅನುವು ಮಾಡಿಕೊಡುತ್ತವೆ ಎಂದವರು ಹೇಳಿದರು.

ಕಾರ್ಯಕ್ರಮದ ಬಗ್ಗೆ ಮೆಚ್ಚುಗೆಯ ಮಾತನಾಡಿದ ಮತ್ತೋರ್ವ ಅತಿಥಿ ಭಾರತದ ಕೋಲ್ಡ್ ಲೇಸರ್ ಮ್ಯಾನ್ ಎಂದು ಪ್ರಸಿದ್ಧಿ ಪಡೆದಿರುವ ಡಾ. ಶ್ಯಾಮ್ ರಘುನಂದನ್, ತಮ್ಮ ಸಂಸ್ಥೆಯ ವತಿಯಿಂದ ದೆಹಲಿ ಕನ್ನಡ ಶಾಲೆಯ ಪೋಷಕರು, ಮಕ್ಕಳು



ಮತ್ತು ಶಿಕ್ಷಕರಿಗೆ ವೈದ್ಯಕೀಯ ಸೇವೆಯನ್ನು ಉಚಿತವಾಗಿ ನೀಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಅವನೀಂದ್ರನಾಥ್ ರಾವ್, ವಿದ್ಯಾರ್ಥಿಗಳಲ್ಲಿ ಸಹಬಾಳ್ವೆ, ಸ್ವಾವಲಂಬನೆ ಮತ್ತು ಸೃಜನಶೀಲತೆಯನ್ನು ಹೆಚ್ಚಿಸುವಲ್ಲಿ ಈ ಕೂಟ ಸಹಕರಿಸುತ್ತದೆ ಎಂದು ಶುಭ ಹಾರೈಸಿದರು.

ನಂತರ ನಡೆದ ರಂಗೋಲಿ ಸ್ಪರ್ಧೆ, ಮನೋರಂಜಕ ಆಟಗಳು, ಭಜನೆ, ಕ್ಯಾಂಪ್ ಫೈಯರ್ ಕಾರ್ಯಕ್ರಮಗಳು ಮಕ್ಕಳ ಕೂಟಕ್ಕೆ ವಿಶಿಷ್ಟ ಮೆರಗನ್ನು ತಂದುಕೊಟ್ಟವು. ಸಮಾರೋಪ ಸಮಾರಂಭದಲ್ಲಿ ವಿದ್ಯಾರ್ಥಿಗಳಾದ ವೈಷ್ಣವಿ, ಪ್ರಣವ, ಹರ್ಷಿತಾ, ಪೋಷಕರಾದ ಡಾ. ತ್ಯಾಗರಾಜ್, ಸೀಮಾ ಬಿರಾದಾರ್, ಕಾಶಿನಾಥ ಬಿರಾದರ್ ತಮ್ಮ ಅನಿಸಿಕೆಯನ್ನು ವ್ಯಕ್ತಪಡಿಸಿದರು.

ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾದ ಕೇಂದ್ರ ಗೃಹ ಸಚಿವಾಲಯದ, ರಿಜಿಸ್ಟ್ರಾರ್ ಜನರಲ್ ಮತ್ತು ಜನಗಣತಿ ಆಯುಕ್ತರ ಕಚೇರಿಯ ಭಾಷಾ ವಿಭಾಗದ ಸಹಾಯಕ ಕುಲಸಚಿವ ಡಾ. ಬಿ. ಪಿ. ಹೇಮಾನಂದ ಆಟೋಟ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನವನ್ನು ವಿತರಿಸಿದರು.

ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಗೌರವ ಕಾರ್ಯದರ್ಶಿ ಕಾಶಿನಾಥ ಬಿರಾದರ್ ಅವರು ಮಕ್ಕಳ ಸೂಕ್ತ ಪ್ರತಿಭೆಯ ವಿಕಸನಕ್ಕೆ ಈ ಮಕ್ಕಳ ಕೂಟ ಸಹಕರಿಸಿದೆ ಎಂದರು. ಆಡಳಿತ ಮಂಡಳಿಯ ಸದಸ್ಯರಾದ ಬಿ. ಎನ್. ಮೋಹನ್ ಕುಮಾರ್, ಗಿರೀಶ್ ಎಸ್., ಡಾ.ಅಶೋಕ್ ಗೋನಾಳ್, ಹರಿಪ್ರಿಯ ಎಸ್. ದೆಹಲಿ ಕನ್ನಡ ಶಾಲೆಯ ಶಿಕ್ಷಕ ಮತ್ತು ಶಿಕ್ಷಕೇತರ ವೃಂದ, ದೆಹಲಿ ಕನ್ನಡಿಗರು, ಮಕ್ಕಳು ಉಪಸ್ಥಿತರಿದ್ದರು.

ದೆಹಲಿ ಕನ್ನಡ ಹಿರಿಯ ಮಾಧ್ಯಮಿಕ ಶಾಲೆಯ ವ್ಯವಸ್ಥಾಪಕರಾದ ಬಿ. ಆರ್. ಉಮೇಶ್ ಅವರು ಮಕ್ಕಳ ಕೂಟದ ಬಗ್ಗೆ ತಮ್ಮ ಅನಿಸಿಕೆಯನ್ನು ವ್ಯಕ್ತಪಡಿಸಿದರು. ಪ್ರಾಂಶುಪಾಲ ಪ್ರಶಾಂತ್ ಕುಮಾರ್ ಅವರು ಸ್ವಾಗತಿಸಿ ಕಾರ್ಯಕ್ರಮದ ಸದುದ್ದೇಶವನ್ನು ವಿವರಿಸಿದರು. ಶಿಕ್ಷಕರಾದ ಡಾ.ಗಣೇಶ ಹೆಗಡೆ ಅತಿಥಿಗಳನ್ನು ಪರಿಚಯಿಸಿದರು. ಉಪಪ್ರಾಂಶುಪಾಲೆ ಶ್ರೀಮತಿ ಪ್ರೇಮಲತಾ ಬಿ. ವಂದಿಸಿದರು. ಶಿಕ್ಷಕರಾದ ಎಚ್.ಎಸ್. ತೇಲಿ ಮತ್ತು ಲಾವಣ್ಯ ಕಾರ್ಯಕ್ರಮವನ್ನು ನಿರೂಪಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

ಪುಣೆಯಲ್ಲಿ ಮೆಟ್ರೋ ರೈಲು ಸಂಚಾರಕ್ಕೆ ಪ್ರಧಾನಿ ಚಾಲನೆ

ನಾಲ್ಕು ಹೊಸ ಮೆಟ್ರೋ ಕಾರಿಡಾರ್‌ಗಳಿಗೂ ಶಂಕುಸ್ಥಾಪನೆ



ನವದೆಹಲಿ, ನ.3: ಮಹಾರಾಷ್ಟ್ರದ ಪುಣೆ ನಗರದಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಮಹತ್ವದ ಯೋಜನೆಗಳಿಗೆ ಚಾಲನೆ ನೀಡಿದ್ದಾರೆ. 23 ಕಿಲೋಮೀಟರ್ ಉದ್ದದ ಪುಣೆ ಮೆಟ್ರೋ ಮಾರ್ಗವನ್ನು ಉದ್ಘಾಟಿಸಿದ ಅವರು, ನಾಲ್ಕು ಹೊಸ ಮೆಟ್ರೋ ಕಾರಿಡಾರ್‌ಗಳ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದಾರೆ.

23 ಕಿ.ಮೀ ಉದ್ದದ ಈ ಮೆಟ್ರೋ ಮಾರ್ಗವು ಮಾಣ್ನಿಂದ ಜಿಲ್ಲಾ ನ್ಯಾಯಾಲಯ ಮೆಟ್ರೋ ನಿಲ್ದಾಣದವರೆಗೆ ಸಂಪರ್ಕ ಕಲ್ಪಿಸಲಿದೆ. ಪುಣೆಯ ಪ್ರಮುಖ ಮಾಹಿತಿ ತಂತ್ರಜ್ಞಾನ ಕೇಂದ್ರವಾಗಿರುವ ಹಿಂಜೇವಾಡಿ ಮತ್ತು ಶಿವಾಜಿನಗರ ನಡುವಿನ ಸಂಚಾರಕ್ಕೆ ಇದು ಅನುಕೂಲವಾಗಲಿದೆ. 8,300 ಕೋಟಿ ರೂಪಾಯಿಗೂ ಅಧಿಕ ವೆಚ್ಚದಲ್ಲಿ ಈ ಯೋಜನೆ ನಿರ್ಮಿಸಲಾಗಿದೆ.

ಮೆಟ್ರೋ ಮಾರ್ಗದ ವಿಶೇಷವೆಂದರೆ, ಸಂಪೂರ್ಣ ರೈಲು ಕಾರ್ಯಾಚರಣೆಯನ್ನು ಮಹಿಳಾ ಚಾಲಕರು ನಿರ್ವಹಿಸಲಿದ್ದಾರೆ. ಅಲ್ಲದೆ, ಯೋಜನೆಗೆ ಅಗತ್ಯವಿರುವ ವಿದ್ಯುತ್ನ ಸುಮಾರು ಶೇ.30ರಷ್ಟನ್ನು ಸೌರಶಕ್ತಿಯಿಂದ ಪೂರೈಸುವ ಉದ್ದೇಶ ಹೊಂದಲಾಗಿದೆ. ಇದೇ ಸಂದರ್ಭದಲ್ಲಿ ಸುಮಾರು 13,500 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಎರಡನೇ ಹಂತದ ನಾಲ್ಕು ಮೆಟ್ರೋ ಕಾರಿಡಾರ್‌ಗಳಿಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಿದ್ದಾರೆ.

ಹೊಸ ಮಾರ್ಗಗಳು ಖರಾಡಿ, ಮಗರಪಟ್ಟಾ, ಹಡಪ್ಸರ್, ಸ್ವಾರ್ಗೇಟ್, ಪುಣೆ ಕಂಟೋನ್ಮೆಂಟ್ ಸೇರಿದಂತೆ ಪ್ರಮುಖ ವಸತಿ, ವಾಣಿಜ್ಯ ಹಾಗೂ ಐಟಿ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸಲಿವೆ. ಸ್ವಾರ್ಗೇಟ್, ನಳ್ಸ್ಟಾಪ್ ಮತ್ತು ಖರಾಡಿ ಬೈಪಾಸ್‌ಗಳಲ್ಲಿ ಈಗಿರುವ ಮೆಟ್ರೋ ಹಾಗೂ ಬಸ್ ಸೇವೆಗಳೊಂದಿಗೆ ಸಂಪರ್ಕ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಹೊಸದಾಗಿ ಉದ್ಘಾಟನೆಯಾದ ಮೆಟ್ರೋ ಮಾರ್ಗದಲ್ಲಿ ನವೆಂಬರ್ 4ರಿಂದ ಪ್ರಯಾಣಿಕರ ಸಂಚಾರ ಆರಂಭವಾಗಲಿದೆ. ಆರಂಭದಲ್ಲಿ 17 ನಿಲ್ದಾಣಗಳಲ್ಲಿ ಸೇವೆ ಲಭ್ಯವಾಗಲಿದ್ದು, ಉಳಿದ ನಿಲ್ದಾಣಗಳನ್ನು ಹಂತ ಹಂತವಾಗಿ ಕಾರ್ಯಾರಂಭಗೊಳಿಸಲು ಯೋಜಿಸಲಾಗಿದೆ. ಸುಮಾರು 21,800 ಕೋಟಿ ರೂಪಾಯಿ ಮೌಲ್ಯದ ಈ ಯೋಜನೆಗಳು ಪುಣೆ ನಗರದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ವಿಸ್ತರಿಸುವುದರ ಜತೆಗೆ ಸಂಚಾರ ದಟ್ಟಣೆ ಕಡಿಮೆ ಮಾಡಲು ಮತ್ತು ಪ್ರಯಾಣಿಕರ ಪ್ರಯಾಣದ ಸಮಯ ಉಳಿಸಲು ನೆರವಾಗುವ ನಿರೀಕ್ಷೆಯಿದೆ.



ಚಿತ್ರದುರ್ಗದ ಹಿರಿಯೂರು ತಾಲೂಕಿನ ಹರಿಯಬ್ಬೆ ಗ್ರಾಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೆಂಪೇಗೌಡ ಪ್ರತಿಮೆಗೆ ಮಂಗಳವಾರ ಮಾಲಾರ್ಪಣೆ ಮಾಡಿದರು. ಸಚಿವ ಟಿ ರಘುಮೂರ್ತಿ, ಶಾಸಕ ಡಾ ರಂಗನಾಥ್, ಕಾಂಗ್ರೆಸ್ ಮುಖಂಡ ಸುಹಾಸ್ ಸುಧಾಕರ್ ಮತ್ತಿತರರು ಇದ್ದರು.

ಬಸ್ ಪ್ರಯಾಣದರ ಏರಿಕೆ ಇಂದು ನಿರ್ಧಾರ ಸಾಧ್ಯತೆ

ಬೆಂಗಳೂರು, ನ.3: ಕರ್ನಾಟಕದ ಸಾರಿಗೆ ಸಂಸ್ಥೆಗಳ ಬಸ್ ಪ್ರಯಾಣ ದರ ಏರಿಕೆ ಕುರಿತು ಬುಧವಾರ ಮಹತ್ವದ ಚರ್ಚೆಗಳು ನಡೆಯಲಿವೆ. ರಾಜ್ಯದ ನಾಲ್ಕು ಸಾರಿಗೆ ನಿಗಮಗಳಾದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳ ಬಸ್ ಪ್ರಯಾಣ ದರ ಬಹುತೇಕ ನ.5ರಿಂದ ಹೆಚ್ಚಳವಾಗುವ ಸಾಧ್ಯತೆ ಇದೆ. ಈ ಕುರಿತು ಬುಧವಾರ ಮತ್ತು ಗುರುವಾರ ಸರಣಿ ಸಭೆಗಳು ನಡೆಯಲಿದೆ. ಇತ್ತೀಚೆಗೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಬಸ್ ಪ್ರಯಾಣ ದರ ಹೆಚ್ಚಳಕ್ಕೆ ತಾತ್ವಿಕ ಅನುಮೋದನೆ ನೀಡಲಾಗಿದೆ. ಬುಧವಾರದಂದು ಸಾರಿಗೆ ಸಚಿವ ಬೈರತಿ ಸುರೇಶ್ ಜತೆ ಸಮಾಲೋಚನೆ ನಡೆಯಲಿದ್ದು, ಪ್ರಯಾಣ ದರ ಹೆಚ್ಚಳಕ್ಕೆ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ. ಸಾರಿಗೆ ಸಂಸ್ಥೆಗಳು ಎದುರಿಸುತ್ತಿರುವ ಆರ್ಥಿಕ ಒತ್ತಡ, ಇಂಧನ ಬೆಲೆ ಏರಿಕೆ, ಸಿಬ್ಬಂದಿ ವೇತನ ಹಾಗೂ ನಿರ್ವಹಣಾ ವೆಚ್ಚದ ಹೆಚ್ಚಳದ ಹಿನ್ನೆಲೆಯಲ್ಲಿ ಪ್ರಯಾಣ ದರ ಪರಿಷ್ಕರಣೆ ಅನಿವಾರ್ಯ ಎಂದು ಪ್ರತಿಪಾದಿಸಲಾಗಿದೆ.ಸಾರ್ವಜನಿಕ ಸಾರಿಗೆ ಪ್ರಯಾಣ ದರ ನಿಯಂತ್ರಣ ಸಮಿತಿಯು ಸಲ್ಲಿಸಿರುವ ವರದಿಯಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ ಪ್ರಯಾಣ ದರವನ್ನು ಶೇ.40ರಿಂದ 45ರಷ್ಟು ಹೆಚ್ಚಿಸುವಂತೆ ಶಿಫಾರಸು ಮಾಡಲಾಗಿದೆ. ಉಳಿದ ಮೂರು ಸಾರಿಗೆ ನಿಗಮಗಳಾದ ಕೆಎಸ್‌ಆರ್‌ಟಿಸಿ, ವಾಯವ್ಯ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಸಾರಿಗೆ ನಿಗಮಗಳ ಪ್ರಯಾಣ ದರವನ್ನು ಶೇ.25ರಿಂದ 28ರಷ್ಟು ಹೆಚ್ಚಿಸುವಂತೆ ಶಿಫಾರಸು ಮಾಡಲಾಗಿದೆ. ಆದರೆ, ಈ ಪ್ರಮಾಣದ ಏರಿಕೆಗೆ ಸರ್ಕಾರ ನಿರಾಕರಿಸಿದೆ ಎನ್ನಲಾಗಿದೆ.

ಅಯೋಧ್ಯಾ ರಾಮಮಂದಿರ ದೇಣಿಗೆ ಲೂಟಿ: ವಿಚಾರಣೆಗೆ ಸುಪ್ರೀಂ ಅಸ್ತು



ನವದೆಹಲಿ, ನ.3: ಅಯೋಧ್ಯೆಯ ರಾಮಮಂದಿರಕ್ಕೆ ಭಕ್ತರು ನೀಡಿದ್ದ ದೇಣಿಗೆ ಹಣದಲ್ಲಿ ಸುಮಾರು 2.7 ಕೋಟಿ ರೂ. ದುರುಪಯೋಗವಾಗಿರುವ ಆರೋಪಕ್ಕೆ ಸಂಬಂಧಿಸಿದಂತೆ ಎಂಟು ಮಂದಿ ವಿರುದ್ಧ ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ಅನುಮತಿ ನೀಡಿದೆ.

ದೇಣಿಗೆ ಹಣದ ಅವ್ಯವಹಾರದ ಕುರಿತು ವಿಶೇಷ ತನಿಖಾ ತಂಡ ಸಲ್ಲಿಸಿರುವ ಆರೋಪಪಟ್ಟಿಯ ಆಧಾರದ ಮೇಲೆ ವಿಚಾರಣೆ ಮುಂದುವರಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿದೆ. ಅಲ್ಲದೆ, ಪ್ರಕರಣದ ತನಿಖೆಗೆ ಒತ್ತಾಯಿಸಿ ಅರ್ಜಿ ಸಲ್ಲಿಸಿದ್ದ ಅರ್ಜಿದಾರರಿಗೆ ಸಂತ್ರಸ್ತರ ಸ್ಥಾನಮಾನ ನೀಡಿ, ವಿಚಾರಣೆ ವೇಳೆ ಪ್ರಾಸಿಕ್ಯೂಷನ್ ಮತ್ತು ನ್ಯಾಯಾಲಯಕ್ಕೆ ನೆರವಾಗಲು ಅವಕಾಶ ಕಲ್ಪಿಸಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜಾಯ್ಮಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ಪೀಠ ಈ ಆದೇಶ ನೀಡಿದೆ. ಎಸ್‌ಐಟಿ ಸಲ್ಲಿಸಿರುವ ವರದಿ ಪ್ರಕಾರ, ಆರೋಪಿಗಳು ಸುಮಾರು 2.7 ಕೋಟಿ ರೂ. ದೇಣಿಗೆ ಹಣ ದುರುಪಯೋಗಪಡಿಸಿಕೊಂಡಿರುವ ಶಂಕೆಯಿದೆ. ಈ ಸಂಬಂಧ ಬ್ಯಾಂಕ್ ಖಾತೆಗಳಲ್ಲಿನ ಹಣಕಾಸು ವ್ಯವಹಾರ ಆಸ್ತಿ ಖರೀದಿ, ಕಟ್ಟಡ ನಿರ್ಮಾಣ ವೆಚ್ಚ, ವಾಹನಗಳು, ಚಿನ್ನಾಭರಣ ಹಾಗೂ ಇತರ ಆಸ್ತಿಗಳ ಬಗ್ಗೆ ಸಮಗ್ರ ಪರಿಶೀಲನೆ ನಡೆಸಲಾಗಿದೆ. ಸೋಮವಾರ ವಿಚಾರಣೆ ವೇಳೆ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ತನಿಖೆಯ ವಿವರಗಳನ್ನು ನ್ಯಾಯಪೀಠಕ್ಕೆ ವಿವರಿಸಿದರು. ಆರೋಪಿಗಳ ಬ್ಯಾಂಕ್ ಖಾತೆಗಳು, ಸ್ಥಿರಾಸ್ತಿ ಖರೀದಿ ದಾಖಲೆಗಳು ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದ ಬಳಿಕ ಸೆಪ್ಟೆಂಬರ್ 23ರಂದು ಆರೋಪಪಟ್ಟಿ ಸಲ್ಲಿಸಲಾಗಿದೆ ಎಂದು ತಿಳಿಸಿದರು. ಪ್ರಕರಣದ ವಿಚಾರಣೆಯನ್ನು ಕಾನೂನಿನ ಪ್ರಕಾರ ಮುಂದುವರಿಸುವಂತೆ ಸುಪ್ರೀಂ ಕೋರ್ಟ್ ವಿಚಾರಣಾ ನ್ಯಾಯಾಲಯಕ್ಕೆ ನಿರ್ದೇಶನ ನೀಡಿದೆ.

ಇದೇ ವೇಳೆ, 2019ರ ನವೆಂಬರ್ 9ರಂದು ಸುಪ್ರೀಂ ಕೋರ್ಟ್ ನೀಡಿದ್ದ ತೀರ್ಪಿನಂತೆ ರಾಮಮಂದಿರ ನಿರ್ಮಾಣಕ್ಕೆ ಹಂಚಿಕೆ ಮಾಡಲಾದ ಭೂಮಿಯ ಸ್ವತಂತ್ರ ಹಾಗೂ ನಿಷ್ಪಕ್ಷಪಾತ ಸಮೀಕ್ಷೆ ನಡೆಸುವಂತೆ ಅರ್ಜಿದಾರರೊಬ್ಬರು ಮನವಿ ಮಾಡಿದ್ದರು. ಪ್ರಸ್ತುತ ರಾಮಜನ್ಮಭೂಮಿ ಮಂದಿರ ಸಂಕೀರ್ಣ ಇರುವ ಸ್ಥಳವು ಸುಪ್ರೀಂ ಕೋರ್ಟ್ ಹಂಚಿಕೆ ಮಾಡಿದ್ದ ಭೂಮಿಯಲ್ಲೇ ಇದೆಯೇ ಎಂಬುದನ್ನು ಪರಿಶೀಲಿಸಲು ಕಂದಾಯ ಮತ್ತು ಸಂಬಂಧಿತ ಅಧಿಕಾರಿಗಳ ದಾಖಲೆಗಳನ್ನು ಮಂಡಿಸುವಂತೆ ನಿರ್ದೇಶನ ನೀಡಬೇಕು ಎಂದೂ ಕೋರಿದ್ದರು.

ದೀಪ್ಕೆ ಅಮೆರಿಕದಿಂದ, ರಂಕಾ ಪಾಕಿಸ್ತಾನದಿಂದ ಹಣ ಪಡೆದಿದ್ದಾರೆ



ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಆರೋಪ

ಬೆಂಗಳೂರು, ನ.3: 'ಕಾಕ್ರೋಚ್ ಜನತಾ ಪಾರ್ಟಿ' ಸ್ಥಾಪಕ ಅಭಿಜೀತ್ ದೀಪ್ಕೆ ಅಮೆರಿಕ ಮೂಲದ ದಾನಿಗಳಿಂದ ಹಣ ಪಡೆದಿದ್ದಾರೆ ಮತ್ತು ಅದರ ಸಹ–ಸ್ಥಾಪಕ ಅಶುತೋಷ್ ರಂಕಾ ಅವರು ಪಾಕಿಸ್ತಾನಿ ರಾಜಕಾರಣಿಗಳು ಹಾಗೂ ಇತರರಿಂದ ಆರ್ಥಿಕ ನೆರವು ಪಡೆದಿದ್ದಾರೆ ಎಂದು ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಮಂಗಳವಾರ ಆರೋಪಿಸಿದ್ದಾರೆ.

ಭಾರತದಲ್ಲಿ ಸರ್ಕಾರ ವಿರೋಧಿ ಅಭಿಯಾನಗಳನ್ನು ನಡೆಸಲು ಮತ್ತು ಸಾರ್ವಜನಿಕ ಚರ್ಚೆಗಳನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ತಿರುಗಿಸಲು ಇವರು ಈ ಹಣವನ್ನು ಬಳಸಿಕೊಂಡಿದ್ದಾರೆ ಎಂದು ಅವರು ದೂರಿದ್ದಾರೆ.

ಈ ಅರಾಜಕತಾವಾದಿ ಶಕ್ತಿಗಳಿಗೆ, ಭಾರತ ವಿರೋಧಿ ಎನ್‌ಜಿಓಗಳು ಮತ್ತು ದೇಶದ ಒಳಗೆ ಹಾಗೂ ಹೊರಗೆ ಕಾರ್ಯಾಚರಿಸುತ್ತಿರುವ ಸಂಘಟನೆಗಳಂತಹ ಅನಧಿಕೃತ ಮೂಲಗಳಿಂದ ಹಣ ಹರಿದುಬರುತ್ತಿದೆ ಎಂಬುದಕ್ಕೆ ಸಾಕಷ್ಟು ಸಾಕ್ಷ್ಯಗಳಿವೆ. ವಿದೇಶಿ ಅನುದಾನ ಪಡೆಯುವ ಎನ್ಜಿಓಗಳು, ವ್ಯವಸ್ಥೆಯೊಳಗೆ ಅಡಗಿರುವ ಶಕ್ತಿಗಳು ಮತ್ತು ಭಾರತ ವಿರೋಧಿ ಶಕ್ತಿಗಳು ಒಗ್ಗೂಡಿ, ಜನರನ್ನು ದಾರಿ ತಪ್ಪಿಸುವಂತಹ ಕಥನಗಳನ್ನು ಸೃಷ್ಟಿಸಿ ಪ್ರಚಾರ ಮಾಡುತ್ತಿವೆ," ಎಂದು ಹೇಳಿದರು.

"ತಮ್ಮನ್ನು ತಾವು ನಾಯಕರು ಅಥವಾ ಕಾರ್ಯಕರ್ತರು ಎಂದು ಕರೆದುಕೊಳ್ಳುವ ಕೆಲವರ ಹಣಕಾಸಿನ ಮೂಲಗಳ ಬಗ್ಗೆಯೂ ಗಂಭೀರ ಪ್ರಶ್ನೆಗಳಿವೆ. ದೀಪ್ಕೆ ಅಮೆರಿಕ ಮೂಲದ ದಾನಿಗಳಿಂದ ಹಣ ಪಡೆದಿದ್ದರೆ, ಅಶುತೋಷ್ ರಂಕಾ ಪಾಕಿಸ್ತಾನಿ ರಾಜಕಾರಣಿಗಳು ಮತ್ತು ಇತರರಿಂದ ಆರ್ಥಿಕ ಬೆಂಬಲ ಪಡೆದಿದ್ದಾರೆ ಎನ್ನಲಾಗಿದೆ ಎಂದು ಸಿಂಗ್ ತಿಳಿಸಿದರು.

ದೇಶದ ವಿರುದ್ಧ ಕಥನಗಳನ್ನು ಸೃಷ್ಟಿಸುವ ಪ್ರಯತ್ನದಲ್ಲಿ, ವಿದೇಶಿ ಅನುದಾನಿತ ಎನ್‌ಜಿಓಗಳು, ವ್ಯವಸ್ಥೆಯೊಳಗೆ ಅಡಗಿರುವ ಶಕ್ತಿಗಳು ಮತ್ತು ಭಾರತದ ಹಿತಾಸಕ್ತಿಗಳ ವಿರುದ್ಧ ಕೆಲಸ ಮಾಡುವ ಸಂಘಟನೆಗಳ ಕೈವಾಡವಿರುವುದನ್ನು ಗುಪ್ತಚರ ಮಾಹಿತಿ ಹಾಗೂ ಇತರ ಲಭ್ಯವಿರುವ ಮಾಹಿತಿಗಳು ಸೂಚಿಸುತ್ತವೆ ಎಂದು ಅವರು ಪ್ರತಿಪಾದಿಸಿದರು. ಇಂತಹ ಹಣಕಾಸಿನ ನೆರವನ್ನು ಸಾರ್ವಜನಿಕ ಅಭಿಪ್ರಾಯವನ್ನು ಪ್ರಭಾವಿಸಲು ಮತ್ತು ಸರ್ಕಾರ ವಿರೋಧಿ ಅಭಿಯಾನಗಳನ್ನು ರೂಪಿಸಲು ಬಳಸಲಾಗುತ್ತಿದೆ ಎಂದು ಅವರು ಆರೋಪಿಸಿದರು.

ವಿದೇಶಿ ನಿಧಿ ಹರಿವನ್ನು ನಿಯಂತ್ರಿಸುವ 'ವಿದೇಶಿ ಕೊಡುಗೆ (ನಿಯಂತ್ರಣ) ಕಾಯ್ದೆ'ಯನ್ನು ಅವರು ಸಮರ್ಥಿಸಿಕೊಂಡರು. ದೀಪ್ಕೆ ಮತ್ತು ರಂಕಾ ಅವರನ್ನು "ತಮ್ಮನ್ನು ತಾವು ನಾಯಕರು ಅಥವಾ ಕಾರ್ಯಕರ್ತರು ಎಂದು ಕರೆದುಕೊಳ್ಳುವವರು" ಎಂದು ಬಣ್ಣಿಸಿದ ಸಿಂಗ್, "ಇಂತಹ ಆರೋಪಗಳನ್ನು ಮಾಡುವವರು, ತಮಗೆ ಎಲ್ಲಿಂದ ಹಣ ಬರುತ್ತದೆ ಮತ್ತು ತಮ್ಮ ಅಭಿಯಾನಗಳನ್ನು ಮುಂದುವರಿಸಲು ಅವರು ಸಂಪನ್ಮೂಲಗಳನ್ನು ಹೇಗೆ ಕ್ರೋಢೀಕರಿಸುತ್ತಾರೆ ಎಂಬುದನ್ನು ವಿವರಿಸಬೇಕು. ರಾಜಕೀಯವಾಗಿ ನೆಲಕಚ್ಚಿರುವ ಇವರು, ಸಾರ್ವಜನಿಕರ ಗಮನವನ್ನು ಮತ್ತೆ ಸೆಳೆಯಲು ಸುಳ್ಳು ಕಥನಗಳನ್ನು ಸೃಷ್ಟಿಸಲು ಪ್ರಯತ್ನಿಸುತ್ತಿದ್ದಾರೆ ಎಂಬುದು ಇಲ್ಲಿನ ಮುಖ್ಯ ವಿಷಯ," ಎಂದರು.

ಚುನಾವಣಾ ಪ್ರಕ್ರಿಯೆಗಳ ಬಗ್ಗೆ ತಪ್ಪು ಮಾಹಿತಿ ಹರಡುತ್ತಿರುವ ಕಾಂಗ್ರೆಸ್ ಪಕ್ಷವು, ತನ್ನ ನಾಯಕತ್ವದ ರಾಜಕೀಯ ವರ್ಚಸ್ಸನ್ನು ಉಳಿಸಿಕೊಳ್ಳಲು 'ಮತ ಕಳ್ಳತನ'ದ ಆಧಾರರಹಿತ ಆರೋಪಗಳನ್ನು ಮಾಡುತ್ತಿದೆ ಎಂದು ಸಿಂಗ್ ದೂರಿದರು. ಕರ್ನಾಟಕ ವಿಧಾನ ಪರಿಷತ್ತಿನ ನಾಲ್ಕು ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ (ಬ್ಯಾಲೆಟ್ ಪೇಪರ್ ಮೂಲಕ ನಡೆದಿದ್ದರೂ) ಎನ್ಡಿಎ ಜಯ ಗಳಿಸಿರುವುದನ್ನು ಉಲ್ಲೇಖಿಸಿದ ಅವರು, ಇವಿಎಂ ಯಂತ್ರಗಳ ಕುರಿತು ವಿರೋಧ ಪಕ್ಷದ ನಿಲುವನ್ನು ಪ್ರಶ್ನಿಸಿದರು.

ಬಾಹ್ಯಾಕಾಶ ತಂತ್ರಜ್ಞಾನ ಕೇಂದ್ರವಾಗಿ ಕರ್ನಾಟಕಕ್ಕೆ ಶಕ್ತಿ ತುಂಬಲು ಬದ್ಧ



■ ರಾಕೆಟ್ ಉತ್ಪಾದನೆ ಕ್ಷೇತ್ರದಲ್ಲಿ 500 ಕೋಟಿ ರೂ. ಹೂಡಿಕೆಗೆ ಆಸ್ಟ್ರೋಬೇಸ್ ಸ್ಪೇಸ್ ಟೆಕ್ನಾಲಜೀಸ್ ಸಂಸ್ಥೆ ಯೋಜನೆ

ಬೆಂಗಳೂರು, ನ.3: ಕರ್ನಾಟಕದಲ್ಲಿ ರಾಕೆಟ್ ಉತ್ಪಾದನೆಯನ್ನು ಉತ್ತೇಜಿಸಲು 500 ಕೋಟಿ ಹೂಡಿಕೆ ಮಾಡಲು ಬೆಂಗಳೂರು ಮೂಲದ ಆಸ್ಟ್ರೋಬೇಸ್ ಸ್ಪೇಸ್ ಟೆಕ್ನಾಲಜೀಸ್ ಸಂಸ್ಥೆ ಯೋಜಿಸಿದೆ. ಸ್ಥಳೀಯ ನಾವೀನ್ಯತೆಯನ್ನು ಬೆಂಬಲಿಸಲು ಮತ್ತು ಮುಂದುವರಿದ ಏರೋಸ್ಪೇಸ್ ಮತ್ತು ಬಾಹ್ಯಾಕಾಶ ತಂತ್ರಜ್ಞಾನ ಉತ್ಪಾದನೆಯ ಪ್ರಮುಖ ಕೇಂದ್ರವಾಗಿ ರಾಜ್ಯದ ಸ್ಥಾನವನ್ನು ಬಲಪಡಿಸಲು ಬದ್ಧರಾಗಿದ್ದೇವೆ ಎಂದು ವಾಣಿಜ್ಯ ಮತ್ತು ಕೈಗಾರಿಕೆಗಳು, ಮೂಲಸೌಕರ್ಯ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ಈ ಸಂಬಂಧ ಮಾತನಾಡಿದ ಸಚಿವರು, ಆದಿನಾರಾಯಣ ಹೊಸಹಳ್ಳಿ ಹಂತ–2 ಎಸ್‌ಇಜೆಡ್‌ನಲ್ಲಿ ರಾಕೆಟ್ ಎಂಜಿನ್‌ಗಳು, ಪ್ರೊಪಲ್ಷನ್ ಸಿಸ್ಟಮ್ ಮತ್ತು ಉಡಾವಣಾ ವಾಹನ ರಚನೆಗಳಿಗಾಗಿ 10 ಎಕರೆ ವಿಸ್ತೀರ್ಣದ ಉತ್ಪಾದನಾ ಸೌಲಭ್ಯದಲ್ಲಿ 500 ಕೋಟಿ ಹೂಡಿಕೆ ಮಾಡಲು ಯೋಜಿಸಿದೆ. ಕಂಪನಿಯ ನಾಯಕತ್ವದೊಂದಿಗೆ ಚರ್ಚೆಯ ಸಮಯದಲ್ಲಿ, ನಾವು ಅದರ ವಿಸ್ತರಣಾ ಯೋಜನೆಗಳು ಮತ್ತು ಮೂಲಸೌಕರ್ಯ ಅಗತ್ಯತೆಗಳನ್ನು ಅನ್ವೇಷಿಸಿದ್ದೇವೆ. ಆಸ್ಟ್ರೋಬೇಸ್ ಭಾರತದ ಮೊದಲ ಪೂರ್ಣ–ಹರಿವಿನ ಹಂತದ ದಹನ ಎಂಜಿನ್ ಅನ್ನು ಅಭಿವೃದ್ಧಿಪಡಿಸುತ್ತಿದೆ, ಇದು ಜಾಗತಿಕವಾಗಿ ಕೆಲವೇ ಕಂಪನಿಗಳು ಅನುಸರಿಸುವ ಅತ್ಯಾಧುನಿಕ ಪ್ರೊಪಲ್ಷನ್ ತಂತ್ರಜ್ಞಾನವಾಗಿದೆ, ಮರುಬಳಕೆ ಮಾಡಬಹುದಾದ ಮಧ್ಯಮ–ಲಿಫ್ಟ್ ಉಡಾವಣಾ ವಾಹನಗಳ ಜೊತೆಗೆ. ಪ್ರಸ್ತಾವಿತ ಹೂಡಿಕೆಯು ಖಾಸಗಿ ಬಾಹ್ಯಾಕಾಶ ವಲಯದಲ್ಲಿ ಕರ್ನಾಟಕದ ಬೆಳೆಯುತ್ತಿರುವ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ ಎಂದಿದ್ದಾರೆ.

ರಕ್ಷಣಾ ತಂತ್ರಜ್ಞಾನ ಕ್ಷೇತ್ರದಲ್ಲಿ ಕರ್ನಾಟಕದ ಸಾಮರ್ಥ್ಯಕ್ಕೆ ಮತ್ತಷ್ಟು ಬಲ ಟೋನ್ಬೊ ಇಮೇಜಿಂಗ್ ಇಂಡಿಯಾ ಲಿಮಿಟೆಡ್ ಬೆಂಗಳೂರು ಹಾಗೂ ವಿಜಯಪುರದ ಮುಳವಾಡ ಕೈಗಾರಿಕಾ ಪ್ರದೇಶದಲ್ಲಿ ಹೂಡಿಕೆಗೆ ಆಸಕ್ತಿ ತೋರಿಸಿದೆ. ಬೆಂಗಳೂರಿನ ಸ್ವದೇಶಿ ರಕ್ಷಣಾ ತಂತ್ರಜ್ಞಾನ ಸಂಸ್ಥೆ ಟೋನ್ಬೊ ಇಮೇಜಿಂಗ್ ಇಂಡಿಯಾ ಲಿಮಿಟೆಡ್ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ, ಅತ್ಯಾಧುನಿಕ ಹೈ–ಪವರ್ ಮೈಕ್ರೋವೇವ್ ತಂತ್ರಜ್ಞಾನ ಕ್ಷೇತ್ರದ ಹೂಡಿಕೆ ಪ್ರಸ್ತಾವನೆಗಳ ಕುರಿತು ಚರ್ಚಿಸಲಾಯಿತು ಎಂದಿದ್ದಾರೆ.

ಬೆಂಗಳೂರಿನ ಐಟಿಐಆರ್ ಹಂತ–2ರಲ್ಲಿ 300 ಕೋಟಿ ವೆಚ್ಚದ ತಯಾರಿಕ ಘಟಕ ಹಾಗೂ ವಿಜಯಪುರ ಜಿಲ್ಲೆಯ ಮುಳವಾಡ ಕೈಗಾರಿಕಾ ಪ್ರದೇಶದಲ್ಲಿ ಸುಮಾರು 130 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ ಪರೀಕ್ಷಾ ಘಟಕ ಸ್ಥಾಪಿಸುವ ಪ್ರಸ್ತಾವನೆಗಳು ಚರ್ಚೆಯ ಪ್ರಮುಖ ವಿಷಯಗಳಾಗಿದ್ದವು. ಈ ಯೋಜನೆಗಳು ಕಾರ್ಯರೂಪಕ್ಕೆ ಬಂದಲ್ಲಿ ಕರ್ನಾಟಕದ ರಕ್ಷಣಾ ತಂತ್ರಜ್ಞಾನ ಸಾಮರ್ಥ್ಯ ವೃದ್ಧಿಸುವುದರ ಜೊತೆಗೆ, ವಿಜಯಪುರದ ಕೈಗಾರಿಕಾ ಬೆಳವಣಿಗೆಗೂ ಹೊಸ ಆಯಾಮ ದೊರೆಯಲಿದೆ ಎಂದಿದ್ದಾರೆ.

ಸಾಂಪ್ರದಾಯಿಕ ಐಟಿ ಕ್ಷೇತ್ರದಾಚೆಗೂ ವಿಸ್ತರಿಸಿದ ಕರ್ನಾಟಕದ ನಾವೀನ್ಯತೆ ಪರಿಸರ ವ್ಯವಸ್ಥೆ




■ ಫಿನ್‌ಲ್ಯಾಂಡ್‌ನ ಬಿಸಿನೆಸ್ ಟ್ಯಾಂಪೆರೆ ಜೊತೆ ಸಹಕಾರಕ್ಕೆ ಒಪ್ಪಂದ

ಬೆಂಗಳೂರು, ನ.3: ಕರ್ನಾಟಕದ ತಂತ್ರಜ್ಞಾನ ಮತ್ತು ನಾವೀನ್ಯತೆ ವಲಯವನ್ನು ಸಾಂಪ್ರದಾಯಿಕ ಐಟಿ ಕ್ಷೇತ್ರಗಳಾಚೆಗೆ ವಿಸ್ತರಿಸಿ, ಜಾಗತಿಕ ಕ್ರಿಯೇಟಿವ್ ಟೆಕ್ನಾಲಜಿ ಕೇಂದ್ರವಾಗಿ ರೂಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆಯಿಟ್ಟಿದೆ ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಕರ್ನಾಟಕ ಇನ್ನೋವೇಷನ್ ಅಂಡ್ ಟೆಕ್ನಾಲಜಿ ಸೊಸೈಟಿ (ಕೆಐಟಿಎಸ್) ಹಾಗೂ ಫಿನ್‌ಲ್ಯಾಂಡ್‌ನ ಬಿಸಿನೆಸ್ ಟ್ಯಾಂಪೆರೆ ಸಂಸ್ಥೆಗಳು ಒಪ್ಪಂದದ ಉದ್ದೇಶ ಪತ್ರಕ್ಕೆ ಸಹಿ ಹಾಕಿವೆ. ಈ ಸಂದರ್ಭದಲ್ಲಿ ಪ್ರತಿಕ್ರಿಯಿಸಿರುವ ಸಚಿವರು, ಕ್ರಿಯೇಟಿವ್ ಟೆಕ್ನಾಲಜೀಸ್, ಅನಿಮೇಷನ್, ದೃಶ್ಯ ಪರಿಣಾಮಗಳು, ಗೇಮಿಂಗ್ ಮತ್ತು ಇಮ್ಮರ್ಸಿವ್ ಮೀಡಿಯಾ ಕ್ಷೇತ್ರಗಳು ಭವಿಷ್ಯದ ಪ್ರಮುಖ ಅವಕಾಶಗಳಾಗಿ ಹೊರಹೊಮ್ಮುತ್ತಿವೆ. ಈ ಕ್ಷೇತ್ರಗಳಲ್ಲಿ ಕರ್ನಾಟಕಕ್ಕೆ ಜಾಗತಿಕ ಮಟ್ಟದಲ್ಲಿ ಸಾಮರ್ಥ್ಯವನ್ನು ವಿಸ್ತರಿಸಲು ವಿಪುಲ ಅವಕಾಶಗಳಿವೆ ಎಂದು ಹೇಳಿದ್ದಾರೆ. ಈ ಒಪ್ಪಂದವು ಎರಡು ನಾವೀನ್ಯತೆ ಪರಿಸರ ವ್ಯವಸ್ಥೆಗಳನ್ನು ಸಂಪರ್ಕಿಸುವ ಅವಕಾಶವಾಗಿದೆ. ಇದರಿಂದ ಉದ್ಯಮಗಳು ಮತ್ತು ಪ್ರತಿಭಾವಂತ ಯುವಜನರಿಗೆ ಹೊಸ ಅವಕಾಶಗಳು ದೊರೆಯಲಿವೆ. ಉದ್ಯಮ, ಶೈಕ್ಷಣಿಕ ಸಂಸ್ಥೆಗಳು ಮತ್ತು ಸಂಶೋಧನಾ ವಲಯಗಳ ನಡುವಿನ ಸಹಕಾರವೂ ಬಲಗೊಳ್ಳಲಿದೆ ಎಂದು ತಿಳಿಸಿದ್ದಾರೆ.

ಈ ಒಪ್ಪಂದಕ್ಕೆ ಫಿನ್‌ಲ್ಯಾಂಡ್‌ನ ಕಾನ್ಸುಲ್ ಗೀತಾಂಜಲಿ ಕಿರ್ಲೋಸ್ಕರ್, ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯ ನಿರ್ದೇಶಕರು ಹಾಗೂ ಕೆಐಟಿಎಸ್‌ನ ವ್ಯವಸ್ಥಾಪಕ ನಿರ್ದೇಶಕ ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಫಿನ್‌ಲ್ಯಾಂಡ್‌ನ ಫಿಲ್ಮ್ ಟ್ಯಾಂಪೆರೆ ಕಾರ್ಯಕ್ರಮದ ನಿರ್ದೇಶಕಿ ಫ್ಯಾನಿ ಹೆನೋನೆನ್ ಮತ್ತು ಎಬಿಎಐ ಅಧ್ಯಕ್ಷ ಬಿರೇನ್ ಘೋಷ್ ಅವರ ಉಪಸ್ಥಿತಿಯಲ್ಲಿ ಸಹಿ ಹಾಕಲಾಯಿತು. ಗ್ಲೋಬಲ್ ಇನ್ನೋವೇಷನ್ ಅಲಯನ್ಸ್ (ಜಿಐಎ) ಉಪಕ್ರಮದಡಿ ರೂಪಿಸಲಾಗುತ್ತಿರುವ ಈ ಸಹಯೋಗವು ಕರ್ನಾಟಕ ಮತ್ತು ಟ್ಯಾಂಪೆರೆ ನಡುವೆ ಜಾಗತಿಕ ಕ್ರಿಯೇಟಿವ್ ಎಕಾನಮಿ ಕಾರಿಡಾರ್ ನಿರ್ಮಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಎರಡೂ ಪ್ರದೇಶಗಳಲ್ಲಿರುವ ಸೃಜನಶೀಲ ತಂತ್ರಜ್ಞಾನ ಉದ್ಯಮಗಳ ಸಾಮರ್ಥ್ಯಗಳನ್ನು ಒಗ್ಗೂಡಿಸಿ, ನವೋದ್ಯಮಗಳು, ಉದ್ಯಮ ಸಂಸ್ಥೆಗಳು, ಹೂಡಿಕೆದಾರರು, ವಿವಿಗಳು ಹಾಗೂ ಸಂಶೋಧನಾ ಸಂಸ್ಥೆಗಳ ನಡುವೆ ಅಂತರರಾಷ್ಟ್ರೀಯ ಸಂಪರ್ಕ ಮತ್ತು ಸಹಭಾಗಿತ್ವಕ್ಕೆ ವೇದಿಕೆ ಕಲ್ಪಿಸುವುದು ಪ್ರಮುಖ ಉದ್ದೇಶವಾಗಿದೆ.

ಹಾಲಿನ ದರ ಏರಿಕೆ ಮರುಪರಿಶೀಲಿಸುವಂತೆ ಸರ್ಕಾರಕ್ಕೆ ಆರ್.ಅಶೋಕ್ ಆಗ್ರಹ



ಬೆಂಗಳೂರು, ನ.4: ರಾಜ್ಯದಲ್ಲಿ ಹಾಲು, ಮೊಸರಿನ ದರ ಏರಿಕೆ ಮಾಡಿ ಜನಾಕ್ರೋಶಕ್ಕೆ ಕಾರಣವಾದ ನಂತರ ಮೊಸರಿನ ದರ ಇಳಿಸಲು ರಾಜ್ಯ ಸರ್ಕಾರ ಮುಂದಾಗಿದ್ದು, ಮೊಸರಿನ ಜತೆಗೆ ಹಾಲಿನ ದರ ಏರಿಕೆಯನ್ನೂ ಮರು ಪರಿಶೀಲಿಸುವಂತೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಮೊಸರಿನ ದರವನ್ನು ಲೀಟರ್‌ಗೆ 14 ರೂಪಾಯಿ ಹೆಚ್ಚಳ ಮಾಡಿ ಜನರಿಂದ ವಿರೋಧ ವ್ಯಕ್ತವಾದ ಬಳಿಕ ಅಲ್ಪ ಪ್ರಮಾಣದಲ್ಲಿ ದರ ಇಳಿಕೆ ಮಾಡಲು ಮುಂದಾಗಿರುವುದು ಯಾವ ರೀತಿಯ ಜನಪರ ಆಡಳಿತ ಎಂದು ಪ್ರಶ್ನಿಸಿದ್ದಾರೆ.

ಹಾಲು ಮತ್ತು ಮೊಸರಿನ ದರ ಏರಿಕೆಯಿಂದ ಈಗಾಗಲೇ ಸಾಮಾನ್ಯ ಕುಟುಂಬಗಳ ಮಾಸಿಕ ಬಜೆಟ್ ಮೇಲೆ ಹೊರೆ ಬಿದ್ದಿದೆ. ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತೊಂದರೆಗೆ ಸಿಲುಕಿರುವ ಜನರಿಗೆ ಮತ್ತಷ್ಟು ಹೊರೆ ಹಾಕಿದಂತಾಗಿದೆ. ನಿಜವಾಗಿಯೂ ರೈತರ ಬಗ್ಗೆ ಕಾಳಜಿ ಇದ್ದರೆ ಪ್ರೋತ್ಸಾಹ ಧನವನ್ನು ರಾಜ್ಯ ಸರ್ಕಾರವೇ ಭರಿಸಲಿ. ಅದನ್ನು ಬಿಟ್ಟು ಜವಾಬ್ದಾರಿಯಿಂದ ನುಣುಚಿಕೊಳ್ಳುವ ಪ್ರಯತ್ನ ಸಲ್ಲದು ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರ ಹಾಲು ಮತ್ತು ಮೊಸರಿನ ದರ ಏರಿಕೆಯನ್ನು ಮರು ಪರಿಶೀಲಿಸಿ ರೈತರಿಗೆ ಸೂಕ್ತ ಪ್ರೋತ್ಸಾಹ ಧನ ನೀಡಬೇಕು ಎಂದು ತಿಳಿಸಿದ್ದಾರೆ.

ಕರ್ನಾಟಕದ ಬರಪೀಡಿತ ರೈತರ ಸಂಕಷ್ಟಕ್ಕೆ ಸ್ಪಂದಿಸಿ: ಪ್ರಧಾನಿಗೆ ಡಿಸಿಎಂ ಡಾ. ಪರಮೇಶ್ವರ್ ಪತ್ರ

ಅಗತ್ಯವಿರುವ 22,400 ಕೋಟಿ ರೂ. ಶೀಘ್ರ ಮಂಜೂರು ಮಾಡುವಂತೆ ಒತ್ತಾಯ

ಕೇಂದ್ರ ಕೃಷಿ ಸಚಿವ ಶಿವರಾಜ್‌ಸಿಂಗ್ ಚೌಹಾಣ್‌ಗೂ ಪತ್ರ



ಬೆಂಗಳೂರು, ನ.3: ಕರ್ನಾಟಕದ ಬರಪೀಡಿತ ರೈತರ ಸಂಕಷ್ಟಕ್ಕೆ ಸ್ಪಂದಿಸುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸಿ ಪ್ರಧಾನಿ ಮೋದಿ ಅವರಿಗೆ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಪತ್ರ ಬರೆದಿದ್ದಾರೆ. ರಾಜ್ಯಕ್ಕೆ ಅಗತ್ಯವಿರುವ 22,400.58 ಕೋಟಿ ರೂ. ಬರ ಪರಿಹಾರವನ್ನು ಶೀಘ್ರವಾಗಿ ಮಂಜೂರು ಮಾಡಿ, ಬಿಡುಗಡೆ ಮಾಡುವಂತೆ ಒತ್ತಾಯಿಸಿದ್ದಾರೆ.

ಪ್ರಧಾನಿ ಮೋದಿಗೆ ತಾವು ಬರೆದಿರುವ ಪತ್ರದ ಚಿತ್ರಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ಪರಮೇಶ್ವರ್, ತಾವು ಮೋದಿ ಅವರಿಗೆ ಮಾತ್ರವಲ್ಲದೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೂ ಪತ್ರ ಬರೆದಿರುವುದಾಗಿ ತಿಳಿಸಿದ್ದಾರೆ. ಕರ್ನಾಟಕದ ಬರ ಪರಿಸ್ಥಿತಿ ಮತ್ತು ರೈತರ ಸಂಕಷ್ಟ

ಮೋದಿಗೆ ಬರೆದ ಪತ್ರದಲ್ಲಿ, ರಾಜ್ಯದ 226 ತಾಲೂಕುಗಳಲ್ಲಿ ಬರ ಪರಿಸ್ಥಿತಿ ಉಂಟಾಗಿದ್ದು, 57.93 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಗಳಿಗೆ ವ್ಯಾಪಕ ಹಾನಿಯಾಗಿದೆ. ಇದರಿಂದ, 62,481.88 ಕೋಟಿ ರೂ. ಆರ್ಥಿಕ ನಷ್ಟ ಸಂಭವಿಸಿದೆ. ಆದಾಗ್ಯೂ, ಕೇಂದ್ರ ಸರ್ಕಾರದ ಪರಿಷ್ಕೃತ ವಿಪತ್ತು ಪರಿಹಾರ ಮಾನದಂಡಗಳ ಪ್ರಕಾರ, ಕೇಂದ್ರ ಸರ್ಕಾರದಿಂದ ಕರ್ನಾಟಕಕ್ಕೆ ದೊರೆಯಬೇಕಿರುವ ಒಟ್ಟು ಪರಿಹಾರದ ಅಗತ್ಯ 22,400.58 ಕೋಟಿ ರೂ. ಎಂದು ಅಂದಾಜಿಸಲಾಗಿದೆ. ಇದು ರೈತರು ಅನುಭವಿಸಿರುವ ನೈಜ ಆರ್ಥಿಕ ನಷ್ಟಕ್ಕೆ ಹೋಲಿಸಿದರೆ ಅತ್ಯಂತ ಕಡಿಮೆ. ಆದರೂ, ರಾಜ್ಯದ ಬೇಡಿಕೆಯ ಈ ಹಣವನ್ನಾದರೂ, ತ್ವರಿತವಾಗಿ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಫಲಾನುಭವಿಗಳ ಗುರುತಿಗೆ ಫ್ರೂಟ್ಸ್ ದತ್ತಾಂಶ ಸೂಕ್ತ

ಬರ ಪರಿಹಾರದ ಫಲಾನುಭವಿಗಳನ್ನು ಗುರುತಿಸಲು 2015–16ರ ಕೃಷಿ ಗಣತಿಯ ಮಾಹಿತಿ ಬಳಸುತ್ತಿರುವುದು ಸರಿಯಲ್ಲ. ಹತ್ತು ವರ್ಷಗಳ ಹಿಂದಿನ ಕೃಷಿ ಗಣತಿಯು ಪ್ರಸ್ತುತ ಕೃಷಿ ಭೂಹಿಡುವಳಿ ಪರಿಸ್ಥಿತಿಯನ್ನು ಸಮರ್ಪಕವಾಗಿ ಪ್ರತಿಬಿಂಬಿಸುವುದಿಲ್ಲ. ಇದರಿಂದ ಸಣ್ಣ ಮತ್ತು ಅತಿಸಣ್ಣ ರೈತರು ಪರಿಹಾರದಿಂದ ವಂಚಿತರಾಗುವ ಸಾಧ್ಯತೆಯಿದೆ. ಬದಲಾಗಿ ಕರ್ನಾಟಕ ಸರ್ಕಾರದ ರೈತರ ನೋಂದಣಿ ಮತ್ತು ಏಕೀಕೃತ ಫಲಾನುಭವಿಗಳ ಮಾಹಿತಿ ವ್ಯವಸ್ಥೆಯಾದ ಫ್ರೂಟ್ಸ್ ದತ್ತಾಂಶವನ್ನು ಬಳಸಬೇಕು. ಈ ವ್ಯವಸ್ಥೆಯಲ್ಲಿ ರೈತರ ಸಮಕಾಲೀನ ಮತ್ತು ಪರಿಶೀಲಿತ ಮಾಹಿತಿ ಲಭ್ಯವಿದ್ದು, ಪರಿಹಾರ ವಿತರಣೆಗೆ ಈ ದತ್ತಾಂಶವು ನೆರವಾಗಲಿದೆ ಎಂದು ಡಾ.ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಕೃಷಿ ವೆಚ್ಚಕ್ಕೆ ಹೋಲಿಸಿದರೆ ಪರಿಹಾರದ ಮೊತ್ತ ಅತ್ಯಲ್ಪ

ಕೇಂದ್ರ ಗೃಹ ಸಚಿವಾಲಯವು ಅಕ್ಟೋಬರ್ 26ರಂದು ಅಧಿಸೂಚನೆ ಹೊರಡಿಸಿದ್ದು, ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಮಾನದಂಡಗಳು ಮತ್ತು ಮೊತ್ತವನ್ನು ಪರಿಷ್ಕರಿಸಿದೆ. ಕರ್ನಾಟಕದ ಬೆಳೆ ನಷ್ಟದ ಇನ್‌ಪುಟ್ ಸಬ್ಸಿಡಿಯನ್ನು 6,128.70 ಕೋಟಿ ರೂ.ನಿಂದ 7,943.55 ಕೋಟಿ ರೂ.ಗೆ ಹೆಚ್ಚಿಸಿದೆ. ಇದರಂತೆ; ಮಳೆಯಾಶ್ರಿತ ಬೆಳೆಗಳಿಗೆ ಪ್ರತಿ ಹೆಕ್ಟೇರ್‌ಗೆ 11,000 ರೂ., ನೀರಾವರಿ ಬೆಳೆಗಳಿಗೆ 22,000 ರೂ. ಹಾಗೂ ಬಹುವಾರ್ಷಿಕ ಬೆಳೆಗಳಿಗೆ 30,000 ರೂ. ಪರಿಹಾರ ಒದಗಿಸಲು ಅವಕಾಶವಿದೆ. ಈ ಪರಿಷ್ಕರಣೆಯನ್ನು ಸ್ವಾಗತಿಸಿರುವ ಪರಮೇಶ್ವರ್, ಪರಿಷ್ಕೃತ ಮೊತ್ತಗಳು ರೈತರ ನೈಜ ಆರ್ಥಿಕ ಸಂಕಷ್ಟವನ್ನು ಪರಿಹರಿಸಲು ಸಾಕಾಗುವುದಿಲ್ಲ. ಬೀಜ, ರಸಗೊಬ್ಬರ, ಕೃಷಿ ಕಾರ್ಮಿಕರ ಕೂಲಿ, ನೀರಾವರಿ ಹಾಗೂ ಇತರ ಕೃಷಿ ಪರಿಕರಗಳ ವೆಚ್ಚ ಗಣನೀಯವಾಗಿ ಹೆಚ್ಚಾಗಿದೆ. ಆದರೆ, ಬೆಳೆ ನಷ್ಟ ಸಂಭವಿಸಿದಾಗ ರೈತರಿಗೆ ದೊರೆಯುವ ಪರಿಹಾರವು ಅವರು ಮಾಡಿದ ಕೃಷಿವೆಚ್ಚಕ್ಕೆ ಹೋಲಿಸಿದರೆ ಅತ್ಯಲ್ಪವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಜೈಲುಗಳಲ್ಲಿ ಜಾತಿ ತಾರತಮ್ಯ ಪ್ರಕರಣ

23 ರಾಜ್ಯಗಳಿಗೆ ಸುಪ್ರೀಂನಿಂದ ಎಚ್ಚರಿಕೆ | ಜ.13ರೊಳಗೆ ಮಾಹಿತಿ ಸಲ್ಲಿಸಲು ಸೂಚನೆ

ನವದೆಹಲಿ,ನ.3: ದೇಶದ ಜೈಲುಗಳಲ್ಲಿ ನಡೆಯುತ್ತಿರುವ ಜಾತಿ ಆಧಾರಿತ ತಾರತಮ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ಮಾಹಿತಿ ಸಲ್ಲಿಸದ 23 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸುಪ್ರೀಂ ಕೋರ್ಟ್ ಕೊನೆಯ ಅವಕಾಶ ನೀಡಿದೆ. ಮುಂದಿನ ವಿಚಾರಣೆಯ ವೇಳೆಗೆ ಮಾಹಿತಿ ಸಲ್ಲಿಸದಿದ್ದರೆ ಆಯಾ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳು ಅಥವಾ ಪ್ರಧಾನ ಕಾರ್ಯದರ್ಶಿಗಳು ನ್ಯಾಯಾಲಯಕ್ಕೆ ಖುದ್ದಾಗಿ ಹಾಜರಾಗುವಂತೆ ಆದೇಶಿಸಬೇಕಾಗುತ್ತದೆ ಎಂದು ನ್ಯಾಯಪೀಠ ಎಚ್ಚರಿಕೆ ನೀಡಿದೆ. ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಮತ್ತು ಮನಮೋಹನ್ ಅವರನ್ನೊಳಗೊಂಡ ಪೀಠ ಪ್ರಕರಣದ ವಿಚಾರಣೆ ನಡೆಸಿತು. ಕೇಂದ್ರ ಗೃಹ ಸಚಿವಾಲಯ ಕೇಳಿರುವ ವಿವಿಧ ಮಾಹಿತಿಗಳಿಗೆ 23 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಇನ್ನೂ ಪ್ರತಿಕ್ರಿಯೆ ನೀಡದಿರುವುದಕ್ಕೆ ನ್ಯಾಯಪೀಠ ಅಸಮಾಧಾನ ವ್ಯಕ್ತಪಡಿಸಿತು.



ಜೈಲುಗಳಲ್ಲಿ ಜಾತಿ ಆಧಾರಿತ ತಾರತಮ್ಯವನ್ನು ತಡೆಗಟ್ಟುವ ಸಂಬಂಧ ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನಗಳ ಅನುಷ್ಠಾನದ ಮೇಲ್ವಿಚಾರಣೆಗಾಗಿ ನ್ಯಾಯಾಲಯ ಸ್ವಯಂಪ್ರೇರಿತವಾಗಿ ಈ ಪ್ರಕರಣವನ್ನು ಕೈಗೆತ್ತಿಕೊಂಡಿದೆ. 'ಸುಕನ್ಯಾ ಶಾಂತಾ ವರ್ಸಸ್ ಭಾರತ ಒಕ್ಕೂಟ' ಪ್ರಕರಣದಲ್ಲಿ ನೀಡಿದ್ದ ತೀರ್ಪಿನ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಹಿರಿಯ ವಕೀಲ ಎಸ್. ಮುರಳೀಧರ್ ಅವರನ್ನು ನ್ಯಾಯಾಲಯ ಅಮಿಕಸ್ ಕ್ಯೂರಿಯಾಗಿ ನೇಮಿಸಿದೆ.

ಜೈಲುಗಳ ದಾಖಲೆಗಳು ಮತ್ತು ಅರ್ಜಿ ನಮೂನೆಗಳಿಂದ ಜಾತಿ ಕಾಲಂಗಳನ್ನು ತೆಗೆದುಹಾಕಿರುವ ಕುರಿತು, ಜಾತಿ ದತ್ತಾಂಶವನ್ನು ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋಗೆ (ಎನ್‌ಸಿಆರ್‌ಬಿ) ಸಂಗ್ರಹಿಸಿ ರವಾನಿಸುವ ವಿಧಾನ, ಸ್ವಚ್ಛತಾ ಕೆಲಸಗಳನ್ನು ಹೊರಗುತ್ತಿಗೆ ನೀಡಿರುವುದು ಹಾಗೂ ಜೈಲುಗಳಲ್ಲಿನ ನಿಯಮಗಳ ಪಾಲನೆ ಕುರಿತು ರಾಜ್ಯಗಳಿಂದ ಮಾಹಿತಿ ಕೇಳಲಾಗಿದೆ.

ಇದಲ್ಲದೆ, ಪ್ರತಿ ಜಿಲ್ಲೆಯಲ್ಲಿ ಜೈಲುಗಳ ಮೇಲ್ವಿಚಾರಣೆಗಾಗಿ ಸಂದರ್ಶಕರ ಮಂಡಳಿ ರಚನೆ, ಹೊಸ ಕಾಯ್ದೆಗಳು, ನಿಯಮಗಳು ಮತ್ತು ಕೈಪಿಡಿಗಳ ಸ್ಥಿತಿ ಹಾಗೂ ತಾರತಮ್ಯಕ್ಕೆ ಅವಕಾಶ ನೀಡುವ ನಿಯಮಗಳ ತಿದ್ದುಪಡಿ ಕುರಿತ ವಿವರಗಳನ್ನೂ ಸಲ್ಲಿಸುವಂತೆ ಸೂಚಿಸಲಾಗಿದೆ.

ಪ್ರತಿ ಜಿಲ್ಲೆಯಲ್ಲಿ ಪ್ರಧಾನ ಜಿಲ್ಲಾ ನ್ಯಾಯಾಧೀಶರ ನೇತೃತ್ವದಲ್ಲಿ ಸಂದರ್ಶಕರ ಮಂಡಳಿ ರಚಿಸುವಂತೆ ಸುಪ್ರೀಂ ಕೋರ್ಟ್ ಈ ಹಿಂದೆ ನಿರ್ದೇಶನ ನೀಡಿತ್ತು. ನಾಲ್ಕು ವಾರಗಳೊಳಗೆ ಮಂಡಳಿಗಳನ್ನು ರಚಿಸುವಂತೆ ಸೂಚಿಸಿದ್ದರೂ, ಕೆಲವೇ ರಾಜ್ಯಗಳ ಕೆಲವು ಜಿಲ್ಲೆಗಳಲ್ಲಿ ಮಾತ್ರ ಪ್ರಗತಿ ಕಂಡುಬಂದಿದೆ ಎಂದು ವಿಚಾರಣೆ ವೇಳೆ ತಿಳಿದುಬಂದಿದೆ.

ಎಲ್ಲ ರಾಜ್ಯಗಳು ತಕ್ಷಣ ಅಗತ್ಯ ಮಾಹಿತಿಯನ್ನು ಒದಗಿಸಬೇಕು. ಇದರಿಂದ ಕೇಂದ್ರ ಸರ್ಕಾರ ವಿವಿಧ ನಿರ್ದೇಶನಗಳ ಅನುಷ್ಠಾನದ ಕುರಿತು ಸಮಗ್ರ ವರದಿ ಸಲ್ಲಿಸಲು ಸಾಧ್ಯವಾಗಲಿದೆ ಎಂದು ನ್ಯಾಯಪೀಠ ತಿಳಿಸಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು 2027ರ ಜನವರಿ 13ಕ್ಕೆ ನಿಗದಿಪಡಿಸಲಾಗಿದೆ.

ಅಂತರಾಷ್ಟ್ರೀಯ ಸೌರ ಒಕ್ಕೂಟದ ಅಧ್ಯಕ್ಷತೆ; ಭಾರತ ಹ್ಯಾಟ್ರಿಕ್ ಸಾಧನೆ

ಸತತ 3ನೇ ಬಾರಿ ಭಾರತಕ್ಕೆ ಒಲಿದ ಐಎಸ್‌ಎ ಅಧ್ಯಕ್ಷ ಸ್ಥಾನ

ನವದೆಹಲಿ,ನ.3: ಅಂತಾರಾಷ್ಟ್ರೀಯ ಸೌರ ಒಕ್ಕೂಟದ ಅಧ್ಯಕ್ಷತೆಗೆ ಭಾರತ ಮಗದೊಮ್ಮೆ ಸರ್ವಸಮ್ಮತದಿಂದ ಆಯ್ಕೆಯಾಗಿದೆ. 130ಕ್ಕೂ ಹೆಚ್ಚು ಸದಸ್ಯ ರಾಷ್ಟ್ರಗಳು ಸೇರಿದ್ದ 139ನೇ ಶೃಂಗಸಭೆಯಲ್ಲಿ ಭಾರತವನ್ನು ಪುನರಾಯ್ಕೆ ಮಾಡಲಾಗಿದೆ.

ಸತತ ಮೂರನೇ ಬಾರಿಗೆ ಐಎಸ್‌ಎ ಅಧ್ಯಕ್ಷತೆ ಭಾರತದ ಮಡಿಲಿಗೆ ಬಂದಿದ್ದು, ದೆಹಲಿಯ ಭಾರತ್ ಮಂಟಪದಲ್ಲಿ ಜರುಗುತ್ತಿರುವ ಶೃಂಗಸಭೆಯಲ್ಲಿ ಈ ಐತಿಹಾಸಿಕ ನಿರ್ಣಯಕ್ಕೆ ಅಂತಾರಾಷ್ಟ್ರೀಯ ಸೌರಒಕ್ಕೂಟದ ಸದಸ್ಯ ರಾಷ್ಟ್ರಗಳು ಸಂತಸ ವ್ಯಕ್ತಪಡಿಸಿದವು.

130ಕ್ಕೂ ಹೆಚ್ಚು ದೇಶಗಳು ಭಾಗಿಯಾಗಿದ್ದ ಅಂತಾರಾಷ್ಟ್ರೀಯ ಸೌರಒಕ್ಕೂಟದ ಅತಿ ದೊಡ್ಡ ಸಮಾವೇಶದಲ್ಲಿ ಸೌರಶಕ್ತಿ ಮತ್ತು ನವೀಕರಿಸಬಹುದಾದ ಇಂಧನ ವಲಯದಲ್ಲಿ ಭಾರತದ ಅಗಾಧ ಸಾಧನೆಗೆ ಬಹುಪರಾಕ್ ಘೋಷಣೆ ಮೊಳಗಿತು. ಜಾಗತಿಕವಾಗಿ ನವೀಕರಿಸಬಹುದಾದ ಇಂಧನ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಐಎಸ್‌ಎ ಒಕ್ಕೂಟ ಅಧ್ಯಕ್ಷ ಸ್ಥಾನಕ್ಕೆ ಮತ್ತೆ ಭಾರತವನ್ನೇ ಮತ್ತೆ ಮರು ಆಯ್ಕೆ ಘೋಷಿಸಿದ್ದು ವಿಶೇಷವಾಗಿತ್ತು. ಭಾರತದ ಪಾಲಿಗಿದು ಐತಿಹಾಸಿಕ ದಿನವಾಗಿ ಕಂಗೊಳಿಸಿತು.

ಸೌರಶಕ್ತಿ, ಪವನ ಶಕ್ತಿ, ಹಸಿರು ಹೈಡ್ರೋಜನ್ ಹೀಗೆ ನವೀಕರಿಸಬಹುದಾದ ಇಂಧನದ ಭಾರತದ ಗುರಿ ಮೀರಿದ ಸಾಧನೆ, ಪೂರೈಕೆ ಬದ್ಧತೆ, ಸಿಒಪಿ–26ರಲ್ಲಿ 2030ರೊಳಗೆ 500 ಗಿಗಾವ್ಯಾಟ್ ಪಳೆಯುಳಿಕೆಯೇತರ ಇಂಧನ ಸಾಮರ್ಥ್ಯ ಸಾಧಿಸುವ ಗುರಿ, 1 ಕೋಟಿ ಸೌರ ಮೇಲ್ಛಾವಣಿ ಮೂಲಕ ಉಚಿತ ವಿದ್ಯುತ್ ಒದಗಿಸುವ ಸೂರ್ಯಘರ್ , ಕೃಷಿ ಪಂಪ್‌ಸೆಟ್‌ಗಳಿಗೆ ಪಿಎಂ ಕುಸುಮ್ ಯೋಜನೆ ಎಲ್ಲವನ್ನೂ ಕಂಡು ಬೆರಗಾದ ವಿದೇಶಗಳು ಸತತ ಮೂರನೇ ಬಾರಿ ಅಂತಾರಾಷ್ಟ್ರೀಯ ಅಧ್ಯಕ್ಷ ಸ್ಥಾನಕ್ಕೆ ಭಾರತವನ್ನೇ ಮರು ಆಯ್ಕೆ ಮಾಡಿವೆ.

ಪ್ರಸ್ತುತ ಜಾಗತಿಕ ಇಂಧನ ಬಿಕ್ಕಟ್ಟು ನಡುವೆಯೂ ಭಾರತದ ಆರ್ಥಿಕತೆ, ಇಂಧನ ಸಾಮರ್ಥ್ಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿರುವ ಅಂತಾರಾಷ್ಟ್ರೀಯ ಸೌರ ಒಕ್ಕೂಟದ ಸದಸ್ಯ ರಾಷ್ಟ್ರಗಳು, ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವ ಮತ್ತು ಭಾರತದ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಅವರ ಸೌರಕ್ರಾಂತಿ ಕಾರ್ಯತತ್ಪರತೆಗೆ ಪ್ರಶಂಸೆ ತೋರಿದವು.

ಸತತ ಮೂರನೇ ಬಾರಿ ಐಎಸ್‌ಎ ಅಧ್ಯಕ್ಷ ಸ್ಥಾನಕ್ಕೆ ಭಾರತವನ್ನೇ ಸರ್ವಸಮ್ಮತದಿಂದ ಆಯ್ಕೆ ಮಾಡಿದ ಸದಸ್ಯ ರಾಷ್ಟ್ರಗಳಿಗೆ ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಅನಂತ ಅನಂತ ಧನ್ಯವಾದ ಅರ್ಪಿಸಿದರು. ಅಂತಾರಾಷ್ಟ್ರೀಯ ಸೌರ ಒಕ್ಕೂಟದ ಅಧ್ಯಕ್ಷತೆಗೆ ಭಾರತವನ್ನು ಪುನರಾಯ್ಕೆ ಮಾಡಿರುವುದು ಜಾಗತಿಕವಾಗಿ ಭಾರತದ ಮೇಲಿರುವ ನಂಬಿಕೆಗೆ ಪ್ರತೀಕವಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಪ್ರತಿಕ್ರಿಯಿಸಿದ್ದಾರೆ

ವಿದೇಶಗಳು ಸೌರಕ್ರಾಂತಿ ಮತ್ತು ನವೀಕರಿಸಬಹುದಾದ ಇಂಧನ ಮಹತ್ಸಾಧನೆಗಾಗಿ ಭಾರತದ ಮೇಲೆ ಅದಮ್ಯ ನಂಬಿಕೆಯಿಟ್ಟಿದ್ದು,



ಮತ್ತೊಮ್ಮೆ ಭಾರತವನ್ನು ಖುಖುಂ ಅಧ್ಯಕ್ಷತೆಯ ಮೂರನೇ ಅವಧಿಗೆ ಮರು ಆಯ್ಕೆ ಮಾಡಿದ ಎಲ್ಲಾ ಸದಸ್ಯ ದೇಶಗಳಿಗೆ ಅಭಿನಂದನೆ ಹಾಗೂ ಹೃತ್ಪೂರ್ವಕ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದಿದ್ದಾರೆ ಸಚಿವ ಪ್ರಲ್ಹಾದ ಜೋಶಿ.

ಅಂತಾರಾಷ್ಟ್ರೀಯ ಸೌರ ಒಕ್ಕೂಟಕ್ಕೆ ಸತತ ಮೂರನೇ ಬಾರಿ ಆಯ್ಕೆ ಮಾಡಿರುವುದು ಸಮಸ್ತ ಭಾರತೀಯರಿಗೆ ಹೆಮ್ಮೆಯ ಕ್ಷಣ. ಇದು ನಮ್ಮ ಮೇಲಿನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದಿರುವ ಸಚಿವ ಪ್ರಲ್ಹಾದ ಜೋಶಿ, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತ ಜಾಗತಿಕ ಸೌರ ಸಹಭಾಗಿತ್ವವನ್ನು ಬಲಪಡಿಸಲು ಮತ್ತು ಪ್ರತಿಯೊಂದು ದೇಶಕ್ಕೆ, ವಿಶೇಷವಾಗಿ 'ಗ್ಲೋಬಲ್ ಸೌತ್' (ಬೆಳೆಯುತ್ತಿರುವ ರಾಷ್ಟ್ರಗಳಿಗೆ) ತಲುಪುವಂತೆ ಪ್ರಯತ್ನವನ್ನು ಮುಂದುವರಿಸುತ್ತದೆ ಎಂದು ಪ್ರಹ್ಲಾದ್ ಜೋಶಿ ಪ್ರತಿಪಾದಿಸಿದ್ದಾರೆ.

ಪೊಲೀಸರ ಪ್ರತಿಭಟನೆಗೆ ನೇತೃತ್ವ: ಎಸಿಪಿ ಮನಸ್ವಿ ವಶಿಷ್ಠ ಅಮಾನತು

ನವದೆಹಲಿ,ನ.3: ದೆಹಲಿ ಪೊಲೀಸ್ ಪ್ರಧಾನ ಕಚೇರಿ ಎದುರು ಸಿಬ್ಬಂದಿ ನಡೆಸಿದ ಪ್ರತಿಭಟನೆಗೆ ನೇತೃತ್ವ ವಹಿಸಿದ್ದ ಸಹಾಯಕ ಪೊಲೀಸ್ ಆಯುಕ್ತೆ (ಎಸಿಪಿ) ಮನಸ್ವಿ ವಶಿಷ್ಠ ಅವರನ್ನು ಕೇಂದ್ರ ಗೃಹ ಸಚಿವಾಲಯ ಅಮಾನತುಗೊಳಿಸಿದೆ. ಸೋಮವಾರ ನಡೆದ ಪ್ರತಿಭಟನೆಯ ಬೆನ್ನಲ್ಲೇ ಈ ಕ್ರಮ ಕೈಗೊಳ್ಳಲಾಗಿದೆ.

ಅಕ್ಟೋಬರ್ 23ರಂದು ದೆಹಲಿಯ ಶಹದಾರ ಪೊಲೀಸ್ ಠಾಣೆಯಲ್ಲಿ ಪೊಲೀಸರು ಮತ್ತು ವಕೀಲರ ನಡುವೆ ನಡೆದ ಘರ್ಷಣೆಯ ಹಿನ್ನೆಲೆಯಲ್ಲಿ ಎಸಿಪಿ ಮನಸ್ವಿ ವಶಿಷ್ಠ ಹಾಗೂ ಶಹದಾರ ಠಾಣೆಯ ಇನ್ಸ್‌ಪೆಕ್ಟರ್ ಅರುಣ್ ಕುಮಾರ್ ಅವರನ್ನು ವರ್ಗಾವಣೆ ಮಾಡಲಾಗಿತ್ತು. ಈ ವರ್ಗಾವಣೆ ಆದೇಶವನ್ನು ವಿರೋಧಿಸಿ ಸುಮಾರು 150 ಮಂದಿ ಪೊಲೀಸ್ ಸಿಬ್ಬಂದಿ ಸೋಮವಾರ ದೆಹಲಿ ಪೊಲೀಸ್ ಪ್ರಧಾನ ಕಚೇರಿ ಎದುರು ಪ್ರತಿಭಟನೆ ನಡೆಸಿದ್ದರು. ವರ್ಗಾವಣೆಗೊಂಡಿದ್ದ ಇಬ್ಬರು ಅಧಿಕಾರಿಗಳನ್ನು ಮತ್ತೆ ಹಿಂದಿನ ಹುದ್ದೆಗಳಿಗೆ ನಿಯೋಜಿಸಬೇಕು ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿತ್ತು. ಮಹಿಳಾ ಪೊಲೀಸ್ ಸಿಬ್ಬಂದಿಯೂ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಈ ವೇಳೆ 'ಸಮವಸ್ತ್ರಕ್ಕೆ ಆಗುವ ಅವಮಾನವನ್ನು ಸಹಿಸುವುದಿಲ್ಲ' ಎಂಬ ಘೋಷಣೆಗಳನ್ನು ಕೂಗಲಾಗಿತ್ತು.ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಪೊಲೀಸ್ ಸಿಬ್ಬಂದಿಯ ನಿಯೋಗ ಪೊಲೀಸ್ ಆಯುಕ್ತ ಅನುರಾಗ್ ಕುಮಾರ್ ಅವರನ್ನು ಭೇಟಿಯಾಗಿ ಐದು ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟಿತ್ತು. ಶಹದಾರ ಘಟನೆಗೆ ಸಂಬಂಧಿಸಿದ ವಕೀಲರ ವಿರುದ್ಧ ಕ್ರಮ ಕೈಗೊಳ್ಳಬೇಕು, ಗಲಾಟೆ ನಡೆಸುವ ವಕೀಲರ ವಿರುದ್ಧ ಎಫ್‌ಐಆರ್ ದಾಖಲಿಸಬೇಕು ಸೇರಿದಂತೆ ಪೊಲೀಸರ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಸೂಕ್ತ ವ್ಯವಸ್ಥೆ ರೂಪಿಸಬೇಕು ಎಂದು ಒತ್ತಾಯಿಸಲಾಗಿತ್ತು.ಪ್ರತಿಭಟನೆ ಕುರಿತು ಮಾತನಾಡಿದ್ದ ಎಸಿಪಿ ಮನಸ್ವಿ ವಶಿಷ್ಠ, ಇದು ಪೊಲೀಸ್ ಸಿಬ್ಬಂದಿಯಿಂದ ಸ್ವಯಂಪ್ರೇರಿತವಾಗಿ ಆರಂಭವಾದ ಪ್ರತಿಭಟನೆಯಾಗಿದ್ದು, ತಾವು



ಅದರಲ್ಲಿ ಭಾಗವಹಿಸಿರುವುದಾಗಿ ತಿಳಿಸಿದ್ದರು. ಪೊಲೀಸ್ ಸಿಬ್ಬಂದಿಯ ಸಮಸ್ಯೆಗಳನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತರಲು ವೇದಿಕೆ ಕಲ್ಪಿಸಬೇಕು ಎಂಬ ಬೇಡಿಕೆಯನ್ನೂ ಮುಂದಿಟ್ಟಿದ್ದರು.

ಇದಕ್ಕೂ ಮೊದಲು ಅಕ್ಟೋಬರ್ 23ರಂದು ಶಹದಾರ ಪೊಲೀಸ್ ಠಾಣೆಯಲ್ಲಿ ನಡೆದ ಘರ್ಷಣೆಯಲ್ಲಿ ವಕೀಲ ಲಲಿತ್ ಬನ್ಸಾಲ್ ಗಂಭೀರವಾಗಿ ಗಾಯಗೊಂಡಿದ್ದರು ಎನ್ನಲಾಗಿದೆ. ಈ ಘಟನೆಯ ಬಳಿಕ ಪೊಲೀಸರು ವಕೀಲರೊಂದಿಗೆ ಅನುಚಿತವಾಗಿ ವರ್ತಿಸಿದ್ದಾರೆ ಮತ್ತು ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿ ವಕೀಲರು ಪ್ರತಿಭಟನೆ ಆರಂಭಿಸಿದ್ದರು. ದೆಹಲಿಯ ಜಿಲ್ಲಾ ನ್ಯಾಯಾಲಯಗಳ ವಕೀಲರು ಅನಿರ್ದಿಷ್ಟಾವಧಿ ಮುಷ್ಕರಕ್ಕೂ ಕರೆ ನೀಡಿದ್ದರು.

ಪರಿಸ್ಥಿತಿಯನ್ನು ತಿಳಿಗೊಳಿಸುವ ಉದ್ದೇಶದಿಂದ ಅಕ್ಟೋಬರ್ 28ರಂದು ಎಸಿಪಿ ಮನಸ್ವಿ ವಶಿಷ್ಠ ಮತ್ತು ಇನ್ಸ್‌ಪೆಕ್ಟರ್ ಅರುಣ್ ಕುಮಾರ್ ಅವರನ್ನು ವರ್ಗಾವಣೆ ಮಾಡಲಾಗಿತ್ತು. ಬಳಿಕ ವಕೀಲರು ತಮ್ಮ ಮುಷ್ಕರವನ್ನು ಹಿಂಪಡೆದಿದ್ದರು. ಈ ಬೆಳವಣಿಗೆಗಳ ಬೆನ್ನಲ್ಲೇ ಪೊಲೀಸ್ ಸಿಬ್ಬಂದಿ ಪ್ರತಿಭಟನೆ ನಡೆಸಿದ್ದು, ಇದೀಗ ಎಸಿಪಿ ಮನಸ್ವಿ ವಶಿಷ್ಠ ಅವರ ಅಮಾನತು ಪ್ರಕರಣ ಮತ್ತಷ್ಟು ಚರ್ಚೆಗೆ ಕಾರಣವಾಗಿದೆ.



ಮಂಗಳೂರಿನಲ್ಲಿ ಮಂಗಳವಾರ ನಡೆದ ಐತಿಹಾಸಿಕ 'ಪ್ರಥಮ ವಿಶ್ವ ಕೊಂಕಣಿ ಸಂಗೀತ ಮಹಾ ಸಮ್ಮೇಳನ' ಹಾಗೂ ಗಿನ್ನೆಸ್ ವಿಶ್ವ ದಾಖಲೆ ಪ್ರಯತ್ನವನ್ನು ಗೋವಾ ಮುಖ್ಯಮಂತ್ರಿ ಡಾ. ಪ್ರಮೋದ್ ಸಾವಂತ್ ಉದ್ಘಾಟಿಸಿದರು. ಖ್ಯಾತ ಕೊಂಕಣಿ ಸಾಂಸ್ಕೃತಿಕ ಸಂಸ್ಥೆಯಾದ 'ಮಾಂಡ್ ಸೊಭಾಣ್'ನ ರೂಬಿ ಜುಬಿಲಿ (40ನೇ ವಾರ್ಷಿಕೋತ್ಸವ) ಸಂದರ್ಭದಲ್ಲಿ, ಮಂಗಳೂರಿನ ಟೌನ್ ಹಾಲ್‌ನಲ್ಲಿ ಈ ಪ್ರಥಮ ವಿಶ್ವ ಕೊಂಕಣಿ ಸಂಗೀತ ಮಹಾ ಸಮ್ಮೇಳನಕ್ಕೆ ಅಧಿಕೃತವಾಗಿ ಚಾಲನೆ ನೀಡಲಾಯಿತು.

ಪೋಕ್ಸೋ ಆರೋಪದ ಜಡ್ಜ್ ತೆರವಿಗೆ ಅರ್ಜಿ: ಸುಪ್ರೀಂ ನೋಟಿಸ್

ನವದೆಹಲಿ, ನ. 3: ಅತ್ಯಾಚಾರ ಪ್ರಕರಣದಲ್ಲಿ ಆರೋಪ ಎದುರಿಸುತ್ತಿರುವ ಅಲಹಾಬಾದ್‌ನ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ ಅಶೋಕ್ ಭರ್ತೇಂದು ಅವರನ್ನು ಪೋಕ್ಸೋ ವಿಶೇಷ ನ್ಯಾಯಾಧೀಶರ ಹುದ್ದೆಯಿಂದ ತೆರವುಗೊಳಿಸುವಂತೆ ಕೋರಿ ಸಲ್ಲಿಸಲಾಗಿರುವ ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಸೋಮವಾರ ಅಲಹಾಬಾದ್ ಹೈಕೋರ್ಟ್ ಆಡಳಿತ ಮಂಡಳಿ ಹಾಗೂ ನ್ಯಾಯಾಧೀಶ ಅಶೋಕ್ ಭರ್ತೇಂದು ಅವರಿಂದ ಪ್ರತಿಕ್ರಿಯೆ ಕೋರಿದೆ. ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್‌ಮಾಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರಿದ್ದ ಪೀಠವು, ನ್ಯಾಯಾಧೀಶರ ವಿರುದ್ಧ ಸಲ್ಲಿಕೆಯಾಗಿರುವ ವಿಜಿಲೆನ್ಸ್ ದೂರಿನ ಪ್ರಗತಿಯ ಬಗ್ಗೆಯೂ ಪರಿಶೀಲನೆ ನಡೆಸುವುದಾಗಿ ತಿಳಿಸಿದೆ. ಅತ್ಯಾಚಾರ ಪ್ರಕರಣ ಎದುರಿಸುತ್ತಿರುವ ನ್ಯಾಯಾಂಗ ಅಧಿಕಾರಿಯೊಬ್ಬರು ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳ ತಡೆ ಕಾಯ್ದೆ ಅಡಿಯಲ್ಲಿ ನೇಮಕಗೊಂಡ ವಿಶೇಷ ನ್ಯಾಯಾಧೀಶರಾಗಿ ಮುಂದುವರಿಯುತ್ತಿರುವುದು ವಿಪರ್ಯಾಸ ಎಂದು ಸಂತ್ರಸ್ತೆಯ ಪರ ವಕೀಲ ರಾಕೇಶ್ ಕುಮಾರ್ ಸಿಂಗ್ ನ್ಯಾಯಾಲಯದ ಗಮನಕ್ಕೆ ತಂದರು. ನ್ಯಾಯಾಧೀಶರ ವಿರುದ್ಧದ ಪ್ರಕರಣದಲ್ಲಿ ಈಗಾಗಲೇ ವಿಚಾರಣಾ ನ್ಯಾಯಾಲಯವು ಆರೋಪಗಳನ್ನು ಪರಿಗಣಿಸಿ ಮುಂದಿನ ಕಾನೂನು ಪ್ರಕ್ರಿಯೆಗೆ ಮುಂದಾಗಿದೆ. ಪ್ರಕರಣವನ್ನು ರದ್ದುಗೊಳಿಸುವಂತೆ ಅವರು ಸಲ್ಲಿಸಿರುವ ಅರ್ಜಿ ಬಾಕಿ ಇದ್ದರೂ, ವಿಚಾರಣೆಗೆ ಯಾವುದೇ ತಡೆಯಾಜ್ಞೆ ಇಲ್ಲ ಎಂದು ವಕೀಲರು ವಾದಿಸಿದರು. ಆರಂಭದಲ್ಲಿ, ನೀವು ಕ್ರಿಮಿನಲ್ ಪ್ರಕರಣದ ವಿಚಾರಣೆಯನ್ನು ಮುಂದುವರಿಸಿ ಎಂದು ನ್ಯಾಯಪೀಠ ಪ್ರತಿಕ್ರಿಯಿಸಿತು. ಆದರೆ, ನ್ಯಾಯಾಧೀಶರ ವಿರುದ್ಧ ಯಾವುದೇ ಶಿಸ್ತುಕ್ರಮ ಕೈಗೊಳ್ಳಲಾಗಿಲ್ಲ. ವಿಜಿಲೆನ್ಸ್‌ಗೆ ದೂರು



ಸಲ್ಲಿಸಿದ್ದರೂ ಅದರ ಪ್ರಗತಿ ಕಂಡುಬರುತ್ತಿಲ್ಲ. ಹೀಗಾಗಿ ಸಂವಿಧಾನದ ಅಡಿಯಲ್ಲಿ ಸುಪ್ರೀಂ ಕೋರ್ಟ್ ಹೊಂದಿರುವ ಮೇಲ್ವಿಚಾರಣಾ ಅಧಿಕಾರವನ್ನು ಬಳಸಿಕೊಂಡು ಅವರನ್ನು ನ್ಯಾಯಾಂಗ ಕರ್ತವ್ಯಗಳಿಂದ ಮುಕ್ತಗೊಳಿಸಬೇಕು ಎಂದು ವಕೀಲರು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಮೂರ್ತಿ ಜಾಯ್ಮಲ್ಯ ಬಾಗ್ಚಿ, ವಿಜಿಲೆನ್ಸ್ ದೂರಿನ ಪ್ರಗತಿಯ ಬಗ್ಗೆ ದೂರುದಾರರಿಗೆ ಮಾಹಿತಿ ನೀಡಲಾಗಿಲ್ಲ ಮತ್ತು ಯಾವುದೇ ಗೋಚರ ಪ್ರಗತಿಯೂ ಕಂಡುಬಂದಿಲ್ಲ ಎಂಬ ಅಂಶವನ್ನು ನ್ಯಾಯಾಲಯ ಗಮನಿಸಿದೆ. ಈ ಹಿನ್ನೆಲೆಯಲ್ಲಿ ಶಿಸ್ತುಕ್ರಮದ ಪ್ರಕ್ರಿಯೆಯನ್ನು

ಮದುವೆಯಾಗುವುದಾಗಿ ಸುಳ್ಳು ಭರವಸೆ ನೀಡಿ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂಬ ಆರೋಪದ ಮೇಲೆ ಅಶೋಕ್ ಭರ್ತೇಂದು ವಿರುದ್ಧ 2022ರ ಡಿಸೆಂಬರ್ 8ರಂದು ದೆಹಲಿಯ ಮಯೂರ್ ವಿಹಾರ್ ಫೇಸ್–1 ಪೊಲೀಸ್ ಠಾಣೆಯಲ್ಲಿ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 376ರ ಅಡಿಯಲ್ಲಿ ಅತ್ಯಾಚಾರ ಪ್ರಕರಣ ದಾಖಲಾಗಿತ್ತು.

ಪೂರ್ಣಗೊಳಿಸಲು ಹೈಕೋರ್ಟ್‌ಗೆ ನಿರ್ದೇಶನ ನೀಡುವುದಾಗಿ ತಿಳಿಸಿದರು. ಆದರೆ, ನ್ಯಾಯಾಧೀಶರನ್ನು ನೇರವಾಗಿ ಹುದ್ದೆಯಿಂದ ತೆರವುಗೊಳಿಸುವ ನಿರ್ಧಾರವನ್ನು ಸುಪ್ರೀಂ ಕೋರ್ಟ್ ತೆಗೆದುಕೊಳ್ಳುವುದಿಲ್ಲ. ಈ ವಿಚಾರವನ್ನು ಅಲಹಾಬಾದ್ ಹೈಕೋರ್ಟ್ ಆಡಳಿತ ಮಂಡಳಿಯೇ ನಿರ್ಧರಿಸಬೇಕು ಎಂದು ನ್ಯಾಯಪೀಠ ಸ್ಪಷ್ಟಪಡಿಸಿತು.

ನಿಷೇಧ ಸಡಿಲಿಕೆ ಮಾಡಿದ ಒಂದು ದಿನದ ನಂತರ ದೆಹಲಿಯಲ್ಲಿ ಅನಧಿಕೃತ ಪಟಾಕಿ ಮಾರಾಟ: ವರದಿಗಳ ಬಗ್ಗೆ ಸುಪ್ರೀಂ ಕೋರ್ಟ್ ಕಳವಳ

ನವದೆಹಲಿ, ನ.3: ದೀಪಾವಳಿಯ ಆಸುಪಾಸಿನಲ್ಲಿ ಕಟ್ಟುನಿಟ್ಟಾದ ನಿಯಂತ್ರಿತ ಅವಧಿಗೆ ದೆಹಲಿ–ಎನ್‌ಸಿಆರ್‌ನಲ್ಲಿ ಪ್ರಮಾಣೀಕೃತ ಹಸಿರು ಪಟಾಕಿಗಳ ತಯಾರಿಕೆ, ಮಾರಾಟ ಮತ್ತು ಸಿಡಿಸುವಿಕೆಗೆ ಅನುಮತಿ ನೀಡಿದ ಒಂದು ದಿನದ ನಂತರ, ದೆಹಲಿಯ ಪ್ರಮುಖ ಮಾರುಕಟ್ಟೆಗಳಲ್ಲಿ ಅನಧಿಕೃತ ಪಟಾಕಿಗಳನ್ನು ಬಹಿರಂಗವಾಗಿ ಮಾರಾಟ ಮಾಡಲಾಗುತ್ತಿದೆ ಎಂಬ ವರದಿಗಳ ಬಗ್ಗೆ ಸುಪ್ರೀಂ ಕೋರ್ಟ್ ಮಂಗಳವಾರ ಕಳವಳ ವ್ಯಕ್ತಪಡಿಸಿದೆ.

ನ್ಯಾಯಾಧೀಶರಾದ ಎಂ ಎಂ ಸುಂದ್ರೇಶ್ ಮತ್ತು ಪ್ರಸನ್ನ ಬಿ. ವರಾಲೆ ಅವರನ್ನೊಳಗೊಂಡ ಪೀಠವು, ನಿಗದಿತ ಕ್ಯೂಆರ್ ಕೋಡ್‌ಗಳನ್ನು ಹೊಂದಿರುವ ಮತ್ತು ಇಲ್ಲದ ಉತ್ಪನ್ನಗಳು ಸೇರಿದಂತೆ ಪರವಾನಗಿ ಪಡೆದ ಮತ್ತು ಪರವಾನಗಿ ಪಡೆಯದ ಪಟಾಕಿಗಳು ಮಾರುಕಟ್ಟೆಯಲ್ಲಿ ಮುಕ್ತವಾಗಿ ಲಭ್ಯವಿದೆ ಎಂದು ಹೇಳುವ ಮಾಧ್ಯಮ ವರದಿಯ ಬಗ್ಗೆ ಹೆಚ್ಚುವರಿ ಸಾಲಿಸಿಟರ್ ಜನರಲ್ ಐಶ್ವರ್ಯಾ ಭಾಟಿ ಅವರ ಗಮನ ಸೆಳೆದಿದೆ. ವರದಿಯನ್ನು ಉಲ್ಲೇಖಿಸಿ, ನ್ಯಾಯಮೂರ್ತಿ ಸುಂದ್ರೇಶ್ ಭಾಟಿ ಅವರನ್ನು ಈ ವಿಷಯವನ್ನು ಪರಿಶೀಲಿಸುವಂತೆ ಕೇಳಿದರು, ನ್ಯಾಯಾಲಯವು ಒಂದು ದಿನ ಮೊದಲು ವಿಧಿಸಿದ ನಿರ್ಬಂಧಗಳ ಹೊರತಾಗಿಯೂ ಬಹುತೇಕ ಎಲ್ಲಾ ರೀತಿಯ ಪಟಾಕಿಗಳು ಲಭ್ಯವಿದೆ ಎಂದು ಅದು ಸೂಚಿಸಿದೆ ಎಂದು ಗಮನಿಸಿದರು.

ನವೆಂಬರ್ 2 ರಂದು, ಸುಪ್ರೀಂ ಕೋರ್ಟ್ ನವೆಂಬರ್ 4 ರಿಂದ 6 ರವರೆಗೆ ಪ್ರಮಾಣೀಕೃತ ಹಸಿರು ಪಟಾಕಿಗಳ ಮಾರಾಟಕ್ಕೆ ಮತ್ತು ನವೆಂಬರ್ 7 ಮತ್ತು 8 ರಂದು ಬೆಳಗ್ಗೆ 6 ರಿಂದ 7 ರವರೆಗೆ ಮತ್ತು ರಾತ್ರಿ 8 ರಿಂದ ರಾತ್ರಿ 10 ರವರೆಗೆ ಅವುಗಳನ್ನು ಸಿಡಿಸಲು ಅನುಮತಿ ನೀಡಿತ್ತು. ನವೆಂಬರ್ 9 ರಿಂದ ಪಟಾಕಿಗಳ ಮೇಲಿನ ಸಂಪೂರ್ಣ ನಿಷೇಧ ಪುನರಾರಂಭಗೊಳ್ಳಲಿದೆ ಎಂದು ಅದು ನಿರ್ದೇಶಿಸಿತ್ತು. CSIR-NEERI ಪ್ರಮಾಣೀಕರಿಸಿದ ಮತ್ತು ಮಾನ್ಯ PESO ಪರವಾನಗಿಗಳಿಂದ ಒಳಗೊಳ್ಳಲ್ಪಟ್ಟ ಪಟಾಕಿಗಳನ್ನು ಮಾತ್ರ ತಯಾರಿಸಬಹುದು ಮತ್ತು ಮಾರಾಟ ಮಾಡಬಹುದು ಎಂದು ನ್ಯಾಯಾಲಯ ಸ್ಪಷ್ಟಪಡಿಸಿತ್ತು.

ಪ್ರತಿ ಪೆಟ್ಟಿಗೆಯಲ್ಲಿ ಅದರ ಪ್ರಮಾಣೀಕರಣದ ಪರಿಶೀಲನೆಯನ್ನು ಸಕ್ರಿಯಗೊಳಿಸಲು ಉತ್ಪನ್ನ ಮತ್ತು ಬ್ಯಾಚ್–ನಿರ್ದಿಷ್ಟ QR ಕೋಡ್ ಇರಬೇಕಾಗಿತ್ತು. ಇದು ಸಾಮಾನ್ಯವಾಗಿ ಲಾಡಿಸ್ ಎಂದು ಕರೆಯಲ್ಪಡುವ ಪಟಾಕಿ ದಾರಗಳು, ಬೇರಿಯಂ ಹೊಂದಿರುವ ಪಟಾಕಿಗಳು ಮತ್ತು CSIR-NEERI ಅನುಮೋದಿಸದ ಉತ್ಪನ್ನಗಳನ್ನು ಸಹ ನಿಷೇಧಿಸಿತ್ತು. ಮಾರಾಟವನ್ನು ಗೊತ್ತುಪಡಿಸಿದ ಸ್ಥಳಗಳಿಗೆ ಸೀಮಿತಗೊಳಿಸಲಾಗಿತ್ತು, ಆನ್‌ಲೈನ್ ಮಾರಾಟವನ್ನು ನಿಷೇಧಿಸಲಾಗಿದೆ. ಮಾರುಕಟ್ಟೆಗಳನ್ನು ಪರಿಶೀಲಿಸಲು, ಕಿಖ ಕೋಡ್‌ಗಳನ್ನು ಪರಿಶೀಲಿಸಲು, ಅಕ್ರಮ ಪಟಾಕಿಗಳನ್ನು ವಶಪಡಿಸಿಕೊಳ್ಳಲು ಮತ್ತು ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಪೊಲೀಸ್ ತಂಡಗಳಿಗೆ ನಿರ್ದೇಶನ ನೀಡಲಾಯಿತು. ನಿಷೇಧಿತ ಪಟಾಕಿಗಳ ಸಾಗಣೆಯನ್ನು ತಡೆಯಲು ದೆಹಲಿ–NCR ಗೆ ಪ್ರವೇಶಿಸುವ ವಾಹನಗಳನ್ನು ಸಹ ಪರಿಶೀಲಿಸಬೇಕಾಗಿತ್ತು.



ನ್ಯಾಯಾಲಯವು ವಿಧಿಸಿರುವ ನಿರ್ಬಂಧಗಳ ಹೊರತಾಗಿಯೂ ರಾಷ್ಟ್ರ ರಾಜಧಾನಿಯಾದ್ಯಂತ ಪ್ರಮುಖ ಮಾರುಕಟ್ಟೆಗಳಲ್ಲಿ ವಿವಿಧ ರೀತಿಯ ಪಟಾಕಿಗಳನ್ನು ಬಹಿರಂಗವಾಗಿ ಮಾರಾಟ ಮಾಡಲಾಗುತ್ತಿದೆ ಎಂದು ಪೀಠವು ಉಲ್ಲೇಖಿಸಿದ ಮಾಧ್ಯಮ ವರದಿಯಲ್ಲಿ ಹೇಳಲಾಗಿದೆ. ಕೆಲವು ಉತ್ಪನ್ನಗಳಲ್ಲಿ ಕ್ಯೂಆರ್ ಕೋಡ್‌ಗಳೇ ಇರಲಿಲ್ಲ, ಇನ್ನು ಕೆಲವು ಉತ್ಪನ್ನಗಳಲ್ಲಿದ್ದ ಕೋಡ್‌ಗಳ ಮೂಲಕ ಅವುಗಳ ಪ್ರಮಾಣೀಕರಣವನ್ನು ಪರಿಶೀಲಿಸಲು ಸಾಧ್ಯವಾಗಲಿಲ್ಲ; ಅಲ್ಲದೆ, ಸಾಂಪ್ರದಾಯಿಕ ಪಟಾಕಿಗಳನ್ನು ಸಾರ್ವಜನಿಕ ಪ್ರದರ್ಶನದಲ್ಲಿ ಇರಿಸದಿದ್ದರೂ, ಕೇಳಿದವರಿಗೆ ಅವುಗಳನ್ನು ಒದಗಿಸಲಾಗುತ್ತಿತ್ತು ಎಂದೂ ಆರೋಪಿಸಲಾಗಿದೆ.

ಕಳಪೆ–ಕಲಬೆರಕೆ: 20 ಲಕ್ಷ ರೂ. ಮೌಲ್ಯದ ಪತಂಜಲಿ ತುಪ್ಪ ಜಪ್ತಿ

ನವದೆಹಲಿ, ನ. 3: ಮಹಾರಾಷ್ಟ್ರದಲ್ಲಿ ಹಬ್ಬದ ಋತುವಿನ ಸಂದರ್ಭದಲ್ಲಿ ಕಳಪೆ ಮತ್ತು ಕಲಬೆರಕೆ ಆಹಾರ ಪದಾರ್ಥಗಳ ಮಾರಾಟ ತಡೆಯಲು ಆಹಾರ ಮತ್ತು ಔಷಧ ನಿಯಂತ್ರಣ ಮಂಡಳಿ (ಎಫ್‌ಡಿಎ) ಬೃಹತ್ ಕಾರ್ಯಾಚರಣೆ ನಡೆಸಿದೆ. ಈ ವಿಶೇಷ ಕಾರ್ಯಾಚರಣೆಯಲ್ಲಿ ರಾಜ್ಯದಾದ್ಯಂತ ಒಟ್ಟು 114 ಸಂಸ್ಥೆಗಳಿಂದ ಅಂದಾಜು 9.01 ಕೋಟಿ ರೂಪಾಯಿ ಮೌಲ್ಯದ 3.53 ಲಕ್ಷ ಕೆ.ಜಿ ಆಹಾರ ಪದಾರ್ಥ ಗಳನ್ನು ವಶಪಡಿಸಿಕೊಳ್ಳಲಾಗಿದೆ. ಆಹಾರ ಭದ್ರತೆ ಮತ್ತು ನೈರ್ಮಲ್ಯ ನಿಯಮಗಳನ್ನು ತೀವ್ರವಾಗಿ ಉಲ್ಲಂಘಿಸಿದ್ದಕ್ಕಾಗಿ 19 ಆಹಾರ ಉದ್ದಿಮೆಗಳ ಪರವಾನಗಿ ಮತ್ತು ನೋಂದಣಿಯನ್ನು ಅಮಾನತುಗೊಳಿಸಲಾಗಿದೆ. ಈ ಕಾರ್ಯಾಚರಣೆಯಲ್ಲಿ, ಛತ್ರಪತಿ ಸಂಭಾಜಿನಗರದ ಸುಂದರವಾಡಿಯ ಮೂಲದ ದಿವ್ಯಾ ಮಹಾವಿತರಕ್ ಎಂಬ ಕಂಪನಿಯ ಸೂಪರ್ ಡಿಸ್ಟ್ರಿಬ್ಯೂಟರ್‌ನಿಂದ ಪತಂಜಲಿ ಕಂಪನಿ 20.20 ಲಕ್ಷ ರೂಪಾಯಿ ಮೌಲ್ಯದ 2,279.7 ಲೀಟರ್ ಹಸುವಿನ ತುಪ್ಪವನ್ನು ಎಫ್‌ಡಿಎ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ಈ ತುಪ್ಪದಲ್ಲಿ ಕಲಬೆರಕೆ ಮಾಡಿರುವ ಮತ್ತು ತಪ್ಪು ಲೇಬಲಿಂಗ್ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಅಕ್ಟೋಬರ್ ತಿಂಗಳಾದ್ಯಂತ ನಡೆಸಲಾದ ಈ ಸುದೀರ್ಘ ಕಾರ್ಯಾಚರಣೆಯಲ್ಲಿ, ಅಕ್ಟೋಬರ್ 28 ರಿಂದ 31ರ ನಡುವೆ ತೀವ್ರ ತಪಾಸಣೆಗಳನ್ನು ನಡೆಸಲಾಗಿದೆ. ಈ ನಾಲ್ಕು ದಿನಗಳ ಅವಧಿಯಲ್ಲಿ 13 ಎಫ್‌ಐಆರ್‌ಗಳನ್ನು ದಾಖಲಿಸಲಾಗಿದ್ದು, 16 ಜನರನ್ನು ಬಂಧಿಸಲಾಗಿದೆ.

ಅಲ್ಲದೆ, ಏಳು ಸಂಸ್ಥೆಗಳನ್ನು ಸೀಲ್ ಮಾಡಿ, ಆರು ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಇಡೀ ಕಾರ್ಯಾಚರಣೆಯಲ್ಲಿ ಖಾದ್ಯ ತೈಲ, ಮಸಾಲೆ ಪದಾರ್ಥಗಳು, ಅಕ್ಕಿ, ಬೇಳೆಕಾಳು, ಬೆಲ್ಲ, ಗೋದಿಹಿಟ್ಟು, ಕಡಲೆ ಹಿಟ್ಟು, ಹಾಲಿನ ಉತ್ಪನ್ನಗಳು, ಸಿಹಿ ತಿಂಡಿಗಳು, ಖಾರ, ಒಣ ಹಣ್ಣುಗಳು, ಬೇಕರಿ ಉತ್ಪನ್ನಗಳು ಹಾಗೂ ನೂಡಲ್ಸ್‌ಗಳನ್ನು ಜಪ್ತಿ ಮಾಡಲಾಗಿದೆ. ಪ್ರದೇಶವಾರು ಕಾರ್ಯಾಚರಣೆಯಲ್ಲಿ ಕೊಂಕಣ ವಿಭಾಗದಲ್ಲಿ ಅತೀ ಹೆಚ್ಚಿನ ಆಹಾರ ಪದಾರ್ಥಗಳು ಜಪ್ತಿಗೊಂಡಿವೆ. ಭಿವಂಡಿಯಲ್ಲಿರುವ ?ಅವೆನ್ಯೂ ಸೂಪರ್‌ಮಾರ್ಟ್ಸ್ ಲಿಮಿಟೆಡ್



ಸಂಸ್ಥೆಯಿಂದಲೇ ವಿವಿಧ ಬ್ರ್ಯಾಂಡ್‌ಗಳ 1.44 ಲಕ್ಷ ಕೆ.ಜಿ ಖಾದ್ಯ ತೈಲವನ್ನು ವಶಪಡಿಸಿಕೊಳ್ಳಲಾಗಿದ್ದು, ಕೊಂಕಣ ವಿಭಾಗದಲ್ಲಿ ಒಟ್ಟಾರೆ 22 ಸಂಸ್ಥೆಗಳಿಂದ ಒಟ್ಟು 5.27 ಕೋಟಿ ಮೌಲ್ಯದ ಆಹಾರಧಾನ್ಯ ಜಪ್ತಿಯಾಗಿದೆ. ಇನ್ನುಳಿದಂತೆ ಪುಣೆಯ 29 ಸಂಸ್ಥೆಗಳಿಂದ 1.47 ಕೋಟಿ ರೂ. ಮೌಲ್ಯದ, ಛತ್ರಪತಿ ಸಂಭಾಜಿನಗರದ 22 ಸಂಸ್ಥೆಗಳಿಂದ 89.41 ಲಕ್ಷ ರೂ. ಮೌಲ್ಯದ ಹಾಗೂ ನಾಗಪುರದ 20 ಸಂಸ್ಥೆಗಳಿಂದ 53.57 ಲಕ್ಷ ರೂ. ಮೌಲ್ಯದ ಅಕ್ರಮ/ಕಳಪೆ ಆಹಾರ ಧಾನ್ಯಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಾರ್ಯಾಚರಣೆ ಸಂದರ್ಭದಲ್ಲಿ ಗಂಭೀರ ನೈರ್ಮಲ್ಯ ಲೋಪಗಳು ಕಂಡುಬಂದಿದ್ದ ಗ್ರೇಟರ್ ಮುಂಬೈ, ಅಮರಾವತಿ ಹಾಗೂ ಛತ್ರಪತಿ ಸಂಭಾಜಿನಗರದ 19 ಸಿಹಿ ತಿಂಡಿ, ಖಾರ ತಯಾರಿಕಾ ಘಟಕ ಹಾಗೂ ಮಸಾಲೆ ಘಟಕಗಳ ಪರವಾನಗಿಯನ್ನು ಅಮಾನತು ಮಾಡಲಾಗಿದೆ. ಇವುಗಳಲ್ಲಿ; ಕ್ರಿಮಿಕೀಟ ಮತ್ತು ಹೆಗ್ಗಣಗಳ ಕಾಟ, ನೈರ್ಮಲ್ಯವಿಲ್ಲದ ವಾತಾವರಣ, ತೆರೆದಿಟ್ಟ ಆಹಾರ ಪದಾರ್ಥಗಳು, ಅವ್ಯವಸ್ಥಿತ ದಾಸ್ತಾನು ವ್ಯವಸ್ಥೆ, ಕ್ರಿಮಿನಾಶಕ ಸಿಂಪಡಣೆಯ ದಾಖಲೆಗಳಿಲ್ಲದಿರುವುದು ಹಾಗೂ ಕಾರ್ಮಿಕರಿಗೆ ವೈದ್ಯಕೀಯ ಫಿಟ್ನೆಸ್ ಪ್ರಮಾಣಪತ್ರಗಳಿಲ್ಲದಿರುವುದು ಕಂಡುಬಂದಿದೆ. ಇದರ ಜೊತೆಗೆ ನಾಸಿಕ್, ಸಂಭಾಜಿನಗರ ಮತ್ತು ನಾಗಪುರ ಭಾಗದ 34 ಹೋಟೆಲ್ ಮತ್ತು ಧಾಬಾಗಳನ್ನು ತಪಾಸಣೆ ನಡೆಸಿ, ಲೋಪದೋಷ ತಿದ್ದಿಕೊಳ್ಳಲು 29 ನೋಟಿಸ್‌ನ್ನು ಜಾರಿಗೊಳಿಸಲಾಗಿದೆ.

ಮತದಾರರ ಪಟ್ಟಿ ಪರಿಷ್ಕರಣೆ: ಕೇಂದ್ರ ಚುನಾವಣಾ ಆಯೋಗದ ಮಹತ್ವದ ಸ್ಪಷ್ಟನೆ

ನವದೆಹಲಿ, ನವೆಂಬರ್ 3: ಚುನಾವಣಾ ಆಯೋಗ ಫಾರಂ–6 ಸಲ್ಲಿಕೆ ಬಗ್ಗೆ ಇರುವ ಗೊಂದಲವನ್ನು ನಿವಾರಿಸಿದೆ. ವಿಶೇಷ ತೀವ್ರ ಪರಿಷ್ಕರಣೆ ನಂತರ ಪ್ರಕಟವಾದ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದ ಹಳೆಯ ಮತದಾರರು ಈ ಫಾರಂ ಸಲ್ಲಿಸಲು ಹಿಂಜರಿಯುತ್ತಿದ್ದರು.

ಫಾರಂನಲ್ಲಿರುವ ಘೋಷಣೆಯಲ್ಲಿ ಮೊದಲ ಬಾರಿಗೆ ಹೆಸರು ಸೇರಿಸಲು ಅರ್ಜಿ ಸಲ್ಲಿಸುತ್ತಿರುವುದಾಗಿ ಬರೆಯಬೇಕಾಗಿರುವುದೇ ಇದಕ್ಕೆ ಕಾರಣವಾಗಿತ್ತು. ಈ ಹಿಂದೆ ಮತದಾರರಾಗಿದ್ದವರು ಹೀಗೆ ಬರೆದರೆ ಜನಪ್ರತಿನಿಧಿ ಕಾಯ್ದೆ 1950ರ ಸೆಕ್ಷನ್ 31ರ ಅಡಿ ಸುಳ್ಳು ಘೋಷಣೆ ಆರೋಪ ಎದುರಾಗಬಹುದೆಂದು ಆತಂಕಗೊಂಡಿದ್ದರು. ಈ ಆತಂಕಕ್ಕೆ ತೆರೆ ಎಳೆದಿರುವ ಆಯೋಗ, ಕರಡು ಪಟ್ಟಿಯಲ್ಲಿ ಹೆಸರು ಕಾಣೆಯಾಗಿರುವ ಹಳೆಯ ಮತದಾರರು ಹೊಸದಾಗಿ ಸೇರ್ಪಡೆಗಾಗಿ ಫಾರಂ–6 ಸಲ್ಲಿಸಬಹುದು ಎಂದು ಸ್ಪಷ್ಟಪಡಿಸಿದೆ. ಈ ಹಿಂದೆ ಮತದಾರರಾಗಿದ್ದರೂ ಅದನ್ನು ಸುಳ್ಳು ಘೋಷಣೆ ಎಂದು ಪರಿಗಣಿಸಲಾಗುವುದಿಲ್ಲ ಎಂದು ಹೇಳಿದೆ. ದೆಹಲಿ ಹೈಕೋರ್ಟ್ ಕೂಡ ಇಂತಹ ಸಂದರ್ಭದಲ್ಲಿ ಕಾನೂನು ಕ್ರಮದ ಭಯಕ್ಕೆ ಆಧಾರವಿಲ್ಲ ಎಂದು ಅಭಿಪ್ರಾಯಪಟ್ಟಿರುವುದನ್ನು ಆಯೋಗ ಉಲ್ಲೇಖಿಸಿದೆ. ಇದರ ಜೊತೆಗೆ, ಬೇರೆ ಯಾವುದೇ ಕ್ಷೇತ್ರದಲ್ಲೂ ಹೆಸರು ಇಲ್ಲದ ಮತದಾರರು ಫಾರಂ–6 ಸಲ್ಲಿಸಿದರೆ ಅವರ ವಿರುದ್ಧ ಸೆಕ್ಷನ್ 31ರ ಅಡಿ ಯಾವುದೇ ಕ್ರಮ ಕೈಗೊಳ್ಳಬಾರದು ಎಂದು ಆಯೋಗವು ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ.

ಅಂತಿಮ ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳ್ಳಲು, ಈ ಹಿಂದೆ ನೋಂದಾಯಿಸಿಕೊಂಡಿದ್ದರೂ ಅಥವಾ ಇಲ್ಲದಿದ್ದರೂ, ಅಂತಹ ಮತದಾರರು 'ನಮೂನೆ 6' ಅನ್ನು ಸಲ್ಲಿಸಬೇಕು ಎಂದು ಭಾರತೀಯ ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ; ಅಲ್ಲದೆ, ಹೀಗೆ ಮಾಡುವುದು ಸುಳ್ಳು ಘೋಷಣೆ ನೀಡುವುದಕ್ಕೆ ಸಮನಾಗುವುದಿಲ್ಲ ಎಂದೂ ಅದು ತಿಳಿಸಿದೆ.

2027ರ ಮೇನಲ್ಲಿ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ರೇಡಾರ್ ಸಮ್ಮೇಳನ: IEEE ಉಪಾಧ್ಯಕ್ಷ ಪುನೀತ್ ಕುಮಾರ್ ಮಿಶ್ರಾ

ಬೆಂಗಳೂರು, ನ.3: ಏಷ್ಯಾದಲ್ಲೇ ಮೊದಲ ಬಾರಿಗೆ ಪ್ರತಿಷ್ಠಿತ ಐಇಇಇ – ರೇಡಾರ್ ಸಮ್ಮೇಳನ 2027ರ ಮೇ 1ರಿಂದ 6ರವರೆಗೆ ನಗರದ ವೈಟ್‌ಫೀಲ್ಡ್‌ನಲ್ಲಿರುವ ಶೆರಟಾನ್ ಗ್ರ್ಯಾಂಡ್ ಹೋಟೆಲ್‌ನಲ್ಲಿ ನಡೆಯಲಿದೆ. ಅಮೆರಿಕ ಮತ್ತು ಯುರೋಪ್ ದಾಟಿ ಮೊದಲ ಬಾರಿಗೆ ಭಾರತದಲ್ಲಿ ಈ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ ಎಂದು ಐಇಇಇ ಏರೋಸ್ಪೇಸ್ ಆಂಡ್ ಎಲೆಕ್ಟ್ರಾನಿಕ್ ಸಿಸ್ಟಮ್ ಸೊಸೈಟಿ ಉಪಾಧ್ಯಕ್ಷ ಪುನೀತ್ ಕುಮಾರ್ ಮಿಶ್ರಾ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಈ ಸಮ್ಮೇಳನದಲ್ಲಿ ಒಟ್ಟು 231 ತಜ್ಞರು ತಮ್ಮ ಸಂಶೋಧನಾ ಪ್ರಬಂಧಗಳನ್ನು ಮಂಡಿಸಲಿದ್ದಾರೆ. ಈ ಪೈಕಿ ಅರ್ಧದಷ್ಟು ಮಂದಿ ಭಾರತೀಯರಾಗಿದ್ದಾರೆ. ಈ ಸಮ್ಮೇಳನವು ಭಾರತೀಯ ತಂತ್ರಜ್ಞಾನವನ್ನು ಜಾಗತಿಕ ಮಟ್ಟದಲ್ಲಿ ಅನಾವರಣಗೊಳಿಸಲು ದೊಡ್ಡ ಅವಕಾಶ ನೀಡುತ್ತದೆ. ದೇಶದ ವಿದ್ಯಾರ್ಥಿಗಳು ಮತ್ತು ಯುವ ತಂತ್ರಜ್ಞರಿಗೆ ಜಾಗತಿಕ ತಜ್ಞರಿಂದ ಕಲಿಯಲು ಇದೊಂದು ವೇದಿಕೆಯಾಗಲಿದೆ. ಸಮ್ಮೇಳನದಲ್ಲಿ ಪ್ರಬಂಧ ಮಂಡನೆಗೆ ನೋಂದಾಯಿಸಲು ಸಾಮಾನ್ಯವಾಗಿ ಸಾವಿರ ಡಾಲರ್‌ಗಳ ಅಗತ್ಯವಿದ್ದು, ಭಾರತೀಯರಿಗಾಗಿ ಇದನ್ನು 100 ಡಾಲರ್‌ಗೆ ನಿಗದಿಪಡಿಸಲಾಗಿದೆ. ಪ್ರಬಂಧ ಸಲ್ಲಿಕೆಗೆ 2026ರ ನವೆಂಬರ್ 30 ಕೊನೆಯ ದಿನವಾಗಿದೆ ಎಂದು ಹೇಳಿದರು.

ಈ ಸಮ್ಮೇಳನದಲ್ಲಿ ಕಾಗ್ನಿಟಿವ್ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಸಂವಹನ ತಂತ್ರಜ್ಞಾನ, ಬಾಹ್ಯಾಕಾಶ, ಹವಾಮಾನ, ಭವಿಷ್ಯದ ಉಪಗ್ರಹಗಳು, ಜಾಗತಿಕ ಭದ್ರತೆ ಹಾಗೂ ಪ್ರಸಕ್ತ ವಿದ್ಯುನ್ಮಾನ ಯುದ್ಧ ವ್ಯವಸ್ಥೆಯಲ್ಲಿ ರಾಡಾರ್ ತಂತ್ರಜ್ಞಾನದ ಪಾತ್ರದ ಕುರಿತು ಜಾಗತಿಕ ತಜ್ಞರು ಮಾತನಾಡಲಿದ್ದಾರೆ ಎಂದರು.



ಭವಿಷ್ಯದ ಯುದ್ಧ ಎದುರಿಸಲು ರಾಡಾರ್ ತಂತ್ರಜ್ಞಾನ ನಿರ್ಣಾಯಕ: ಡಿಆರ್‌ಡಿಒ ಪ್ರಧಾನ ನಿರ್ದೇಶಕ ಬಿ.ಕೆ.ದಾಸ್ ಮಾತನಾಡಿ, ಈ ಸಮ್ಮೇಳನವು ದೇಶದ, ಅದರಲ್ಲೂ ಮುಖ್ಯವಾಗಿ ಬೆಂಗಳೂರಿನ ರೇಡಾರ್ ತಂತ್ರಜ್ಞಾನದ ಸಾಧನೆ ಹಾಗೂ ಯುವ ವಿಜ್ಞಾನಿಗಳ ಪ್ರತಿಭೆಯನ್ನು ಜಾಗತಿಕ ಮಟ್ಟದಲ್ಲಿ ಪ್ರದರ್ಶಿಸಲು ಉತ್ತಮ ವೇದಿಕೆಯಾಗಲಿದೆ. ಪ್ರಸ್ತುತ ಕೃತಕ ಬುದ್ಧಿಮತ್ತೆಯು ಎಲ್ಲ ಕ್ಷೇತ್ರವನ್ನೂ ಪ್ರವೇಶಿಸಿದ್ದು, ರೇಡಾರ್ ಕ್ಷೇತ್ರವೂ ಅದರ ಸವಾಲುಗಳನ್ನು ಎದುರಿಸುತ್ತಿದೆ. ಯುದ್ಧಭೂಮಿಯಲ್ಲಿ ಸಣ್ಣ ಡ್ರೋನ್‌ಗಳನ್ನು ಬಳಸಲಾಗುತ್ತಿದ್ದು, ಭವಿಷ್ಯದ ಯುದ್ಧಗಳನ್ನು ಎದುರಿಸಲು ರೇಡಾರ್ ತಂತ್ರಜ್ಞಾನ ಅತ್ಯಂತ ನಿರ್ಣಾಯಕವಾಗಿದೆ ಎಂದು ತಿಳಿಸಿದರು.

ಎಲ್‌ಆರ್‌ಡಿಇ ನಿರ್ದೇಶಕರಾದ ಶೇಖ್ ಅಲಾಫ್ ಅವರು ಮಾತನಾಡುತ್ತಾ, ರೇಡಾರ್‌ತಂತ್ರಜ್ಞಾನವನ್ನು ಈ ಹಿಂದೆ ರಕ್ಷಣೆ ಹಾಗೂ ಏರೋಸ್ಪೇಸ್ ಕ್ಷೇತ್ರಗಳಲ್ಲಿ ಮಾತ್ರ ಹೆಚ್ಚಾಗಿ ಬಳಸಲಾಗುತ್ತಿತ್ತು. ಆದರೆ ಇತ್ತೀಚೆಗೆ ಇದರ ಬಳಕೆ ವ್ಯಾಪಕವಾಗಿದೆ. ಕೃತಕ ಬುದ್ಧಿಮತ್ತೆಯೊಂದಿಗೆ ಬಹು ಮಾದರಿಯ ರಾಡಾರ್ ಕಾರ್ಯಾಚರಣೆಯು ಇಂದಿನ ದಿನಗಳಲ್ಲಿ ಅಗತ್ಯ ಎಂದು ಮಾಹಿತಿ ನೀಡಿದರು.



ವಕೀಲರ ಮೇಲಿನ ದಾಳಿಯನ್ನು ಖಂಡಿಸಿ ರಾಜ್ಯಾದ್ಯಂತ ನಡೆಯುತ್ತಿರುವ ಪ್ರತಿಭಟನೆಯ ಭಾಗವಾಗಿ, ಕಲಬುರಗಿಯಲ್ಲಿ ಮಂಗಳವಾರ ವಕೀಲರು ಪ್ರತಿಭಟನೆ ನಡೆಸಿದರು.

ಪಟಾಕಿ ಸಿಡಿತದಿಂದ ಗಾಯಗೊಂಡವರಿಗೆ 24 ಗಂಟೆ ಚಿಕಿತ್ಸೆ

ಮಿಂಟೋ ಕಣ್ಣಿನ ಆಸ್ಪತ್ರೆಯಲ್ಲಿ ತುರ್ತು ಚಿಕಿತ್ಸೆ ಒದಗಿಸಲು ಸಿದ್ಧತೆ: ಡಾ. ಸುರೇಶ್‌ಬಾಬು



ಬೆಂಗಳೂರು, ನ.4: ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಸಿಡಿತದಿಂದ ಸಂಭವಿಸಬಹುದಾದ ಅವಘಡಗಳಲ್ಲಿ ಗಾಯಗೊಂಡವರಿಗೆ ಚಿಕಿತ್ಸೆ ನೀಡಲು ನಗರದ ಮಿಂಟೋ ಕಣ್ಣಿನ ಆಸ್ಪತ್ರೆ ಸನ್ನದ್ಧವಾಗಿದ್ದು, ದಿನದ 24 ಗಂಟೆಯೂ ತುರ್ತು ಚಿಕಿತ್ಸೆ ಒದಗಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಆಸ್ಪತ್ರೆಯ ನಿರ್ದೇಶಕ ಡಾ.ಸುರೇಶ್ ಬಾಬು ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ, ಹಬ್ಬದ ಸಂದರ್ಭದಲ್ಲಿ ಹೆಚ್ಚುವರಿ ಕಾರ್ಯ ನಿರ್ವಹಣೆ ಮಾಡಲಾಗುವುದು. ಯಾವುದೇ ಅವಘಡ ಸಂಭವಿಸಿದರೂ ಗಾಯಾಳುಗಳಿಗೆ ತಕ್ಷಣ ಚಿಕಿತ್ಸೆ ನೀಡಲು ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಪಟಾಕಿ ಅವಘಡ: 2024ರಲ್ಲಿ ಪಟಾಕಿ ಅವಘಡಗಳಿಗೆ ಸಂಬಂಧಿಸಿದಂತೆ 71 ಪ್ರಕರಣಗಳು ದಾಖಲಾಗಿದ್ದರೆ, 2025ರಲ್ಲಿ 56 ಪ್ರಕರಣ ದಾಖಲಾಗಿತ್ತು. ಈ ಪೈಕಿ 42 ಮಂದಿ ಹೊರರೋಗಿಗಳಾಗಿ ಚಿಕಿತ್ಸೆ ಪಡೆದಿದ್ದು, 14 ಮಂದಿಯನ್ನು ಒಳರೋಗಿಗಳಾಗಿ ದಾಖಲಿಸಿ ಚಿಕಿತ್ಸೆ ನೀಡಲಾಗಿತ್ತು. 2025ರಲ್ಲಿ ಪಟಾಕಿ ಅವಘಡಗಳಿಂದ ಗಾಯಗೊಂಡವರಲ್ಲಿ 21 ಪುರುಷರು ಮತ್ತು ನಾಲ್ವರು ಮಹಿಳೆಯರು ಸೇರಿದ್ದಾರೆ. 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಆರು ಬಾಲಕಿಯರಿಗೂ ಚಿಕಿತ್ಸೆ ನೀಡಲಾಗಿದೆ. ಪಟಾಕಿ ಅವಘಡಗಳಲ್ಲಿ ಶೇ.38ರಷ್ಟು ಮಂದಿ ಕೈಕಾಲು ಸೇರಿದಂತೆ ದೇಹದ ವಿವಿಧ ಭಾಗಗಳಲ್ಲಿ ಸುಟ್ಟ ಗಾಯಗಳಿಗೆ ಒಳಗಾಗುತ್ತಿದ್ದರೆ, ಶೇ.19ರಷ್ಟು ಮಂದಿ ಕಣ್ಣಿನ ಗಾಯಗಳಿಗೆ ತುತ್ತಾಗುತ್ತಿದ್ದಾರೆ ಎಂದು ಸುರೇಶ್‌ಬಾಬು ಮಾಹಿತಿ ನೀಡಿದರು.

ಗೃಹಜ್ಯೋತಿ: ಸಮೀಕ್ಷೆಯಲ್ಲಿ ಭಾಗವಹಿಸಲು 1.42 ಲಕ್ಷಕ್ಕೂ ಹೆಚ್ಚು ಗ್ರಾಹಕರ ನಿರಾಕರಣೆ

ಬೆಂಗಳೂರು, ನ.3: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಗೃಹ ಜ್ಯೋತಿ' ಯೋಜನೆಯ ಫಲಾನುಭವಿಗಳ ಸಮೀಕ್ಷೆ ವೇಳೆ ಬೆಸ್ಕಾಂ ವ್ಯಾಪ್ತಿಯಲ್ಲಿ ಅಚ್ಚರಿಯ ಮಾಹಿತಿಯೊಂದು ಹೊರ ಬಿದ್ದಿದೆ. ಬೆಸ್ಕಾಂ ವ್ಯಾಪ್ತಿಯಲ್ಲಿ ಉಚಿತ ವಿದ್ಯುತ್ ಸೌಲಭ್ಯ ಪಡೆಯುತ್ತಿರುವ ಬರೋಬ್ಬರಿ 1. 42 ಲಕ್ಷಕ್ಕೂ ಹೆಚ್ಚು ಗ್ರಾಹಕರು ಸಮೀಕ್ಷೆಯಲ್ಲಿ ಭಾಗವಹಿಸಲು ನಿರಾಕರಿಸಿದ್ದಾರೆ. ಈ ಅಂಕಿ–ಅಂಶಗಳು ಇದೀಗ ಸಾರ್ವಜನಿಕ ವಲಯದಲ್ಲಿ ಹಾಗೂ ವಿದ್ಯುತ್ ಸರಬರಾಜು ಮಂಡಳಿಯಲ್ಲಿ ತೀವ್ರ ಕುತೂಹಲ ಮೂಡಿಸಿವೆ.

ಬೆಸ್ಕಾಂ ನೀಡಿರುವ ಅಧಿಕೃತ ಮಾಹಿತಿಯ ಪ್ರಕಾರ, ಬೆಸ್ಕಾಂ ವ್ಯಾಪ್ತಿಯಲ್ಲಿ ಭಾಗ್ಯಜ್ಯೋತಿ, ಕುಟೀರಜ್ಯೋತಿ ಹಾಗೂ ಅಮೃತಜ್ಯೋತಿ ಯೋಜನೆಗಳ ಫಲಾನುಭವಿಗಳನ್ನು ಒಳಗೊಂಡು ಒಟ್ಟು 74,29,773 ಗೃಹಜ್ಯೋತಿ ಫಲಾನುಭವಿಗಳಿದ್ದಾರೆ.

ಈ ಪೈಕಿ ಅಕ್ಟೋಬರ್ 31ರ ಅಂತ್ಯಕ್ಕೆ 73,78,352 ಗ್ರಾಹಕರ ಸಮೀಕ್ಷೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ. ಇದರೊಂದಿಗೆ ಶೇ.99.31ರಷ್ಟು ಸಮೀಕ್ಷೆ ಪ್ರಗತಿ ಸಾಧಿಸಿರುವುದಾಗಿ ಸಂಸ್ಥೆ ತಿಳಿಸಿದೆ.


ಸಮೀಕ್ಷೆಯಲ್ಲಿ ಶೇ. 99ಕ್ಕೂ ಹೆಚ್ಚು ಪ್ರಗತಿ ಸಾಧಿಸಿರುವುದು ಬೆಸ್ಕಾಂ ಅಧಿಕಾರಿಗಳಿಗೆ ಸಮಾಧಾನ ತಂದಿದ್ದರೂ, ಬರೋಬ್ಬರಿ 1,42,978 ಫಲಾನುಭವಿಗಳು ಸಮೀಕ್ಷೆಗೆ ನಿರಾಕರಿಸಿರುವುದು ಅನೇಕ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಸಮೀಕ್ಷೆಯಲ್ಲಿ ಭಾಗವಹಿಸಲು ನಿರಾಕರಿಸಿದ ತಕ್ಷಣವೇ ಆ ಗ್ರಾಹಕರು ಗೃಹಜ್ಯೋತಿ ಯೋಜನೆಯಿಂದ ಹೊರಬಿದ್ದಿದ್ದಾರೆ ಅಥವಾ ಅವರ ಉಚಿತ ವಿದ್ಯುತ್ ಕಡಿತಗೊಳ್ಳುತ್ತದೆ ಎಂದು ಅರ್ಥವಲ್ಲ. ಸಮೀಕ್ಷೆಗೆ ನಿರಾಕರಿಸುವುದು ಮತ್ತು ಯೋಜನೆಯ ಫಲಾನುಭವದಿಂದ ಸ್ವಯಂಪ್ರೇರಿತರಾಗಿ ಹೊರಗುಳಿಯುವುದು ಎರಡೂ ಸಂಪೂರ್ಣ ವಿಭಿನ್ನ ವಿಚಾರಗಳಾಗಿವೆ.

ಹೀಗಾಗಿ ಸಮೀಕ್ಷೆಗೆ ಸ್ಪಂದಿಸದ ಈ 1.42 ಲಕ್ಷ ಗ್ರಾಹಕರ ಮುಂದಿನ ನಡೆ ಏನು ಇವರಿಗೆ ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಸೌಲಭ್ಯ ಮುಂದುವರಿಯಲಿದೆಯೇ ಅಥವಾ ಬೆಸ್ಕಾಂ ಇವರಿಂದ ಸ್ಪಷ್ಟನೆ ಪಡೆದು ಮುಂದಿನ ಕ್ರಮ ಕೈ ಗೊಳ್ಳಲಿದೆಯೇ ಎಂಬುದರ ಬಗ್ಗೆ ಅಧಿಕೃತ ಸ್ಪಷ್ಟನೆ ಹೊರಬೀಳಬೇಕಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರಿಗೆ ಪತ್ರ

ಕಳಪೆ ಕಾಮಗಾರಿ: ಗುತ್ತಿಗೆದಾರರ ವಿರುದ್ಧ ಕ್ರಮಕ್ಕೆ ಸಚಿವ ರಾಮಲಿಂಗಾರೆಡ್ಡಿ ಸೂಚನೆ



ಬೆಂಗಳೂರು, ನ.3: ನಗರದ ಎಚ್‌ಎಸ್‌ಆರ್ ಬಡಾವಣೆಯ 5ನೇ ಹಂತದ 14ನೇ ಮುಖ್ಯರಸ್ತೆಯಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳು ಕಳಪೆಯಾಗಿದ್ದು, ಕೂಡಲೇ ಕಾಮಗಾರಿಯನ್ನು ಸ್ಥಗಿತಗೊಳಿಸಿ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಅವರು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರಿಗೆ ಪತ್ರದ ಬರೆದು ಸೂಚಿಸಿದ್ದಾರೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಬಿಎಸ್‌ಎನ್‌ಎಲ್ ವಿಭಾಗದಿಂದ ಈ ರಸ್ತೆಯಲ್ಲಿ ವೈಟ್‌ಟಾಪಿಂಗ್, 1.2 ಮೀಟರ್ ಡಯಾ ಬೃಹತ್ ಮಳೆನೀರು ಕಾಲುವೆ ನಿರ್ಮಾಣ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಆದರೆ, ಸ್ಥಳ ಪರಿಶೀಲನೆ ನಡೆಸಿದ ವೇಳೆ ಗುತ್ತಿಗೆದಾರರು ನಿಗದಿತ ಮಾನದಂಡಗಳಂತೆ ಕಾರ್ಯನಿರ್ವಹಿಸದೆ ಅತ್ಯಂತ ಕಳಪೆ ಗುಣಮಟ್ಟದ ಕಾಮಗಾರಿ ನಡೆಸುತ್ತಿ ರುವುದು ಕಂಡುಬಂದಿದೆ ಎಂದು ಸಚಿವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅಸಮರ್ಪಕ ಹಾಗೂ ಬೇಜವಾಬ್ದಾರಿಯುತ ಕಾಮಗಾರಿಯ ಪರಿಣಾಮವಾಗಿ ಬಡಾವಣೆಯ ಒಳಚರಂಡಿ ವ್ಯವಸ್ಥೆ ಮತ್ತು ಕುಡಿಯುವ ನೀರಿನ ಪೈಪ್‌ಲೈನ್‌ಗಳಿಗೆ ತೀವ್ರ ಹಾನಿಯಾಗಿದೆ. ಜತೆಗೆ ರಸ್ತೆಯೂ ಸಂಪೂರ್ಣ ಹಾಳಾಗಿದ್ದು, ಸುಗಮ ವಾಹನ ಸಂಚಾರಕ್ಕೆ ಅಡ್ಡಿಯುಂಟಾಗಿದೆ. ಇದರಿಂದಾಗಿ ಸ್ಥಳೀಯ ನಿವಾಸಿಗಳು ಹಾಗೂ ನಿತ್ಯ ಸಂಚರಿಸುವ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುವಂತಾಗಿದೆ.

ಸ್ಥಳ ಪರಿವೀಕ್ಷಣೆಯ ಸಂದರ್ಭದಲ್ಲೇ ಕಾಮಗಾರಿಯ ಕಳಪೆ ಗುಣಮಟ್ಟದ ಬಗ್ಗೆ ಸ್ಥಳದಲ್ಲಿದ್ದ ಬಿಎಸ್‌ಎನ್‌ಎಲ್ ಸಂಸ್ಥೆಯ ಎಂಜಿನಿಯರ್‌ಗಳ ಗಮನಕ್ಕೆ ತರಲಾಗಿತ್ತು.

ಆದಾಗ್ಯೂ, ಸಂಬಂಧಪಟ್ಟ ಎಂಜಿನಿಯರ್‌ಗಳು ಯಾವುದೇ ತಕ್ಷಣದ ಪ್ರತಿಕ್ರಿಯೆ ನೀಡದೆ ನಿರ್ಲಕ್ಷ್ಯ ಮತ್ತು ವಿಳಂಬ ಧೋರಣೆ ಪ್ರದರ್ಶಿಸಿದ್ದಾರೆ ಎಂದು ಸಚಿವರು ಗಂಭೀರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.14ನೇ ಮುಖ್ಯರಸ್ತೆಯಲ್ಲಿ ನಡೆಯುತ್ತಿರುವ ಕಾಮಗಾರಿಯನ್ನು ತಕ್ಷಣವೇ ಸ್ಥಗಿತಗೊಳಿಸಬೇಕು, ಇಲ್ಲಿಯವರೆಗೆ ನಡೆದಿರುವ ಕಾಮಗಾರಿಯ ಗುಣಮಟ್ಟವನ್ನು ಸಮಗ್ರವಾಗಿ ಮರು ಪರಿಶೀಲಿಸಬೇಕು ಮತ್ತು ನಿಯಮಾನುಸಾರ ಕಳಪೆ ಕಾಮಗಾರಿ ನಡೆಸಿದ ಗುತ್ತಿಗೆದಾರರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು ಎಂದು ಸಚಿವರು ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

ಸೆಟ್‌ಬ್ಯಾಕ್ ನಿಯಮ ಉಲ್ಲಂಘಿಸಿರುವ ಕಟ್ಟಡಗಳ ತೆರವು

ಬೆಂಗಳೂರು ಉತ್ತರ ನಗರ ಪಾಲಿಕೆಯಿಂದ ಕಾರ್ಯಾಚರಣೆ ಆರಂಭ



ಬೆಂಗಳೂರು, ನ.3: ಸೆಟ್‌ಬ್ಯಾಕ್ ನಿಯಮಗಳನ್ನು ಉಲ್ಲಂಘಿಸಿ ಮತ್ತು ಪಾಲಿಕೆಯಿಂದ ಯಾವುದೇ ಪ್ಲಾನ್ ಮಂಜೂರಾತಿ ಪಡೆಯದೆ ಅಕ್ರಮವಾಗಿ ನಿರ್ಮಿಸಲಾಗಿದ್ದ ಕಟ್ಟಡದ ವಿರುದ್ಧ ಬೆಂಗಳೂರು ಉತ್ತರ ನಗರ ಪಾಲಿಕೆ (ಬಿಎನ್‌ಸಿಸಿ) ತೆರವು ಕಾರ್ಯಾಚರಣೆ ಆರಂಭಿಸಿದೆ. ಯಲಹಂಕದ ಭದ್ರಾಪ್ಪ ಲೇಔಟ್‌ನಲ್ಲಿ ಅಕ್ರಮವಾಗಿ ಕಟ್ಟಲಾಗಿದ್ದ ಕಟ್ಟಡಗಳನ್ನು ಉರುಳಿಸುತ್ತಿದೆ.

ಕಟ್ಟಡ ಮಾಲೀಕರು ತೆರವು ಕಾರ್ಯಾಚರಣೆಗೆ ತಡೆ ತರಲು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಆದರೆ, ಪಾಲಿಕೆಯ ನಿರ್ಧಾರವನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ. ಈ ಬೆನ್ನಲ್ಲೇ ಪಾಲಿಕೆ ಕಾರ್ಯಾಚರಣೆ ಆರಂಭಿಸಿದೆ. ಸ್ವತಃ ಮಾಲೀಕರೇ ತಮ್ಮ ಕಟ್ಟಡವನ್ನು ಕೆಡುವುವಂತೆ ಮಾಡಿದೆ.

ಧನಲಕ್ಷ್ಮಿ ರೆಡ್ಡಿ ಎಂಬುವರಿಗೆ ಸೇರಿದ 30/40 ಅಳತೆಯ ನಿವೇಶನದಲ್ಲಿ ಸ್ಟಿಲ್ಟ್ ಜೊತೆಗೆ ಮೂರು ಮಹಡಿಗಳ ಅಕ್ರಮ ಕಟ್ಟಡವನ್ನು ನಿರ್ಮಿಸಲಾಗಿತ್ತು. ಬಿಬಿಎಂಪಿ ಕಾಯ್ದೆ ಮತ್ತು ಪಾಲಿಕೆಯ ಬೈಲಾ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿ ಈ ನಿರ್ಮಾಣ ಮಾಡಲಾಗಿತ್ತು. ಈ ಹಿಂದೆ ಹೈಕೋರ್ಟ್ ನೀಡಿದ್ದ ನಿರ್ದೇಶನದಂತೆ ಪರಿಶೀಲನೆ ನಡೆಸಿದ್ದ ಪಾಲಿಕೆ ಅಧಿಕಾರಿಗಳು, ಅಕ್ರಮ ನಿರ್ಮಾಣವನ್ನು ಸ್ವಯಂಪ್ರೇರಿತವಾಗಿ ತೆರವುಗೊಳಿಸಲು ಮಾಲೀಕರಿಗೆ 15 ದಿನಗಳ ಕಾಲಾವಕಾಶ ನೀಡಿದ್ದರು. ತಪ್ಪಿದ್ದಲ್ಲಿ ಪಾಲಿಕೆಯೇ ಕಟ್ಟಡವನ್ನು ಕೆಡವಲು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದ್ದರು.

ಇದೇ ಪ್ರಕರಣದಲ್ಲಿ 4 ಮತ್ತು 5ನೇ ಪ್ರತಿವಾದಿಗಳಾಗಿದ್ದ ಬೆಸ್ಕಾಂ ಮತ್ತು ಜಲಮಂಡಳಿಗೆ ಕಟ್ಟಡದ ವಿದ್ಯುತ್ ಮತ್ತು ನೀರು ಸರಬರಾಜು ಸಂಪರ್ಕವನ್ನು ತಕ್ಷಣವೇ ಕಡಿತಗೊಳಿಸುವಂತೆ ನಿರ್ದೇಶಿಸಲಾಗಿತ್ತು. ಈ ಬಗ್ಗೆ ನ್ಯಾಯಾಲಯಕ್ಕೆ ಮತ್ತೊಂದು ಅರ್ಜಿ ಸಲ್ಲಿಸಿದ್ದ ದೂರುದಾರರು ಕ್ರಮ ಕೈಗೊಳ್ಳುವಲ್ಲಿಯ ವಿಳಂಬವನ್ನು ಪ್ರಶ್ನಿಸಿದ್ದರು. ನ್ಯಾಯಾಂಗ ನಿಂದನೆಗೆ ಸಮವೆಂದು ವಾದಿಸಿದ್ದರು.

ಪ್ರಕರಣವು ನ್ಯಾಯಾಂಗ ನಿಂದನೆಗೆ ತಿರುಗಿದ ಕಾರಣ ಅಧಿಕಾರಿಗಳು ತ್ವರಿತ ಕ್ರಮಕ್ಕೆ ಮುಂದಾಗಿದ್ದರು. ನ್ಯಾಯಾಲಯದ ಸೂಚನೆಯಂತೆ ಪಾಲಿಕೆಗೆ ಹಣ ಜಮೆ ಮಾಡುವ ಅಥವಾ ತೆರವುಗೊಳಿಸುವ ಆಯ್ಕೆಯನ್ನು ಮಾಲೀಕರಿಗೆ ನೀಡಲಾಗಿತ್ತು. ಅಂತಿಮವಾಗಿ, ಅಕ್ರಮ ಭಾಗವನ್ನು ತೆರವುಗೊಳಿಸಲು ಮಾಲೀಕರಿಗೆ ನಿರ್ದೇಶಿಸಲಾಗಿತ್ತು.

ಇದೀಗ, ಕಳೆದ ಮೂರು ದಿನಗಳಿಂದ ಮಾಲೀಕರೇ ಸ್ವತಃ ಅಕ್ರಮ ನಿರ್ಮಾಣವನ್ನು ತೆರವುಗೊಳಿಸುತ್ತಿದ್ದು, ಸುಮಾರು 1 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದ್ದ ಕಟ್ಟಡವು ಈಗ ಧರೆಗುರುಳುತ್ತಿದೆ.

ವಕೀಲರ ರಕ್ಷಣಾ ಕಾಯ್ದೆ ಬಲಪಡಿಸಲು ಕ್ರಮ: ಗೃಹ ಸಚಿವರಿಗೆ ವಕೀಲರ ಸಂಘದ ಮನವಿ

ವಕೀಲರ ಹತ್ಯೆ, ಹಲ್ಲೆ ಪ್ರಕರಣಗಳ ಆರೋಪಿಗಳ ಬಂಧನಕ್ಕೆ ಆಗ್ರಹ

ಬೆಂಗಳೂರು, ನ.3: ವಕೀಲರ ಮೇಲಿನ ಹಲ್ಲೆ ಮತ್ತು ಹತ್ಯೆ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ವಕೀಲರ ರಕ್ಷಣಾ ಕಾಯ್ದೆಯನ್ನು ಮತ್ತಷ್ಟು ಬಲಪಡಿಸುವುದು ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಬೆಂಗಳೂರು ವಕೀಲರ ಸಂಘದ ಪದಾಧಿಕಾರಿಗಳು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಮನವಿ ಸಲ್ಲಿಸಿದರು.

ವಕೀಲರಾದ ಮಂಜುನಾಥ್, ಅನ್ನಪೂರ್ಣೇಶ್ವರಿ ನಗರದ ಶ್ರೀರಾಮ್ ಅವರ ಹತ್ಯೆ ಹಾಗೂ ಗೌರಿಬಿದನೂರಿನ ವೆಂಕಟರಮಣ ಸನ್ನಕ್ಕಿ ಅವರ ಮೇಲಿನ ಕೊಲೆ ಯತ್ನದ ಪ್ರಕರಣಗಳ ಆರೋಪಿಗಳನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.



ವಕೀಲರ ರಕ್ಷಣಾ ಕಾಯ್ದೆಗೆ ಕಠಿಣ ಹಾಗೂ ಜಾಮೀನು ರಹಿತ ಅಪರಾಧದ ಅಂಶಗಳನ್ನು ಸೇರ್ಪಡೆಗೊಳಿಸಿ, ಕನಿಷ್ಠ 10 ವರ್ಷಗಳ ಶಿಕ್ಷೆಗೆ ಅವಕಾಶ ಕಲ್ಪಿಸಬೇಕು. ಪೊಲೀಸ್ ಠಾಣೆಗಳಿಗೆ ತೆರಳುವ ವಕೀಲರು ಹಾಗೂ ಸಾರ್ವಜನಿಕ ರೊಂದಿಗೆ ಗೌರವಯುತವಾಗಿ ನಡೆದುಕೊಳ್ಳಲು ಪ್ರಮಾಣಿತ ಕಾರ್ಯಾಚರಣಾ ವಿಧಾನ (ಎಸ್‌ಒಪಿ) ರೂಪಿಸಿ ಎಲ್ಲ ಠಾಣೆಗಳಲ್ಲಿ ಜಾರಿಗೊಳಿಸಬೇಕು ಎಂದು ಮನವಿ ಮಾಡಿದರು.

ಅಲ್ಲದೆ, ಸಿವಿಲ್ ವ್ಯಾಜ್ಯಗಳಲ್ಲಿ ಪೊಲೀಸರು ಅನಧಿಕೃತವಾಗಿ ಮಧ್ಯಪ್ರವೇಶಿಸಿ ಇತ್ಯರ್ಥಪಡಿಸುವುದಕ್ಕೆ ಕಡಿವಾಣ ಹಾಕಬೇಕು. ಈ ಸಂಬಂಧ ಸುಪ್ರೀಂ ಕೋರ್ಟ್ ನಿರ್ದೇಶನಗಳನ್ನು ಪಾಲಿಸದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು ವಕೀಲರ ಸಂಘದ ಬೇಡಿಕೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಬೆಂಗಳೂರು ವಕೀಲರ ಸಂಘದ ಅಧ್ಯಕ್ಷ ವಿವೇಕ್ ಸುಬ್ಬಾರೆಡ್ಡಿ, ಪ್ರಧಾನ ಕಾರ್ಯದರ್ಶಿ ಎಚ್.ವಿ. ಪ್ರವೀಣ್ ಗೌಡ, ಉಪಾಧ್ಯಕ್ಷ ಗಿರೀಶ್ ಕುಮಾರ್ ಸಿ.ಎಸ್. ಹಾಗೂ ಖಜಾಂಚಿ ಶ್ವೇತಾ ರವಿಶಂಕರ್ ನಿಯೋಗದಲ್ಲಿದ್ದರು.

ವಿಚಾರಣೆಗೆ ಗೈರುಹಾಜರಿ: ನಟ ಧನ್ವೀರ್‌ಗೆ ಕಾನೂನು ಸಂಕಷ್ಟ



ಬೆಂಗಳೂರು, ನ.4: ವಿಚಾರಣೆಗೆ ಹಾಜರಾಗುವಂತೆ ನಟ ಧನ್ವೀರ್‌ಗೆ ಪೊಲೀಸರು ನೋಟೀಸ್ ನೀಡಿದರೂ ಗೈರುಹಾಜರಾಗಿದ್ದು, ಅವರ ವಿರುದ್ಧ ಕಾನೂನು ಸಂಕಷ್ಟ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ.

ಧನ್ವೀರ್ ಅವರು ಪೊಲೀಸರ ಮೊದಲ ನೋಟೀಸ್‌ಗೆ ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ. ಹಾಗೂ ವಿಚಾರಣೆಗೆ ಹಾಜರಾಗಿಲ್ಲ. ಹಾಗಾಗಿ ಪೊಲೀಸರು ಕಾನೂನು ಪ್ರಕ್ರಿಯೆಯನ್ನು ಮತ್ತಷ್ಟು ಚುರುಕುಗೊಳಿಸಿದ್ದಾರೆ. ಧನ್ವೀರ್ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದನೆ, ಜೀವ ಬೆದರಿಕೆ ಹಾಗೂ ಆರ್ಥಿಕ ವ್ಯವಹಾರಗಳಿಗೆ ಸಂಬಂಧಿಸಿದಂತೆ ನಗರದ ಚಾಮರಾಜಪೇಟೆ, ಆರ್‌ಆರ್‌ನಗರ ಮತ್ತು ಬಸವೇಶ್ವರ ನಗರ ಪೊಲೀಸ್ ಠಾಣೆಗಳಲ್ಲಿ ಮೂರು ಪ್ರತ್ಯೇಕ ಎಫ್‌ಐಆರ್‌ಗಳು ದಾಖಲಾಗಿವೆ.

ಈ ಠಾಣೆಗಳಲ್ಲಿ ಮೊದಲು ಎನ್‌ಸಿಆರ್ ದಾಖಲಾಗಿತ್ತು. ನಂತರ ನ್ಯಾಯಾಲಯದ ಸೂಚನೆ ಮೇರೆಗೆ ಎಫ್‌ಐಆರ್ ದಾಖಲಿಸಿಕೊಳ್ಳಲಾಗಿದೆ.

ನಕಲಿ ಔಷಧ ಮಾರಾಟ ಜಾಲದ ವಿರುದ್ಧ ಇ.ಡಿ. ಕಾರ್ಯಾಚರಣೆ: ಬ್ಯಾಂಕ್ ಖಾತೆಗಳಲ್ಲಿ 9 ಲಕ್ಷ ರೂ. ಜಪ್ತಿ



ಬೆಂಗಳೂರು, ನ.4: ನಕಲಿ ಔಷಧಿಗಳ ತಯಾರಿಕೆ, ಮರು ಪ್ಯಾಕೇಜಿಂಗ್ ಹಾಗೂ ಪ್ರತಿಷ್ಠಿತ ಕಂಪನಿಗಳ ಹೆಸರಿನಲ್ಲಿ ಮಾರಾಟ ಮಾಡುತ್ತಿದ್ದ ಜಾಲವೊಂದರ ವಿರುದ್ಧ ಜಾರಿ ನಿರ್ದೇಶನಾಲಯ (ಇ.ಡಿ.) ಬೃಹತ್ ಕಾರ್ಯಾಚರಣೆ ನಡೆಸಿದೆ. ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ಸೇರಿದಂತೆ ಐದು ಸ್ಥಳಗಳಲ್ಲಿ ಶೋಧ ನಡೆಸಿರುವ ಅಧಿಕಾರಿಗಳು, 9 ಲಕ್ಷ ರೂ.ಗಳನ್ನು ಬ್ಯಾಂಕ್ ಖಾತೆಗಳಿಂದ ಜಪ್ತಿ (ಫ್ರೀಜ್) ಮಾಡಿದ್ದಾರೆ. ಜಾರಿ ನಿರ್ದೇಶನಾಲಯದ ಬೆಂಗಳೂರು ವಲಯ ಕಚೇರಿಯು 2026ರ ನವೆಂಬರ್ 2ರಂದು ಹೊರಡಿಸಿರುವ ಪತ್ರಿಕಾ ಪ್ರಕಟಣೆಯಲ್ಲಿ ಈ ಮಾಹಿತಿ ನೀಡಿದೆ. ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ , 2002ರ ಸೆಕ್ಷನ್ 17ರಡಿ ಈ ಶೋಧ ಮತ್ತು ಜಪ್ತಿ ಕಾರ್ಯಾಚರಣೆ ನಡೆಸಲಾಗಿದೆ.

ಕಾಂಗ್ರೆಸ್ ನಾಯಕರ ವಿರುದ್ಧ ಅವಹೇಳನಕಾರಿ ಹೇಳಿಕೆಗೆ ಬಿ.ವೈ. ವಿಜಯೇಂದ್ರ ವಿಷಾದ



ಬೆಂಗಳೂರು, ನ.3: ದಾವಣಗೆರೆಯ ಸಾರ್ವಜನಿಕ ವೇದಿಕೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ಮುಖಂಡರ ವಿರುದ್ಧ ಆಕ್ಷೇಪಾರ್ಹ ಹಾಗೂ ಏಕವಚನ ಬಳಸಿ ಟೀಕೆಗೆ ಗುರಿಯಾಗಿದ್ದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ತಮ್ಮ ಹೇಳಿಕೆಗೆ ವಿಷಾದ ವ್ಯಕ್ತಪಡಿಸಿ ಕ್ಷಮೆಯಾಚಿಸಿದ್ದಾರೆ.

ಇತ್ತೀಚೆಗೆ ದಾವಣಗೆರೆಯಲ್ಲಿ ನಡೆದ ಪಕ್ಷದ ಕಾರ್ಯಕ್ರಮವೊಂದರಲ್ಲಿ ರಾಜ್ಯ ಸರ್ಕಾರದ ಆಡಳಿತ ವೈಖರಿ ಯನ್ನು ತರಾಟೆಗೆ ತೆಗೆದುಕೊಂಡಿದ್ದ ಬಿ.ವೈ. ವಿಜಯೇಂದ್ರ, ಆವೇಶಭರಿತರಾಗಿ ಮಾತನಾಡುವ ವೇಳೆ ಕಾಂಗ್ರೆಸ್ ಮುಖಂಡರನ್ನು ಉದ್ದೇಶಿಸಿ "ಈ ನನ್ ಮಕ್ಕಳು ಕಾಂಗ್ರೆಸ್‌ನವರು..." ಎಂದು ಏಕವಚನದಲ್ಲಿ ನಿಂದಿಸಿದ್ದರು.

ಈ ಹೇಳಿಕೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಕ್ಷಣಾರ್ಧದಲ್ಲಿ ವೈರಲ್ ಆಗುತ್ತಿದ್ದಂತೆಯೇ, ರಾಜ್ಯ ರಾಜಕೀಯದಲ್ಲಿ ಆಡಳಿತ–ವಿರೋಧ ಪಕ್ಷಗಳ ನಡುವೆ ವಾಕ್ಸಮರ ತಾರಕಕ್ಕೇರಿತ್ತು.

ಈ ಬಗ್ಗೆ ಕಾಂಗ್ರೆಸ್ ಪಾಳೆಯದಲ್ಲಿ ವಿರೋಧ ವ್ಯಕ್ತವಾಗಿತ್ತು. ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಮೂರು ದಿನಗಳ ಒಳಗೆ ವಿಜಯೇಂದ್ರ ಯಾವುದೇ ಷರತ್ತಿಲ್ಲದೆ ಸಾರ್ವಜನಿಕವಾಗಿ ಕ್ಷಮೆ ಕೇಳಬೇಕು ಎಂದು ಕಠಿಣ ಗಡುವು ವಿಧಿಸಿದ್ದರು.

ಇದೀಗ ಈ ಎಲ್ಲಾ ರಾಜಕೀಯ ಬೆಳವಣಿಗೆಗಳು ಮತ್ತು ಬೀದಿಗಿಳಿದ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ವಿಜಯೇಂದ್ರ ಅವರು ತಮ್ಮ ಹೇಳಿಕೆಯನ್ನು ಹಿಂಪಡೆದು ತಣ್ಣಗಾಗಿಸಲು ಮುಂದಾಗಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ವಿಜಯೇಂದ್ರ, "ಯುವಜನರ ಭವಿಷ್ಯಕ್ಕೆ ಕೊಳ್ಳಿ ಇಡುತ್ತಿರುವ ಕೆಪಿಎಸ್‌ಸಿ ವಿಚಾರ ಹಾಗೂ ಮೀಸಲಾತಿ ಗೊಂದಲದ ಬಗ್ಗೆ ಮಾತನಾಡುತ್ತಿದ್ದಾಗ ಭಾವೋದ್ವೇಗಕ್ಕೆ ಒಳಗಾಗಿ ಆ ಪದ ಬಂತೇ ವಿನಾ, ಯಾರಿಗೂ ವೈಯಕ್ತಿಕವಾಗಿ ಅವಮಾನ ಮಾಡಬೇಕೆಂಬ ಉದ್ದೇಶ ನನಗಿರಲಿಲ್ಲ.

ಆವೇಶದ ಭರದಲ್ಲಿ ಹೊರಬಂದ ಆ ಮಾತಿನಿಂದ ಕಾಂಗ್ರೆಸ್ ಮಿತ್ರರಿಗೆ ನೋವಾಗಿದ್ದರೆ ನಾನು ಬಹಿರಂಗವಾಗಿಯೇ ಕ್ಷಮೆ ಕೋರುತ್ತೇನೆ," ಎಂದು ವಿವಾದಕ್ಕೆ ತೆರೆ ಎಳೆಯುವ ಯತ್ನ ಮಾಡಿದರು.

ಕರವೇ ಅಭಿಯಾನದ ವಿರುದ್ಧ ಅವಹೇಳನಕಾರಿ ಪೋಸ್ಟ್

ವಿರೋಧ ವ್ಯಕ್ತವಾಗುತ್ತಿದ್ದಂತೆ ಹೇಳಿಕೆ ತೆಗೆದುಹಾಕಿದ ತಮಿಳುನಾಡು ಕೇಡರ್‌ನ ಐಪಿಎಸ್ ಅಧಿಕಾರಿ



ಬೆಂಗಳೂರು, ನ.4: ಕರ್ನಾಟಕದಲ್ಲಿ ಕನ್ನಡಿಗರಿಗೆ ಉದ್ಯೋಗಾವಕಾಶ ಕಲ್ಪಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಹಮ್ಮಿಕೊಂಡಿರುವ ಅಭಿಯಾನದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದ ತಮಿಳುನಾಡು ಕೇಡರ್‌ನ ಐಪಿಎಸ್ ಅಧಿಕಾರಿ ಧನುಷ್ ಕುಮಾರ್ ಅವರು ತೀವ್ರ ವಿರೋಧ ವ್ಯಕ್ತವಾದ ಬೆನ್ನಲ್ಲೇ ಸಾಮಾಜಿಕ ಜಾಲತಾಣದಲ್ಲಿ ಹಾಕಿದ್ದ ಪೋಸ್ಟ್ ತೆಗೆದಿದ್ದಾರೆ.

ಕರವೇ ಕಾರ್ಯಕರ್ತರು ನಗರದ ವಿವಿಧ ಐಟಿ ಕಂಪನಿಗಳಿಗೆ ಭೇಟಿ ನೀಡಿ, ಉದ್ಯೋಗಿಗಳ ವಿವರ ಹಾಗೂ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿ ನೀಡುವಂತೆ ಮನವಿ ಸಲ್ಲಿಸುತ್ತಿದ್ದಾರೆ. ಈ ಅಭಿಯಾನದ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ್ದ ಧನುಷ್ ಕುಮಾರ್ ಅವರು, ಕೆಲಸವಿಲ್ಲದವರು ಇತರರು ಕೆಲಸ ಮಾಡುವುದನ್ನು ತಡೆಯುತ್ತಿದ್ದಾರೆ ಎಂಬ ಅರ್ಥದ ಹೇಳಿಕೆ ನೀಡಿದ್ದರು.

ಈ ಪೋಸ್ಟ್‌ನ ಸ್ಕ್ರೀನ್‌ಶಾಟ್ ವೈರಲ್ ಆಗುತ್ತಿದ್ದಂತೆ ಕನ್ನಡಿಗರ ಉದ್ಯೋಗ ಹಕ್ಕುಗಳಿಗಾಗಿ ನಡೆಯುತ್ತಿರುವ ಅಭಿಯಾನವನ್ನು ಅವಹೇಳನ ಮಾಡಲಾಗಿದೆ ಎಂಬ ಆಕ್ರೋಶ ವ್ಯಕ್ತವಾಯಿತು. ಕರವೇ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಐಟಿ ಉದ್ಯಮಿ ಅರುಣ್ ಜಾವಗಲ್ ಅವರು ಅಧಿಕಾರಿ ಹೇಳಿಕೆಗೆ ತೀವ್ರ ವಿರೋಧ ವ್ಯಕ್ತಪಡಿಸಿದರು. ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರನ್ನು ಟ್ಯಾಗ್ ಮಾಡಿ, ನಿಮ್ಮ ಸರ್ಕಾರದ ಉದ್ಯೋಗಿಯಾಗಿರುವ ಅಧಿಕಾರಿಯೊಬ್ಬರು ಕನ್ನಡಿಗರ ನ್ಯಾಯಯುತ ಅಭಿಯಾನದ ವಿರುದ್ಧ ಈ ರೀತಿ ಪ್ರತಿಕ್ರಿಯಿಸುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು. ಈ ಬೆಳವಣಿಗೆಯ ಬೆನ್ನಲ್ಲೇ ಅಧಿಕಾರಿ ತಮ್ಮ ಪೋಸ್ಟ್ ಅಳಿಸಿದ್ದಾರೆ.

ನೇಮಕಾತಿ ಮಾಹಿತಿ ಕೇಳುವುದೇ ಕೆಲಸಕ್ಕೆ ಅಡ್ಡಿಯೇ, ಐಟಿ ಸೇರಿದಂತೆ ಖಾಸಗಿ ಕಂಪನಿಗಳಲ್ಲಿ ಕನ್ನಡಿಗರಿಗೆ ದೊರೆಯುತ್ತಿರುವ ಉದ್ಯೋಗಾವಕಾಶಗಳ ಕುರಿತು ಮಾಹಿತಿ ಸಂಗ್ರಹಿಸುವುದು ಕರವೇಯ ಆಗ್ರಹ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಕಂಪನಿಗಳಲ್ಲಿರುವ ಒಟ್ಟು ಉದ್ಯೋಗಿಗಳ ಸಂಖ್ಯೆ, ಅವರಲ್ಲಿ ಕನ್ನಡಿಗರ ಪ್ರಮಾಣ, ಕಳೆದ ಮೂರು ವರ್ಷಗಳಲ್ಲಿ ನಡೆದ ನೇಮಕಾತಿ, ನೇಮಕಾತಿ ಮಾನದಂಡಗಳು ಹಾಗೂ ಸ್ಥಳೀಯ ಅಭ್ಯರ್ಥಿಗಳಿಗೆ ನೀಡುತ್ತಿರುವ ಅವಕಾಶಗಳ ಕುರಿತು ಸಂಘಟನೆ ಮಾಹಿತಿ ಕೇಳುತ್ತಿದೆ.

ಈ ಸಂಬಂಧ ಕರವೇ ಪ್ರತಿನಿಧಿಗಳು ವಿವಿಧ ಕಂಪನಿಗಳಿಗೆ ಮನವಿ ಪತ್ರ ಸಲ್ಲಿಸುತ್ತಿದ್ದಾರೆ. ಉದ್ಯೋಗ ನೇಮಕಾತಿಯಲ್ಲಿ ಕನ್ನಡಿಗರಿಗೆ ಸಿಗುತ್ತಿರುವ ಅವಕಾಶಗಳ ಕುರಿತು ಸ್ಪಷ್ಟತೆ ಪಡೆಯುವುದು ಮತ್ತು ಸಂಗ್ರಹಿಸಿದ ಮಾಹಿತಿಯ ಆಧಾರದಲ್ಲಿ ಸರ್ಕಾರದ ಗಮನ ಸೆಳೆಯುವುದು ಸಂಘಟನೆಯ ಉದ್ದೇಶವಾಗಿದೆ. ಕಂಪನಿಗಳು ಮಾಹಿತಿ ನೀಡುವ ಅಥವಾ ನಿರಾಕರಿಸುವ ನಿರ್ಧಾರ ಕೈಗೊಳ್ಳಬಹುದಾದರೂ, ಮಾಹಿತಿ ಕೇಳುವ ಪ್ರಕ್ರಿಯೆಯನ್ನೇ ಕೆಲಸಕ್ಕೆ ಅಡ್ಡಿಪಡಿಸುವಿಕೆ ಎಂದು ಬಿಂಬಿಸುವುದು ಎಷ್ಟು ಸಮಂಜಸ ಎಂಬ ಪ್ರಶ್ನೆ ಎದ್ದಿದೆ.

ಶಾಂತಿಯುತ ಅಭಿಯಾನಕ್ಕೆ ತಪ್ಪು ಚಿತ್ರಣ; ಕಂಪನಿಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಘೋಷಣೆ ಕೂಗಬಾರದು, ಸಂಘರ್ಷಕ್ಕೆ ಇಳಿಯಬಾರದು ಹಾಗೂ ಉದ್ಯೋಗಿಗಳ ಕೆಲಸಕ್ಕೆ ಯಾವುದೇ ರೀತಿಯ ಅಡ್ಡಿಪಡಿಸಬಾರದು ಎಂದು ಕಾರ್ಯಕರ್ತರಿಗೆ ಸೂಚಿಸಲಾಗಿದೆ ಎಂದು ಕರವೇ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ತಿಳಿಸಿದ್ದಾರೆ.

ನವೆಂಬರ್ ತಿಂಗಳಾದ್ಯಂತ ರಾಜ್ಯದ ವಿವಿಧ ಭಾಗಗಳಲ್ಲಿ ಅಭಿಯಾನ ಮುಂದುವರಿಯಲಿದ್ದು, ಈ ವೇಳೆ ಸಂಗ್ರಹಿಸುವ ಮಾಹಿತಿ ಮತ್ತು ಉದ್ಯೋಗಾಕಾಂಕ್ಷಿಗಳ ದೂರುಗಳನ್ನು ಪರಿಶೀಲಿಸಿ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸುವ ಉದ್ದೇಶವಿದೆ.



ಕೇಂದ್ರ ಸರ್ಕಾರವು 'ನ್ಯಾಯಯುತ ಮತ್ತು ಲಾಭದಾಯಕ ಬೆಲೆ'ಯನ್ನು ಪರಿಷ್ಕರಿಸಲು ವಿಳಂಬ ಮಾಡುತ್ತಿರುವುದರ ವಿರುದ್ಧ ಹಾಗೂ ರಾಜ್ಯ ಸರ್ಕಾರವು 'ರಾಜ್ಯ ಸಲಹಾ ಬೆಲೆ'ಯನ್ನು ನಿಗದಿಪಡಿಸುವ ವಿಷಯದಲ್ಲಿ ತಮ್ಮ ಹೋರಾಟವನ್ನು ತೀವ್ರಗೊಳಿಸಲು, ಮೈಸೂರಿನಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಬಳಿ ವಿವಿಧ ರೈತ ಸಂಘಟನೆಗಳಿಗೆ ಸೇರಿದ ರೈತರು ಮಂಗಳವಾರ ಧರಣಿ ನಡೆಸಿದರು.

ವಿದೇಶದಲ್ಲಿ ಉದ್ಯೋಗ ಪಡೆಯಲು ಭಾಷಾ ಕೌಶಲ್ಯ ಮುಖ್ಯ: ಡಾ.ಶರಣಪ್ರಕಾಶ ಪಾಟೀಲ್

ಕಲಬುರಗಿ, ನ. 3: ಜರ್ಮನಿ, ಜಪಾನ್, ಇಟಲಿ ಹಾಗೂ ಅಮೆರಿಕ ಸೇರಿದಂತೆ ವಿವಿಧ ವಿದೇಶಗಳಲ್ಲಿ ಭಾರತೀಯ ನರ್ಸ್‌ಗಳಿಗೆ, ಅರೆವೈದ್ಯಕೀಯ ಪದವೀಧರರಿಗೆ ಅತ್ಯಧಿಕ ಬೇಡಿಕೆ ಹಾಗೂ ಉತ್ತಮ ವೇತನವಿದೆ. ವಿದ್ಯಾರ್ಥಿಗಳು ಇಂಗ್ಲಿಷ್ ಭಾಷೆಯ ಜೊತೆಗೆ ಆಯಾ ದೇಶಗಳ ಭಾಷೆಗಳನ್ನು ಕೂಡ ಕರಗತ ಮಾಡಿಕೊಂಡರೆ, ವಿದೇಶಗಳಲ್ಲಿ ನೇರ ಉದ್ಯೋಗಾವಕಾಶ ಪಡೆಯಲು ಇದು ಬಹಳ ಸಹಕಾರಿಯಾಗಿದೆ ಎಂದು ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಹೇಳಿದರು.

ನರ್ಸಿಂಗ್ ನೋಂದಣಿ ಪ್ರಕ್ರಿಯೆ ಸಂಪೂರ್ಣ ಆನ್‌ಲೈನ್: ರಾಜ್ಯದ ನರ್ಸಿಂಗ್ ಹಾಗೂ ವೈದ್ಯ ಕೀಯ ಶಿಕ್ಷಣ ವ್ಯವಸ್ಥೆಯಲ್ಲಿ ಸಂಪೂರ್ಣ ಪಾರದರ್ಶಕತೆ ತರುವ ನಿಟ್ಟಿನಲ್ಲಿ, ನರ್ಸಿಂಗ್ ನೋಂದಣಿ ಮತ್ತು ನವೀಕರಣ ಪ್ರಕ್ರಿಯೆಗಳನ್ನು ಸಂಪೂರ್ಣವಾಗಿ ಆನ್‌ಲೈನ್ ಮೂಲಕ



ನಡೆಸಲು ಕ್ರಮ ಕೈಗೊಳ್ಳಲಾಗಿದೆ. ಹಿಂದೆ ವಿದ್ಯಾರ್ಥಿಗಳು ರಿಜಿಸ್ಟ್ರೇಷ ನ್‌ಗಾಗಿ ಬೆಂಗಳೂರಿಗೆ ಬಂದು ಸಾಲಿನಲ್ಲಿ ನಿಂತು ಪರದಾಡುವ ಸ್ಥಿತಿ ಇತ್ತು. ಈ ಎಲ್ಲಾ ತಾಂತ್ರಿಕ ಅಡಚಣೆಗಳನ್ನು ತಪ್ಪಿಸಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಮನೆಯಲ್ಲೇ ಕುಳಿತು ಆನ್‌ಲೈನ್ ಮೂಲಕ ಸುಲಭವಾಗಿ ನೋಂದಣಿ ಮಾಡಿಕೊಳ್ಳಲು ಅನುಕೂಲ ಕಲ್ಪಿಸಲಾಗಿದೆ ಎಂದರು.

ವೈದ್ಯಕೀಯ ಶಿಕ್ಷಣದಲ್ಲಿ ದೇಶದಲ್ಲೇ ಕರ್ನಾಟಕ ನಂಬರ್ ಒನ್: ಕರ್ನಾಟಕವು ವೈದ್ಯಕೀಯ ಮತ್ತು ಅರೆವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ಇಡೀ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದೆ. ರಾಜ್ಯದಲ್ಲಿ ಅತಿ ಹೆಚ್ಚು ವೈದ್ಯಕೀಯ ಕಾಲೇಜುಗಳು, ಪಿ.ಜಿ. ಹಾಗೂ ಎಂಬಿಬಿಎಸ್ ಸೀಟುಗಳು (15,000ಕ್ಕೂ ಅಧಿಕ)ಲಭ್ಯವಿವೆ. ಈ ನಾಯಕತ್ವವನ್ನು ಕೇವಲಸಂಖ್ಯೆಯಲ್ಲಿ ಮಾತ್ರವಲ್ಲದೆ, ಗುಣಮಟ್ಟ ದಲ್ಲೂ ಕಾಯ್ದುಕೊಳ್ಳಲು ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ತು ಕುಲಸಚಿವ ಶ್ರೀಕಾಂತ ಪುಲಾರಿ ಮಾತನಾಡಿ, ಇನ್ನು ಮುಂದೆ ನರ್ಸ್‌ಗಳು ಪ್ರಾಥಮಿಕ ನೋಂದಣಿ, ನವೀಕರಣ, ಎನ್‌ಒಸಿ ಹಾಗೂ ಇತರೆ ಸೇವೆಗಳನ್ನು ಮೊಬೈಲ್ ಆ್ಯಪ್ ಮೂಲಕವೇ ಮನೆಯಲ್ಲಿ ಪಡೆಯಬಹುದು. ಆಧಾರ್ ಆಧಾರಿತ ಬಯೋಮೆಟ್ರಿಕ್ ಮತ್ತು ಡಿಜಿ ಲಾಕರ್ ತಂತ್ರಜ್ಞಾನದಡಿ ಪ್ರಮಾಣಪತ್ರಗಳನ್ನು ಪಡೆದುಕೊಳ್ಳುವ ಸುಧಾರಿತ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಬೆಂಗಳೂರಿಗೆ ಅಲೆಯುವುದನ್ನು ತಪ್ಪಿಸಿ, ರಾಜ್ಯದ ಲಕ್ಷಾಂತರ ನರ್ಸ್‌ಗಳಿಗೆ ಅನುಕೂಲ ಕಲ್ಪಿಸುವ ಈ ಡಿಜಿಟಲ್ ಪ್ಲಾಟ್‌ಫಾರ್ಮ್‌ಗೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ ಎಂದರು.

ಎನ್‌ಆರ್‌ಟಿಎಸ್ ನರ್ಸಿಂಗ್ ರಿಜಿಸ್ಟ್ರೇಷನ್ ಟ್ರ್ಯಾಕಿಂಗ್ ಸಿಸ್ಟಮ್ ಜಾರಿಗೆ ಬಂದಿದ್ದು, ಇದು ಕೇಂದ್ರ ಸರ್ಕಾರದ ಯೋಜನೆಯಾಗಿದೆ. ಇದರಿಂದ ದೇಶ ಅಥವಾ ವಿದೇಶದಲ್ಲೂ ಪ್ರಾಕ್ಟೀಸ್ ಮಾಡಲು ಅರ್ಹತೆ ಸಿಗುತ್ತದೆ. ನರ್ಸಿಂಗ್ ಸಿಬ್ಬಂದಿ ಕೌನ್ಸಿಲ್‌ಗೆ ಬರುವುದನ್ನು ತಪ್ಪಿಸಿ, ಎಲ್ಲರಿಗೂ ಸುಲಭವಾಗಿ ಆನ್‌ಲೈನ್ ಸೇವೆಗಳನ್ನು ಒದಗಿಸುವುದು ನಮ್ಮ ಸಚಿವರ ಹಾಗೂ ಕೌನ್ಸಿಲ್ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಸ್ವಾತಂತ್ರ್ಯ ಹೋರಾಟಗಾರ ದಿ.ಮಹಾದೇವಪ್ಪ ಕಡೇಚೂರ್ ನಿವಾಸಕ್ಕೆ ಬಿಜೆಪಿ ಶಾಸಕ ಸುನಿಲ್ ಕುಮಾರ್ ಭೇಟಿ, ಪುಷ್ಪಾರ್ಚನೆ

ಕಲಬುರಗಿ, ನ.03– ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಹಾಗೂ ಹೈದರಾಬಾದ್ ಸಂಸ್ಥಾನ ವಿಮೋಚನ ಹೋರಾಟಗಾರ ದಿ.ಮಹಾದೇವಪ್ಪ ಕಡೇಚೂರ್ ಅವರ ನಿವಾಸಕ್ಕೆ ಭೇಟಿ ನೀಡಿ ಬಿಜೆಪಿ ಶಾಸಕ ವಿ ಸುನಿಲ್ ಕುಮಾರ್ ಕಾರ್ಕಳ ಅವರು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಿದರು.



ಕಲಬುರಗಿಗೆ ಸೋಮವಾರ (ನ. 2 ರಂದು) ಶಾಸಕ ಸುನಿಲ್ ಕುಮಾರ್ ಭೇಟಿ ನೀಡಿದ್ದರು. ಸ್ವಾತಂತ್ರ್ಯ ಹೋರಾಟಗಾರರು ಮತ್ತು ಬಿಜೆಪಿಯ ಹಿರಿಯ ನಾಯಕರಾಗಿದ್ದ ಮಹಾದೇವಪ್ಪ ಕಡೇಚೂರ್ ಅವರೊಂದಿಗಿನ ಒಡನಾಟವನ್ನು ಸ್ಮರಿಸಿದ ಅವರು ಕಡೇಚೂರು ಬರೆದ ಕೃತಿಯನ್ನು ಯುವ ಮೋರ್ಚಾದ ಅಧ್ಯಕ್ಷನಾಗಿದ್ದ ವೇಳೆ ಕಲಬುರಗಿಯ ಸ್ವಾಮಿ ನಾರಾಯಣ ಶಾಲೆಯಲ್ಲಿ ಬಿಡುಗಡೆ ಮಾಡಿದ್ದು ಹಾಗೂ ರಾಜ್ಯದ ಕನ್ನಡ ಮತ್ತು ಸಂಸ್ಕೃತಿ ಖಾತೆಯ ಸಚಿವನಾಗಿದ್ದ ವೇಳೆ 2022 ರಲ್ಲಿ ಕಡೇಚೂರ್ ಅವರಂತಹ ಮಹನೀಯರಿಗೆ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ ಗೌರವಿಸಿದ್ದು ನನಗೆ ಧನ್ಯತೆಯ ಕ್ಷಣವಾಗಿದೆ. ಅವರ ಆದರ್ಶ ನಮ್ಮಂತಹ ಕಾರ್ಯಕರ್ತರಿಗೆ ಸ್ಫೂರ್ತಿ ಮತ್ತು ಪ್ರೇರಣೆ.

ನಂಬಿದ ಮೌಲ್ಯಗಳಿಗೆ ಶಕ್ತಿ ತುಂಬುವ ಕೆಲಸ ಕಾರ್ಯಕರ್ತರಿಂದ ಆಗ ಬೇಕಾಗಿದೆ. ಮಹಾದೇವಪ್ಪ ಕಡೇಚೂರ್ ಅವರ ಕುರಿತಾದ "ಅನನ್ಯ ಮಹಾದೇವ" ಅಭಿನಂದನಾ ಗ್ರಂಥವು ಅವರ ಸಾಧನೆಯನ್ನು ಹೇಳುವ ಮತ್ತು ಚಿರಕಾಲ ದಾಖಲೆಯಾಗಿ ಉಳಿಯಬಲ್ಲ ಕೃತಿಯಾಗಿದೆ ಎಂದು ಸುನಿಲ್ ಕುಮಾರ್ ಹೇಳಿದರು.

ಡಾ. ರಾಜೇಶ್ ಕಡೇಚೂರ್, ದಿನೇಶ್ ಕಡೇಚೂರ್, ಮಹಾನಗರ ಪಾಲಿಕೆ ಉಪ ಆಯುಕ್ತರಾದ ಪ್ರಮೀಳಾಪರ್ಲೆ ಮತ್ತಿತರರು ಹಾಜರಿದ್ದರು.

ಹೆಚ್ಚಿನ ಪಾಸ್ ಮುದ್ರಿಸಿಲ್ಲ, ಟಿಕೆಟ್ ಖರೀದಿಸಿ ಪಕ್ಷದ ಪದಾಧಿಕಾರಿಗಳಿಗೆ ಹಂಚಲಾಗಿದೆ: ಕೆ. ಎಂ. ಶಿವಲಿಂಗೇಗೌಡ

ಹಾಸನ, ನ.4: ಹಾಸನಾಂಬ ದೇವಿ ದರ್ಶನ ಮತ್ತು ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಯಶಸ್ಸಿಗೆ ದುಡಿಯುತ್ತಿರುವ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳಿಗೆ ಸುಗಮ ದರ್ಶನ ವ್ಯವಸ್ಥೆ ಕಲ್ಪಿಸಲು 500 ಗೋಲ್ಡನ್ ಟಿಕೆಟ್‌ಗಳನ್ನು ಖರೀದಿಸಿ ಜಿಲ್ಲಾಧ್ಯಕ್ಷ ಜಿ.ಬಿ.ಶಶಿಧರ್‌ಗೆ ಹಸ್ತಾಂತರಿಸಲಾಗಿದೆ ಎಂದು ಅಬಕಾರಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ. ಎಂ. ಶಿವಲಿಂಗೇಗೌಡ ಹೇಳಿದ್ದಾರೆ.

ಹಾಸನದಲ್ಲಿ ಮಂಗಳವಾರ ದೇವಸ್ಥಾನದ ಟಿಕೆಟ್ ಕೌಂಟರ್‌ನಲ್ಲಿ ಟಿಕೆಟ್‌ಗಳನ್ನು ಖರೀದಿಸಿ ಹಸ್ತಾಂತರಿಸಿದ ಬಳಿಕ ಮಾಧ್ಯಮದ ಜೊತೆ ಮಾತನಾಡಿದ ಸಚಿವ ಶಿವಲಿಂಗೇಗೌಡ ಅವರು ಪಾಸ್ ವಿತರಣೆ ವಿಚಾರವಾಗಿ ಯಾವುದೇ ರಾಜಕೀಯ ನಡೆಸಿಲ್ಲ. ಪಕ್ಷದ ದೃಷ್ಟಿಯಿಂದ ಉತ್ಸವವನ್ನು ನಡೆಸುತ್ತಿಲ್ಲ. ಹಾಗಾಗಿ ಪಕ್ಷದ ಸದಸ್ಯರಿಗೆ ಅನುಕೂಲ ಮಾಡಿ ಕೊಡುತ್ತಿದ್ದಾರೆ ಎಂಬುದು ಸರಿಯಲ್ಲ ಎಂದು ಸ್ಪಷ್ಟಪಡಿಸಿದರು.

ಈಗಾಗಲೇ ಜಿಲ್ಲಾಡಳಿತವು ಸಚಿವರಿಗೆ, ಸಂಸದರಿಗೆ, ಶಾಸಕರಿಗೆ,



ವಿಧಾನ ಪರಿಷತ್ ಸದಸ್ಯರಿಗೆ ಸೇರಿದಂತೆ ಮತ್ತಿತರ ಗಣ್ಯ ವ್ಯಕ್ತಿಗಳಿಗೆಂದು 20 ಸಾವಿರ ಪಾಸ್‌ಗಳನ್ನು ಮುದ್ರಿಸಿದ್ದು, ಬೆಳಿಗ್ಗೆ 8 ರಿಂದ 6 ರವರೆಗೆ ದೇವಿ ದರ್ಶನದ ವ್ಯವಸ್ಥೆಯನ್ನು ಮಾಡಿದೆ.

ಪ್ರಸ್ತುತ ಪಾಸ್‌ಗಳಿಗೆ ಹೆಚ್ಚು ಬೇಡಿಕೆ ವ್ಯಕ್ತವಾಗುತ್ತಿದೆ. ಹಾಗೆಂದು ಹಾಸನಾಂಬ ದೇವಿ ದರ್ಶನದ ಪಾಸ್‌ಗಳನ್ನು ಹೆಚ್ಚು ಮುದ್ರಿಸಿದರೆ ಧರ್ಮ ದರ್ಶನದ ಸಾಲಿನಲ್ಲಿ ಬರುವ ಭಕ್ತರಿಗೆ ತೊಂದರೆ ಯಾಗುತ್ತದೆ.

ಹಾಗಾಗಿ ಉತ್ಸವಕ್ಕಾಗಿ ದುಡಿದ ಪಕ್ಷದ ಕಾರ್ಯಕರ್ತರಿಗೆ 1 ಸಾವಿರ ರೂ. ದರದ ಟಿಕೆಟ್‌ಗಳನ್ನು ಖರೀದಿಸಿ ಹಂಚಿಕೆ ಮಾಡಲು ನಿರ್ಧರಿಸಲಾಯಿತು. ಪಕ್ಷದ ಜಿಲ್ಲಾಧ್ಯಕ್ಷರು ಪದಾಧಿಕಾರಿಗಳಿಗೆ ಹಂಚಿಕೆ ಮಾಡುತ್ತಾರೆ ಎಂದರು.

ಹೆಣ್ಣಾನೆ ನಿಗೂಢ ಸಾವು, ಗೋಪಾಲಸ್ವಾಮಿ ಬೆಟ್ಟದ ಬಳಿ ಕಳೇಬರ ಪತ್ತೆ

ಚಾಮರಾಜನಗರ, ನ.3: ಕಾಡಿನ ಮಡಿಲಲ್ಲಿ ಹೊಸ ಜೀವವೊಂದಕ್ಕೆ ಜನ್ಮ ನೀಡಬೇಕಿದ್ದ ತಾಯಿ ಆನೆಯೊಂದು ಅನಿರೀಕ್ಷಿತವಾಗಿ ಶವವಾಗಿ ಬಿದ್ದಿರುವ ಮನಕಲಕುವ ಘಟನೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿ ಬೆಳಕಿಗೆ ಬಂದಿದೆ. ಮೇಲ್ನೋಟಕ್ಕೆ ನಿಗೂಢ ವಾಗಿದ್ದ ಈ ಸಾವಿನ ಬೆನ್ನುಬಿದ್ದ ಅರಣ್ಯ ಅಧಿಕಾರಿಗಳಿಗೆ ಮತ್ತು ವೈದ್ಯರಿಗೆ ಮರಣೋತ್ತರ ಪರೀಕ್ಷೆಯ ವೇಳೆ ನಂಬಲಾಗದ ಸಂಗತಿಯೊಂದು ತಿಳಿದುಬಂದಿದೆ.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಅರಣ್ಯ ವ್ಯಾಪ್ತಿಯ ಗೋಪಾಲಸ್ವಾಮಿ ಬೆಟ್ಟ ವಲಯದ ಖಾಸಗಿ ಜಮೀನಿನಲ್ಲಿ ಈ ಕಳೇಬರ ಪತ್ತೆಯಾಗಿದೆ. ಇದು ಅರಣ್ಯದ ಗಡಿಯಿಂದ 150 ಮೀಟರ್ ದೂರದಲ್ಲಿದ್ದು, ಮೃತಪಟ್ಟ ಹೆಣ್ಣು ಕಾಡಾನೆಗೆ ಸುಮಾರು 35 ವರ್ಷ ವಯಸ್ಸಾಗಿತ್ತು ಎನ್ನಲಾಗಿದೆ. ಅದರಲ್ಲೂ, ಅರಣ್ಯ ಇಲಾಖೆಯ ಪಶುವೈದ್ಯರಾದ ಡಾ. ಮಿರ್ಜಾ



ವಾಸಿಂ ಅವರು ಸ್ಥಳದಲ್ಲೇ ಮರಣೋತ್ತರ ಪರೀಕ್ಷೆ ನಡೆಸಿದಾಗ ಆನೆ ಗರ್ಭಿಣಿಯಾಗಿರುವುದು ಮತ್ತು ಅದರ ಹೊಟ್ಟೆಯಲ್ಲಿ ಮರಿ ಇರುವುದು ದೃಢಪಟ್ಟಿದೆ. ಅದರಂತೆ, ತಾಯಿ ಆನೆಯೊಂದಿಗೆ ಗರ್ಭದಲ್ಲಿದ್ದ ಮರಿಯೂ ಸಹ ಸಾವನ್ನಪ್ಪಿದೆ. ಆದರೆ, ಮರಿಯ ವಯಸ್ಸಿನ ಕುರಿತು ಪ್ರಾಥಮಿಕ ಮಾಹಿತಿಯಲ್ಲಿ ವ್ಯತ್ಯಾಸಗಳಿದ್ದು, ಅಧಿಕೃತ ಸ್ಪಷ್ಟನೆ ಇನ್ನಷ್ಟೇ ಹೊರಬರಬೇಕಿದೆ.

ಪ್ರಾಥಮಿಕ ತನಿಖೆಯ ಪ್ರಕಾರ, ಎರಡು ಬಲಶಾಲಿ ಕಾಡಾನೆಗಳ ನಡುವೆ ನಡೆದ ಭೀಕರ ಕಾದಾಟ ಅಥವಾ ಮಿಲನದ ಸಂದರ್ಭದಲ್ಲಿ ಬೆನ್ನಿಗೆ ತೀವ್ರವಾಗಿ ಮೂಳೆ ಮುರಿದಿದ್ದರಿಂದ ಈ ಸಾವು ಸಂಭವಿಸಿರಬಹುದು ಎಂದು ಅರಣ್ಯ ಇಲಾಖೆ ಸಿಬ್ಬಂದಿ ಶಂಕಿಸಿದ್ದಾರೆ.

ಆದರೆ, ಮರಣೋತ್ತರ ಪರೀಕ್ಷೆಯ ಪೂರ್ಣ ವರದಿ ಬಂದ ನಂತರವಷ್ಟೇ ಸಾವಿಗೆ ನಿಖರವಾದ ಕಾರಣ ತಿಳಿಯಲಿದೆ. ಇನ್ನು ಘಟನಾ ಸ್ಥಳಕ್ಕೆ ಗೋಪಾಲಸ್ವಾಮಿ ಬೆಟ್ಟ ವಲಯದ ಆರ್‌ಎಫ್‌ಒ ಸತೀಶ್ ಕುಮಾರ್, ಎಸಿಎಫ್ ಶುಭಂ ಸಿಂಗ್ ತನ್ವರ್ ಹಾಗೂ ಪಶುವೈದ್ಯರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಎನ್‌ಎಸ್‌ಎಸ್‌ಕೆ ಕಾರ್ಖಾನೆಯಲ್ಲಿ ಕಬ್ಬು ನುರಿಸುವಿಕೆಗೆ ಚಾಲನೆ



ಬೀದರ, ನ. 3: ಬೀದರ್ ತಾಲ್ಲೂಕಿನ ಜನವಾಡ ಸಮೀಪದ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ಪ್ರಸಕ್ತ ಹಂಗಾಮಿನ ಕಬ್ಬು ನುರಿಸುವಿಕೆಗೆ ಚಾಲನೆ ನೀಡಲಾಯಿತು. 2026–27ನೇ ಹಂಗಾಮಿನಲ್ಲಿ ಕಾರ್ಖಾನೆ 4.5 ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸುವ ಗುರಿ ಹೊಂದಿದೆ ಎಂದು ಕಬ್ಬು ನುರಿಕೆಗೆ ಚಾಲನೆ ನೀಡಿದ ಕಾರ್ಖಾನೆಯ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ತಿಳಿಸಿದರು.

ನಮ್ಮ ಸಕ್ಕರೆ ಕಾರ್ಖಾನೆಯನ್ನೇ ನಂಬಿಕೊಂಡು ಸಾವಿರಾರು ರೈತರು ಕಬ್ಬು ಬೆಳೆದಿದ್ದು, ನಮ್ಮ ಕಾರ್ಖಾನೆಯ ವತಿಯಿಂದ ಯಾರಿಗೂ ಅನ್ಯಾಯ ವಾಗದಂತೆ ನೋಡಿಕೊಂಡು ಬಂದಿರುವ ನಮ್ಮ ಕಾರ್ಖಾನೆ ಮುಂದೆಯೂ ರೈತರಿಗೆ ನ್ಯಾಯ ಒದಗಿಸಲಿದೆ. ಆದ್ದರಿಂದ ಜಿಲ್ಲೆಯ ರೈತರು ಕಾರ್ಖಾನೆಗೆ ಕಬ್ಬು ಪೂರೈಸಿ ಸಹಕರಿಸಬೇಕು ಎಂದು ಮನವಿ ಮಾಡಿದರು.

ತಡೋಳಾದ ರಾಜಶೇಖರ ಶಿವಾಚಾರ್ಯ ಹಾಗೂ ಹುಲಸೂರಿನ ಶಿವಾನಂದ ಸ್ವಾಮೀಜಿ ಅವರು, ಮಾಜಿ ಸಚಿವ ದಿ. ಗುರುಪಾದಪ್ಪ ನಾಗಮಾರಪಳ್ಳಿ ಅವರು ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ಸ್ಥಾಪನೆ ಸೇರಿದಂತೆ ಜಿಲ್ಲೆಯ ಅಭಿವೃದ್ಧಿಗೆ ಬಹಳಷ್ಟು ಕೊಡುಗೆ ನೀಡಿದ್ದರು ಎಂದು ಸ್ಮರಿಸಿದರು.

ಕಬ್ಬಿಗೆ ಬೆಂಬಲ ಬೆಲೆಗೆ ನಿಲ್ಲದ ಆಗ್ರಹ

ಎತ್ತಿನ ಬಂಡಿಗಳಿಂದ ಹೆದ್ದಾರಿ ತಡೆದು ಕಬ್ಬು ಬೆಳೆಗಾರರ ಪ್ರತಿಭಟನೆ

ಕಲಬುರಗಿ, ನ. 3: ಕಬ್ಬಿಗೆ ಪ್ರತಿ ಟನ್‌ಗೆ 5,500 ಬೆಂಬಲ ಬೆಲೆ ನಿಗದಿಪಡಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಚೂನಪ್ಪ ಪೂಜಾರಿ ಬಣದ ಕಾರ್ಯಕರ್ತರು ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಚೌಡಾಪುರದಲ್ಲಿ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಹೋರಾಟ ನಡೆಸಿದರು.

ಹೆದ್ದಾರಿಯಲ್ಲಿ ಟೆಂಟ್ ಹಾಕಿ, ಎತ್ತಿನ ಬಂಡಿಗಳು ಹಾಗೂ ಟ್ರ್ಯಾಕ್ಟರ್ ಟ್ರಾಲಿಗಳನ್ನು ನಿಲ್ಲಿಸಿ ಧರಣಿ ನಡೆಸಿದ ರೈತರು, ಸರ್ಕಾರದ ಧೋರಣೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಸಂತೋಷ ಮಲಗೊಂಡ, ಕಳೆದ ಮೂರು ದಿನಗಳಿಂದ ರಸ್ತೆ ಬದಿಯಲ್ಲಿ ಕುಳಿತು ಹೋರಾಟ ನಡೆಸುತ್ತಿದ್ದರೂ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಅಧಿಕಾರಿಗಳು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ರೈತರ ಸಮಸ್ಯೆಗಳನ್ನು



ಕಲಬುರಗಿ ಜಿಲ್ಲೆಯ ಚೌಡಾಪುರದ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಬ್ಬು ಬೆಳೆಗಾರ ರೈತರು ಕಬ್ಬಿನ ಬೆಂಬಲ ಬೆಲೆಯೂ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಹೆದ್ದಾರಿಯಲ್ಲಿ ಎತ್ತು ಬಂಡಿಗಳನ್ನು ನಿಲ್ಲಿಸಿ ಪ್ರತಿಭಟನೆ ನಡೆಸಿದರು.

ಆಲಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಂಘದ ಕಾರ್ಯಾಧ್ಯಕ್ಷ ಸಿದ್ದರಾಮ ದಣ್ಣೂರ ಮಾತನಾಡಿ, ಭೀಕರ ಬರಗಾಲದಿಂದ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ.

ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಪ್ರತಿ ಟನ್‌ಗೆ 5,500 ಏಕರೂಪ ಬೆಲೆ ನಿಗದಿಪಡಿಸಿ ಸಕ್ಕರೆ ಕಾರ್ಖಾನೆಗಳನ್ನು ಆರಂಭಿಸಬೇಕು. ಇಲ್ಲವಾದರೆ ಕಾರ್ಖಾನೆಗಳ ಕಾರ್ಯಾರಂಭಕ್ಕೂ ತೊಂದರೆಯಾಗಲಿದೆ' ಎಂದು ಎಚ್ಚರಿಕೆ ನೀಡಿದರು.

ರೈತರ ರಸ್ತೆ ಬಂದ್ ಹಾಗೂ ಪ್ರತಿಭಟನೆಯಿಂದ ಚೌಡಾಪುರದಲ್ಲಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗಿ ಸಾರ್ವಜನಿಕರ ಪರದಾಡಬೇಕಾಯ್ತು. ಸ್ಥಳದಲ್ಲಿ ಪೊಲೀಸರು ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದರು.

ಗೋಕರ್ಣಕ್ಕೆ ಪ್ರವಾಸಕ್ಕೆಂದು ಬಂದವರು ಶವವಾಗಿ ತೇರಳಿದ ದುರಂತ

ಗೋಕರ್ಣ, ನ.03: ಪ್ರತಿದಿನ ಗೋಕರ್ಣಕ್ಕೆ ಸಾವಿರಾರು ಪ್ರವಾಸಿಗರು, ಭಕ್ತರು ಆಗಮಿಸುತ್ತಾರೆ. ಆದರೆ ಪ್ರವಾಸಕ್ಕೆಂದು ಬರುವವರು ಯಾವುದೊ ಹೊಟೇಲ್ ಹಾಗೂ ಹೋಮ್ ಸ್ಟೇಗಳಲ್ಲಿ ಉಳಿದುಕೊಂಡು ಸಮುದ್ರದಲ್ಲಿ ಈಜಲು ತೆರಳಿ ಸಾವನ್ನಪ್ಪುವ ಸಂಖ್ಯೆ ಆಗಾಗ ಕಂಡುಬರುತ್ತಿದೆ.

ಆದರೆ ಕಳೆದ ಶನಿವಾರ ಬೆಂಗಳೂರಿನ ಬೆಳ್ಳಂದೂರಿನಲ್ಲಿರುವ ಆಲೋರಿಕಾ ಇಕೋಸ್ಪೇಸ್ ಕಂಪನಿಯ 16 ಉದ್ಯೋಗಿಗಳ ತಂಡವು ಸಂಜೆ ಗೋಕರ್ಣಕ್ಕೆ ಪ್ರವಾಸಕ್ಕೆ ಬಂದು, ದುಬ್ಬಣಶಿ ಬೀಚ್‌ನಲ್ಲಿರುವ ಕೋಜೆ ರೆಸಾರ್ಟ್‌ನಲ್ಲಿ ವಾಸ್ತವ್ಯ ಹೂಡಿತ್ತು. ಮಾರನೇ ದಿನ ಭಾನುವಾರ ಬೆಳಿಗಿನ ಸಮಯದಲ್ಲಿ ಯವರು ಬೀಚ್‌ನಲ್ಲಿ ಈಜಾಡಲು ತೆರಳಿ ಅಲೆಗಳ ರಭಸಕ್ಕೆ ಕೊಚ್ಚಿಹೋಗುತ್ತಿದ್ದರು. ತಕ್ಷಣ ಸ್ಥಳೀಯ ಮೀನುಗಾರರು ಇಬ್ಬರನ್ನು ರಕ್ಷಿಸಲು ಮಾತ್ರ ಸಾಧ್ಯವಾಯಿತು.

ಕೆಲ ಸಮಯದಲ್ಲಿಯೇ ಇಬ್ಬರ ಮೃತದೇಹಗಳು ಪತ್ತೆಯಾದವು. ಆದರೆ ಇನ್ನೊಂದು ಮೃತದೇಹ ಸೋಮವಾರ ಪತ್ತೆಯಾದವು.



ಈ ದುರ್ಘಟನೆಯಲ್ಲಿ ಬೆಂಗಳೂರು ನಿವಾಸಿ ಶೋಭಾ ದಾಸ್ (22), ಮಹಮದ್ ಅಕ್ರಮ್, ವಿಶ್ವ ಎ.ಕೆ.(24) ಇವರೇ ಸಾವನ್ನಪ್ಪಿದ ಪ್ರವಾಸಿಗರಾಗಿದ್ದಾರೆ. ನಿಶಾಂತ್ ಡಿ.ವಿ., ಮಹಮದ್ ಖಾಸಿಂ ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ. ಹೀಗೆ ಹಲವರು ಈಜಾಡಲು ಪ್ರವಾಸಕ್ಕೆ ಬಂದು ತಮ್ಮ ಅಮೂಲ್ಯ ಜೀವವನ್ನು ಕಳೆದುಕೊಳ್ಳುತ್ತಿದ್ದಾರೆ.

ಗಡಿಯಲ್ಲಿ ಕನ್ನಡಮಯ ವಾತಾವರಣ ನಿರ್ಮಾಣ ಅಗತ್ಯ: ಎಸಿ ಪ್ರಕಾಶ ಕುದರಿ



ಬಸವಕಲ್ಯಾಣ, ನ. 3: ಈ ತತಾಲ್ಲೂಕು ಮಹಾರಾಷ್ಟ್ರದ ಗಡಿಯಲ್ಲಿರುವುದರಿಂದ ಅನ್ಯ ಭಾಷೆಗೆ ಆಸ್ಪದ ನೀಡದೆ ಕನ್ನಡ ವಾತಾವರಣ ನಿರ್ಮಾಣಕ್ಕೆ ಪ್ರಯತ್ನಿಸುವ ಅಗತ್ಯವಿದೆ ಎಂದು ಉಪ ವಿಭಾಗಾಧಿಕಾರಿ ಪ್ರಕಾಶ ಕುದರಿ ಹೇಳಿದರು.

ನಗರದ ತೇರು ಮೈದಾನದಲ್ಲಿನ ಸಭಾ ಭವನದಲ್ಲಿ ನಡೆದ ತಾಲ್ಲೂಕು ಆಡಳಿತದಿಂದ ಕರ್ನಾಟಕ ರಾಜ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ತಾಲ್ಲೂಕಿನ ಅಂಚಿನಲ್ಲಿರುವ ಅನೇಕ ಗ್ರಾಮಗಳಲ್ಲಿ ಹಾಗೂ ನಗರದಲ್ಲಿ ಅನ್ಯ ಭಾಷೆಯ ಫಲಕಗಳು ಎದ್ದು ಕಾಣುತ್ತಿವೆ. ಆದ್ದರಿಂದ ನಗರಸಭೆ ಆಯುಕ್ತರು ಹಾಗೂ ತಾಲ್ಲೂಕು ಪಂಚಾಯಿತಿ ಇಒ ಮತ್ತು ತಹಶೀಲ್ದಾರರು ಎಲ್ಲೆಡೆ ಶೇ 60 ರಷ್ಟು ಕನ್ನಡ ಬಳಕೆ ಆಗುವಂತೆ ಕ್ರಮ ತೆಗೆದುಕೊಳ್ಳಬೇಕು ಎಂದರು.

ಸಾಧಕರಾದ ಮಾರುತಿ ಪೂಜಾರಿ ಬಗದೂರಿ (ಸಂಗೀತ) ವೀರಶೆಟ್ಟಿ ಯರಂಡಗೆ ಬೇಲೂರು (ಮಾಧ್ಯಮ) ರಾಜಕುಮಾರ ಮುಡಬಿಕರ್ ತ್ರಿಪುರಾಂತ (ಕನ್ನಡಪರ ಸಂಘಟನೆ) ಸಿದ್ಧಾರ್ಥ ಪೋಸ್ತೆ (ಶಿಕ್ಷಣ) ಡಾ.ಕ್ಷಮಾ ಟಿ. ಎಸ್ (ವೈದ್ಯಕೀಯ) ಅರ್ಜುನ ಜಲ್ದೆ (ಜಾನಪದ) ಉಜ್ವಲ ಸೂರ್ಯವಂಶಿ ಶಿರಗೂರ (ಸಂಘ ಸಂಸ್ಥೆ) ಜಯಪ್ರಕಾಶ (ಯೋಗ) ಮಲ್ಲಿಕಾರ್ಜುನ (ಸಾಹಿತ್ಯ) ಮಂಜುನಾಥ (ಕ್ರೀಡೆ) ಶರೀಫ ಪಟೇಲ್ (ಸಮಾಜ ಸೇವೆ) ಚಾಂಗುನೆಬಾಯಿ ತಡೋಳಾ (ಇತರೆ) ಇವರಿಗೆ ಪ್ರಮಾಣಪತ್ರ ನೀಡಿ ಸನ್ಮಾನಿಸಲಾಯಿತು.

ಡಿ.15ರ ಬಳಿಕ ಚುನಾವಣೆ ವೇಳಾಪಟ್ಟಿ ಪ್ರಕಟ ಸಾಧ್ಯತೆ: ಜಿಪಂ, ತಾಪಂ ಚುನಾವಣೆಗೆ ಎಸ್‌ಐಆರ್ ಹಿಂದಿನ ಮತದಾರರ ಪಟ್ಟಿ ಬಳಕೆ–ಖಂಡ್ರೆ

ಬೀದರ್, ನ. 3: ರಾಜ್ಯದಲ್ಲಿ ಬಹುದಿನಗಳಿಂದ ಮುಂದೂಡಲ್ಪಡುತ್ತಿರುವ ಜಿಲ್ಲಾ ಪಂಚಾಯಿತಿ (ಜಿಪಂ) ಮತ್ತು ತಾಲೂಕು ಪಂಚಾಯಿತಿ(ತಾಪಂ) ಚುನಾವಣೆ ನಡೆಸಲು ರಾಜ್ಯ ಸರ್ಕಾರ ಸಿದ್ಧತೆ ಚುರುಕುಗೊಳಿಸಿದೆ. ಈ ನಡುವೆ ಕೇಂದ್ರ ಚುನಾವಣಾ ಆಯೋಗದ ವಿಶೇಷ ತೀವ್ರ ಪರಿಷ್ಕರಣೆ(ಎಸ್‌ಐಆರ್) ಪ್ರಕ್ರಿಯೆ ಪೂರ್ಣಗೊಂಡ ನಂತರ ಸಿದ್ಧವಾಗುವ ಹೊಸ ಮತದಾರರ ಪಟ್ಟಿಯ ಬದಲಿಗೆ, ಪರಿಷ್ಕರಣೆಯ ಹಿಂದಿನ ಮತದಾರರ ಪಟ್ಟಿಯನ್ನೇ ಆಧಾರವಾಗಿಟ್ಟುಕೊಂಡು ಜಿಪಂ ಮತ್ತು ತಾಪಂ ಚುನಾವಣೆ ನಡೆಸುವ ಸಾಧ್ಯತೆಗಳ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆ.

ಈ ಕುರಿತು ನವೆಂಬರ್ 5ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾನೂನಿನಲ್ಲಿ ಹಿಂದಿನ ಮತದಾರರ ಪಟ್ಟಿಯನ್ನು ಬಳಸಿಕೊಂಡು ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಅವಕಾಶವಿದೆ. ಹೀಗಾಗಿ ಎಸ್‌ಐಆರ್ ಪ್ರಕ್ರಿಯೆಯಿಂದಾಗಿ ಚುನಾವಣೆ ಮತ್ತಷ್ಟು ವಿಳಂಬವಾಗದಂತೆ ಕ್ರಮ ಕೈಗೊಳ್ಳುವ ಉದ್ದೇಶ ಸರ್ಕಾರಕ್ಕಿದೆ ಎಂಬ ಸುಳಿವು ನೀಡಿದ್ದಾರೆ. ಎಸ್‌ಐಆರ್‌ಗೂ ಮೊದಲಿನ ಮತದಾರರ ಪಟ್ಟಿಯನ್ನೇ ಬಳಸಿಕೊಂಡು ರಾಜ್ಯದಲ್ಲಿ ಜಿಪಂ ಮತ್ತು ತಾಪಂ ಚುನಾವಣೆ ನಡೆಸುವ ಕುರಿತು ಚುನಾವಣೆ ನಡೆಸುವುದು ಮತದಾರರ ಪಟ್ಟಿ ಪ್ರಮುಖ ವಿಚಾರವಾಗಿದೆ. ಪ್ರಸ್ತುತ ಕೇಂದ್ರ ಚುನಾವಣಾ ಆಯೋಗದ ವತಿಯಿಂದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಹೊಸದಾಗಿ ಪರಿಷ್ಕೃತ ಮತದಾರರ ಪಟ್ಟಿ ಸಿದ್ಧವಾಗಲು ಸಮಯ ಬೇಕಾಗಬಹುದು ಎಂದರು.

ಇದರಿಂದ ಸ್ಥಳೀಯ ಸಂಸ್ಥೆಗಳ ಚುನಾವಣೆ ಮತ್ತಷ್ಟು ಮುಂದೂಡಿಕೆಯಾಗುವ ಸಾಧ್ಯತೆ ಇರುವುದರಿಂದ, ಎಸ್‌ಐಆರ್‌ಗೂ ಮುನ್ನ ಇದ್ದ ಮತದಾರರ ಪಟ್ಟಿಯನ್ನೇ ಬಳಸಿಕೊಂಡು ಚುನಾವಣೆ ನಡೆಸಬಹುದೇ ಎಂಬ ಬಗ್ಗೆ ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದ ಅವರು, ಈ ಹಿಂದೆ ಸಿದ್ಧಪಡಿಸಿರುವ ಮತದಾರರ ಪಟ್ಟಿಯ ಆಧಾರದ ಮೇಲೆ ಚುನಾವಣೆ ನಡೆಸಲು ಕಾನೂನಿನಲ್ಲಿ ಅವಕಾಶವಿದೆಯೇ ಎಂಬುದನ್ನು ಪರಿಶೀಲಿಸಿ, ನವೆಂಬರ್ 5ರ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ಮೀಸಲಾತಿ ಪಟ್ಟಿ ಆಕ್ಷೇಪಣೆಗಳ



ಪರಿಶೀಲನೆ: ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳ ಸಿದ್ಧತೆಯ ಭಾಗವಾಗಿ ಮೀಸಲಾತಿ ಪಟ್ಟಿ ಪ್ರಕಟಿಸುವ ಪ್ರಕ್ರಿಯೆಯೂ ಪ್ರಗತಿಯಲ್ಲಿದೆ. ಈಗಾಗಲೇ ಮೀಸಲಾತಿಗೆ ಸಂಬಂಧಿಸಿದಂತೆ ಮೊದಲ ಹಂತದ ಅಧಿಸೂಚನೆ ಹೊರಡಿಸಲಾಗಿದೆ. ಅಕ್ಟೋಬರ್ 19ರವರೆಗೆ ಮೀಸಲಾತಿ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಈ ಅವಧಿಯಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಸುಮಾರು 2,200 ಆಕ್ಷೇಪಣೆಗಳು ಸಲ್ಲಿಕೆಯಾಗಿವೆ. ಸದ್ಯ ಅಧಿಕಾರಿಗಳು ಈ ಆಕ್ಷೇಪಣೆಗಳನ್ನು ಪರಿಶೀಲಿಸುತ್ತಿದ್ದು, ಅರ್ಹ ಆಕ್ಷೇಪಣೆಗಳನ್ನು ಪರಿಗಣಿಸಿ ಮುಂದಿನ ಕ್ರಮ ಕೈಗೊಳ್ಳಲಿದ್ದಾರೆ. ಆಕ್ಷೇಪಣೆಗಳ ಪರಿಶೀಲನೆ ಪೂರ್ಣಗೊಳಿಸಿ ಇನ್ನೊಂದು ವಾರದೊಳಗೆ ಅಂತಿಮ ಹಂತದ ಅಧಿಸೂಚನೆ ಹೊರಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಡಿಸೆಂಬರ್ 15ರ ಬಳಿಕ ಚುನಾವಣಾ ವೇಳಾಪಟ್ಟಿ ಪ್ರಕಟ: ಜಿಪಂ ಮತ್ತು ತಾಪಂ ಚುನಾವಣೆ ಪ್ರಕ್ರಿಯೆಯಲ್ಲಿ ಸರ್ಕಾರ ಹಾಗೂ ಚುನಾವಣಾ ಆಯೋಗದ ಜವಾಬ್ದಾರಿಗಳು ಪ್ರತ್ಯೇಕವಾಗಿವೆ. ಮೀಸಲಾತಿ ನಿಗದಿಪಡಿಸಿ ಪ್ರಕಟಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿಯಾಗಿದ್ದರೆ, ಚುನಾವಣೆ ಘೋಷಣೆ ಮಾಡುವುದು, ವೇಳಾಪಟ್ಟಿ ಪ್ರಕಟಿಸುವುದು ಮತ್ತು ಮತದಾನ ಪ್ರಕ್ರಿಯೆ ನಡೆಸುವುದು ರಾಜ್ಯ ಚುನಾವಣಾ ಆಯೋಗದ ಜವಾಬ್ದಾರಿಯಾಗಿದೆ. ಹೀಗಾಗಿ ಮೀಸಲಾತಿ ಅಧಿಸೂಚನೆ ಸೇರಿದಂತೆ ಅಗತ್ಯ ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕ ಚುನಾವಣಾ ಆಯೋಗ ಮುಂದಿನ ಕ್ರಮ ಕೈಗೊಳ್ಳಲಿದೆ.

ಸಚಿವರ ಹೇಳಿಕೆಯ ಪ್ರಕಾರ, ಡಿಸೆಂಬರ್ 15ರ ನಂತರ ಯಾವುದೇ ದಿನ ಜಿಪಂ ಮತ್ತು ತಾಪಂ ಚುನಾವಣೆಗಳ ವೇಳಾಪಟ್ಟಿ ಪ್ರಕಟವಾಗುವ ಸಾಧ್ಯತೆ ಇದೆ. ಚುನಾವಣಾ ವೇಳಾಪಟ್ಟಿ ಪ್ರಕಟವಾದ ಬಳಿಕ ನಾಮಪತ್ರ ಸಲ್ಲಿಕೆ, ನಾಮಪತ್ರಗಳ ಪರಿಶೀಲನೆ, ಹಿಂಪಡೆಯುವಿಕೆ, ಪ್ರಚಾರ ಮತ್ತು ಮತದಾನ ಸೇರಿದಂತೆ ಮುಂದಿನ ಹಂತಗಳು ನಡೆಯಲಿವೆ ಎಂದರು.

ಜನವರಿಯಲ್ಲಿ ಚುನಾವಣೆ ಸಾಧ್ಯತೆ: ರಾಜ್ಯದಲ್ಲಿ ಜಿಪಂ ಮತ್ತು ತಾಪಂ ಚುನಾವಣೆಗಳು ಬಹಳ ವರ್ಷಗಳಿಂದ ನಡೆಯದೆ ಬಾಕಿ ಉಳಿದಿವೆ. ಸ್ಥಳೀಯ ಆಡಳಿತ ವ್ಯವಸ್ಥೆಯಲ್ಲಿ ಜನಪ್ರತಿನಿಧಿಗಳ ಪಾತ್ರ ಮಹತ್ವದ್ದಾಗಿರುವುದರಿಂದ ಈ ಚುನಾವಣೆಗಳನ್ನು ಶೀಘ್ರ ನಡೆಸಬೇಕೆಂಬ ಒತ್ತಾಯವೂ ಕೇಳಿಬರುತ್ತಿದೆ.

ಸಚಿವ ಈಶ್ವರ ಖಂಡ್ರೆ ನೀಡಿರುವ ಸುಳಿವಿನ ಪ್ರಕಾರ, ಎಲ್ಲ ಪ್ರಕ್ರಿಯೆಗಳು ನಿಗದಿತ ಅವಧಿಯಲ್ಲಿ ಪೂರ್ಣಗೊಂಡರೆ 2027ರ ಜನವರಿ ಮೊದಲ ವಾರ ಅಥವಾ ಎರಡನೇ ವಾರದಲ್ಲಿ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳು ನಡೆಯುವ ಸಾಧ್ಯತೆ ಇದೆ. ಜಿಪಂ ಮತ್ತು ತಾಪಂ ಚುನಾವಣೆಗಳು ಪೂರ್ಣಗೊಂಡ ನಂತರ ಗ್ರಾಮ ಪಂಚಾಯಿತಿಗಳ ಚುನಾವಣೆಗಳನ್ನು ನಡೆಸುವ ಉದ್ದೇಶವೂ ಸರ್ಕಾರಕ್ಕಿದೆ ಎಂದು ತಿಳಿದುಬಂದಿದೆ.

ಎಸ್‌ಐಆರ್‌ಗೂ ಮುನ್ನಿನ ಮತದಾರರ ಪಟ್ಟಿಯನ್ನು ಬಳಸುವ ಕುರಿತು ಸರ್ಕಾರ ಕೈಗೊಳ್ಳುವ ನಿರ್ಧಾರ ಜಿಪಂ ಮತ್ತು ತಾಪಂ ಚುನಾವಣೆಗಳ ಭವಿಷ್ಯದ ಮೇಲೆ ಮಹತ್ವದ ಪರಿಣಾಮ ಬೀರಲಿದೆ. ನವೆಂಬರ್ 5ರ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಸ್ಪಷ್ಟ ನಿರ್ಧಾರ ಹೊರಬಿದ್ದರೆ ಚುನಾವಣಾ ಸಿದ್ಧತೆಗಳಿಗೆ ಮತ್ತಷ್ಟು ವೇಗ ಸಿಗುವ ನಿರೀಕ್ಷೆಯಿದೆ ಎನ್ನಲಾಗಿದೆ.

ಜನಾದೇಶ ಮೂಲಕ ಸರ್ಕಾರ ನಡೆಯಬೇಕು, ಸ್ಟಿಂಗ್‌ನಿಂದಲ್ಲ: ಸುನಿಲ್ ಕುಮಾರ್



ಕಲಬುರಗಿ, ನ. 3: ಸರ್ಕಾರಗಳು ಜನಾದೇಶ ಮೂಲಕ ನಡೆಯಬೇಕು, ಆದರೆ ಸ್ಟಿಂಗ್ ಮೂಲಕ ಸೋಲು–ಗೆಲುವು ಆಗಬಾರದು. ಮುಖ್ಯವಾಗಿ ನಮ್ಮ ರಾಜ್ಯ ಕಾಂಗ್ರೆಸ್ ಸರ್ಕಾರ ಸ್ಟಿಂಗ್ ಆಪರೇಷನ್ ಮೂಲಕ ನಡೆಯುತ್ತಿದೆ ಎಂಬುದು ಪ್ರಜಾಪ್ರಭುತ್ವಕ್ಕೆ ಮಾರಕ. ಹೀಗಾಗಿ ಸ್ಟಿಂಗ್ ಎಂಬುದನ್ನು ಎಲ್ಲ ಆಯಾಮಗಳ ಮೂಲಕ ತನಿಖೆ ನಡೆದು, ಅದರ ಮೂಲ ಸತ್ಯ ಬಯಲಿಗೆ ಬರಬೇಕು. ರಾಜ್ಯದ ಜನರಿಗೆ ತಿಳಿಯಬೇಕು ಎಂದು ' ಕಾರ್ಕಳ ಬಿಜೆಪಿ ಶಾಸಕ ವಿ. ಸುನಿಲ್ ಕುಮಾರ್ ಅಭಿಪ್ರಾಯ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಹಲವಾರು ಎಸ್‌ಐಟಿಗಳನ್ನು ರಚಿಸಲಾಗಿದೆ. ಅವುಗಳ ತನಿಖೆ ಏನಾಗಿದೆ? ಅದರಲ್ಲೂ ಧರ್ಮಸ್ಥಳ ಬುರುಡೆ ತನಿಖೆ ಏನಾಯಿತು ಎಂಬುದು ಗೊತ್ತಾಗುತ್ತಿಲ್ಲ. ಸ್ಟಿಂಗ್ ಪೋನ್ ಮಾಜಿ ಸಿಎಂ ಕೇಂದ್ರದ ಸಚಿವ ಎಚ್.ಡಿ ಕುಮಾರಸ್ವಾಮಿ ಅವರ ಮನೆಯಿಂದಲೇ ಹಸ್ತಾಂತರರಿಸಲಾಗಿದೆ ಎನ್ನಲಾಗುತ್ತಿದೆ. ಆದರೆ ಸಂಪೂರ್ಣ ಸತ್ಯಾಸತ್ಯತೆ ಬಯಲಿಗೆ ಬರಲು ಅಳವಾದ ಹಾಗೂ ವ್ಯಾಪಕ ತನಿಖೆ ನಡೆಯಲಿ ಎಂದು ಆಗ್ರಹಿಸಿದರು.

ಮಾಜಿ ಸಚಿವ ಕೆ.ಎನ್ ರಾಜಣ್ಣ ಅವರು ಕಾಂಗ್ರೆಸ್ ಅಂದರೆ 'ಸಿ.ಡಿ ಫ್ಯಾಕ್ಟರಿ' ಎಂಬುದಾಗಿ ಸದನದಲ್ಲೇ ಹೇಳಿದ್ದರು. ಆದರೆ ಅಗೇಕೆ ಸರ್ಕಾರ ತನಿಖೆಗೆ ಮುಂದಾಗದೇ ಮೀನಾ ಮೇಷ ಏಕೆ ಏಣಿಸಿತು? ಸರ್ಕಾರ ಜನಹಿತದಲ್ಲಿ ತೊಡಗಬೇಕು. ಈ ತರಹ ಅನೈತಿಕ ಮಾರ್ಗ ಹಿಡಿಯಬಾರದು. ರಾಜ್ಯದಲ್ಲಿ ಭೀಕರ ಬರಗಾಲ ಹಾಗೂ ಸ್ಟಿಂಗ್ ಕುರಿತಾಗಿ ಮುಂಬರುವ ಬೆಳಗಾವಿ ಅಧಿವೇಶನದಲ್ಲಿ ಬಿಜೆಪಿ ಸಮಗ್ರ ಚರ್ಚೆಗೆ ಮುಂದಾಗಲಿದೆ ಎಂದು ಸುನಿಲ್ ಕುಮಾರ ಅವರು ತಿಳಿಸಿದರು.

17 ಷರತ್ತು ಏಕೆ: ರೈತರಿಗೆ 2500 ರೂ ಕೊಡಲು 17 ಷರತ್ತು ಹಾಕಿರುವುದು ಸರ್ಕಾರದ ದಿವಾಳಿತನಕ್ಕೆ ಸಾಕ್ಷಿಯಾಗಿದೆ. ಜಂಟಿ ಪಹಣಿ ಹೊಂದಿರಬಾರದು ಎನ್ನುವುದಾದರೆ ಸಹೋದರರು ಕೂಡಿ ಇರಬಾರದೇ? ಮೊದಲೇ ಭೀಕರ ಬರಗಾಲದಿಂದ ರೈತ ತತ್ತರಿಸಿದ್ದಾನೆ. ಆತ್ಮಸ್ಥೈರ್ಯ ತುಂಬುವ ಬದಲು ಈ ಷರತ್ತುಗಳು ವಿಧಿಸುವುದು ಮಾನಸಿಕವಾಗಿ ಕುಗ್ಗಿಸುವ ಕೆಲಸವಲ್ಲದೇ ಮತ್ತೇನು ಇಲ್ಲ. ಒಟ್ಟಾರೆ ಸರ್ಕಾರಕ್ಕೆ ರೈತರ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲ ಎಂದು ಟೀಕಿಸಿದರು.

ಹಾಲಿನ ದರ ಹೆಚ್ಚಳವಲ್ಲದೇ ಇತರೆ ಎಲ್ಲ ವಸ್ತುಗಳ ದರ ಏರಿಕೆ ಮಾಡುವ ಮುಖಾಂತರ ಸಾಮಾನ್ಯರ ಜೇಬಿಗೆ ಕತ್ತರಿ ಹಾಕುತ್ತಿದೆ. ಈ ಸರ್ಕಾರ ಬಂದ ಮೇಲೆ ಹಾಲಿನ ಬೆಲೆ 17 ರೂ. ಗೆ ಹೆಚ್ಚಿಸಿದೆ. ರೈತರ ಹಾಲಿಗೆ ಜೂನ್ ತಿಂಗಳಿನಿಂದ ಸಬ್ಸಿಡಿ ಹಣವೇ ನೀಡಿಲ್ಲ. ಪರಿಷ್ಕರಣೆ ಹೆಸರಿನಲ್ಲಿ ಗ್ಯಾರಂಟಿಗಳಿಗೂ ಕಡಿವಾಣ ಹಾಕಿದೆ. ಒಟ್ಟಾರೆ ರಾಜ್ಯ ಸರ್ಕಾರ ಜನ ಹಿತ ಮರೆತು ಬಿಟ್ಟಿದೆ ಎಂದು ವಾಗ್ದಾಳಿ ನಡೆಸಿದರು.

ಗ್ಯಾರಂಟಿ ಪರಿಷ್ಕರಣೆಯಂತೆ ಮತದಾರರ ಎಸ್‌ಐಆರ್ ಏಕೆ ಬೇಡ?

ರಾಜ್ಯ ಸರ್ಕಾರ ತಾನೇ ಘೋಷಣೆ ಮಾಡಿರುವ ಗ್ಯಾರಂಟಿ ಯೋಜನೆಗಳ ಪರಿಷ್ಕರಣೆಯಲ್ಲಿ ತೊಡಗಿದೆ. ಅದೇ ನಿಟ್ಟಿನಲ್ಲಿ ಚುನಾವಣಾ ಆಯೋಗ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ತೊಡಗಿದ್ದರೆ ವಿರೋಧಿ ಹೇಗಾಗುತ್ತದೆ? ಎಸ್‌ಐಆರ್ ಹೆಸರಿನಲ್ಲಿ ಕಾಂಗ್ರೆಸ್ ಸುಳ್ಳುಗಳ ಸೃಷ್ಟಿಯಲ್ಲಿ ತೊಡಗಿದೆ. ದೇಶದ ಜನರ ಹಾದಿಯನ್ನು ತಪ್ಪಿಸುತ್ತಿದೆ. ದೇಶದ ಇತಿಹಾಸದಲ್ಲಿ ಮೊದಲ ಬಾರಿಗೆ ದೇಶದ ಸರ್ವೋಚ್ಚ ನ್ಯಾಯಾಲಯಕ್ಕೆ ಮುತ್ತಿಗೆ ಮುಖಾಂತರ ಕರಾಳ ದಿನ ಸೃಷ್ಟಿಸಿತು. ಎಸ್‌ಐಆರ್ ಕುರಿತು ಹಾಗೂ ಇದರ ವಿರುದ್ಧ ಕಾಂಗ್ರೆಸ್‌ನ ಹೋರಾಟ ಸಂಬಂಧವಾಗಿ ಬಿಜೆಪಿ ನವೆಂಬರ್ ತಿಂಗಳಿನಾದ್ಯಂತ 'ಪ್ರಜಾಪ್ರಭುತ್ವ ಉಳಿಸಿ ಅರಾಜಕತೆ ಅಳಿಸಿ' ಎಂಬ ಅಭಿಯಾನ ಹಮ್ಮಿಕೊಂಡಿದೆ. ಅದರಂಗವಾಗಿ 100 ಕಡೆ ಶಾಲಾ ಕಾಲೇಜುಗಳಲ್ಲಿ ಯುವ ಸಂವಾದ ಜತೆಗೆ ಎಲ್ಲ ತಾಲೂಕು ಹಾಗೂ ಹೊಬಳಿ ಕೇಂದ್ರಗಳಲ್ಲಿ 35 ವರ್ಷದವರೊಂದಿಗೆ ಸಹ ಸಂವಾದ ಹಮ್ಮಿಕೊಳ್ಳಲಾಗಿದೆ. ಮೊದಲ ಸಂವಾದ ಕಾರ್ಯಕ್ರಮ ಹುಬ್ಬಳ್ಳಿಯಲ್ಲಿ ನಡೆಯುತ್ತಲಿದ್ದು, ಸಂಸದ ತೇಜಸ್ವೀ ಸೂರ್ಯ ಪಾಲ್ಗೊಳ್ಳುತ್ತಿದ್ದಾರೆ ಎಂದು ವಿವರಣೆ ನೀಡಿದರು.



ಹಾಲಿನ ದರ ಏರಿಕೆಯನ್ನು ವಿರೋಧಿಸಿ, ಎಸ್‌ಯುಸಿಐ ಕಾರ್ಯಕರ್ತರು ಮಂಗಳವಾರ ಮೈಸೂರಿನಲ್ಲಿ ಪ್ರತಿಭಟನೆ ನಡೆಸಿದರು.

ಧರ್ಮಸಿಂಗ್ ಫೌಂಡೇಷನ್ ವತಿಯಿಂದ ಏರ್ಪಾಡು

ಡಿ.25ರಂದು ಜೇವರ್ಗಿಯಲ್ಲಿ ಸಾಮೂಹಿಕ ವಿವಾಹ: ಅಜಯಸಿಂಗ್



ಕಲಬುರಗಿ, ನ. 3: ಬರುವ ಡಿಸೆಂಬರ್ ತಿಂಗಳ 25ರಂದು ಮಾಜಿ ಮುಖ್ಯಮಂತ್ರಿ ಎನ್. ಧರ್ಮಸಿಂಗ್ ಅವರ 90ನೇ ಜಯಂತಿ ಅಂಗವಾಗಿ ಉಚಿತ ಸಾಮೂಹಿಕ ವಿವಾಹವನ್ನು ಜೇವರ್ಗಿಯ ದರ್ಮಸಿಂಗ್ ಕಲ್ಯಾಣ ಮಂಟಪದಲ್ಲಿ ಅದ್ಧೂರಿಯಾಗಿ ಆಯೋಜಿಸಲು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಧರ್ಮಸಿಂಗ್ ಫೌಂಡೇಶನ್ ವತಿಯಿಂದ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ. ವಿವಿಧ ಜಿಲ್ಲೆ ಹಾಗೂ ತಾಲ್ಲೂಕುಗಳಿಂದ ಆಗಮಿಸುವ ವಧು–ವರರು ಮತ್ತು ಅವರ ಕುಟುಂಬದವರಿಗೆ ಅನುಕೂಲ ವಾಗುವಂತೆ ಊಟ, ಸಾರಿಗೆ ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಲಾಗುವುದು ಎಂದು ಸಣ್ಣ ನೀರಾವರಿ ಸಚಿವ ಹಾಗೂ ಫೌಂಡೇಶನ್ ಅಧ್ಯಕ್ಷ ಡಾ. ಅಜಯ್‌ಸಿಂಗ್ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತ, ಈಗಾಗಲೇ ಎಂಟು ಜೋಡಿಗಳು ನೋಂದಣಿ ಮಾಡಿಕೊಂಡಿದ್ದು, ಇನ್ನೂ ಹೆಚ್ಚಿನ ಜೋಡಿಗಳು ಭಾಗವಹಿಸಲು ಅವಕಾಶವಿದೆ. 50 ಅಥವಾ ಅದಕ್ಕಿಂತ ಹೆಚ್ಚಿನ ಜೋಡಿಗಳು ನೋಂದಣಿ ಮಾಡಿಕೊಂಡರೂ ಅವರೆಲ್ಲರಿಗೂ ಅಗತ್ಯ ವ್ಯವಸ್ಥೆ ಮಾಡಲಾಗುವುದು. ಭಾಗವಹಿಸುವ ಜೋಡಿಗಳ ಸಂಖ್ಯೆಗೆ ಯಾವುದೇ ನಿರ್ದಿಷ್ಟ ಮಿತಿ ಇಲ್ಲ. ಡಿಸೆಂಬರ್ 10 ನೋಂದಣಿಯ ಕೊನೆಯ ದಿನವಾಗಿದೆ ಎಂದು ತಿಳಿಸಿದರು.

ವಧು–ವರರಿಗೆ ತಾಳಿ ಸೇರಿರಿದಂತೆ ವಿವಾಹಕ್ಕೆ ಅಗತ್ಯವಿರುವ ಎಲ್ಲ ವಸ್ತುಗಳನ್ನು ಫೌಂಡೇಶನ್ ವತಿಯಿಂದ ಒದಗಿಸಲಾಗುವುದು.

ಕಾರ್ಯಕ್ರಮಕ್ಕೆ ಆಗಮಿಸುವ ಕುಟುಂಬದವರು ಮತ್ತು ಬಂಧುಗಳಿಗೆ ಊಟದ ವ್ಯವಸ್ಥೆಯನ್ನೂ ಕೂಡ ಮಾಡಲಾಗುವುದು. ಹಿಂದಿನ ಕಾರ್ಯಕ್ರಮಗಳಲ್ಲಿ ಸಾವಿರಾರು ಜನರಿಗೆ ಊಟದ ವ್ಯವಸ್ಥೆ ಮಾಡಲಾಗಿದ್ದು, ಈ ಬಾರಿಯೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಿದರೂ ಸೂಕ್ತ ವ್ಯವಸ್ಥೆ ಕಲ್ಪಿಸಲು ಸಿದ್ಧತೆ ನಡೆಸಲಾಗಿದೆ.

ಬೇರೆ ಜಿಲ್ಲೆಗಳಿಂದ ಆಗಮಿಸುವ ವಧು–ವರರಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸುವ ಬಗ್ಗೆಯೂ ಯೋಜನೆ ರೂಪಿಸಲಾಗಿದೆ. ಕಾರ್ಯಕ್ರಮದ ಸ್ಥಳದಲ್ಲಿ ಹೆಚ್ಚಿನ ಜನರು ಭಾಗವಹಿಸಿದರೆ ಅನುಕೂಲವಾಗುವಂತೆ ಎಂಸಿಎಚ್ ಆಸ್ಪತ್ರೆಯ ಪಕ್ಕದಲ್ಲಿರುವ ವಿಶಾಲ ಜಾಗದಲ್ಲಿ ದೊಡ್ಡ ಪೆಂಡಾಲ್ ವ್ಯವಸ್ಥೆ ಮಾಡಲಾಗುವುದು.

ಡಿ.1 ರೊಳಗೆ ನೋಂದಣಿಯ ವಿವರಗಳನ್ನು ಪರಿಶೀಲಿಸಿ, ಅಂತಿಮ ವ್ಯವಸ್ಥೆಗಳನ್ನು ರೂಪಿಸಲಾಗುವುದು. ನೋಂದಣಿಗೆ ಡಿಸೆಂಬರ್ 10 ಕೊನೆಯ ದಿನವಾಗಿದ್ದು, ಫೌಂಡೇಶನ್ ವತಿಯಿಂದ ಪರಿಶೀಲನೆ ಹಾಗೂ ಇತರ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದ ಯಶಸ್ಸಿಗೆ ಸಾರ್ವಜನಿಕರು, ಮುಖಂಡರು ಹಾಗೂ ವಿವಿಧ ಸಂಘಟನೆಗಳ ಸಹಕಾರ ಅಗತ್ಯವಿದೆ ಎಂದು ಅವರು ಮನವಿ ಮಾಡಿದರು.

ಮಲಬಾರ್ ಡೇ- ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಬಳ್ಳಾರಿ ಕೋಟೆ ಸ್ವಚ್ಛತಾ ಅಭಿಯಾನ



ಬಳ್ಳಾರಿ ನ 03.ಮಲಬಾರ್ ಡೇ ಮತ್ತು ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್, ಬಳ್ಳಾರಿ ತಂಡದ ವತಿಯಿಂದ ಐತಿಹಾಸಿಕ ಬಳ್ಳಾರಿ ಕೋಟೆಯಲ್ಲಿ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಯಿತು.

ನಾ 01 ರಂದು ಬೆಳಿಗ್ಗೆ 7:00 ರಿಂದ 9:00 ಗಂಟೆಯವರೆಗೆ ನಡೆದ ಈ ಅಭಿಯಾನದಲ್ಲಿ 20 ಸಿಬ್ಬಂದಿಗಳು ಭಾಗವಹಿಸಿ, ಕೋಟೆಯ ಆವರಣವನ್ನು ಸ್ವಚ್ಛಗೊಳಿಸಿದರು.

ಈ ಸಂದರ್ಭದಲ್ಲಿ ಪ್ಲಾಸ್ಟಿಕ್ ನೀರಿನ ಬಾಟಲಿಗಳು, ಚಿಪ್ಸ್ ಪ್ಯಾಕೆಟ್‌ಗಳು, ಜ್ಯೂಸ್ ಬಾಟಲಿಗಳು ಸೇರಿದಂತೆ ಸುಮಾರು 18 ಚೀಲಗಳಷ್ಟು, ತ್ಯಾಜ್ಯವನ್ನು ಸಂಗ್ರಹಿಸಲಾಯಿತು.

ಮಲಬಾರ್ ಡೇಯನ್ನು ಸಾಮಾಜಿಕ ಜವಾಬ್ದಾರಿಯ ಕಾರ್ಯದ ಮೂಲಕ ಆಚರಿಸುವುದರ ಜೊತೆಗೆ, ನಮ್ಮ ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ ಮತ್ತು ಪರಿಸರ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸುವುದು ಈ ಅಭಿಯಾನದ ಉದ್ದೇಶವಾಗಿತ್ತು.

ಸ್ವಚ್ಛ ಪರಿಸರ 'ಸುಂದರ ಬಳ್ಳಾರಿ' ಹೆಮ್ಮೆಯ ಕರ್ನಾಟಕ! ನಮ್ಮ ಧ್ಯೇಯ ಎಂದು ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್, ಬಳ್ಳಾರಿ ತಂಡ ಘಂಟಾಘೋಷವಾಗಿ ಹೇಳಿಕೊಂಡಿದ್ದಾರೆ.

RYMEC ವಿ.ಟಿ.ಯು. ಅಂತರ್ ವಲಯ ಮಹಿಳಾ ಕಬಡ್ಡಿ ಪಂದ್ಯಾವಳಿಗೆ ಚಾಲನೆ

ಬಳ್ಳಾರಿ, ನ.03– ನಗರದ ಪ್ರತಿಷ್ಠಿತ ವಿ.ವಿ.ಸಂಘದ ರಾವ್ ಬಹದ್ದೂರ್ ವೈ. ಮಹಾಬಳೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ ವಿಶ್ವೇಶ್ವರಾಯ ತಾಂತ್ರಿಕ ವಿಶ್ವ ವಿದ್ಯಾಲಯದ ಸಂಯೋಜನಡಿಯಲ್ಲಿ ಅಂತರ್ ವಲಯದ ಮಹಿಳಾ ಕಬಡ್ಡಿ ಪಂದ್ಯಾವಳಿಗೆ ಚಾಲನೆ ನೀಡಲಾಗಿದೆ.

ಒಟ್ಟು 07 ಮಹಿಳಾ ತಂಡಗಳು ಭಾಗವಹಿಸುತ್ತಿರುವ ಈ ಪ್ರತಿಷ್ಠಿತ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಮಹಾವಿದ್ಯಾಲಯದ ಸಿವಿಲ್ ವಿಭಾಗದ ಪ್ರೊ. ಆಧಾನ ಗೌಡ, ಮೆಕ್ಯಾನಿಕಲ್ ವಿಭಾಗದ ಡಾ. ದೀಪಕ್, ಇಇಇ ವಿಭಾಗದ ಪ್ರೊ. ಅನುಸೂಯ ಪಾಟೀಲ್ ಮತ್ತು ಪ್ರೊ. ರಾಜಶೇಖರ್, ಐಎಸ್‌ಇ



ವಿಭಾಗದ ಪ್ರೊ. ಮಂಜು ವಾಣಿ ಹಾಗೂ ಪ್ರೊ. ಸೌಮ್ಯ, ಮತ್ತು ಇಸಿಇ ವಿಭಾಗದ ಚಂದ್ರಶೇಖರ್ ಅವರು ಹಾಗೂ ವಿವಿಧ ಕಾಲೇಜುಗಳ ದೈಹಿಕ ನಿರ್ದೇಶಕರು ಮತ್ತು ಗಣ್ಯರು ಚಾಲನೆ ನೀಡಿದರು.

"ಕಬಡ್ಡಿ ನಮ್ಮ ಮಣ್ಣಿನ ಅತ್ಯಂತ ಪುರಾತನ ಮತ್ತು ಸಾಂಪ್ರದಾಯಿಕ ಆಟವಾಗಿದೆ. ಹಿಂದೆ ಗ್ರಾಮೀಣ ಹಾಗೂ ನಗರ ಪ್ರದೇಶಗಳೆರಡರಲ್ಲೂ ಕಬಡ್ಡಿ ಅತ್ಯಂತ ಪ್ರಮುಖ ಸ್ಥಾನವನ್ನು ಹೊಂದಿತ್ತು. ಇಂದಿನ ಯುವ ಪೀಳಿಗೆಯೂ ಅದೇ ಉತ್ಸಾಹದಿಂದ ಈ ಕ್ರೀಡೆಯಲ್ಲಿ ತೊಡಗಿಸಿಕೊಳ್ಳುತ್ತಿರುವುದು ಹೆಮ್ಮೆಯ ವಿಷಯ," ಎಂದು ಅಭಿಪ್ರಾಯಪಟ್ಟರು.

ಉದ್ಘಾಟನಾ ಪಂದ್ಯವು ಆತಿಥೇಯ ಬಳ್ಳಾರಿಯ ಆರ್.ವೈ.ಎಂ.ಇ.ಸಿ ಮತ್ತು ಹೊಸ ಪೇಟೆಯ ಪಿ.ಡಿ.ಐ.ಟಿ ತಂಡಗಳ ನಡುವೆ ರೋಮಾಂಚನಕಾರಿಯಾಗಿ ನಡೆಯಿತು.

ಈ ಕ್ರೀಡಾಕೂಟದಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದು ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಿದರು.

ಜೀವನದಲ್ಲಿ ಮಹನೀಯರ ಆದರ್ಶ ಅಳವಡಿಸಿಕೊಳ್ಳಿ: ಜಯವಂತರಾವ್ ಪತಂಗೆ



ರಾಯಚೂರು, ನ. 3: ಇಂದಿರಾ ಗಾಂಧಿ ಮತ್ತು ಸರ್ದಾರ್ ವಲ್ಲಭಭಾಯಿ ಪಟೇಲ ಅವರಂತಹ ಮಹಾನ್ ನಾಯಕರು ದೇಶದ ಇತಿಹಾಸದಲ್ಲಿ ಅಚ್ಚಳಿಯದ ಗುರುತು ಮೂಡಿಸಿದ್ದಾರೆ. ಅವರ ತ್ಯಾಗ, ಸೇವೆ, ದೇಶಪ್ರೇಮ ಹಾಗೂ ಜನಪರ ಚಿಂತನೆಗಳನ್ನು ಇಂದಿನ ಯುವಜನತೆ ಅರಿತುಕೊಂಡು, ದೇಶದ ಐಕ್ಯತೆ ಮತ್ತು ಸೌಹಾರ್ದತೆ ಕಾಪಾಡಲು ಮುಂದಾಗಬೇಕು ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಕೋಶಾಧ್ಯಕ್ಷ ಜಯವಂತರಾವ್ ಪತಂಗೆ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಶನಿವಾರ ಆಯೋಜಿಸಿದ್ದ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಪುಣ್ಯತಿಥಿ ಹಾಗೂ ಮಾಜಿ ಉಪಪ್ರಧಾನಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನಾಚರಣೆ ಕಾರ್ಯಕ್ರಮ ದಲ್ಲಿ ಅವರು ಮಾತನಾಡಿದರು.

ದೇಶದ ಸ್ವಾತಂತ್ರ್ಯ, ಪ್ರಜಾಪ್ರಭುತ್ವದ ಮೌಲ್ಯಗಳು, ಸಾಮಾಜಿಕ ಸಾಮರಸ್ಯ ಮತ್ತು ರಾಷ್ಟ್ರೀಯ ಏಕತೆಯನ್ನು ಬಲಪಡಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಮಹಾನ್ ನಾಯಕರ ಆದರ್ಶಗಳನ್ನು ಕೇವಲ ಸ್ಮರಣೆಗೆ ಸೀಮಿತಗೊಳಿಸದೆ, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ತಿಳಿಸಿದರು.

ಮಹಾನಗರ ಪಾಲಿಕೆಯ ಮಾಜಿ ಸದಸ್ಯ ಜಯಣ್ಣ ಮಾತನಾಡಿ, ಭಾರತದ ಮೊದಲ ಮಹಿಳಾ ಪ್ರಧಾನಿಯಾಗಿ ಇಂದಿರಾ ಗಾಂಧಿ ಅವರು ತಮ್ಮ ದಿಟ್ಟ ನಿರ್ಧಾರ, ರಾಜಕೀಯ ನಾಯಕತ್ವ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ಕೈಗೊಂಡ ಕ್ರಮಗಳ ಮೂಲಕ ಭಾರತೀಯ ರಾಜಕೀಯ ಇತಿಹಾಸದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ದೇಶದ ಏಕತೆ ಮತ್ತು ಸಮಗ್ರತೆ ಕಾಪಾಡುವಲ್ಲಿ ಅವರು ತೋರಿದ ಬದ್ಧತೆ ಹಾಗೂ ಸಲ್ಲಿಸಿದ ಸೇವೆ ಸ್ಮರಣೀಯ ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟದ ಪ್ರಮುಖ ನಾಯಕರಾಗಿದ್ದ ಸರ್ದಾರ್ ವಲ್ಲಭಭಾಯಿ ಪಟೇಲರು ಸ್ವಾತಂತ್ರ್ಯಾ ನಂತರ ವಿವಿಧ ಸಂಸ್ಥಾನಗಳನ್ನು ಒಗ್ಗೂಡಿಸಿ ಅಖಂಡ ಭಾರತದ ನಿರ್ಮಾಣಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ದೇಶದ ಏಕತೆ, ಸಮಗ್ರತೆ ಮತ್ತು ಸಾರ್ವಭೌಮತ್ವ ಕಾಪಾಡುವ ಅವರ ಆದರ್ಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಆರಂಭದಲ್ಲಿ ಇಂದಿರಾ ಗಾಂಧಿ ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು.

ಪಕ್ಷದ ಮುಖಂಡರಾದ ಜಿ.ಶಿವಮೂರ್ತಿ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ನರಸಿಂಹಲು ಮಾಡಗಿರಿ, ದರೂರು ಬಸವರಾಜ ಪಾಟೀಲ, ತಾಯಣ್ಣ ನಾಯಕ, ಅಬ್ದುಲ್ ಕರೀಂ, ಭೀಮನಗೌಡ ನಾಗಡದಿನ್ನಿ, ರಾಮಕೃಷ್ಣ ನಾಯಕ, ವಿಶ್ವನಾಥ ಪಟ್ಟಿ, ರಮೇಶ ಯಾದವ, ಸುಧೀಂದ್ರ ಜಹಾಗೀರದಾರ, ಫಯಾಜುದ್ದೀನ್, ರಾಣಿ ರಿಚರ್ಡ್, ಶಶಿಕಲಾ ಭೀಮರಾಯ, ಮಂಜುಳಾ ಅಮರೇಶ, ಪಿ.ಸುರೇಖಾ, ರಜಿಯಾ ಪಟೇಲ್ ಉಪಸ್ಥಿತರಿದ್ದರು.

ಕಳೆದ ಮೂರು ದಿನಗಳಲ್ಲಿ ಮೂರು ಅಪಘಾತ, ಎರಡು ಸಾವು

ಮೃತರಿಗೆ ನ್ಯಾಯ ಒದಗಿಸಲು ಮಾಜಿ ಶಾಸಕ ಸೋಮಶೇಖರ ರೆಡ್ಡಿ ಆಗ್ರಹ



ಬಳ್ಳಾರಿ ನ 03.ಬಳ್ಳಾರಿ ನಗರದಲ್ಲಿ ಹಗಲು ವೇಳೆಯಲ್ಲಿಯೇ ಅತಿಯಾದ ಟಿಪ್ಪರ್ ಲಾರಿಗಳ, ಬಾರಿವಾಹನಗಳ ಸಂಚಾರದಿಂದಾಗಿ ಕಳೆದ ಮೂರು ದಿನಗಳಿಂದ ಸಂಭವಿಸುತ್ತಿರುವ ರಸ್ತೆ ಅಪಘಾತಗಳಲ್ಲಿ ಅಮಾಯಕರು ಪ್ರಾಣ ಕಳೆದುಕೊಂಡಿರುವ ಘಟನೆಗಳು ತೀವ್ರ ಆಕ್ರೋಶಕ್ಕೆ ಕಾರಣವಾಗಿವೆ ಎಂದು ಮಾಜಿ ಶಾಸಕ ಗಾಲಿ ಸೋಮಶೇಖರ್ ರೆಡ್ಡಿ ಆಗ್ರಹಿಸಿದರು.

ಲಾರಿಗಳ ಅಟ್ಟಹಾಸಕ್ಕೆ ಬಲಿಯಾದ ಮಹಮದ್ ಇಮ್ರಾನ್ ಮೃತನ ಕುಟುಂಬಕ್ಕೆ ನ್ಯಾಯ ಒದಗಿಸುವಂತೆ ಹಾಗೂ ನಗರದಲ್ಲಿ ಟಿಪ್ಪರ್ ಲಾರಿಗಳ ಸಂಚಾರಕ್ಕೆ ಸೂಕ್ತ ನಿಯಂತ್ರಣ ಹೇರಬೇಕೆಂದು ಆಗ್ರಹಿಸಿ, ಎಪಿಎಂಸಿ ಮುಂಭಾಗದ ರಸ್ತೆಯಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದಲ್ಲಿ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸಿ, ಇಂತಹ ದುರಂತಗಳು ಮರುಕಳಿಸದಂತೆ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಲಾಯಿತು.

ಈ ಪ್ರತಿಭಟನೆಯಲ್ಲಿ ಮಾಜಿ ಸಚಿವರಾದ ಬಿ. ಶ್ರೀರಾಮುಲು , ಪಾಲಿಕೆ ಸದಸ್ಯರು ಹಾಗೂ ವಿರೋಧ ಪಕ್ಷ ನಾಯಕರಾದ ಶ್ರೀನಿವಾಸ್ ಮೋತ್ಕರ್, ಪಾಲಿಕೆ ಸದಸ್ಯ ಗೋವಿಂದರಾಜು, ರಾಜ್ಯ ಮಹಿಳಾ ಕಾರ್ಯದರ್ಶಿ ಕುಮಾರಿ ಸುಗುಣ, ಅಲ್ಲಾಭಾಕರ್ ರವರು, ಮೆಹಬೂಬ್ ಬಾಷಾ, ಮಲ್ಲನಗೌಡ ರವರು, ಹೇಮಣ್ಣ , ಕೊರ್ಚಿ ಹನುಮಂತ , ಲಕ್ಷ್ಮಣ ಹಾಗೂ ಹಿರಿಯ ಮುಖಂಡರು, ಕಾರ್ಯಕರ್ತರು ಇನ್ನಿತರು ಪಾಲ್ಗೊಂಡಿದ್ದರು.

RYMECನಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಣೆ



ಬಳ್ಳಾರಿ, ನ 03. ಬಳ್ಳಾರಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ವೀರಶೈವ ವಿದ್ಯಾವರ್ಧಕ ಸಂಘದ ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ 70ನೇ ಕರ್ನಾಟಕ ರಾಜ್ಯೋತ್ಸವವನ್ನು ಕನ್ನಡ ನಾಡು, ನುಡಿ, ಸಂಸ್ಕೃತಿ ಮತ್ತು ಪರಂಪರೆಯ ಅಭಿಮಾನದಿಂದ ಆಚರಿಸಲಾಯಿತು.

ಪ್ರಾಚಾರ್ಯರಾದ ಡಾ. ಮಹಾಬಲೇಶ್ವರ, 'ಕರ್ನಾಟಕ ರಾಜ್ಯ ರಚನೆಯಾಗಿ 70 ವರ್ಷಗಳು ಪೂರ್ಣಗೊಂಡಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿ. ಆಲೂರು ವೆಂಕಟರಾವ್ ಸೇರಿದಂತೆ ಅನೇಕ ಮಹನೀಯರ ಹೋರಾಟ ಮತ್ತು ಪರಿಶ್ರಮದಿಂದ ಕನ್ನಡ ಮಾತನಾಡುವ ಪ್ರದೇಶಗಳು ಒಂದಾಗಿ ಕರ್ನಾಟಕ ರಾಜ್ಯ ರೂಪುಗೊಂಡಿತು. ಇಂದಿನ ಯುವಜನತೆ ಕನ್ನಡ ಭಾಷೆಯನ್ನು ಗೌರವಿಸುವುದರ ಜೊತೆಗೆ ತಂತ್ರಜ್ಞಾನ, ಸಂಶೋಧನೆ ಮತ್ತು ನಾವೀನ್ಯತೆಯ ಮೂಲಕ ರಾಜ್ಯದ ಅಭಿವೃದ್ಧಿಗೆ ಕೊಡುಗೆ ನೀಡಬೇಕು' ಎಂದು ಕರೆ ನೀಡಿದರು. 'ಬಳ್ಳಾರಿ ಜಿಲ್ಲೆಯು ಕರ್ನಾಟಕ ಏಕೀಕರಣ ಚಳುವಳಿಯಲ್ಲಿ ಮಹತ್ವದ ಪಾತ್ರ ವಹಿಸಿದೆ. ಕನ್ನಡ ನಾಡಿನ ಏಕತೆಗಾಗಿ ಹೋರಾಡಿದ ರಾಮ್ಜಾನ್‌ಸಾಬ್ ಪಿಂಜಾರ್ ಅವರಂತಹ ಹೋರಾಟಗಾರರ ತ್ಯಾಗ ಮತ್ತು ಬಲಿದಾನವನ್ನು ನಾವು ಎಂದಿಗೂ ಮರೆಯಬಾರದು.

ಬಳ್ಳಾರಿ ಕರ್ನಾಟಕದೊಂದಿಗೆ ಒಂದಾಗುವಲ್ಲಿ ಕನ್ನಡಪರ ಹೋರಾಟಗಾರರು, ಸಾಹಿತಿಗಳು ಮತ್ತು ಸಂಘಟನೆಗಳ ಕೊಡುಗೆ ಅಪಾರವಾಗಿದೆ. ಅವರ ಆದರ್ಶಗಳನ್ನು ಇಂದಿನ ಯುವಜನತೆ ಗೌರವಿಸಿ ಕನ್ನಡ ನಾಡಿನ ಏಕತೆ ಮತ್ತು ಅಭಿವೃದ್ಧಿಗೆ ಶ್ರಮಿಸಬೇಕು' ಎಂದರು.

ಬರದಿಂದ ಬೆಳೆ ರಕ್ಷಣೆಗೆ ದುಬಾರಿ ಟ್ಯಾಂಕರ್ ನೀರು ಖರೀದಿಸುತ್ತಿರುವ ರೈತರು

ರಾಯಚೂರು, ನ. 3: ಮುಂಗಾರು ಕೈಕೊಟ್ಟು, ಹಿಂಗಾರಿನಲ್ಲೂ ಮಳೆಯಾಗದೆ ಕಂಗಾಲಾಗಿರುವ ರೈತರು, ಹಿಂಗಾರಿ ಮಳೆಯ ಭರವಸೆಯ ಮೇಲೆ ಜೋಳ ಬಿತ್ತನೆ ಮಾಡಿದ್ದರು. ಆದರೆ ಮಳೆಯಿಲ್ಲದೇ ಜೋಳದ ಬೆಳೆ ಒಣಗುತ್ತಿರುವ ಹಿನ್ನೆಲೆಯಲ್ಲಿ ರೈತರು ದುಬಾರಿ ಬೆಲೆಗೆ ಟ್ಯಾಂಕರ್ ನೀರು ಖರೀದಿಸಿ ಬೆಳೆ ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದಾರೆ.

ಜಿಲ್ಲೆಯ ಮಸ್ಕಿ ತಾಲ್ಲೂಕಿನ ಬೆಳ್ಳಿಗನೂರು ಗ್ರಾಮದ ರೈತರಾದ ದೇವೇಂದ್ರಪ್ಪ, ಶಿವಕುಮಾರ, ರೇವಣ್ಣ ಪೂಜಾರಿ ಸೇರಿದಂತೆ ಕೆಲವು ರೈತರು ತಮ್ಮ ಜಮೀನಿನಲ್ಲಿ ಒಣಗುತ್ತಿರುವ ಜೋಳದ ಬೆಳೆಗೆ ಟ್ಯಾಂಕರ್ ಮೂಲಕ ನೀರು ಹರಿಸುತ್ತಿದ್ದಾರೆ.

ಪ್ರತಿ ಟ್ಯಾಂಕರ್ ನೀರಿಗೆ 1,000 ನೀಡಿ ನೀರು ಖರೀದಿಸುತ್ತಿರುವ ರೈತರು, ಬೆಳೆ ಉಳಿಸಿಕೊಳ್ಳಲು ಹೆಚ್ಚುವರಿ ವೆಚ್ಚ ಭರಿಸುವ ಅನಿವಾರ್ಯತೆಗೆ ಸಿಲುಕಿದ್ದಾರೆ. ಜೋಳ ರಕ್ಷಿಸಿದರೆ ವರ್ಷದ ಅನ್ನದ ಕೊರತೆ ನೀಗಬಹುದು ಮತ್ತು ನಮ್ಮ ಜಾನುವಾರುಗಳಿಗೆ ಮೇವು ದೊರೆಯುತ್ತದೆ ಎಂದು ಜೋಳದ ಬೆಳೆ ಉಳಿಸಿಕೊಳ್ಳಲು ಹೋರಾಟ ನಡೆಸುತ್ತಿದ್ದೇವೆ ಎನ್ನುತ್ತಾರೆ ರೈತರು.



ಮುಂಗಾರು ಮಳೆ ಕೈಕೊಟ್ಟಿದ್ದು, ಹಿಂಗಾರಿನಲ್ಲೂ ಮಳೆಯಾಗದ ಕಾರಣ ಜೋಳದ ಬೆಳೆ ಕಣ್ಣೆದುರೇ ಒಣಗುತ್ತಿದೆ. ಈಗಾಗಲೇ ಬಿತ್ತನೆ, ಗೊಬ್ಬರ, ಕೂಲಿ ಸೇರಿದಂತೆ ವಿವಿಧ ಹಂತಗಳಲ್ಲಿ ಹಣ ಹೂಡಿರುವ ರೈತರಿಗೆ ಬೆಳೆ ನಷ್ಟದ ಆತಂಕ ಎದುರಾಗಿದೆ.

ರೈತ ರೇವಣ್ಣ ಪೂಜಾರಿ ಅವರು ತಮ್ಮ ಹೊಲದಲ್ಲಿ ಒಣಗುತ್ತಿರುವ ಜೋಳದ ಬೆಳೆ ಕಂಡು, ಅದರ ರಕ್ಷಣೆಗೆ ಟ್ಯಾಂಕರ್ ಮೂಲಕ ನೀರು ಹರಿಸುತ್ತಿದ್ದಾರೆ. ಆದರೆ, ದುಬಾರಿ ಬೆಲೆಗೆ ನೀರು ಖರೀದಿಸಿ ಬೆಳೆ ಉಳಿಸಿಕೊಳ್ಳುವ ಪ್ರಯತ್ನವೂ ಫಲ ನೀಡದಿದ್ದರೆ, ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಲಿದೆ ಎಂಬ ಆತಂಕ ರೈತರನ್ನು ಕಾಡುತ್ತಿದೆ.

ಟ್ಯಾಂಕರ್ ನೀರಿನಿಂದಲೂ ಬೆಳೆ ಉಳಿಯದಿದ್ದರೆ ಕುಟುಂಬ ಸಮೇತ ಗುಳೆ ಹೋಗುವ ಸ್ಥಿತಿ ಎದುರಾಗಲಿದೆ ಎಂದು ರೈತ ಶಿವು ಅಳಲು ತೋಡಿಕೊಂಡಿದ್ದಾರೆ.

ಹವಾಮಾನ ಇಲಾಖೆಯ ಮುನ್ಸೂಚನೆ ಪ್ರಕಾರ ನವೆಂಬರ್ ಮೊದಲ ವಾರದಲ್ಲಿ ತುಂತುರು ಮಳೆಯಾಗುವ ಸಾಧ್ಯತೆ ಇದೆ. ಆದರೆ ಈಗ ಮೂರು ದಿನಗಳಿಂದಲೂ ಮಳೆ ಬಂದಿಲ್ಲ. ಅಲ್ಲದೇ ಇಷ್ಟು ಕಡಿಮೆ ಮಳೆಯಿಂದ ಬೆಳೆ ಉಳಿಸಿಕೊಳ್ಳಲು ಸಾಧ್ಯವಾಗದು. ರೈತರು ಹೊಸದಾಗಿ ಯಾವುದೇ ಬೆಳೆ ಬೆಳೆಯಲು ಮುಂದಾಗದಿರುವುದು ಒಳ್ಳೆಯದು. ಕಾರಣ ಮುಂದಾಗ ಬಹುದಾದ ನಷ್ಟವನ್ನು ತಡೆಯಬಹುದಾಗಿದೆ ಎನ್ನುತ್ತಾರೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ ಚವ್ಹಾಣ್.

ಮಳೆ ಕೈಕೊಟ್ಟಿದೆ. ಒಣ ಭೂಮಿಯಲ್ಲಿ ಬೆಳೆ ಉಳಿಸಿಕೊಳ್ಳುವುದುದು ರೈತರಿಗೆ ಕಷ್ಟವಾಗಿದೆ. ಸುಡು ಬಿಸಿಲಿಗೆ ಭೂಮಿ ಬಿಸಿಯಾಗಿದ್ದು, ಎಷ್ಟು ನೀರು ಹಾಯಿಸಿದರೂ ತಣ್ಣಗಾಗುವುದಿಲ್ಲ. ಹವಾಮಾನ ಇಲಾಖೆ ಪ್ರಕಾರ ಈ ವರ್ಷ ಚಳಿಯೂ ಕಡಿಮೆ ಇದೆ. ಹೀಗಾಗಿ ಜೋಳ ಹಾಗೂ ಕಡಲೆಯ ಮೇಲೆ ಪರಿಣಾಮ ಬೀರಲಿದೆ. ಬೆಳೆಯ ಪ್ರಮಾಣವೂ ಕಡಿಮೆಯಾಗುವ ಸಾಧ್ಯತೆ ಇದೆ' ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ತಿಮ್ಮಣ್ಣ ನಾಯಕ ಹೇಳುತ್ತಾರೆ.

ನ.10–11 ರಂದು ಅಬುಧಾಬಿಯಲ್ಲಿ ಉಕ್ರೇನ್–ರಷ್ಯಾ ಶಾಂತಿ ಮಾತುಕತೆ: ಅಮೆರಿಕದ ಮಧ್ಯಸ್ಥಿಕೆ– ಸ್ಟೀವ್ ವಿಟ್ಕಾಫ್

ವಾಷಿಂಗ್ಟನ್, ನ. 3: ಉಕ್ರೇನ್ ಮತ್ತು ರಷ್ಯಾ ನಡುವೆ ನಡೆಯುತ್ತಿರುವ ಯುದ್ಧವನ್ನು ಕೊನೆಗೊಳಿಸಲು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಯತ್ನಗಳನ್ನು ತೀವ್ರಗೊಳಿಸಿರುವ ಹಿನ್ನೆಲೆಯಲ್ಲಿ, ನವೆಂಬರ್ 10 ಮತ್ತು 11 ರಂದು ಅಬುಧಾಬಿಯಲ್ಲಿ ಉಭಯ ದೇಶಗಳ ನಡುವೆ ನಡೆಯಲಿರುವ ಹೊಸ ಹಂತದ ಶಾಂತಿ ಮಾತುಕತೆಗಳಲ್ಲಿ ಅಮೆರಿಕ ಮಧ್ಯಸ್ಥಿಕೆ ವಹಿಸಲಿದೆ ಎಂದು ಅಮೆರಿಕದ ವಿಶೇಷ ಪ್ರತಿನಿಧಿ ಸ್ಟೀವ್ ವಿಟ್ಕಾಫ್ ಘೋಷಿಸಿದ್ದಾರೆ. 'ಎಕ್ಸ್' ಸಾಮಾಜಿಕ ಜಾಲತಾಣದಲ್ಲಿ ಈ ವಿಷಯವನ್ನು ಹಂಚಿಕೊಂಡಿರುವ ವಿಟ್ಕಾಫ್, ಈ ಮಾತುಕತೆಗಳು ಯುದ್ಧದ ನಂತರದ ಭದ್ರತಾ ವ್ಯವಸ್ಥೆಗಳು, ಉದ್ವಿಗ್ನತೆಯನ್ನು ತಗ್ಗಿಸುವುದು, ಮಾನವೀಯ ನೆರವು ಮತ್ತು ಶಾಂತಿ ಒಪ್ಪಂದವನ್ನು ಸಾಧಿಸುವತ್ತ ಮುಂದಿನ ಕ್ರಮಗಳ ಮೇಲೆ ಕೇಂದ್ರೀಕರಿಸಲಿವೆ ಎಂದು ತಿಳಿಸಿದ್ದಾರೆ. ಚಳಿಗಾಲ ಆರಂಭವಾಗುವ ಮೊದಲೇ, ದೀರ್ಘಕಾಲದಿಂದ ನಡೆಯುತ್ತಿರುವ ಈ ಸಂಘರ್ಷದಲ್ಲಿ ಒಂದು ನಿರ್ಣಾಯಕ ಪ್ರಗತಿಯನ್ನು ಸಾಧಿಸಲು ಅಮೆರಿಕದ ಸಂಧಾನಕಾರರು ಪ್ರಯತ್ನಿಸುತ್ತಿದ್ದಾರೆ. ಅಮೆರಿಕ ಮತ್ತು ಇಸ್ರೇಲ್ ಇರಾನ್ ವಿರುದ್ಧ ಯುದ್ಧವನ್ನು ಪ್ರಾರಂಭಿಸುವ ಮೊದಲು, ಫೆಬ್ರವರಿಯಲ್ಲಿ ಕೊನೆಯ ಬಾರಿಗೆ ಅಮೆರಿಕದ ಮಧ್ಯಸ್ಥಿಕೆಯಲ್ಲಿ ಶಾಂತಿ ಮಾತುಕತೆಗಳು ನಡೆದಿದ್ದವು. ಅಬುಧಾಬಿಯಲ್ಲಿ ನಡೆಯಲಿರುವ

ಈ ಹೊಸ ಮಾತುಕತೆಗಳಲ್ಲಿ "ಯುದ್ಧದ ನಂತರದ ಭದ್ರತಾ ಒಪ್ಪಂದಗಳು, ಉದ್ವಿಗ್ನತೆ ತಗ್ಗಿಸುವಿಕೆ, ಮಾನವೀಯ ಕ್ರಮಗಳು ಮತ್ತು ಯುದ್ಧವನ್ನು ಕೊನೆಗೊಳಿಸುವ" ವಿಷಯಗಳ ಕುರಿತು ಚರ್ಚೆ ನಡೆಯಲಿದೆ ಎಂದು ವಿಟ್ಕಾಫ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಅಮೆರಿಕದ ಪ್ರಮುಖ ಸಂಧಾನಕಾರರಾದ ವಿಟ್ಕಾಫ್ ಮತ್ತು ಜ್ಯಾರೆಡ್ ಕುಶ್ನರ್ ಅವರು ಅಬುಧಾಬಿಯಲ್ಲಿ ಅಮೆರಿಕವನ್ನು ಪ್ರತಿನಿಧಿಸಲಿದ್ದಾರೆ ಎಂದು ಅಮೆರಿಕದ ಹಿರಿಯ ಅಧಿಕಾರಿಯೊಬ್ಬರು ರಾಯಿಟರ್ಸ್ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ. ಎರಡನೆಯ ಮಹಾಯುದ್ಧದ ನಂತರ ಯುರೋಪ್‌ನಲ್ಲಿ ನಡೆದ ಅತ್ಯಂತ ಭೀಕರ ಸಂಘರ್ಷವನ್ನು ನಿಲ್ಲಿಸಲು ಅಮೆರಿಕ



ನಡೆಸುತ್ತಿರುವ ಇತ್ತೀಚಿನ ಪ್ರಯತ್ನದ ಭಾಗವಾಗಿ, ಎರಡು ವಾರಗಳ ಹಿಂದೆ ಸೇಂಟ್ ಪೀಟರ್ಸ್‌ಬರ್ಗ್‌ನಲ್ಲಿ ವಿಟ್ಕಾಫ್ ಅವರನ್ನು ಭೇಟಿಯಾದ ನಂತರ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ತ್ರಿಪಕ್ಷೀಯ ಮಾತುಕತೆಗಳ ಹೊಸ ಸುತ್ತಿಗೆ ಸಮ್ಮತಿಸಿದ್ದಾರೆ. ಈ ವಾರ ಬ್ರಸೆಲ್ಸ್‌ನಲ್ಲಿ ಅಮೆರಿಕದ ಸಂಧಾನಕಾರರು ಫ್ರಾನ್ಸ್, ಜರ್ಮನಿ, ಬ್ರಿಟನ್, ಯುರೋಪಿಯನ್ ಒಕ್ಕೂಟ ಮತ್ತು ನ್ಯಾಟೋ (ಒಂಖಿಔ) ಪ್ರತಿನಿಧಿಗಳೊಂದಿಗೆ ಸಭೆ ನಡೆಸಲಿದ್ದಾರೆ ಎಂದು ಅಮೆರಿಕದ ಅಧಿಕಾರಿ ತಿಳಿಸಿದ್ದಾರೆ. ಈ ಸಭೆಯಲ್ಲಿ "ಉಕ್ರೇನ್‌ಗೆ ಭದ್ರತಾ ಖಾತರಿಗಳು, ಯುರೋಪ್‌ನ ಭವಿಷ್ಯದ ಭದ್ರತಾ ಚೌಕಟ್ಟು ಮತ್ತು ಉಕ್ರೇನ್‌ನ ಪುನರ್ನಿರ್ಮಾಣಕ್ಕೆ ಆರ್ಥಿಕ ಬೆಂಬಲ"ದ ಕುರಿತು ಚರ್ಚೆ ನಡೆಯಲಿದೆ.

ಒಮಾನ್ ಬಳಿ ಭಾರತದ ಹಡಗಿನ ಮೇಲೆ ದಾಳಿ: ನಾವಿಕ ಬಲಿ

ನವದೆಹಲಿ, ನ. 3: ಒಮಾನ್ ಕರಾವಳಿಯ ಸಮುದ್ರ ಮಾರ್ಗದಲ್ಲಿ ಸಂಚರಿಸುತ್ತಿದ್ದ ಭಾರತದ ಸರಕು ದೋಣಿಯ ಮೇಲೆ ನಡೆದ ವೈಮಾನಿಕ ದಾಳಿಯಲ್ಲಿ ಭಾರತೀಯ ನಾವಿಕರೊಬ್ಬರು ಮೃತಪಟ್ಟಿದ್ದು, 13 ಮಂದಿ ಅಪಾಯದಿಂದ ಪಾರಾಗಿದ್ದಾರೆ. ಮೃತ ನಾವಿಕನನ್ನು ಗುಜರಾತ್ ಮೂಲದ ಗಂಧರ್ ನಹಿಮ್ ಅಜೀಜ್ ಎಂದು ಗುರುತಿಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಸಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೊವಾಲ್, ನವೆಂಬರ್ 2ರಂದು ಈ ದುರಂತ ಸಂಭವಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ. 14 ಭಾರತೀಯ ನಾವಿಕರನ್ನು ಹೊತ್ತೊಯ್ಯುತ್ತಿದ್ದ ?ಎಮ್‌ಎಸ್ವಿ ಅಲ್ ಜುಸುಫಿ ಎಂಬ ವಾಣಿಜ್ಯ ದೋಣಿ ಒಮಾನ್ ಸಮುದ್ರ ಗಡಿ ಭಾಗದಲ್ಲಿ ಚಲಿಸುತ್ತಿದ್ದಾಗ ಇದ್ದಕ್ಕಿದ್ದಂತೆ ವೈಮಾನಿಕ ವಸ್ತುವೊಂದು ಬಂದು ಅಪ್ಪಳಿಸಿದೆ. ದಾಳಿಯ ತೀವ್ರತೆಗೆ ತೀವ್ರವಾಗಿ ಗಾಯಗೊಂಡಿದ್ದ ಗಂಧರ್ ಅಜೀಜ್ ಚಿಕಿತ್ಸೆ ಫಲಿಸದೆ ಕೊನೆಯುಸಿರೆಳೆದಿದ್ದಾರೆ. ತಕ್ಷಣವೇ ಕಾರ್ಯಪ್ರವೃತ್ತರಾದ ಒಮಾನ್ ಕೋಸ್ಟ್ ಗಾರ್ಡ್ ಸಿಬ್ಬಂದಿ, ದೋಣಿಯಲ್ಲಿದ್ದ ಉಳಿದ 13 ಭಾರತೀಯ ನಾವಿಕರನ್ನು ಸುರಕ್ಷಿತವಾಗಿ ರಕ್ಷಿಸಿ ದಂಡೆಗೆ ಕರೆತಂದಿದ್ದಾರೆ. ಘಟನೆಗೆ ತೀವ್ರ ಸಂತಾಪ ಸೂಚಿಸಿರುವ ಸಚಿವ ಸೋನೊವಾಲ್, ಮೃತ ನಾವಿಕನ ಕುಟುಂಬದ ದುಃಖದಲ್ಲಿ ಭಾಗಿಯಾಗಿದ್ದೇನೆ. ಒಮಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಹಾಗೂ ಕೇಂದ್ರ ಸಚಿವಾಲಯವು ಸ್ಥಳೀಯ ಆಡಳಿತದೊಂದಿಗೆ ನಿರಂತರ ಸಂಪರ್ಕದಲ್ಲಿದೆ. ರಕ್ಷಿಸಲ್ಪಟ್ಟ 13 ನಾವಿಕರಿಗೆ ಅಗತ್ಯ ವೈದ್ಯಕೀಯ ಹಾಗೂ ತುರ್ತು ನೆರವು ಒದಗಿಸಲಾಗುತ್ತಿದ್ದು, ನಾವಿಕರ ಶೀಘ್ರ ವಾಪಸಾತಿ ಹಾಗೂ ಮೃತದೇಹವನ್ನು ತಾಯ್ನಾಡಿಗೆ ತರಲು ಎಲ್ಲಾ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ? ಎಂದು ತಿಳಿಸಿದ್ದಾರೆ.

ವೈಮಾನಿಕ ದಾಳಿ ನಡೆಸಿವರು ಯಾರು ಮತ್ತು ದಾಳಿಗೆ ಬಳಕೆಯಾದ ವಸ್ತು ಯಾವುದು ಎಂಬ ಬಗ್ಗೆ ಅಧಿಕೃತ ಮಾಹಿತಿ ಇನ್ನಷ್ಟೇ ಬರಬೇಕಿದೆ. ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವೆ ಫೆಬ್ರವರಿ 28ರಿಂದ ಆರಂಭಗೊಂಡಿರುವ ಸಂಘರ್ಷದ ಪರಿಣಾಮವಾಗಿ, ಪಶ್ಚಿಮ ಏಷ್ಯಾದ ಸಮುದ್ರ ಮಾರ್ಗಗಳಲ್ಲಿ ವಾಣಿಜ್ಯ ಹಡಗುಗಳ ಮೇಲಿನ ದಾಳಿಗಳು ಗಣನೀಯವಾಗಿ ಹೆಚ್ಚಾಗಿವೆ. ಪ್ರಮುಖ ಇಂಧನ ಸಾರಿಗೆ ರಸ್ತೆಯಾಗಿರುವ



ಹೊರ್ಮುಜ್ ಜಲಸಂಧಿ, ಪರ್ಷಿಯನ್ ಕೊಲ್ಲಿ ಹಾಗೂ ಒಮಾನ್ ಕೊಲ್ಲಿ ಪ್ರದೇಶಗಳಲ್ಲಿ ಸುರಕ್ಷತೆಯ ಅಭಾವ ಎದುರಾಗಿದೆ. ಅಂತಾರಾಷ್ಟ್ರೀಯ ಕಡಲ ಸಂಸ್ಥೆಯ ಇತ್ತೀಚಿನ ವರದಿ ಪ್ರಕಾರ, ಅಕ್ಟೋಬರ್ 27ರವರೆಗೆ ಈ ಭಾಗದಲ್ಲಿ 121 ಹಡಗುಗಳ ಮೇಲೆ ದಾಳಿಗಳು ನಡೆದಿದ್ದು, ಸುಮಾರು 24 ನಾವಿಕರು ಪ್ರಾಣ ಕಳೆದುಕೊಂಡಿದ್ದಾರೆ.

ಕಾಂಬೋಡಿಯಾದಲ್ಲಿ ಭಾರತೀಯರ ಪರದಾಟ

ನವದೆಹಲಿ, ನ. 3: ಉತ್ತಮ ಉದ್ಯೋಗ ಹಾಗೂ ಹೆಚ್ಚಿನ ಸಂಬಳದ ನಿರೀಕ್ಷೆಯಲ್ಲಿ ವಿದೇಶಕ್ಕೆ ತೆರಳಿದ ಹಲವು ಭಾರತೀಯರು ಕಾಂಬೋಡಿಯಾದಲ್ಲಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಉದ್ಯೋಗ ಕೊಡಿಸುವುದಾಗಿ ನಂಬಿಸಿ ವಿದೇಶಕ್ಕೆ ಕರೆದೊಯ್ದ ಏಜೆಂಟರು, ಯುವಕರನ್ನು ಕಂಪನಿಗಳಿಗೆ ಒಪ್ಪಿಸುತ್ತಿದ್ದು, ಇದೀಗ ಹಲವರು ಜೈಲು ಸೇರಿರುವ ಆತಂಕಕಾರಿ ಸಂಗತಿ ಬೆಳಕಿಗೆ ಬಂದಿದೆ. ರಾಜಸ್ಥಾನದ ಅಲ್ವಾರ್ ಮೂಲದ ಪ್ರದೀಪ್ ಕುಮಾರ್ ಎಂಬ ಯುವಕನ ಪ್ರಕರಣ ಈ ಜಾಲದ ಕರಾಳ ಮುಖವನ್ನು ತೆರೆದಿಟ್ಟಿದೆ. ಉದ್ಯೋಗ ಅರಸಿ ಮಲೇಷ್ಯಾಕ್ಕೆ ತೆರಳಿದ್ದ ಪ್ರದೀಪ್ ಇದೀಗ ಕಾಂಬೋಡಿಯಾದ ಜೈಲಿನಲ್ಲಿ ಬಂಧಿಯಾಗಿದ್ದಾರೆ ಎನ್ನಲಾಗಿದೆ. ಆತನ ಆರೋಗ್ಯ ಸರಿಯಿಲ್ಲ ಮತ್ತು ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ಅಪರಿಚಿತ ವ್ಯಕ್ತಿಯೊಬ್ಬರು ತಂದೆ ವಿಜಯ್ ಕುಮಾರ್ ವರ್ಮಾ ಅವರಿಗೆ ಕರೆ ಮಾಡಿದಾಗ ಪ್ರಕರಣ ಬೆಳಕಿಗೆ ಬಂದಿದೆ ಎಂದು ದೈನಿಕ್ ಭಾಸ್ಕರ್ ವರದಿ ಮಾಡಿದೆ.

ಕಂಪ್ಯೂಟರ್ ಸಂಬಂಧಿತ ಉದ್ಯೋಗದ ಭರವಸೆ ಮೇರೆಗೆ 2025ರ ಜೂನ್ 30ರಂದು ಪ್ರದೀಪ್ ಮಲೇಷ್ಯಾಕ್ಕೆ ತೆರಳಿದ್ದರು. ರೋನಿ ಎಂಬ ಏಜೆಂಟ್ ಆತನಿಗೆ ಸಂದರ್ಶನ ಹಾಗೂ ವಿಮಾನದ ವ್ಯವಸ್ಥೆ ಮಾಡಿದ್ದ ಎನ್ನಲಾಗಿದೆ. ಆದರೆ ಮಲೇಷ್ಯಾ ತಲುಪಿದ ಬಳಿಕ ಆತನ ಪಾಸ್ಪೋರ್ಟ್ ಮತ್ತು ವೀಸಾವನ್ನು ಪಡೆದುಕೊಳ್ಳಲಾಗಿದೆ ಎಂದು ಕುಟುಂಬ ಆರೋಪಿಸಿದೆ.

2026ರ ಮೇ 25ರಂದು ಪ್ರದೀಪ್ ತನ್ನ ಕುಟುಂಬಕ್ಕೆ ಕರೆ ಮಾಡಿ, ಕಾಂಬೋಡಿಯಾದ ಸಿಹಾನೌಕ್ವಿಲ್ಲೆಯಲ್ಲಿರುವ ಸ್ಟಾರ್ ಲೈನ್ ಹೋಟೆಲ್ನಲ್ಲಿ ಬಾಣಸಿಗನ ಕೆಲಸ ನೀಡುವುದಾಗಿ ಹೇಳಿ ಅಲ್ಲಿಗೆ ಕಳುಹಿಸುತ್ತಿರುವುದಾಗಿ ತಿಳಿಸಿದ್ದ. ಮರುದಿನ ಪತ್ನಿಗೆ ಕರೆಮಾಡಿ ತೊಂದರೆಯಾಗುತ್ತಿರುವುದಾಗಿ ಹೇಳಿದ್ದ. ಜೂನ್ 2ರಂದು ಅಪರಿಚಿತ ವ್ಯಕ್ತಿಯೊಬ್ಬರು ಕುಟುಂಬಕ್ಕೆ ಕರೆ ಮಾಡಿ ಪ್ರದೀಪ್ ಪೊಲೀಸರ ವಶದಲ್ಲಿದ್ದಾನೆ ಎಂದು ತಿಳಿಸಿ, ಆತನ ಬಿಡುಗಡೆಗಾಗಿ 40 ಲಕ್ಷ ರೂ.ಗೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಆಂಧ್ರಪ್ರದೇಶದ ವ್ಯಕ್ತಿಯೊಬ್ಬರು ಪ್ರದೀಪ್ ಕುಟುಂಬಕ್ಕೆ ಮಾಹಿತಿ ನೀಡಿ, ವಿವೇಕ್ ತಿವಾರಿ ಎಂಬ ಏಜೆಂಟ್ ಮಲೇಷ್ಯಾದಿಂದ 15 ಭಾರತೀಯರನ್ನು ಕಾಂಬೋಡಿಯಾಕ್ಕೆ ಕರೆದೊಯ್ದು ಕಂಪನಿಯೊಂದಕ್ಕೆ ಒಪ್ಪಿಸಿದ್ದಾನೆ ಎಂದು ಆರೋಪಿಸಿದ್ದಾರೆ. ಜೂನ್ ಮೊದಲ ವಾರದಲ್ಲಿ ಪೊಲೀಸರು ಈ ಗುಂಪನ್ನು ವಶಕ್ಕೆ ಪಡೆದಿದ್ದರು ಎನ್ನಲಾಗಿದೆ. ಕರೆ ಮಾಡಿದ ವ್ಯಕ್ತಿ ಕೆಲ ದಿನಗಳ ಬಳಿಕ ಬಿಡುಗಡೆಯಾಗಿದ್ದರೂ ಪ್ರದೀಪ್ ಸೇರಿದಂತೆ ಇತರರು ಜೈಲಿನಲ್ಲೇ ಉಳಿದಿದ್ದಾರೆ ಎಂದು ವರದಿಯಾಗಿದೆ. ಮಗನ ಸ್ಥಿತಿ ತಿಳಿಯಲು ತಂದೆ ವಿಜಯ್ ಕುಮಾರ್ ಜುಲೈ 12ರಂದು ಕಾಂಬೋಡಿಯಾಕ್ಕೆ ತೆರಳಿದ್ದರು. ಎರಡು ದಿನಗಳ ಬಳಿಕ ಸಿಹಾನೌಕ್ವಿಲ್ಲೆ ಜೈಲಿನಲ್ಲಿ ಮಗನನ್ನು ಭೇಟಿಯಾಗಿದ್ದರು. ವರದಿಯ ಪ್ರಕಾರ, ಪ್ರದೀಪ್‌ಗೆ ದಿನಕ್ಕೆ ಎರಡು ಬಾರಿ ಕೇವಲ ಒಂದು ಕಪ್ ಅನ್ನ ಮತ್ತು ಕುಂಬಳಕಾಯಿ ರಸ ನೀಡಲಾಗುತ್ತಿತ್ತು. ಅಲ್ಲದೆ, ಆತನಿಗೆ 18 ಬಾರಿ ಇಂಜೆಕ್ಷನ್ ನೀಡಲಾಗಿತ್ತು ಎನ್ನಲಾಗಿದೆ. ಮಗನನ್ನು ಭೇಟಿಯಾದ ಬಳಿಕ ತಂದೆಗೆ ಆತನೊಂದಿಗೆ ಮತ್ತೆ ಯಾವುದೇ ಸಂಪರ್ಕ ಸಾಧ್ಯವಾಗಿಲ್ಲ.

ಕುಟುಂಬದವರು ಭಾರತೀಯ ರಾಯಭಾರ ಕಚೇರಿ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ನೆರವು ಕೋರಿದ್ದಾರೆ. ಪ್ರದೀಪ್ ವಿರುದ್ಧ ಪ್ರಕರಣ ದಾಖಲಾಗಿದ್ದು, ಪ್ರಕರಣ ಇತ್ಯರ್ಥವಾದ ಬಳಿಕ ಮುಂದಿನ ಕ್ರಮ ಕೈಗೊಳ್ಳುವುದಾಗಿ ರಾಯಭಾರ ಕಚೇರಿ ತಿಳಿಸಿದೆ ಎನ್ನಲಾಗಿದೆ. ಪ್ರದೀಪ್ ಜೊತೆ ಕೆಲಸ ಮಾಡಿದ್ದ ಗೋರಖ್ಪುರದ ಸಾರ್ಥಕ್ ಎಂಬಾತ, ಸಿಹಾನೌಕ್ವಿಲ್ಲೆಯಲ್ಲಿ ಸುಮಾರು ಆರು ವಾರಗಳ ಕಾಲ ಇಬ್ಬರೂ ಕೆಲಸ ಮಾಡಿದ್ದಾಗಿ ತಿಳಿಸಿದ್ದಾರೆ. ಬಳಿಕ ಅವರನ್ನು ಬೇರೆ ಬೇರೆ ಕಂಪನಿಗಳಿಗೆ ವರ್ಗಾಯಿಸಲಾಗಿತ್ತು. ಪ್ರದೀಪ್ಗೆ ಎರಡು ತಿಂಗಳ ಸಂಬಳವನ್ನೂ ಉದ್ಯೋಗದಾತರು ನೀಡಿರಲಿಲ್ಲ. ಈ ಬಗ್ಗೆ ಕಾರ್ಮಿಕರು ಪ್ರಶ್ನಿಸಿದಾಗ ಹೋಟೆಲ್ನಲ್ಲಿ ಕೂಡಿಹಾಕಲಾಗಿತ್ತು ಎಂದು ಆರೋಪಿಸಲಾಗಿದೆ. ಇದೇ ರೀತಿ ಕೇರಳದ ತಿರುವನಂತಪುರಂ ಜಿಲ್ಲೆಯ ಅಂಜುತೇಂಗು ಮೂಲದ ಐವರು ಕೂಡ ಕಾಂಬೋಡಿಯಾ ಜೈಲಿನಲ್ಲಿದ್ದಾರೆ ಎನ್ನಲಾಗಿದೆ. ಇವರಲ್ಲಿ ದಂಪತಿಯೂ ಸೇರಿದ್ದಾರೆ. ಕೆಲವರು ಉದ್ಯೋಗದ ನಿರೀಕ್ಷೆಯಲ್ಲಿ ಬ್ಯಾಂಕಾಕ್ ಅಥವಾ ವಿಯೆಟ್ನಾಂಗೆ ತೆರಳಿದ್ದರೆ, ಏಜೆಂಟರು ಅವರನ್ನು ಕಾಂಬೋಡಿಯಾಕ್ಕೆ ಕರೆದೊಯ್ದಿದ್ದಾರೆ ಎಂದು ವರದಿಯಾಗಿದೆ.

ಯುವ ಒಲಿಂಪಿಕ್ಸ್‌ನಲ್ಲಿ ವುಶು ಕ್ರೀಡೆಯ ಭಾರತದ ಮೊದಲ ಪದಕ ಗೆದ್ದ ರಾಜಕುಮಾರಿ

ಡಾಕರ್, ನ.03 : ಸೆನೆಗಲ್‌ನ ಡಾಕರ್‌ನಲ್ಲಿ ನಡೆಯುತ್ತಿರುವ 2026ರ ಯುವ ಒಲಿಂಪಿಕ್ ಕ್ರೀಡಾಕೂಟದಲ್ಲಿ ಮಂಗಳವಾರದಂದು ರಾಜಕುಮಾರಿ ಲಂಚೆನ್ಬಿ ಚಾನು ಅವರು ವುಶು ಕ್ರೀಡೆಯಲ್ಲಿ ಭಾರತಕ್ಕಾಗಿ ಐತಿಹಾಸಿಕ ಕಂಚಿನ ಪದಕವನ್ನು ಗೆದ್ದುಕೊಂಡಿದ್ದಾರೆ. ಇದರೊಂದಿಗೆ ಭಾರತದ ಒಟ್ಟು ಪದಕಗಳ ಸಂಖ್ಯೆ ಮೂರಕ್ಕೆ ಏರಿದೆ.

ಮಹಿಳೆಯರ 'ಚಾಂಗ್‌ಕ್ವಾನ್ ಕಂಬೈನ್ಡ್' (changquan combined) ವುಶು ವಿಭಾಗದಲ್ಲಿ ರಾಜಕುಮಾರಿ ಈ ಕಂಚಿನ ಪದಕವನ್ನು ಪಡೆದರು. ಅವರು 'ಗುನ್‌ಶು'ವಿಭಾಗದಲ್ಲಿ 8.723 ಅಂಕಗಳನ್ನು ಮತ್ತು 'ಚಾಂಗ್‌ಕ್ವಾನ್' ವಿಭಾಗದಲ್ಲಿ 9.316 ಅಂಕಗಳನ್ನು ಗಳಿಸುವ ಮೂಲಕ ಒಟ್ಟು 18.039 ಅಂಕಗಳನ್ನು ಪಡೆದು ಮೂರನೇ ಸ್ಥಾನವನ್ನು ಅಲಂಕರಿಸಿದರು. ಈಜಿಪ್ಟ್‌ನ ಸೋಂಡೋಸ್ ಸೋನ್‌ಬೋಲ್ 18.660 ಅಂಕಗಳೊಂದಿಗೆ ಚಿನ್ನದ ಪದಕವನ್ನು ಗೆದ್ದರೆ, ವೆನೆಜುವೆಲಾದ ವೆಲೇರಿಯಾ ಫ್ರಾನೆರಿಸ್ ಡುಡಾಮೆಲ್ ಅಲ್ವಾರಾಡೊ 18.199 ಅಂಕಗಳೊಂದಿಗೆ ಬೆಳ್ಳಿ ಪದಕವನ್ನು ಪಡೆದರು.

ಯೂತ್ ಒಲಿಂಪಿಕ್ಸ್ ಕಾರ್ಯಕ್ರಮದಲ್ಲಿ ವುಶು ಕ್ರೀಡೆಯು ಪದಕಕ್ಕಾಗಿ ಸ್ಪರ್ಧಿಸುವ ಕ್ರೀಡೆಯಾಗಿ ಸೇರ್ಪಡೆಗೊಂಡಿರುವುದು ಇದೇ ಮೊದಲು. 'ಚಾಂಗ್‌ಕ್ವಾನ್ ಕಂಬೈನ್ಡ್' ವಿಭಾಗವು 'ತಾವೋಲು' (taolu) ಶೈಲಿಯ ವುಶು ಸ್ಪರ್ಧೆಯಾಗಿದ್ದು, ಇದರಲ್ಲಿ ಖಾಲಿ ಕೈಯಿಂದ ಮಾಡುವ ಪ್ರದರ್ಶನ ಮತ್ತು ಆಯುಧವನ್ನು ಬಳಸಿ ಮಾಡುವ ಪ್ರದರ್ಶನ ಎರಡನ್ನೂ ಸಂಯೋಜಿಸಲಾಗುತ್ತದೆ. ಇವೆರಡರ ಅಂಕಗಳನ್ನು ಸೇರಿಸಿ ಅಂತಿಮ ಮೊತ್ತವನ್ನು ನಿರ್ಧರಿಸಲಾಗುತ್ತದೆ. ಮೂರು ದಿನಗಳ ಕಾಲ ನಡೆದ ಈ ಸ್ಪರ್ಧೆಯಲ್ಲಿ ಅಗ್ರ ಎಂಟು ಕ್ರೀಡಾಪಟುಗಳು ಅಂತಿಮ ಸುತ್ತಿಗೆ ಅರ್ಹತೆ ಪಡೆದರು. ಆರಂಭಿಕ ಹಂತದಲ್ಲಿ 12 ಕ್ರೀಡಾಪಟುಗಳ ಪೈಕಿ ರಾಜಕುಮಾರಿ 17.982 ಅಂಕಗಳನ್ನು ಪಡೆಯುವ ಮೂಲಕ ಎರಡನೇ ಸ್ಥಾನದಲ್ಲಿದ್ದರು. ಮಣಿಪುರದವರಾದ ರಾಜಕುಮಾರಿ, ವುಶು ವಿಭಾಗದಲ್ಲಿ ಸ್ಪರ್ಧಿಸಿದ ಏಕೈಕ ಭಾರತೀಯ ಕ್ರೀಡಾಪಟುವಾಗಿದ್ದರು. ಅವರು ಅತ್ಯಂತ ದೃಢ ಸಂಕಲ್ಪವನ್ನು ಪ್ರದರ್ಶಿಸಿ ಪದಕವನ್ನು ಗೆದ್ದುಕೊಂಡರು. ಡಾಕರ್ ಯೂತ್ ಒಲಿಂಪಿಕ್ಸ್‌ನಲ್ಲಿ ಭಾರತಕ್ಕೆ ಲಭಿಸಿದ ಮೂರನೇ ಪದಕ ಇದಾಗಿದೆ.



ಸೋಮವಾರದಂದು, ಮಹಿಳೆಯರ ಜೂಡೋ (63 ಕೆಜಿ ವಿಭಾಗ) ಸ್ಪರ್ಧೆಯಲ್ಲಿ ಖುಷ್ಬು ರಜಕ್‌ಭಾಯಿ ದರ್ಜಾದಾ ಬೆಳ್ಳಿ ಪದಕವನ್ನು ಗೆದ್ದರೆ, ಈಜುಗಾರ್ತಿ ಧಿನಿಧಿ ದೇಸಿಂಗು ಮಹಿಳೆಯರ 100 ಮೀಟರ್ ಫ್ರೀಸ್ಟೈಲ್ ಈಜು ಸ್ಪರ್ಧೆಯಲ್ಲಿ ಕಂಚಿನ ಪದಕವನ್ನು ಪಡೆದಿದ್ದರು.

"ಯೂತ್ ಒಲಿಂಪಿಕ್ಸ್‌ನಲ್ಲಿ ವುಶು ಕ್ರೀಡೆಗಾಗಿ ಭಾರತದ ಮೊದಲ ಪದಕವನ್ನು ಗೆಲ್ಲುವ ಮೂಲಕ ರಾಜಕುಮಾರಿ ಲಂಚೆನ್ಬಿ ಚಾನು ಇತಿಹಾಸ ನಿರ್ಮಿಸಿದ್ದಾರೆ. ಅವರ ಕಠಿಣ ಪರಿಶ್ರಮ, ದೃಢ ನಿಶ್ಚಯ ಹಾಗೂ ತರಬೇತುದಾರರು ಮತ್ತು ಸಹಾಯಕ ಸಿಬ್ಬಂದಿಯ ಶ್ರಮದಿಂದಲೇ ಇದು ಸಾಧ್ಯವಾಯಿತು," ಎಂದು 'ವುಶು ಅಸೋಸಿಯೇಷನ್ ಆಫ್ ಇಂಡಿಯಾ' ತನ್ನ ಹೇಳಿಕೆಯಲ್ಲಿ ತಿಳಿಸಿದೆ.

ಮಧ್ಯಂತರ ಫಲಿತಾಂಶ ಜನತೆ ಭಾವಿಸುವುದಕ್ಕಿಂತ ಉತ್ತಮ: ಟ್ರಂಪ್ ಮಾರ್ಮಿಕ ಹೇಳಿಕೆ



ಪ್ರತಿನಿಧಿಗಳ ಸಭೆಯ ಎಲ್ಲಾ 435 ಸ್ಥಾನಗಳು, 100 ಸೆನೆಟ್ ಸ್ಥಾನಗಳಲ್ಲಿ 35 ಸ್ಥಾನಗಳು ಮತ್ತು 36 ರಾಜ್ಯಗಳಲ್ಲಿನ ಗವರ್ನರ್‌ಶಿಪ್‌ಗಳು ಚುನಾವಣೆಗೆ ನಡೆಯುತ್ತಿವೆ, ಸುಮಾರು 210 ಮಿಲಿಯನ್ ಜನರು ಮತ ಚಲಾಯಿಸಲು ನೋಂದಾಯಿಸಿಕೊಂಡಿದ್ದಾರೆ.

ವಾಷಿಂಗ್ಟನ್, ನ.3: ಮಂಗಳವಾರ ಅಮೆರಿಕದ ಮಧ್ಯಂತರ ಚುನಾವಣೆಗಳಲ್ಲಿ ಸಮೀಕ್ಷೆಗಳು ಪ್ರಾರಂಭವಾದವು, ವರ್ಮೊಂಟ್ ಮತ್ತು ನ್ಯೂಯಾರ್ಕ್, ನ್ಯೂಜೆರ್ಸಿ, ವರ್ಜೀನಿಯಾ ಮತ್ತು ಕೆಂಟುಕಿ ಸೇರಿದಂತೆ ಹಲವಾರು ಇತರ ಪೂರ್ವ ಕರಾವಳಿ ರಾಜ್ಯಗಳೊಂದಿಗೆ ಪ್ರಾರಂಭವಾಗುತ್ತದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಉಳಿದ ಅವಧಿಗೆ ಎಷ್ಟು ಅಧಿಕಾರವನ್ನು ಹೊಂದಿದ್ದಾರೆ ಎಂಬುದನ್ನು ಮತದಾನವು ನಿರ್ಧರಿಸುತ್ತದೆ. ಪ್ರತಿನಿಧಿಗಳ ಸಭೆಯ ಎಲ್ಲಾ 435 ಸ್ಥಾನಗಳು, 100 ಸೆನೆಟ್ ಸ್ಥಾನಗಳಲ್ಲಿ 35 ಸ್ಥಾನಗಳು ಮತ್ತು 36 ರಾಜ್ಯಗಳಲ್ಲಿನ ಗವರ್ನರ್‌ಶಿಪ್‌ಗಳು ಚುನಾವಣೆಗೆ ನಡೆಯುತ್ತಿದ್ದು, ಸುಮಾರು 210 ದಶಲಕ್ಷ ಜನರು ಮತ ಚಲಾಯಿಸಲು ನೋಂದಾಯಿಸಿಕೊಂಡಿದ್ದಾರೆ. ಟ್ರಂಪ್ ಅವರ ರಿಪಬ್ಲಿಕನ್ ಪಕ್ಷವು ಕಾಂಗ್ರೆಸ್‌ನ ಎರಡೂ ಸದನಗಳನ್ನು ನಿಯಂತ್ರಿಸುತ್ತದೆ. ಕನಿಷ್ಠ ಒಂದರಲ್ಲಿ ಬಹುಮತವನ್ನು ಗೆಲ್ಲಲು ಡೆಮೋಕ್ರಾಟ್‌ಗಳು ಸಾಕಷ್ಟು ಸ್ಥಾನಗಳನ್ನು ತಿರುಗಿಸಬೇಕಾಗಿದೆ, ಇದು ಶ್ರೀ ಟ್ರಂಪ್ ಅವರ ಅಧ್ಯಕ್ಷತೆಯ ದ್ವಿತೀಯಾರ್ಧದಲ್ಲಿ ರವಾನಿಸಬಹುದಾದದನ್ನು ಮಿತಿಗೊಳಿಸುತ್ತದೆ. ಅಯೋವಾ, ಕಾನ್ಸಾಸ್ ಮತ್ತು ಓಹಿಯೋದಲ್ಲಿ ರಿಪಬ್ಲಿಕನ್ನರಿಗೆ ಕಠಿಣ ಸೆನೆಟ್ ಸ್ಪರ್ಧೆಗಳನ್ನು ಸಮೀಕ್ಷೆದಾರರು ನಿರೀಕ್ಷಿಸುತ್ತಾರೆ, ಆದರೆ ಟೆಕ್ಸಾಸ್ ಮತ್ತು ಮಿಚಿಗನ್ ಡೆಮೋಕ್ರಾಟ್‌ಗಳತ್ತ ವಾಲುತ್ತವೆ ಎಂದು ನಿರೀಕ್ಷಿಸಲಾಗಿದೆ. ಕಳೆದ ಮಧ್ಯಂತರ ಚುನಾವಣೆಯನ್ನು ಮೀರಿಸಲು ಆರಂಭಿಕ ಮತದಾನ ವೇಗದಲ್ಲಿದೆ ಮತ್ತು ಅಭಿಪ್ರಾಯ ಸಂಗ್ರಹಗಳಲ್ಲಿ ರಿಪಬ್ಲಿಕನ್ನರಿಗಿಂತ ಡೆಮೋಕ್ರಾಟ್‌ಗಳು ಹೆಚ್ಚು ಉತ್ಸಾಹಭರಿತರಾಗಿ ಕಾಣಿಸಿಕೊಳ್ಳುತ್ತಾರೆ. ಪ್ರಚಾರದ ಕೊನೆಯ ದಿನದಂದು, ಟ್ರಂಪ್ ದೇಶವನ್ನು "ಉತ್ಕರ್ಷದ ದೇಶ" ಎಂದು ಕರೆದರು.

ಕ್ಯಾಲಿಫೋರ್ನಿಯಾದಲ್ಲಿ ಸಾವಿರಾರು ವಿವಾದಿತ ಮೇಲ್–ಇನ್ ಮತಪತ್ರಗಳನ್ನು ಬದಿಗಿಡಬೇಕೆಂಬ ಅವರ ಒತ್ತಾಯವನ್ನು ಸುಪ್ರೀಂ ಕೋರ್ಟ್ ತಿರಸ್ಕರಿಸಿತು ಮತ್ತು ಡೆಮಾಕ್ರಟಿಕ್ ಕಾಂಗ್ರೆಸ್ ಮಹಿಳೆ ಹ್ಯಾಲಿ ಸ್ಟೀವನ್ಸ್ ತನ್ನ ಪಕ್ಷದ ನಾಮನಿರ್ದೇಶಿತ ಅಬ್ದುಲ್ ಎಲ್–ಸಯೀದ್ ಬದಲಿಗೆ ರಿಪಬ್ಲಿಕನ್ ಮೈಕ್ ರೋಜರ್ಸ್ ಅವರನ್ನು ಬೆಂಬಲಿಸಿದಾಗ ಮಿಚಿಗನ್‌ನ ಸೆನೆಟ್ ಸ್ಪರ್ಧೆಯು ಅಲುಗಾಡಿತು.

8,86,000ಕ್ಕೂ ಹೆಚ್ಚು ಮತಗಳು ಚಲಾವಣೆ: ಮಿನ್ನಿಸೋಟದಲ್ಲಿ ಆರಂಭಿಕ ಮತದಾನದ ಹೊಸ ದಾಖಲೆ

ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಕಚೇರಿಯ ಪ್ರಕಾರ, ಮಿನ್ನಿಸೋಟದಲ್ಲಿ ಮಧ್ಯಂತರ ಚುನಾವಣೆಯೊಂದಕ್ಕೆ ಸಂಬಂಧಿಸಿದಂತೆ ಇದುವರೆಗಿನ ಅತಿ ಹೆಚ್ಚು ಆರಂಭಿಕ ಮತದಾನ ದಾಖಲಾಗಿದೆ; ಭಾನುವಾರದ ವೇಳೆಗೆ ಒಟ್ಟು 8,86,427 ನಿವಾಸಿಗಳು ತಮ್ಮ ಮತಗಳನ್ನು ಚಲಾಯಿಸಿದ್ದಾರೆ. 2022ರ ಮಧ್ಯಂತರ ಚುನಾವಣೆಯಲ್ಲಿ ದಾಖಲಾಗಿದ್ದ 6,87,062 ಮತಗಳ ಹಿಂದಿನ ದಾಖಲೆಯನ್ನು ಈ ಸಂಖ್ಯೆ ಮೀರಿಸಿದೆ ಎಂದು 'ಸಿಬಿಎಸ್ ನ್ಯೂಸ್' ವರದಿ ಮಾಡಿದೆ.

ಇರಾನ್ ಯುದ್ಧದಿಂದ ಅಮೆರಿಕದ ಪ್ರತಿ ಕುಟುಂಬಕ್ಕೆ 2,147 ಡಾಲರ್‌ಗಳಷ್ಟು ಆರ್ಥಿಕ ಹೊರೆ: ಮೂಡೀಸ್ ಅನಾಲಿಟಿಕ್ಸ್ ಅಂದಾಜು

ವಾಷಿಂಗ್ಟನ್, ನವೆಂಬರ್ 3: ಮೂಡೀಸ್ ಅನಾಲಿಟಿಕ್ಸ್‌ವರದಿಯ ಪ್ರಕಾರ, ಅಕ್ಟೋಬರ್ 28ರ ಹೊತ್ತಿಗೆ ಇರಾನ್ ವಿರುದ್ಧದ ಯುದ್ಧವು ಅಮೆರಿಕದ ಸಾಮಾನ್ಯ ಕುಟುಂಬವೊಂದರ ವೆಚ್ಚದ ಮೇಲೆ ಸುಮಾರು 2,147 ಡಾಲರ್‌ಗಳಷ್ಟು ಹೆಚ್ಚುವರಿ ಹೊರೆಯನ್ನು ಬೀರಿದೆ. ಇದರಲ್ಲಿ ಇಂಧನ ವೆಚ್ಚದ ಏರಿಕೆಯೇ ಅತಿದೊಡ್ಡ ಪಾಲನ್ನು (ಪ್ರತಿ ಕುಟುಂಬಕ್ಕೆ 1,227 ಡಾಲರ್‌ಗಳು) ಹೊಂದಿದೆ. ಉಳಿದಂತೆ, ಸಾಲ ಪಡೆಯುವ ವೆಚ್ಚದಲ್ಲಿ 559 ಡಾಲರ್‌ಗಳ ಏರಿಕೆ ಮತ್ತು ಮಿಲಿಟರಿ ಸಂಬಂಧಿತ ಹೆಚ್ಚುವರಿ ವೆಚ್ಚಗಳಲ್ಲಿ 361 ಡಾಲರ್‌ಗಳ ಹೊರೆ ಸೇರಿವೆ.

ಚುನಾವಣಾ ದಿನದಂದು ಡೀಸೆಲ್ ಬೆಲೆ 6.29 ಡಾಲರ್‌ಗೆ ಏರಿಕೆ:

ಸಿಎನ್‌ಎನ್ ಉಲ್ಲೇಖಿಸಿರುವ ಎಎಎ ದತ್ತಾಂಶದ ಪ್ರಕಾರ, ಚುನಾವಣಾ ದಿನದಂದು ಅಮೆರಿಕದ ವಾಹನ ಸವಾರರು ದಾಖಲೆಯ ಗರಿಷ್ಠ ಇಂಧನ ಬೆಲೆಗಳನ್ನು ಎದುರಿಸುತ್ತಿದ್ದಾರೆ. ಸಾಮಾನ್ಯ ಗ್ಯಾಸೋಲಿನ್‌ನ ರಾಷ್ಟ್ರೀಯ ಸರಾಸರಿ ಬೆಲೆ ಪ್ರತಿ ಗ್ಯಾಲನ್‌ಗೆ 4.15 ಡಾಲರ್‌ಗೆ ತಲುಪಿದೆ. ಡೀಸೆಲ್ ಬೆಲೆಯೂ ಪ್ರತಿ ಗ್ಯಾಲನ್‌ಗೆ 6.29 ಡಾಲರ್‌ಗಳ ದಾಖಲೆಯ ಮಟ್ಟವನ್ನು ತಲುಪಿದ್ದು, ಇದು 2022ರ ಚುನಾವಣಾ ದಿನದಂದು ದಾಖಲಾಗಿದ್ದ ಹಿಂದಿನ ಗರಿಷ್ಠ ಬೆಲೆಯನ್ನು ಮೀರಿಸಿದೆ. ಇರಾನ್ ವಿರುದ್ಧದ ಯುದ್ಧದ ಹಿನ್ನೆಲೆಯಲ್ಲಿ ಈ ಬೆಲೆ ಏರಿಕೆ ಸಂಭವಿಸಿದ್ದು, ಸಂಘರ್ಷ ಆರಂಭವಾದಾಗಿನಿಂದ ಇಂಧನ ವೆಚ್ಚದ ಏರಿಕೆಯು ಅಮೆರಿಕದ ಗ್ರಾಹಕರಿಗೆ ಸುಮಾರು 151 ಶತಕೋಟಿ ಡಾಲರ್‌ಗಳಷ್ಟು ಹೊರೆಯಾಗಿದೆ ಎಂದು ಅಂದಾಜಿಸಲಾಗಿದೆ.

ಯುದ್ಧ ಮರುಕಳಿಸಿದರೆ ಯುರೋಪಿಯನ್ ಮಿಲಿಟರಿ ನೆಲೆಗಳ ಗುರಿ ಸಾಧ್ಯತೆ ಇರಾನ್ ಗಂಭೀರ ಎಚ್ಚರಿಕೆ

ಟೆಹ್ರಾನ್, ನವೆಂಬರ್ 3: ಅಮೆರಿಕದೊಂದಿಗೆ ರಾಜತಾಂತ್ರಿಕ ಒಪ್ಪಂದವನ್ನು ತಲುಪುವ ಸಾಧ್ಯತೆಯ ಬಗ್ಗೆ ಇರಾನ್ ಹೊಸ ಅನುಮಾನಗಳನ್ನು ವ್ಯಕ್ತಪಡಿಸಿದೆ, ಮಾತುಕತೆಗಳು ಮುಂದುವರಿಯುವ ಮೊದಲು ವಾಷಿಂಗ್ಟನ್ ತನ್ನ ಷರತ್ತುಗಳನ್ನು ಪೂರೈಸಬೇಕೆಂದು ಟೆಹ್ರಾನ್ ಒತ್ತಾಯಿಸಿದೆ ಮತ್ತು ಯುದ್ಧ ಪುನರಾರಂಭವಾದರೆ ಪರಿಣಾಮಗಳ ಬಗ್ಗೆ ಎಚ್ಚರಿಸಿದೆ. ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಮಂಗಳವಾರ ಟೆಹ್ರಾನ್ ರಾಜತಾಂತ್ರಿಕತೆಗೆ ಮುಕ್ತವಾಗಿದ್ದರೂ, ವಾಷಿಂಗ್ಟನ್‌ನೊಂದಿಗಿನ ಯಾವುದೇ ನಿಶ್ಚಿತಾರ್ಥವನ್ನು ಗಣನೀಯ ಎಚ್ಚರಿಕೆಯಿಂದ ಸಂಪರ್ಕಿಸುತ್ತದೆ ಎಂದು ಹೇಳಿದರು. ಮಾತುಕತೆಗಳ ಸಮಯದಲ್ಲಿ ಹಿಂದಿನ ಅಮೆರಿಕದ ಮಿಲಿಟರಿ ಕ್ರಮವನ್ನು ಇರಾನ್‌ನ ಅಪನಂಬಿಕೆಯ ಹಿಂದಿನ ಪ್ರಮುಖ ಕಾರಣವೆಂದು ಅವರು ಸೂಚಿಸಿದರು. ಇರಾನ್ ರಾಜತಾಂತ್ರಿಕತೆಯನ್ನು ವಿರೋಧಿಸುವುದಿಲ್ಲ ಎಂದು ಬಘೈ ಹೇಳಿದರು, ಮಾತುಕತೆಗಳನ್ನು ತನ್ನ ರಾಷ್ಟ್ರೀಯ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳಲು ಮತ್ತು ಮತ್ತಷ್ಟು ಪ್ರಾದೇಶಿಕ ಅಸ್ಥಿರತೆಯನ್ನು ತಡೆಯುವ ಮಾರ್ಗವೆಂದು ವಿವರಿಸಿದರು. ಆದಾಗ್ಯೂ, ಒಂದು



ವರ್ಷಕ್ಕಿಂತ ಕಡಿಮೆ ಅವಧಿಯಲ್ಲಿ ಮಾತುಕತೆಗಳು ನಡೆಯುತ್ತಿರುವಾಗ ಅಮೆರಿಕ ಇರಾನ್ ವಿರುದ್ಧ ಎರಡು ಬಾರಿ ದಾಳಿಗಳನ್ನು ಪ್ರಾರಂಭಿಸಿದೆ ಮತ್ತು ಇಸ್ಲಾಮಾಬಾದ್ ತಿಳುವಳಿಕೆಯಡಿಯಲ್ಲಿ ಮಾಡಿದ ಬದ್ಧತೆಗಳನ್ನು ಗೌರವಿಸಲು ವಿಫಲವಾಗಿದೆ ಎಂದು ಅವರು ಆರೋಪಿಸಿದರು. ಅನುಭವಗಳು ವಾಷಿಂಗ್ಟನ್‌ನಲ್ಲಿ ಟೆಹ್ರಾನ್‌ನ ವಿಶ್ವಾಸವನ್ನು ಗಮನಾರ್ಹವಾಗಿ ಹಾಳುಮಾಡಿವೆ ಮತ್ತು ಯಾವುದೇ ನವೀಕರಿಸಿದ ರಾಜತಾಂತ್ರಿಕ ನಿಶ್ಚಿತಾರ್ಥಕ್ಕೆ ಅದರ ವಿಧಾನವನ್ನು ರೂಪಿಸಿವೆ ಎಂದು ಅವರು ಹೇಳಿದರು.

ಪ್ಯಾರಿಸ್ ಮಾಸ್ಟರ್ಸ್ ಟೂರ್ನಿ: ಜೊಕೊವಿಕ್ ವಿಶ್ವದಾಖಲೆ

ಪ್ಯಾರಿಸ್: ನ.3: ಪ್ಯಾರಿಸ್ ಮಾಸ್ಟರ್ಸ್ ಟೂರ್ನಿಯಲ್ಲಿ ಮೊನಾಕೊದ ವ್ಯಾಲೆಂಟಿನ್ ವ್ಯಾಚೆರೋಟ್ ವಿರುದ್ಧದ 'ರೌಂಡ್ ಆಫ್ 64' ಪಂದ್ಯದಲ್ಲಿ ಜಯಗಳಿಸುವ ಮೂಲಕ ನೊವಾಕ್ ಜೊಕೊವಿಕ್ ತಮ್ಮ ಹೆಸರಿನಲ್ಲಿ ಮತ್ತೊಂದು ವಿಶ್ವ ದಾಖಲೆಯನ್ನು ಬರೆದಿದ್ದಾರೆ. ಈ ಗೆಲುವಿನೊಂದಿಗೆ, ಈ ಟೂರ್ನಿಯ ಇತಿಹಾಸದಲ್ಲೇ ಪಂದ್ಯವೊಂದನ್ನು ಗೆದ್ದ ಅತಿ ಹಿರಿಯ ಆಟಗಾರ ಎಂಬ ಹೆಗ್ಗಳಿಕೆಗೆ ಜೊಕೊವಿಕ್ ಪಾತ್ರರಾಗಿದ್ದಾರೆ. ಕಳೆದ 35 ವರ್ಷಗಳಿಂದ ಈ ದಾಖಲೆಯು ಜಿಮ್ಮಿ ಕಾನರ್ಸ್ ಅವರ ಹೆಸರಿನಲ್ಲಿತ್ತು. ಅಲ್ಲದೆ, ತಮ್ಮ 39ನೇ ಹುಟ್ಟುಹಬ್ಬವನ್ನು ಆಚರಿಸಿಕೊಂಡ ನಂತರ ಈ ಟೂರ್ನಿಯಲ್ಲಿ ಪಂದ್ಯವೊಂದನ್ನು ಗೆದ್ದ ಮೂರನೇ ಆಟಗಾರ ಎಂಬ ಸಾಧನೆಯನ್ನೂ ಅವರು ಮಾಡಿದ್ದಾರೆ.

ಮೂಡಬಿದಿರೆಯಲ್ಲಿ ಪದವಿಪೂರ್ವ ವಿದ್ಯಾರ್ಥಿಗಳ ತಾಲೂಕು ಮಟ್ಟದ ಕ್ರೀಡಾಕೂಟ

ಮುಂಬಯಿ, ನ.03: ಶಾಲಾ ಶಿಕ್ಷಣ ಇಲಾಖೆ ಪದವಿಪೂರ್ವ ಹಾಗೂ ಸ್ವಸ್ತಿ ಶ್ರೀ ಜೈನ ವಸತಿ ಪದವಿ ಪೂರ್ವ' ಕಾಲೇಜು ಧವಳತ್ರಯ ಜೈನ ಕಾಶಿ ಟ್ರಸ್ಟ್ (ರಿ)ಜೈನ ಮಠ ಮೂಡುಬಿದಿರೆ ಇದರ ಸಂಯುಕ್ತ ಆಶ್ರಯದಲ್ಲಿ ಮೂಡಬಿದಿರೆ ಪದವಿ ಪೂರ್ವ ವಿದ್ಯಾರ್ಥಿಗಳ ತಾಲೂಕು ಮಟ್ಟದ ಕ್ರೀಡಾಕೂಟವು ದಿನಾಂಕ 2.11.2026ರಂದು ಸೋಮವಾರ ಮೂಡು ಬಿದಿರೆ ಸ್ವರಾಜ್ ಮೈದಾನದ ಕ್ರೀಡಾಂಗಣದಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ಡಾ. ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಪಂಡಿತಾಚಾರ್ಯ ಪಟ್ಟಾಚಾರ್ಯ ಅವರು ಮಹಾಸ್ವಾಮೀಜಿ ಜೈನಮಠ ಮೂಡುಬಿದಿರೆ ಇವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ. ಆರ್ಶೀವಾದ ನೀಡಿದರರ್ಶ. ಅಧ್ಯಕ್ಷತೆಯನ್ನು ವಹಿಸಿಕೊಂಡ ಪೂಜ್ಯ ಸ್ವಾಮೀಜಿಯವರು ಮಾತನಾಡುತ್ತಾ ಕ್ರೀಡೆ ಎಂಬುದು ಮಕ್ಕಳಲ್ಲಿ ಸ್ಫೂರ್ತಿ ಮತ್ತು ಚೈತನ್ಯವನ್ನು ತುಂಬಬೇಕು ಕ್ರೀಡೆ ವಿದ್ಯಾ ರ್ಥಿಗಳಲ್ಲಿ ಸ್ಪರ್ಧಾ ಮನೋಭಾವ ಹಾಗೂ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯಕಾರಿ ಎಂದರು. ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿದ ಯಂ ಬಾಹುಬಲಿ ಪ್ರಸಾದ್ ಮಾತನಾಡಿ, ಕ್ರೀಡೆ ನಮ್ಮ ದೇಶದಲ್ಲಿ ಎಷ್ಟು ಮಹತ್ವವನ್ನು ಪಡೆದುಕೊಂಡಿದೆ ಎಷ್ಟು ಕ್ರೀಡಾಪಟುಗಳು ಕ್ರೀಡೆಯಲ್ಲಿ ಸಾಧನೆಯನ್ನು ಮಾಡಿದ್ದಾರೆ ಎಂಬುದನ್ನು ವಿದ್ಯಾರ್ಥಿ ಗಳಿಗೆ ತಿಳಿಸಿಕೊಟ್ಟರು. ವಕೀಲೆ ಹಾಗೂ ಸ್ವಸ್ತಿಶ್ರೀ ಕಾಲೇಜು ಸಂಚಾಲಕಿ ಶ್ವೇತಾ ನಮ್ಮ ಹೆಮ್ಮೆಯ ಭಾರತ ದ ರಾಷ್ಟ್ರೀಯ ಕ್ರೀಡಾಪಟುಗಳ ಆದ ಸಾಧನೆಯನ್ನು ನೆನಪಿಸಿಕೊಂಡರು. ವಿದ್ಯಾರ್ಥಿ ದೆಸೆಯಲ್ಲಿ ಕ್ರೀಡೆಯ ಬಗ್ಗೆ ಆಸಕ್ತಿಯನ್ನು ಮೂಡಿಸಿಕೊಂಡು ವಿದ್ಯೆ ಜೊತೆಗೆ ಕ್ರೀಡೆಯನ್ನು ಕೂಡ ವಿದ್ಯಾರ್ಥಿಗಳು ಮೈಗೂಡಿಸಿಕೊಳ್ಳಬೇಕು ಎಂದರು. ಮೂಡಬಿದಿರೆ ತಾಲೂಕು ವಿವಿಧ ಪದವಿಪೂರ್ವ ಕಾಲೇಜುಗಳ ದೈಹಿಕ ಶಿಕ್ಷಣ ಶಿಕ್ಷಕರು ಉಪನ್ಯಾಸಕರು ಹಾಗೂ ವಿದ್ಯಾ ರ್ಥಿ ಕ್ರೀಡಾಪಟುಗಳು ಸ್ಪರ್ಧೆ ಯಲ್ಲಿ ಭಾಗವಹಿಸಿದ್ದರು. ಮೂಡಬಿದ್ರೆ ತಾಲೂಕು ಪದವಿಪೂರ್ವ ಕಾಲೇಜುಗಳ ಕ್ರೀಡಾ ಸಂಚಾಲಕರಾದ ನವೀನ್ ಹೆಗ್ಡೆ, ಆಳ್ವಾಸ್ ನ ನವೀನ್, ತರಬೇತಿದಾರ ಗೌಡ, ಅನಂತರಾಜ್ ದೈಹಿಕ ಕಾಲೇಜಿನ ಉಪನ್ಯಾಸಕರು ಉಪಸ್ಥಿತರಿದ್ದರ.

ಕಾರ್ಯಕ್ರಮವನ್ನು ಸ್ವಸ್ತಿಶ್ರೀ ಕಾಲೇಜು ಉಪನ್ಯಾಸಕಿ ಸರಸ್ವತಿ ನಿರೂಪಿಸಿದರು ಸೌಮ್ಯ ಸ್ವಾಗತಿಸಿದರು ಸುಷ್ಮಾ ಧನ್ಯವಾದವಿತ್ತರು.

